ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಜೂನ್ 29 ಸೋಮವಾರ 2026
47
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ– ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸಂಪುಟ: 47 | ಸಂಚಿಕೆ: 74 | ಪುಟಗಳು: 10
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಮೈಸೂರಿನಲ್ಲಿ ಎಸ್‌ಐಆರ್ ಜಾಗೃತಿ ಸಮಾವೇಶದಲ್ಲಿ ಕಾಂಗ್ರೆಸ್ ನಾಯಕರ ಆತಂಕ

ಅರ್ಹ ಮತದಾರರ ಉಳಿಸದಿದ್ದರೆ ಕಾಂಗ್ರೆಸ್ ಮಾರಣ ಹೋಮ

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಠಿಣ ಎಚ್ಚರಿಕೆ

- ಸ್ವಲ್ಪ ಮೈಮರೆತರೂ ಬಿಜೆಪಿ ನಿಮ್ಮ ಕಥೆ ಮುಗಿಸುತ್ತದೆ
- ಮುಂದೆ ಎಂಎಲ್‌ಎ, ಎಂಪಿ ಆಗಲು ಸಾಧ್ಯವಿಲ್ಲ
- 2014ರ ನಂತರ "ಮತ ದ್ರೋಹ" ನಡೆಯುತ್ತಲೇ ಇದೆ
- ಕಾಂಗ್ರೆಸ್ ಬೆಂಬಲಿಗರೆ ಬಿಜೆಪಿ ಮೂಲ ಟಾರ್ಗೆಟ್

ಮೈಸೂರು, ಜೂ.28(ಬಿಎಲ್‌ಯು)– ಕೇಂದ್ರ ಚುನಾವಣಾ ಆಯೋಗ ಜೂನ್ 30 ರಿಂದ ಕರ್ನಾಟಕದಲ್ಲಿ ನಡೆಸುತ್ತಿರುವ ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡುವ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆಸುವ ಬಿಜೆಪಿ ಷಡ್ಯಂತ್ರ ಯಶಸ್ವಿಯಾದರೆ ಕಾಂಗ್ರೆಸ್ ಮಾರಣ ಹೋಮವಾಗುವುದು ಖಚಿತ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರಿಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ.

ಮೈಸೂರಿನ ಜೆ.ಕೆ.ಮೈದಾನದಲ್ಲಿ ಭಾನುವಾರ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಮೈಸೂರು ವಿಭಾಗೀಯ ಎಸ್‌ಐಆರ್ ಜಾಗೃತಿ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಹಾಲಿ ಸಂಸದರು, ಶಾಸಕರು, ಮುಂದಿನ ಚುನಾವಣೆಯಲ್ಲಿ ಸಂಸದ ಹಾಗೂ ಶಾಸಕರಾಗಬೇಕು ಎನ್ನುವವರು ಸ್ವಲ್ಪ ಯಾಮಾರಿದರೂ ಬಿಜೆಪಿಯವರು ನಿಮ್ಮನ್ನು ಮಾರಣ ಹೋಮ ಮಾಡಿಬಿಡುತ್ತಾರೆ ಎಂದು ಮತ್ತೊಮ್ಮೆ ಎಚ್ಚರಿಸಿದರು.

ಈ ಹಿನ್ನೆಲೆಯಲ್ಲಿ ಎಸ್‌ಐಆರ್ ನಡೆಯುವ ಸಂದರ್ಭದಲ್ಲಿ ಬೂತ್ ಲೆವೆಲ್ ಏಜೆಂಟರು ಜನರೊಂದಿಗೆ ಸಂಪರ್ಕ ಹೊಂದಿ ಮತದಾರರ ಪಟ್ಟಿಯಿಂದ ಅವರ ಹೆಸರು ಕೈಬಿಟ್ಟು ಹೋಗದಂತೆ ಎಚ್ಚರಿಕೆ ವಹಿಸಬೇಕು. ಜೂನ್ 30 ರಿಂದ ಜುಲೈ 29 ರವರೆಗೆ ನಡೆಯುವ ಎಸ್‌ಐಆರ್ ವೇಳೆ ನಿಮ್ಮ ಎಲ್ಲಾ ಕೆಲಸ ಕಾರ್ಯವನ್ನು ಬದಿಗೊತ್ತಿ ಇದೇ ಕೆಲಸ ಮಾಡಬೇಕು ಎಂದು ಸಿದ್ದರಾಮಯ್ಯ ತಾಕೀತು ಮಾಡಿದರು.

ನೀವು ಸ್ವಲ್ಪ ಎಚ್ಚರ ತಪ್ಪಿದರೂ ಬಿಜೆಪಿಯವರು ನಿಮ್ಮ ಕಥೆಯನ್ನು ಮುಗಿಸಿ ಬಿಡುತ್ತಾರೆ. ಆಮೇಲೆ ಕಣ್ಣು ಬಾಯಿ ಬಿಟ್ಟರೆ ಏನು ಪ್ರಯೋಜನವಾಗುವುದಿಲ್ಲ. ಇದರಿಂದ ಎಚ್ಚೆತ್ತುಕೊಳ್ಳದಿದ್ದರೆ ನೀವು ಎಂಎಲ್‌ಎ, ಎಂಪಿ ಏನೂ ಆಗಲು ಸಾಧ್ಯವಿಲ್ಲ ಎಂದು ಸಿದ್ದರಾಮಯ್ಯ ಅವರು ಕಾಂಗ್ರೆಸ್‌ನವರಿಗೆ ಸರಣಿ ಎಚ್ಚರಿಕೆಗಳನ್ನು ನೀಡುತ್ತಾ ಹೋದರು.

ಎಸ್‌ಐಆರ್ ಇದೇ ಮೊದಲ ಬಾರಿಗೆ ನಡೆಯುತ್ತಿಲ್ಲ. 1950 ರಲ್ಲಿ ಮೊದಲ ಬಾರಿಗೆ ಚುನಾವಣೆ ಆಯೋಗ ರಚನೆಯಾಗಿ, 1952 ರಲ್ಲಿ ಪ್ರಥಮ ಚುನಾವಣೆ ನಡೆದ ನಂತರ ಆಗಿಂದ್ದಾಗೆ ಚುನಾವಣಾ ಆಯೋಗ ಮತದಾರರ ಪಟ್ಟಿ ಪರಿಷ್ಕರಣೆ ಮಾಡುತ್ತಾ ಬಂದಿದೆ. ಆದರೆ ಎಂದೂ ಅರ್ಹ ಮತದಾರರನ್ನು ಕೈಬಿಡುವ ಕೆಲಸ ಮಾಡಿಲ್ಲ. ಆದರೆ ಈಗ ಈ ಬೆಳವಣಿಗೆಗಳು ನಡೆಯುತ್ತಿದೆ ಎಂದು ಆರೋಪಿಸಿದರು. ದೇಶದಲ್ಲಿ 2014 ರ ನಂತರ "ಮತ ದ್ರೋಹ" ನಡೆಯುತ್ತಲೆ ಇದೆ ■6ನೇ ಪುಟಕ್ಕೆ



ಮೈಸೂರಿನ ಜೆ.ಕೆ.ಮೈದಾನದಲ್ಲಿ ಭಾನುವಾರ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಮೈಸೂರು ವಿಭಾಗೀಯ ಎಸ್‌ಐಆರ್ ಜಾಗೃತಿ ಸಮಾವೇಶವನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು.

ನಮ್ಮದಂತೂ ಮುಗಿಯಿತು....

ಮೈಸೂರು: ನಮ್ಮ ರಾಜಕೀಯವೇನೊ ಮುಗಿಯಿತು, ಇನ್ನು ನಿಮ್ಮ ರಾಜಕೀಯ ಭವಿಷ್ಯದ ಬಗ್ಗೆ ಗಂಭೀರವಾಗಿ ಯೋಚನೆ ಮಾಡಿ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಕಾರ್ಯಕರ್ತರಿಗೆ ಸಲಹೆ ನೀಡಿದರು.

ಎಸ್‌ಐಆರ್ ವೇಳೆ ಬಿಜೆಪಿ ಟಾರ್ಗೆಟ್ ಮಾಡಿರುವ ಮತಗಳನ್ನು ನಾವು ಉಳಿಸಿಕೊಳ್ಳಬೇಕು. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಹೋಗದಂತೆ ಎಚ್ಚರಿಕೆ ವಹಿಸಬೇಕು. ಈ ಬಗ್ಗೆ ಎಚ್ಚೆತ್ತುಕೊಳ್ಳದಿದ್ದರೆ ಭಾರೀ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಸಿದರು.

ಬಿಹಾರ, ಹರಿಯಾಣ, ಮಹಾರಾಷ್ಟ್ರ ಸೇರಿದಂತೆ 13 ರಾಜ್ಯಗಳಲ್ಲಿ ಹಾಗೂ 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪರಿಷ್ಕರಣೆಯಾಗಿದೆ. ಈಗ ಪಶ್ಚಿಮ ಬಂಗಾಳ, ಮಹಾರಾಷ್ಟ್ರದಲ್ಲಿ ಫಲಿತಾಂಶ ಏನಾಗಿದೆ ಎಂಬುದು ನಿಮಗೆ ಗೊತ್ತಾಗಿದೆ. ಆದರೆ ಕೇರಳದಲ್ಲಿ ಮಾತ್ರ ಅವರ ಆಟ ನಡೆಯಲಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ನೀವು ಎಚ್ಚರ ತಪ್ಪಿದರೆ ನಿಮ್ಮನ್ನು ಬಿಜೆಪಿಯವರು ಮುಗಿಸಿ ಬಿಡುತ್ತಾರೆ. ಆದ ಕಾರಣ ಕಾಂಗ್ರೆಸ್ ಪಕ್ಷದ ಹಾಲಿ, ಮಾಜಿ ಶಾಸಕರು, ಸಂಸದರು, ಸೋತ ಅಭ್ಯರ್ಥಿಗಳು ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಅವರು ಸಲಹೆಯಿತ್ತರು. ಬಿಜೆಪಿಯವರು ಸುಳ್ಳನ್ನು ನಿಜ ಮಾಡುತ್ತಾರೆ. ಸುಳ್ಳು ಉತ್ಪತ್ತಿ ಮಾಡುವ, ಮಾರಾಟ ಮಾಡುವ ಕಾರ್ಖಾನೆ ಬಿಜೆಪಿಯಾಗಿದೆ. ಜನರಿಗೆ ಇವರ ಸುಳ್ಳನ್ನು ಅರ್ಥ ಮಾಡಿಸಬೇಕು ಎಂದು ಸಿದ್ದರಾಮಯ್ಯ ಕಿವಿಮಾತು ಹೇಳಿದರು.

ಮೋದಿ ಕುತಂತ್ರಕ್ಕೆ ಕೊನೆ ಹಾಡದಿದ್ದರೆ ಗುಲಾಮಗಿರಿಯೇ ನಿಶ್ಚಿತ

ಮೈಸೂರು: ಬಿಜೆಪಿ ಹಾಗೂ ನರೇಂದ್ರ ಮೋದಿ ಅವರ ಕುತಂತ್ರ ಬಯಲು ಮಾಡಬೇಕು. ಇಲ್ಲವೆಂದರೆ ಈ ದೇಶ ಸರ್ವಾಧಿಕಾರದ ಹಿಡಿತಕ್ಕೆ ಹೋಗುತ್ತದೆ. ತರುವಾಯ ಹಿಂದಿನಂತೆ ಗುಲಾಮರಂತೆ ಬದುಕಬೇಕಾಗುತ್ತದೆ ಎಂದು ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ಸಂಘ ಪರಿವಾರದ ಹೆಡ್ಗೆವಾರ್ ಅವರು ಜರ್ಮನಿ ಹಾಗೂ ಇಟಲಿಗೆ ತಮ್ಮವರನ್ನು ಕಳುಹಿಸಿ ಸರ್ವಾಧಿಕಾರ ಆಡಳಿತದ ಬಗ್ಗೆ ಅಧ್ಯಯನ ನಡೆಸಿದ್ದರು. ಆದರೆ ಈಗ ಇಂತಹ ಸರ್ವಾಧಿಕಾರಿ ಮನೋಭಾವದ ಹೆಡ್ಗೆವಾರ್, ಸಾರ್ವಕರ್ ಅವರನ್ನು ಬಿಜೆಪಿಯವರು ವೈಭವೀಕರಿಸುತ್ತಿದ್ದಾರೆ. ಈಗ ಇಂತಹ ಮನೋಭಾವದವರು ಮತ್ತೆ ಅಧಿಕಾರಕ್ಕೆ ಬಂದರೆ ಸರ್ವಾಧಿಕಾರದ ಆಡಳಿತ ಮತ್ತಷ್ಟು ಗಟ್ಟಿಯಾಗಿ ಗುಲಾಮಗಿರಿ ವ್ಯವಸ್ಥೆ ತರುತ್ತಾರೆ ಎಂದು ಹೇಳಿದರು. ಆದ ಕಾರಣ ಕಾಂಗ್ರೆಸ್‌ಗೆ ಮತ ಹಾಕುವರನ್ನು ಮತದಾರರ ಪಟ್ಟಿಯಿಂದ ಹೊರಗಿಡುವ ■6ನೇ ಪುಟಕ್ಕೆ

ಮತದಾನದಿಂದ ವಂಚಿತರಾದರೆ ಪೌರತ್ವ ರದ್ದಾಗುವ ಭೀತಿ

ಮೈಸೂರು: ಚುನಾವಣಾ ಆಯೋಗ ನಡೆಸುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಸರಿಯಾದ ಮಾಹಿತಿ ಒದಗಿಸದೆ ಮತದಾರರ ಪಟ್ಟಿಯಿಂದ ನಿಮ್ಮ ಹೆಸರು ಡಿಲಿಟ್ ಆದರೆ ನಿಮ್ಮ ಪೌರತ್ವವೇ ರದ್ದಾಗಬಹುದು ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಎಚ್ಚರಿಸಿದರು.

ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರು ಇಲ್ಲದಿದ್ದರೆ ಪೌರತ್ವ ರದ್ದು ಮಾತ್ರವಲ್ಲದೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳಿಂದ ಕೂಡ ವಂಚಿತರಾಗುತ್ತೀರಾ ಎಂದು ಹೇಳಿದರು. ಆದ ಕಾರಣ ಪ್ರತಿಯೊಬ್ಬರು ಎಸ್‌ಐಆರ್ ವೇಳೆ ಅಗತ್ಯ ದಾಖಲಾತಿ ಒದಗಿಸಬೇಕು. ಯಾವುದೇ ಕಾರಣಕ್ಕೂ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ಸಲಹೆ ನೀಡಿದರು. ಚುನಾವಣಾ ಆಯೋಗ ಕೇಳಿರುವ 11 ದಾಖಲೆಗಳು ಜನರಿಗೆ ಸುಲಭವಾಗಿ ದೊರೆಯುವಂತೆ ಸರ್ಕಾರ ಅಗತ್ಯ ಕ್ರಮ ಕೈಗೊಂಡಿದೆ. ಗ್ರಾಮ ಪಂಚಾಯಿತಿ ಹಾಗೂ ■6ನೇ ಪುಟಕ್ಕೆ

ಮೈಸೂರಿನ ಎರಡು ಪ್ರಸಿದ್ಧ ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆ

- ಆತಂಕದ ವಾತಾವರಣ
- ಪೊಲೀಸರಿಂದ ವ್ಯಾಪಕ ಶೋಧ



ಮೈಸೂರಿನ ಎರಡು ಪ್ರಸಿದ್ಧ ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆ ಬಂದ ಹಿನ್ನೆಲೆಯಲ್ಲಿ ಪೊಲೀಸರು ಶೋಧ ಕಾರ್ಯ ನಡೆಸಿದರು.

ಮೈಸೂರು, ಜೂ.28(ಜಿಎ)– ಮೈಸೂರಿನ ಎರಡು ಪ್ರಸಿದ್ಧ ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆ ಇ–ಮೇಲ್ ಬಂದ ಹಿನ್ನೆಲೆಯಲ್ಲಿ ಭಾನುವಾರ ಬೆಳಿಗ್ಗೆ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಹೋಟೆಲ್‌ಗಳಲ್ಲಿದ್ದ ಅತಿಥಿಗಳು ಹಾಗೂ ಸಿಬ್ಬಂದಿಯನ್ನು ಮುನ್ನೆಚ್ಚರಿಕಾ ಕ್ರಮವಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿ, ಪೊಲೀಸರು ವ್ಯಾಪಕ ಶೋಧ ಕಾರ್ಯ ನಡೆಸಿದರು.


ಪೊಲೀಸರ ಮಾಹಿತಿ ಪ್ರಕಾರ, ಹೋಟೆಲ್ ರಾಯಲ್ ಆರ್ಕಿಡ್ ಮೆಟ್ರೋಪೋಲ್ ಹಾಗೂ ಹೋಟೆಲ್ ಫಾರ್ಚೂನ್ ಜೆ.ಪಿ.ಪ್ಯಾಲೆಸ್‌ಗೆ ಮಧ್ಯಾಹ್ನ 1 ಗಂಟೆಗೆ ರಾಸಾಯನಿಕ ಬಾಂಬ್ ಸ್ಫೋಟಗೊಳ್ಳಲಿದೆ ಎಂಬ ಬೆದರಿಕೆ ಇ–ಮೇಲ್ ಬಂದಿತ್ತು. ತಕ್ಷಣವೇ ಹೋಟೆಲ್ ಆಡಳಿತ ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡಿದ್ದು, ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ ಹಾಗೂ ಗುಪ್ತಚರ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಅತಿಥಿ ಕೊಠಡಿಗಳು, ಅಡುಗೆಮನೆ, ■6ನೇ ಪುಟಕ್ಕೆ

ಹೆಚ್.ಡಿ.ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿಯಾಗಲು ಚಾಮುಂಡೇಶ್ವರಿ ಕ್ಷೇತ್ರದ ಜನರ ಆಶೀರ್ವಾದ; ನನ್ನ ಬೆಂಬಲವಿತ್ತು

ಶಾಸಕ ಜಿ.ಟಿ.ದೇವೇಗೌಡರ ಪ್ರತಿಪಾದನೆ

- ರಾಜ್ಯದ ಯಾವ ಕ್ಷೇತ್ರದಲ್ಲೂ ಕುಮಾರ ಪರ್ವ ಮಾಡಿರಲಿಲ್ಲ
- ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಈ ಸಮಾವೇಶ ಯಶಸ್ವಿಗೊಳಿಸಿದೆ
- ಯಾರೋ ಹೇಳುವಂತೆ ನಾನು ಕಾಂಗ್ರೆಸ್‌ಗೆ ಹೋಗಿದ್ದೀನಾ?
- ಕ್ಷೇತ್ರದ ಜನ ನನ್ನೊಂದಿಗೆ ಗಟ್ಟಿಯಾಗಿದ್ದಾರೆ, ವಿಶ್ವಾಸ ತುಂಬಿದ್ದಾರೆ

ಮೈಸೂರು, ಜೂ.28(ಬಿಎಲ್‌ಯು)– ತಾಯಿ ಚಾಮುಂಡೇಶ್ವರಿ ಕೃಪೆ, ಚಾಮುಂಡೇಶ್ವರಿ ಕ್ಷೇತ್ರದ ಜನರ ಆಶೀರ್ವಾದ ಹಾಗೂ ನನ್ನ ಬೆಂಬಲದಿಂದಲೇ ಹೆಚ್.ಡಿ.ಕುಮಾರಸ್ವಾಮಿ ಅವರು ಎರಡು ಬಾರಿ ಮುಖ್ಯಮಂತ್ರಿ ಆಗಿದ್ದಾರೆ ಎಂದು ಶಾಸಕ ಜಿ.ಟಿ. ದೇವೇಗೌಡರು ಸ್ಪಷ್ಟಪಡಿಸಿದ್ದಾರೆ.



ಜಿ.ಟಿ. ದೇವೇಗೌಡ

ಕ್ಷೇತ್ರದ ಬೆಳವಾಡಿ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಸಂದರ್ಭದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮೈಸೂರಿನ ಕಲಾಮಂದಿರದಲ್ಲಿ ಜೆಡಿಎಸ್ ಕಾರ್ಯಕರ್ತರ ಸಮಾವೇಶ ನಡೆಸಿದ ಸಂದರ್ಭದಲ್ಲಿ ಕುಮಾರಸ್ವಾಮಿ ■6ನೇ ಪುಟಕ್ಕೆ

ಕುಟುಂಬದಲ್ಲಿ ಸಣ್ಣ ಪುಟ್ಟ ಜಗಳವಾದಾಗ ಮತ್ತೆ ಒಂದಾಗಲ್ಲ ಎನ್ನುವವರು ಮೂರ್ಖರು

ಮೈಸೂರು: ಸಂಸಾರದಲ್ಲಿ ಸಣ್ಣ ಪುಟ್ಟ ವ್ಯತ್ಯಾಸಗಳು ಸಹಜ. ಆದರೆ ಇದೇ ಕಾರಣಕ್ಕೆ ಮತ್ತೆ ಒಂದಾಗುವುದೇ ಇಲ್ಲ ಎನ್ನುವವರು ಮೂರ್ಖರು ಎಂದು ಶಾಸಕ ಜಿ.ಟಿ.ದೇವೇಗೌಡರು ಹೇಳಿದರು.

ತಮ್ಮ ಹಾಗೂ ಪುತ್ರ ಜಿ.ಡಿ.ಹರೀಶ್‌ಗೌಡರ ನಡುವೆ ವೈಮನಸ್ಸಿದೆ ಎಂಬ ಚರ್ಚೆ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ಯಾರ ಕುಟುಂಬದಲ್ಲಿ ವ್ಯತ್ಯಾಸ ಇರುವುದಿಲ್ಲ. ಎಲ್ಲಾ ಸಂಸಾರಗಳಲ್ಲೂ ಸಣ್ಣಪುಟ್ಟ ಮನಸ್ತಾಪ ಇರುವುದು ಸಹಜ. ಆದರೆ, ವೈಮನಸ್ಸು ಹಾಗೆಯೇ ಮುಂದುವರಿಯುತ್ತದೆ ಎಂದು ಭಾವಿಸಿದ್ದರೆ ಅದು ಮೂರ್ಖತನ ಎನ್ನುವ ಮೂಲಕ ಕೌಟುಂಬಿಕ ವಿಚಾರಗಳನ್ನು ಮುಂದಿಟ್ಟುಕೊಂಡು ರಾಜಕೀಯ ಮಾಡುವವರಿಗೆ ತಿರುಗೇಟು ನೀಡುವುದರ ಜೊತೆಗೆ ತಂದೆ–ಮಗನ ಸಮ್ಮಿಲನದ ಮುನ್ಸೂಚನೆ ನೀಡಿದರು.

2028ಕ್ಕೆ ಕರ್ನಾಟಕದಲ್ಲಿ, 2029ಕ್ಕೆ ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಚಲ ವಿಶ್ವಾಸ

- ಎಸ್‌ಐಆರ್ ಮೂಲಕ ಮತಗಳನ್ನು ಬಿಜೆಪಿ ಡಿಲೀಟ್ ಮಾಡಿಸುತ್ತದೆ
- ಇಂಟೆಕ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸಿಎಂ ಗಂಭೀರ ಆರೋಪ



ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡುತ್ತಿರುವುದು.

ಬೆಂಗಳೂರು, ಜೂ.28– 2028ಕ್ಕೆ ಕರ್ನಾಟಕದಲ್ಲಿ ಹಾಗೂ 2029ಕ್ಕೆ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಕಚೇರಿಯ ಭಾರತ್ ಜೋಡೊ ಸಭಾಂಗಣದಲ್ಲಿ ಭಾನುವಾರ ನಡೆದ ಎಐಟಿಯುಸಿ(ಇಂಟೆಕ್) 316ನೇ ಅಖಿಲ ಭಾರತ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಹಾಗೂ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಬರಲು ದೇಶದ ಕಾರ್ಮಿಕರ, ಜನಸಾಮಾನ್ಯರ ಬೆಂಬಲ ಇರಬೇಕು ಎಂದರು.

ಎಸ್‌ಐಆರ್ ವೇಳೆ ಎಚ್ಚರದಿಂದಿರಿ: ಕೃಷಿಕ, ಶಿಕ್ಷಕ, ಸೈನಿಕ, ಕಾರ್ಮಿಕರು ಇಲ್ಲದೇ ಸಮಾಜ ಮುನ್ನಡೆಯದು. ಈ ದೇಶಕ್ಕೆ ಕಾರ್ಮಿಕರ ಶ್ರಮ, ಶಕ್ತಿ, ಬದ್ಧತೆ ಸಾಕಷ್ಟು ಕೊಡುಗೆ ನೀಡಿದೆ. ಕಾರ್ಮಿಕರಿಲ್ಲದೇ ಹೋದರೆ ಯಾವುದೇ ದೇಶದ ಆರ್ಥಿಕತೆ ಬೆಳೆಯುವುದಿಲ್ಲ. ಉದ್ದಿಮೆದಾರರು ಪ್ರಬಲರಾದರೆ ಕಾರ್ಮಿಕರೂ ಬಲವಾಗುತ್ತಾರೆ. ಜೊತೆಗೂಡಿದರೆ ಆರಂಭ, ನಂತರ ಪ್ರಗತಿ. ಜೂನ್ 30ರಿಂದ ಎಸ್‌ಐಆರ್ ಪ್ರಾರಂಭ ಆಗುತ್ತಿದೆ. ಬಿಜೆಪಿ ಮತಗಳನ್ನು ಡಿಲೀಟ್ ಮಾಡಿಸುತ್ತಿದೆ. ಈ ದೇಶದ ಶ್ರಮಿಕರ, ಕಾರ್ಮಿಕರ ಮತಗಳನ್ನು ಡಿಲೀಟ್ ಮಾಡಲಾಗುತ್ತಿದೆ. ಕಾರ್ಮಿಕರಿಂದ ಹಿಡಿದು ಎಲ್ಲರೂ ಇದರ ಬಗ್ಗೆ ಎಚ್ಚರದಿಂದ ಇರಬೇಕು. ಪಟ್ಟಿಯಿಂದ ತಮ್ಮ ಮತ ಅಳಿಸಿಹೋಗದಂತೆ ಎಚ್ಚರವಹಿಸಬೇಕು ಎಂದರು.

ಕಾರ್ಮಿಕರ ಕಲ್ಯಾಣಕ್ಕೆ ಆದ್ಯತೆ: ನಾನು ಸರ್ಕಾರದ ಪ್ರತಿನಿಧಿಯಾಗಿದ್ದೇನೆ. ನಾನು ಎಂದಿಗೂ ನಿಮ್ಮ ಪರವಾಗಿ, ಕಾರ್ಮಿಕರ ಪರವಾಗಿ ಇರುತ್ತೇನೆ. ನಾವು ತಂದಿರುವ ಐದು ಗ್ಯಾರಂಟಿ ಯೋಜನೆಗಳು ಕಾರ್ಮಿಕರ, ಮಹಿಳೆಯರ ಹಾಗೂ ಜನಸಾಮಾನ್ಯರ ಪರವಾಗಿವೆ. ನಮ್ಮ ಗ್ಯಾರಂಟಿ ಯೋಜನೆಗಳನ್ನು ಪ್ರಧಾನಿಯವರಿಂದ ಹಿಡಿದು ಎಲ್ಲರೂ ಟೀಕೆ ಮಾಡಿದರು. ದೇಶದಲ್ಲಿ ಬೆಲೆ ಏರಿಕೆಯಾದರೂ ನಮ್ಮ ಗ್ಯಾರಂಟಿ ಯೋಜನೆಗಳು ಜನರಿಗೆ ನೆರವಾದವು. 50 ಸಾವಿರ ಕೋಟಿಗೂ ಹೆಚ್ಚು ಹಣ ಪ್ರತಿ ವರ್ಷ ಖರ್ಚು ಮಾಡಲಾಗುತ್ತಿದೆ. ಟೀಕೆ ಮಾಡಿದವರೇ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡಿದ್ದಾರೆ ಎಂದರು.

ಒಟ್ಟಾಗಿ ಕರೆದೊಯ್ಯುತ್ತೇನೆ: ನನ್ನ ಮೇಲೆ ನಂಬಿಕೆಯನ್ನಿಟ್ಟು ■6ನೇ ಪುಟಕ್ಕೆ

ಮೈಸೂರು ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ

ಎರಡೇ ಹನಿ ಸಾಕು ಪೋಲಿಯೋ ಮುಕ್ತ ಸಮಾಜ ನಿರ್ಮಾಣಕ್ಕೆ: ತನ್ವೀರ್

ಮೈಸೂರು, ಜೂ.28(ಎಂಕೆ)– 'ಪ್ರತಿ ಹನಿ ಅವಶ್ಯ, ಪ್ರತಿ ಮಗು ಅಮೂಲ್ಯ' ಎಂಬ ಧ್ಯೇಯದೊಂದಿಗೆ ಮೈಸೂರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಐದು ವರ್ಷದೊಳಗಿನ ಮಕ್ಕಳ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನಕ್ಕೆ ಭಾನುವಾರ ಚಾಲನೆ ದೊರೆಯಿತು.

ಮೈಸೂರಿನ ಬಡಾಮಕಾನ್ ಪಿ.ಹೆಚ್.ಕಾಲೋನಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಜಿಲ್ಲಾಡಳಿತ, ಜಿಪಂ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಅಭಿಯಾನಕ್ಕೆ ನರಸಿಂಹರಾಜ ವಿಧಾನಸಭಾ ಕ್ಷೇತ್ರದ ಶಾಸಕ ತನ್ವೀರ್ ಸೇಠ್ ಚಾಲನೆ ನೀಡಿ, ನೂತನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ಒಂದು ಕಾಲದಲ್ಲಿ ಪ್ರತಿ ಐದು ಮನೆಗಳಲ್ಲಿ ಕನಿಷ್ಠ ಒಂದು ಮಗುವಾದರೂ ಪೋಲಿಯೋ ಪೀಡಿತನಾಗಿ ನಮಗೆ ಕಾಣಿಸುತ್ತಿತ್ತು. ಆರೋಗ್ಯ ಇಲಾಖೆ ಮತ್ತು ಸರ್ಕಾರದ ಸತತ ಪ್ರಯತ್ನಗಳ ಫಲವಾಗಿ, ನಾವು ಈ ರೋಗವನ್ನು ನಮ್ಮ ಸಮಾಜದಿಂದ ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಯಶಸ್ವಿಯಾಗಿದ್ದೇವೆ. ಹಾಗೆಯೇ ಮುಂದೆಯೂ ಆರೋಗ್ಯಕರ ಹಾಗೂ ಪೋಲಿಯೋ ಮುಕ್ತ ಸಮಾಜ ನಿರ್ಮಾಣದ ದೃಷ್ಟಿಯಿಂದ ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಕಡ್ಡಾಯವಾಗಿ ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವಂತೆ ಕರೆ ನೀಡಿದರು.

ಆಯಾ ಸಮುದಾಯಗಳ ಮುಖಂಡರ ಬೇಡಿಕೆಗೆ ಅನುಗುಣವಾಗಿ ಸಮುದಾಯ ಭವನಗಳ ನಿರ್ಮಾಣಕ್ಕೆ ಜಾಗ ನೀಡಿ, ಭವನ ನಿರ್ಮಾಣಕ್ಕೂ ಸರ್ಕಾರ ಅನುಕೂಲ ಮಾಡಿಕೊಡುತ್ತದೆ. ಸಮಾಜ ವಿರೋಧಿ ಚಟುವಟಿಕೆಗಳ ತಾಣವಾಗಿ ಬದಲಾಗುತ್ತಿರುವುದು ಸಮುದಾಯ ಭವನಗಳನ್ನು ಸಾರ್ವಜನಿಕರ ಸೇವೆಗೆ ವಿನಿಯೋಗ ಮಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ಕ್ರಮವಹಿಸಬೇಕು. ಶಾಲಾ–ಕಾಲೇಜು, ಆಸ್ಪತ್ರೆ ಹಾಗೂ ಸರ್ಕಾರಿ ಕಚೇರಿಗಳನ್ನಾಗಿ ಮಾರ್ಪಾಡು ಮಾಡಬೇಕು. ಹಾಗೆಯೇ ಸಮುದಾಯಗಳ ಏಳಿಕೆಗೆ ಕಾರಣವಾಗಬೇಕಾದ ಸಮುದಾಯ ಭವನಗಳನ್ನು ಸಮಾಜ ವಿರೋಧಿ ಚಟುವಟಿಕೆಗಳಿಗೆ ಬಳಸುತ್ತಿರುವವರ ವಿರುದ್ಧ ■6ನೇ ಪುಟಕ್ಕೆ



ಜಿಲ್ಲಾ ಮಟ್ಟದ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಶಾಸಕ ತನ್ವೀರ್ ಸೇಠ್ ಭಾನುವಾರ ಚಾಲನೆ ನೀಡಿದರು. ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ನಗರಪಾಲಿಕೆ ಮಾಜಿ ಸದಸ್ಯ ಆರಿಫ್ ಹುಸೇನ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ, ಜಿಪಂ ಸಿಇಓ ಎಸ್.ಯುಕೇಶ್‌ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ನಗರ ಪೊಲೀಸ್ ಉಪ ಆಯುಕ್ತ ಸುಂದರ್‌ರಾಜ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಮತ್ತಿತರರಿದ್ದರು.

ಹಲವು ವರ್ಷಗಳ ಪರಿಶ್ರಮ ಈಡೇರಿದೆ...

ದುಡಿಯಲು ಮನುಷ್ಯನಿಗೆ ಆರೋಗ್ಯ ಬಹಳ ಮುಖ್ಯ. ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿರುವ ರಾಜ್ಯ ಸರ್ಕಾರ ಬಡಾಮಕಾನ್‌ನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಿದೆ. ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು. ಬಡಾಮಕಾನ್ ಭಾಗದ ಜನರ ಹಲವು ವರ್ಷಗಳ ಪರಿಶ್ರಮ, ನಿರಂತರ ಪ್ರಯತ್ನ ಮತ್ತು ಒಂದು ದೊಡ್ಡ ಕನಸು ಸುಸಜ್ಜಿತ ಆಸ್ಪತ್ರೆ ನಿರ್ಮಾಣವಾಗಬೇಕು ಎಂಬುದಾಗಿತ್ತು. ಇಲ್ಲಿಗೆ ಮುಂಬರುವ ದಿನಗಳಲ್ಲಿ ತಜ್ಞವೈದ್ಯರು ಭೇಟಿ ನೀಡಿ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ತಾಯಿ ಮತ್ತು ಮಗುವಿನ (ಗರ್ಭಿಣಿಯರ ಮತ್ತು ಮಕ್ಕಳ) ವಿಶೇಷ ಚಿಕಿತ್ಸೆಗಾಗಿ ಆಸ್ಪತ್ರೆಯ ಮೊದಲ ಮಹಡಿಯಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ.

– ತನ್ವೀರ್ ಸೇಠ್, ಶಾಸಕ

ಮೈಸೂರು ಮಿತ್ರ ಸೋಮವಾರ 29 ಜೂನ್ 2026

ಸಂಗೀತ ದಿನಾಚರಣೆ; ಕಲಾ ಸಾರಥಿ ಪ್ರಶಸ್ತಿ ಪ್ರದಾನ



ವಿಶ್ವ ಸಂಗೀತ ದಿನಾಚರಣೆ ಪ್ರಯುಕ್ತ ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ವತಿಯಿಂದ ಸಂಗೀತ ಕ್ಷೇತ್ರದ ಸಾಧಕರಿಗೆ 'ಕಲಾ ಸಾರಥಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮೈಸೂರು, ಜೂ.28– ವಿಶ್ವ ಸಂಗೀತ ದಿನಾಚರಣೆ ಪ್ರಯುಕ್ತ ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ ವತಿಯಿಂದ ಮೈಸೂರಿನ ನಮೋ ಯೋಗ ಭವನದಲ್ಲಿ ಸಂಗೀತ ಕ್ಷೇತ್ರದ ಸಾಧಕರಿಗೆ 'ಕಲಾ ಸಾರಥಿ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಲಾವಿದರಾದ ದೇವಾನಂದ ವರ ಪ್ರಸಾದ್, ಕಿರಗಸೂರು ಪುರುಷೋತ್ತಮ್, ವಿದುಷಿ ಆರ್.ಸಿ.ರಾಜಲಕ್ಷ್ಮೀ, ಕೆ.ಎಸ್. ಭವತಾರಣಿ ಹಾಗೂ ಶಿವುಕುಮಾರ್ ಬಿಳಿಕೆರೆ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ, ಅಭಿನಂದಿಸಲಾಯಿತು.

ಕಲಾವಿದರನ್ನು ಗೌರವಿಸಿದ ನಗರ ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್ ಮಾತನಾಡಿ, 1982ರಲ್ಲಿ ಫ್ರಾನ್ಸ್‌ನಲ್ಲಿ ಆರಂಭವಾದ ವಿಶ್ವ ಸಂಗೀತ ದಿನವನ್ನು ಪ್ರತಿ ವರ್ಷ ಜೂನ್ 21ರಂದು ವಿಶ್ವದಾದ್ಯಂತ ಆಚರಿಸಲಾಗುತ್ತಿದೆ. ಸಂಗೀತದ ಭಾಷೆಯು ಎಲ್ಲರನ್ನೂ ಒಂದುಗೂಡಿಸುತ್ತದೆ. ಮೈಸೂರಿನ ಸಾಂಸ್ಕೃತಿಕ ವೈಭವಕ್ಕಾಗಿ ಎಲೆಮರೆ ಕಾಯಿಯಂತೆ ಶ್ರಮಿಸುತ್ತಿರುವ ಕಲಾವಿದರನ್ನು ಗುರುತಿಸಿ ಅವರಿಗೆ ಕಲಾ ಸಾರಥಿ ಪ್ರಶಸ್ತಿ ನೀಡಿರುವುದು ಸುತ್ತ್ಯಾರ್ಹ ಕಾರ್ಯ ಎಂದು ಪ್ರಶಂಸಿಸಿದರು.

ಸಮಾರಂಭದಲ್ಲಿ ಸಮಾಜ ಸೇವಕ ರಾಘರಾಮ್ ವಾಜಪೇಯಿ, ಕಾಂಗ್ರೆಸ್ ಮುಖಂಡ ನವೀನ್‌ಕುಮಾರ್, ಕಲಾವಿದರಾದ ಕಿರಗಸೂರು ರಾಜಪ್ಪ, ಚಿತ್ರನಟ ಸುನೀಲ್, ರಾಜಣ್ಣ, ಟ್ರಸ್ಟ್‌ನ ಅಧ್ಯಕ್ಷ ನಾಗಶ್ರೀ ಸುಚೀಂದ್ರ, ರೂಪ, ಪ್ರಿಯಾ, ಲಾವಣ್ಯ ಮತ್ತಿತರರು ಭಾಗವಹಿಸಿದ್ದರು.

ಕೆರೆಯ ಸಂರಕ್ಷಣೆ, ಜೀವ ವೈವಿಧ್ಯದ ಮಹತ್ವ ಸಾರುವ ಉದ್ದೇಶದಿಂದ

ಮೈಸೂರಲ್ಲಿ ಕುಕ್ಕರಹಳ್ಳಿ ಕೆರೆ ಪ್ರಕೃತಿ ಜಾಗೃತಿ ಹಬ್ಬ

ಮೈಸೂರು,ಜೂ.28(ಜಿಎ)–ಮೈಸೂರಿನ ಜೀವನಾಡಿ ಕುಕ್ಕರಹಳ್ಳಿ ಕೆರೆ ಸಂರಕ್ಷಣೆ ಮತ್ತು ಜೀವ ವೈವಿಧ್ಯದ ಮಹತ್ವ ಸಾರುವ ಉದ್ದೇಶದಿಂದ ಬೆಳಿಗ್ಗೆ ಕುಕ್ಕರಹಳ್ಳಿ ಕೆರೆಯ ಪ್ರಕೃತಿ ಜಾಗೃತಿ ಹಬ್ಬ ನಡೆಸಲಾಯಿತು.

ವಾಟರ್ ಫೋರಂ ಮೈಸೂರು, ಅರಣ್ಯ ಔಟ್‌ರೀಚ್ ಹಾಗೂ ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್ ಸಹಯೋಗದಲ್ಲಿ ನಮ್ಮ ಸಾಮಾನ್ಯ ಭವಿಷ್ಯಕ್ಕಾಗಿ ತೇವಭೂಮಿಗಳ ಸಂರಕ್ಷಣೆ ಎಂಬ ಘೋಷವಾಕ್ಯದಡಿ ಕುಕ್ಕರಹಳ್ಳಿ ಕೆರೆಯ ರೈಲ್ವೆ ಗೇಟ್ ಪ್ರವೇಶ ದ್ವಾರದ ಬಳಿಯ ಪೆವಿಲಿಯನ್‌ನಲ್ಲಿ ಕುಕ್ಕರಹಳ್ಳಿ ಕೆರೆಯ ಹಬ್ಬ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಪಕ್ಷಿ ವೀಕ್ಷಣೆ, ಮರಗಳ ಪರಿಚಯ, ಛಾಯಾಚಿತ್ರ ಹಾಗೂ ಮಾಹಿತಿ ಪ್ರದರ್ಶನಗಳು ನಡೆದಿದ್ದು, 150ಕ್ಕೂ ಹೆಚ್ಚು ಪರಿಸರಾಸಕ್ತರು ಭಾಗವಹಿಸಿದ್ದರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಉಷಾರಾಣಿ ಕಾರ್ಯಕ್ರಮ ಉದ್ಘಾಟಿಸಿ, ವಾಟರ್ ಫೋರಂ ಮೈಸೂರು ಸಿದ್ಧಪಡಿಸಿದ ಕುಕ್ಕರಹಳ್ಳಿ ಕೆರೆ ಕುರಿತ ಸಮಗ್ರ ವರದಿಯನ್ನು ಬಿಡುಗಡೆ ಮಾಡಿದರು. ಈ ವರದಿಯಲ್ಲಿ ಕುಕ್ಕರಹಳ್ಳಿ ಕೆರೆ ಹಾಗೂ ಪೂರ್ಣಯ್ಯ ಕಾಲುವೆಯ ಇತಿಹಾಸ, ಕೆರೆಯ ಪರಿಸರ ಮಹತ್ವ, ಮೈಸೂರು ವಿಶ್ವವಿದ್ಯಾಲಯ ಮತ್ತು ಮೈಸೂರು ಮಹಾನಗರ ಪಾಲಿಕೆ ನಡುವಿನ ಸಮನ್ವಯದ ಕೊರತೆಯಿಂದ ಕೆರೆಗೆ ಒಳಚರಂಡಿ ನೀರು ಹರಿಯುತ್ತಿರುವ ಸಮಸ್ಯೆ ಸೇರಿದಂತೆ ವಿವಿಧ ವಿಷಯಗಳನ್ನು ದಾಖಲಿಸಲಾಗಿದೆ.



ಕುಕ್ಕರಹಳ್ಳಿ ಕೆರೆಯಲ್ಲಿ ವಾಟರ್ ಫೋರಂ ಮೈಸೂರು, ಅರಣ್ಯ ಔಟ್‌ರೀಚ್ ಹಾಗೂ ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್ ಸಹಯೋಗದಲ್ಲಿ ಆಯೋಜಿಸಿದ್ದ ಕುಕ್ಕರಹಳ್ಳಿ ಕೆರೆಯ ಹಬ್ಬದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ಪಾಲ್ಗೊಂಡಿದ್ದರು.

ಈ ವೇಳೆ ಮಾತನಾಡಿದ ಉಷಾರಾಣಿ, ಮೈಸೂರು ಕೇವಲ ಒಂದು ನಗರವಲ್ಲ, ಅದು ಭಾವನೆ, ಪರಂಪರೆ ಹಾಗೂ ಶ್ರೀಮಂತ ಇತಿಹಾಸದ ಪ್ರತೀಕ. ನಗರದ ಪರಂಪರೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

'ಪುನರ್ ವೈಭವ' ಪರಿಕಲ್ಪನೆ ಕೇವಲ ಭೂತ ಕಾಲದ ವೈಭವವನ್ನು ಸ್ಮರಿಸುವುದಲ್ಲ. ಕೆರೆಗಳ ಪುನಶ್ಚೇತನ, ಪರಿಸರ ಸಂರಕ್ಷಣೆ ಹಾಗೂ ನಗರದ ಹಸಿರು ಹೊದಿಕೆಯನ್ನು ಹೆಚ್ಚಿಸುವ ಮೂಲಕ ಉತ್ತಮ ಭವಿಷ್ಯ ನಿರ್ಮಿಸುವ ಗುರಿಯಾಗಿದೆ ಎಂದು ತಿಳಿಸಿದರು.

ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್ ವಿದ್ಯಾರ್ಥಿಗಳು ಪೂರ್ಣಯ್ಯ ಕಾಲುವೆಯ ನಕ್ಷೆ, ಕಾಲುವೆ ಮಾರ್ಗದಲ್ಲಿನ ಅತಿಕ್ರಮಗಳು ಹಾಗೂ ಅವುಗಳನ್ನು ತಡೆಗಟ್ಟುವ ಕ್ರಮಗಳ ಕುರಿತು ಮಾಹಿತಿ ನೀಡಿದರು. ಅಲ್ಲದೆ, ಕೆರೆ ಸುತ್ತಮುತ್ತ ಕಂಡುಬರುವ ಪಕ್ಷಿಗಳು, ವನ್ಯಜೀವಿಗಳು, ಹಾವುಗಳು, ಮೀನುಗಳು ಹಾಗೂ ವಿವಿಧ ಸಸ್ಯ ಪ್ರಭೇದಗಳ ಛಾಯಾಚಿತ್ರ ಪ್ರದರ್ಶನವೂ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ನಾಗರಾಜ ಸಿದ್ದಪ್ಪ ಅಂಕಸದೊಡ್ಡಿ, ಜಿಲ್ಲಾ ನ್ಯಾಯಾಧೀಶ ಆನಂದ್ ವಗಾಡೆ, ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್‌ನ ಡೀನ್ ಮತ್ತು ನಿರ್ದೇಶಕ ಡಾ.ಎಚ್.ಎಸ್.ಚಂಪಾ, ಹಾರ್ಟ್‌ಫುಲ್‌ನೆಸ್ ಇನ್‌ಸ್ಟಿಟ್ಯೂಟ್‌ನ ಜಂಟಿ ಕಾರ್ಯದರ್ಶಿ ಹಾಗೂ ಫೆಸಿಲಿಟೇಟರ್ ಕ್ರಿಸ್ ಮಧುಸೂದನ್, ಡಾ.ಪೂರ್ಣಿಮಾ, ಬಾರ್ ಕೌನ್ಸಿಲ್ ಕಾರ್ಯದರ್ಶಿ ಚರಣ್‌ರಾಜ್, ಅರಣ್ಯ ಔಟ್‌ರೀಚ್‌ನ ಸುಖ್‌ಪ್ರೀತ್‌ಕೌರ್, ಮೈಸೂರು ವಿವಿಯ ಪ್ರಸಾದ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಿನ ಟೆನಿಸ್ ಪಟು ಪದ್ಮಪ್ರಿಯಾ ಡಬಲ್ಸ್‌ನಲ್ಲಿ ವಿನ್; ಸಿಂಗಲ್ಸ್‌ನಲ್ಲಿ ರನ್ನರ್ ಅಪ್



ಮೈಸೂರು,ಜೂ.28(ಎಂಟಿವೈ)– ಹೈದರಾಬಾದ್‌ನಲ್ಲಿ ನಡೆದ ಎಟಿಎಫ್ 14 ಮತ್ತು ಅಂಡರ್ ಗ್ರೇಡ್ ಎ (ದಕ್ಷಿಣ ಏಷ್ಯಾ) ಟೆನಿಸ್ ಪಂದ್ಯಾವಳಿಯಲ್ಲಿ ಮೈಸೂರಿನ ಟೆನಿಸ್ ಪಟು ಪದ್ಮಪ್ರಿಯಾ ರಮೇಶ್ ಕುಮಾರ್ ಡಬಲ್ಸ್‌ನಲ್ಲಿ ವಿಜೇತರಾಗಿ, ಸಿಂಗಲ್ಸ್‌ನಲ್ಲಿ ರನ್ನರ್ ಅಪ್ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ಹೈದರಾಬಾದ್‌ನಲ್ಲಿ ನಡೆದ ಟೆನಿಸ್ ಪಂದ್ಯಾವಳಿಯ ಡಬಲ್ಸ್ ಫೈನಲ್‌ನಲ್ಲಿ ಪದ್ಮಪ್ರಿಯಾ, ಥೈಲ್ಯಾಂಡ್‌ನ ಪಾಲಿಪೆಚ್ ಡಾಂಗ್ ಖಿಯಾವ್ ಜೊತೆಗೂಡಿ, ಕರ್ನಾಟಕದ ಕೃಷಿಕಾ ಗೌತಮ್ ಮತ್ತು ಆಂಧ್ರಪ್ರದೇಶದ ಪರಿಣಿತಾ ಕುಟ್ಟಿ ವಟ್ಟಪ್ರಂಬಿಲ್ ಜೋಡಿಯನ್ನು 6–3, 6–3 ಸೆಟ್‌ಗಳಿಂದ ಮಣಿಸಿ, ಜಯಗಳಿಸಿದರು. ಪಂದ್ಯಾವಳಿಯ ಸಿಂಗಲ್ಸ್‌ನಲ್ಲಿ ತೆಲಂಗಾಣದ ಜೋಹಾ ಖುರೇಷಿ, ಪದ್ಮಪ್ರಿಯಾ ಅವರನ್ನು 7–5, 7–6 ಸೆಟ್‌ನಿಂದ ಮಣಿಸಿ ವಿಜೇತರಾಗಿದ್ದು, ಪದ್ಮಪ್ರಿಯಾ ರನ್ನರ್ ಅಪ್ ಪ್ರಶಸ್ತಿಗೆ ತೃಪ್ತಿಪಟ್ಟಿಕೊಳ್ಳಬೇಕಾಯಿತು. ಇದಕ್ಕೂ ಮುನ್ನ ಸಿಂಗಲ್ಸ್ 2ನೇ ಸುತ್ತಿನಲ್ಲಿ ಪದ್ಮಪ್ರಿಯಾ, ಆನಂದಿತಾ ಸರ್ಕಾರ್ ಅವರನ್ನು 6–1: 6–0 ಅಂತರದಿಂದ, 3ನೇ ಸುತ್ತಿನಲ್ಲಿ ಶೌರ್ಯ ಪಾಟೀಲ್ ಅವರನ್ನು 6–4: 6–3 ಅಂತರದಿಂದ ಸೋಲಿಸಿದ್ದರು. ಕ್ವಾರ್ಟರ್–ಫೈನಲ್‌ನಲ್ಲಿ ದಿಯಾ ರವಿಕುಮಾರ್ ಅವರನ್ನು 6–3: 6–0 ಅಂತರದಿಂದ ಹಾಗೂ ಸೆಮಿಫೈನಲ್‌ನಲ್ಲಿ ಪರಿಣಿತಾ ಕುಟ್ಟು ವತ್ತಪ್ರಂಬಿಲ್ ಅವರನ್ನು 6–2: 6–1 ಅಂತರದಿಂದ ಮಣಿಸಿದ್ದರು.

ಈ ಪಂದ್ಯಾವಳಿ ಬಳಿಕ ಪದ್ಮಪ್ರಿಯಾ 14 ವರ್ಷದೊಳಗಿನ ಟೆನಿಸ್ ಆಟಗಾರರ (ಬಾಲಕಿಯರು)ರಲ್ಲಿ ಏಷ್ಯಾದ ನಂ.2 ಶ್ರೇಯಾಂಕ, ಭಾರತ ನಂ.1 ಶ್ರೇಯಾಂಕದ ಆಟಗಾರರೆನಿಸಿಕೊಂಡಿದ್ದಾರೆ. ಪದ್ಮಪ್ರಿಯಾ ಹುಲಿ ಯೋಜನೆಯ ನಿರ್ದೇಶಕ ಡಾ.ಪಿ.ರಮೇಶ್‌ಕುಮಾರ್ ಹಾಗೂ ಚಾಮರಾಜನಗರ ವೃತ್ತ ಸಿಸಿಎಫ್ ಡಾ.ಮಾಲತಿ ಪ್ರಿಯಾ ದಂಪತಿ ಪುತ್ರಿ.

ಲಿಂಗಾಂಬುದಿ ಕೆರೆ ಪ್ರಕೃತಿ ಜಾಗೃತಿ ಹಬ್ಬ

● ನೂರಾರು ಪರಿಸರ ಪ್ರೇಮಿಗಳು ಭಾಗಿ ● ಗಿಡ–ಮರ, ಪಕ್ಷಿ ಸಂಕುಲ, ಜೀವ ವೈವಿಧ್ಯತೆ ಬಗ್ಗೆ ಮಾಹಿತಿ



ಮೈಸೂರಿನ ಲಿಂಗಾಂಬುದಿ ಕೆರೆ ಆವರಣದಲ್ಲಿ ಆಯೋಜಿಸಿದ್ದ 'ಲಿಂಗಾಂಬುದಿ ಕೆರೆ ಪ್ರಕೃತಿ ಜಾಗೃತಿ ಹಬ್ಬ' ಕಾರ್ಯಕ್ರಮಕ್ಕೆ ಮೈಸೂರು ವಿಶ್ವವಿದ್ಯಾನಿಲಯದ ಸಾವಯವ ರಸಾಯನಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥ ಡಾ.ಬಸಪ್ಪ ಅವರು ಇರುವೆ ಗೂಡಿಗೆ ಸಕ್ಕರೆ, ಅಕ್ಕಿ ಹಾಕುವ ಮೂಲಕ ಚಾಲನೆ ನೀಡಿದರು.

ಮೈಸೂರು,ಜೂ.28(ಎಂಟಿವೈ)– ಮೈಸೂರಿನ ಲಿಂಗಾಂಬುದಿ ಕೆರೆ ಆವರಣದಲ್ಲಿ ಭಾನುವಾರ ನಡೆದ 'ಲಿಂಗಾಂಬುದಿ ಕೆರೆ ಪ್ರಕೃತಿ ಜಾಗೃತಿ ಹಬ್ಬ'ದಲ್ಲಿ ಹಲವು ಮಂದಿ ಪರಿಸರ ಪ್ರೇಮಿಗಳು ಪಾಲ್ಗೊಂಡು ಕೆರೆ ಪರಿಸರದಲ್ಲಿರುವ ಗಿಡ–ಮರ, ಪಕ್ಷಿ ಸಂಕುಲ ಹಾಗೂ ಜೀವವೈವಿಧ್ಯತೆಯ ಬಗ್ಗೆ ಮಾಹಿತಿ ಪಡೆದು ಸಂಭ್ರಮಿಸಿದರು.

ಮೈಸೂರಿನ ಸ್ಪಂದನ ಆರ್ಟ್ ಗ್ಯಾಲರಿ, ಇನಿದನಿ ಮಣ್ಣ ಮಕ್ಕಳ ಹೊನ್ನ ಪದಗಳ ಬಳಗ, ಅರಣ್ಯ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ 'ಲಿಂಗಾಂಬುದಿ ಕೆರೆ ಪ್ರಕೃತಿ ಜಾಗೃತಿ ಹಬ್ಬ'ದಲ್ಲಿ ಪಕ್ಷಿ ವೀಕ್ಷಣೆ ಹಾಗೂ ಜೀವವೈವಿಧ್ಯ ನಡಿಗೆಯಲ್ಲಿ ಪಾಲ್ಗೊಳ್ಳಲು 165 ಮಂದಿ ನೋಂದಣಿ ಮಾಡಿಕೊಂಡಿದ್ದರು. ಅಲ್ಲದೆ, ಲಿಂಗಾಂಬುದಿ ಕೆರೆ ಏರಿಯಲ್ಲಿ ವಾಯು ವಿಹಾರಕ್ಕೆ ಬರುವವರು ಸೇರಿದಂತೆ 300ಕ್ಕೂ ಹೆಚ್ಚು ಮಂದಿ ಕೆರೆ ಜಾಗೃತಿ ಹಬ್ಬದಲ್ಲಿ ಪಾಲ್ಗೊಂಡು ಕೆರೆ ಪರಿಸರ, ಅಲ್ಲಿನ ಜೀವವೈವಿಧ್ಯತೆ ಬಗ್ಗೆ ತಜ್ಞರಿಂದ ವಿವರಣೆ ಪಡೆದರು.

ಬೆಳಗ್ಗೆ ಮೈಸೂರು ವಿಶ್ವವಿದ್ಯಾನಿಲಯದ ಸಾವಯವ ರಸಾಯನಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ.ಬಸಪ್ಪ ಕೆರೆ ಆವರಣದಲ್ಲಿರುವ ಇರುವೆ ಗೂಡಿಗೆ ಸಕ್ಕರೆ, ಅಕ್ಕಿ ಹಾಕಿ ಕೆರೆ ಹಬ್ಬಕ್ಕೆ ಚಾಲನೆ ನೀಡಿದರು.

ಇದೇ ವೇಳೆ ಮಾತನಾಡಿದ ಅವರು, ಪರಿಸರದಲ್ಲಿ ಪ್ರತಿಯೊಂದು ಜೀವಿಗಳಿಗೂ ತನ್ನದೇ ಆದ ಮಹತ್ವವಿದೆ. ಕೆರೆ ಪರಿಸರ ಮಾತ್ರವಲ್ಲದೆ, ನಮ್ಮ ಸುತ್ತಮುತ್ತಲಿನ ವಾತಾವರಣದಲ್ಲಿರುವ ಜೀವ ಜಂತುಗಳು ಪರಿಸರಕ್ಕೆ ತನ್ನದೇ ಆದ ಕೊಡುಗೆ ನೀಡುತ್ತಿವೆ. ಇತ್ತೀಚಿನ ದಿನಗಳಲ್ಲಿ ರಾಸಾಯನಿಕ ವಸ್ತುಗಳ ಮಿತಿ ಮೀರಿದ ಬಳಕೆಯಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಪರಿಸರ, ಕೆರೆ, ಪ್ರಾಣಿ ಮತ್ತು ಪಕ್ಷಿ, ಗಿಡ–ಮರಗಳ ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಇನಿದನಿ ಮಣ್ಣ ಮಕ್ಕಳ ಹೊನ್ನ ಪದಗಳ ಬಳಗ ಮುಖ್ಯಸ್ಥ ಡಾ.ಕಾ.ರಾಮೇಶ್ವರಪ್ಪ ಮಾತನಾಡಿ, ಮೈಸೂರಿನ ಪ್ರಮುಖ ಕೆರೆಗಳಲ್ಲಿ ಲಿಂಗಾಂಬುದಿ ಕೆರೆಯೂ ಒಂದಾಗಿದ್ದು, ವಿಸ್ತಾರದಿಂದ ಕೂಡಿದೆ. ಇಲ್ಲಿನ ಪರಿಸರದಲ್ಲಿ ಜೀವವೈವಿದ್ಯತೆ ಕಾಣಬಹುದು. ಅನೇಕ ಬಗೆಯ ಪಕ್ಷಿ, ವಲಸೆ ಪಕ್ಷಿ ಸಂಕುಲುವು ಕೆರೆ ಆವರಣದಲ್ಲಿ ಕಾಣಬಹುದು. ಕೆರೆಗೆ ಒಳಚರಂಡಿ ನೀರು ಸೇರುತ್ತಿದ್ದು, ಕೆರೆ ಪರಿಸರ ಹಾಳಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೆರೆ ಪ್ರಕೃತಿ ಜಾಗೃತಿ ಹಬ್ಬ ಆಯೋಜಿಸುವ ಮೂಲಕ ಲಿಂಗಾಂಬುದಿಕೆರೆ ಸಂರಕ್ಷಣೆಯ ಮಹತ್ವ ವಿವರಿಸಲಾಗುತ್ತಿದೆ ಎಂದು ತಿಳಿಸಿದರು.

ವಿವಿಧ ಸ್ಪರ್ಧೆ: ಇದೇ ವೇಳೆ ಲಿಂಗಾಂಬುದಿ ಕೆರೆ ಆವರಣದಲ್ಲಿ ಜೀವ ವೈವಿಧ್ಯ ಛಾಯಾಗ್ರಹಣ ಸ್ಪರ್ಧೆ, ಸಸ್ಯ ಮತ್ತು ಜೀವ ಸಂಕುಲ ವೀಕ್ಷಣೆ ನಡೆಯಿತು.

ಡಿಆರ್‌ಎಫ್‌ಓ ಆರ್.ಪ್ರಮೋದ್ ಕುಮಾರ್, ವನ್ಯಜೀವಿ ತಜ್ಞರಾದ ಗಿರೀಶ್ ಚಂದ್ರ, ಆರ್.ಕಶ್ಯಪ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ನಾಳೆ ಕಾನೂನು ಉತ್ಸವ, ಎಥ್ನಿಕ್ ಡೇ ಕಾರ್ಯಕ್ರಮ

ಮೈಸೂರು, ಜೂ.28–ಮೈಸೂರಿನ ಚಂಪಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಮತ್ತು ಚಂಪಾ ಸ್ಕೂಲ್ ಆಫ್ ಲಾ ಸಂಸ್ಥೆಯ ವತಿಯಿಂದ ಮೊದಲನೇ ಕಾನೂನು ಉತ್ಸವ ಮತ್ತು ಎಥ್ನಿಕ್ ಡೇ ಕಾರ್ಯಕ್ರಮವನ್ನು ಜೂ.30ರಂದು ರಾಜರಾಜೇಶ್ವರಿನಗರದಲ್ಲಿರುವ ಸಂಸ್ಥೆ ಆವರಣದಲ್ಲಿ 10.30ಕ್ಕೆ ಆಯೋಜಿಸಲಾಗಿದೆ.

ಉತ್ಸವಕ್ಕೆ ಮುಖ್ಯ ಅತಿಥಿಗಳಾಗಿ ವಿಜಯಧ್ವನಿ ಪ್ರತಿಷ್ಠಾನ ಕಲ್ಚರಲ್ ಟ್ರಸ್ಟ್‌ನ ಅಧ್ಯಕ್ಷೆ ವಿದುಷಿ ಆರ್.ಸಿ.ರಾಜಲಕ್ಷ್ಮಿ ಆಗಮಿಸಲಿದ್ದಾರೆ. ಕಾಲೇಜಿನ ಪ್ರಾಂಶುಪಾಲರಾದ ಡಾ.ಜಿ.ಅಸ್ಮತುನ್ನೀಸಾ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಚಾಲಕ ಪ್ರಾಧ್ಯಾಪಕ ಭರತ್ ಭಾಗವಹಿಸಲಿದ್ದಾರೆ. ಉತ್ಸವದಲ್ಲಿ ವಿವಿಧ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳು ತಮ್ಮ ಕಾನೂನು ಜ್ಞಾನ, ಕೌಶಲ್ಯ, ಸೃಜನಶೀಲತೆ, ಪ್ರತಿಭೆ ಪ್ರದರ್ಶಿಸಲು ವೇದಿಕೆಯನ್ನು ಒದಗಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾನೂನು ಉತ್ಸವವು ಕಾನೂನು ಸ್ಪರ್ಧೆಗಳು, ಚರ್ಚೆಗಳು, ಪ್ರಸ್ತುತಿಗಳು, ಸಾಂಸ್ಕೃತಿಕ ಚಟುವಟಿಕೆಗಳು, ಕಾನೂನು ವಿದ್ಯಾರ್ಥಿಗಳ ಒಟ್ಟಾರೆ ಅಭಿವೃದ್ಧಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಇತರ ಆಕರ್ಷಕ ಕಾರ್ಯಕ್ರಮಗಳಂತಹ ವಿವಿಧ ಕಾರ್ಯಕ್ರಮಗಳನ್ನು ಒಳಗೊಂಡಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ



ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಹೂಟಗಳ್ಳಿಯ ನಗರಸಭಾ ಕಾರ್ಯಾಲಯದಲ್ಲಿ ಭಾನುವಾರ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಜಿ.ಟಿ.ದೇವೇಗೌಡ ಚಾಲನೆ ನೀಡಿದರು. ಈ ವೇಳೆ ಜೆಡಿಎಸ್ ಮುಖಂಡರು, ಅರೋಗ್ಯ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಅಕ್ಕ ನಾಗಲಾಂಭಿಕೆ ನಾಟಕ ಪ್ರದರ್ಶನ



ಡಾ.ದಿವ್ಯ ಅಭಿನಯಿಸಿದ 'ಅಕ್ಕ ನಾಗಲಾಂಬಿಕೆ' ನಾಟಕದ ದೃಶ್ಯ.

ಮೈಸೂರು, ಜೂ.28(ಎಸ್‌ಪಿಎನ್)– ಡಾ.ಸುಜಾತ ಅಕ್ಕಿಯವರ ಏಕವ್ಯಕ್ತಿ ಪ್ರದರ್ಶನ ನಾಟಕೋತ್ಸವದ ಎರಡನೇ ದಿನದಲ್ಲಿ ಡಾ.ಬಿ.ಎಸ್.ದಿವ್ಯ ಅವರು ಅಭಿನಯಿಸಿದ 'ಅಕ್ಕ ನಾಗಲಾಂಬಿಕೆ' ನಾಟಕ ಪ್ರದರ್ಶನಗೊಂಡು ಪ್ರೇಕ್ಷಕರನ್ನು ಆಕರ್ಷಿತು.

ಮೈಸೂರು ಕಲಾಮಂದಿರ ಆವರಣದ ಕಿರುರಂಗಮಂದಿರದಲ್ಲಿ ಕರ್ನಾಟಕ ಏಕೀಕರಣ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಕರ್ನಾಟಕ ಏಕೀಕರಣ ಹೋರಾಟಗಾರ ಡಾ.ಸಿದ್ಧನಾಥ ಬಳ್ಳಾರಿ ಅವರ ಸ್ಮರಣಾರ್ಥ ಡಾ.ಸುಜಾತ ಅಕ್ಕಿಯವರ ಏಕವ್ಯಕ್ತಿ ಪ್ರದರ್ಶನ ನಾಟಕೋತ್ಸವದ ಎರಡನೇ ದಿನದ 'ಅಕ್ಕ ನಾಗಲಾಂಬಿಕೆ' ಪ್ರದರ್ಶನಗೊಂಡಿತು.

ಬಳಿಕ ಮಾತನಾಡಿದ ಡಾ.ಸುಜಾತ ಅಕ್ಕಿ, ಕರ್ನಾಟಕ ಏಕೀಕರಣಕ್ಕಾಗಿ ತಮ್ಮ ಬದುಕನ್ನೇ ಸಮರ್ಪಿಸಿದ ಮಹನೀಯರನ್ನು ಸ್ಮರಿಸಿ, ಅವರ ತ್ಯಾಗ ಮತ್ತು ಹೋರಾಟದ ಮೌಲ್ಯಗಳನ್ನು ಇಂದಿನ ಪೀಳಿಗೆಗೆ ತಲುಪಿಸುವ ಹೊಣೆ ನಮ್ಮೆಲ್ಲರ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಬಸವಣ್ಣನವರ ಅಕ್ಕನಾದ ಅಕ್ಕ ನಾಗಲಾಂಬಿಕೆಯ ಜೀವನ, 12ನೇ ಶತಮಾನದಲ್ಲಿ ಬಸವಾದಿ ಶರಣರು ಕಟ್ಟಿದ ಸಮ ಸಮಾಜದ ಕನಸನ್ನು ಸಾಕಾರಗೊಳಿಸುವಲ್ಲಿ ಅವರು ವಹಿಸಿದ ಮಹತ್ತರ ಪಾತ್ರವನ್ನು ನಾಟಕವು ಪರಿಣಾಮಕಾರಿಯಾಗಿ ಅನಾವರಣಗೊಳಿಸಿತು. ಸಭೆಯಲ್ಲಿ ಉಪನ್ಯಾಸಕರಾದ ಶಿವಮಲ್ಲು ಕುನ್ನೂರು, ಕಾಳೀಪ್ರಸಾದ್, ಮಹಿಳಾ ಚಿಂತಕಿ ಡಾ.ಸುಜಾತ ಅಕ್ಕಿ, ರಂಗಕರ್ಮಿ ಎನ್.ಎಸ್. ಗೋಪಿನಾಥ್ ಹಾಗೂ ರಂಗ ನಿರ್ದೇಶಕ ಅರಸೀಕೆರೆ ಯೋಗಾನಂದ, ಕಾರ್ಯಕ್ರಮದಲ್ಲಿ ಪ್ರಗತಿಪರ ಚಿಂತಕ ನಾ.ದಿವಾಕರ್, ರಂಗನಿರ್ದೇಶಕರಾದ ಶ್ರೀನಿವಾಸ್ ಪಾಲಹಳ್ಳಿ, ಶೀಲಾ ಕುಮಾರಿ, ಸಾಹಿತಿ ಉಷಾ ನರಸಿಂಹನ್ ಸೇರಿದಂತೆ ಹಲವರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.06.2026 ಸೋಮವಾರ, ಮಳೆ ನಕ್ಷತ್ರ: ಆರ್ದ್ರಾ, 22.06.2026ರಿಂದ 05.07.2026ವರೆಗೆ, ಪರಾಭವ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ನಿಜ ಜ್ಯೇಷ್ಠ ಮಾಸ, ಶುಕ್ಲ ಪಕ್ಷ, ತಿಥಿ: ಹುಣ್ಣಿಮೆ, ನಕ್ಷತ್ರ: ಮೂಲ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಕರ್ನಾಟಕ ರಂಗ ಪರಿಷತ್ತು, ಕೇಂದ್ರ ಸಮಿತಿ, ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** ಮೈಸೂರು ವಲಯ ಸಾಂಸ್ಕೃತಿಕ ಸಂಘಟಕರ ಸಮಾವೇಶ; ಸಾಂಸ್ಕೃತಿಕ ಸಮಾಗಮ. ಉದ್ಘಾಟನೆ: ಮಂಡ್ಯದ ಕರ್ನಾಟಕ ಸಂಘದ ಅಧ್ಯಕ್ಷರಾದ ಪ್ರೊ.ಜಯಪ್ರಕಾಶಗೌಡ, ಅಧ್ಯಕ್ಷತೆ: ಅಭಿಯಂತರರು ಅಧ್ಯಕ್ಷ ಹೆಚ್.ಎಸ್.ಸುರೇಶ್ ಬಾಬು, ಗೌರವ ಉಪಸ್ಥಿತಿ ರಾಜಶೇಖರ ಕದಂಬ, ಮುಖ್ಯ ಅತಿಥಿಗಳು: ಮೈಸೂರು ವಲಯದ ಜಂಟಿ ನಿರ್ದೇಶಕರಾದ ವಿ.ಎನ್.ಮಲ್ಲಿಕಾರ್ಜುನಸ್ವಾಮಿ, ಕಾವಾ ಆಡಳಿತಾಧಿಕಾರಿಗಳಾದ ನಿರ್ಮಲ ಮಠಪತಿ, ನೃತ್ಯಗಿರಿ ಸಂಸ್ಥಾಪಕರಾದ ಕೃಪಾಫಡ್ಕೆ. ವಿಚಾರ ಗೋಷ್ಠಿ: ಸಾಂಸ್ಕೃತಿಕ ನೀತಿ ಅನುಷ್ಠಾನ: ಸಾಂಸ್ಕೃತಿಕ ಸಂಘ– ಸಂಸ್ಥೆಗಳ ಪಾತ್ರ, ಅಧ್ಯಕ್ಷತೆ: ನಟನ ಸಂಸ್ಥಾಪಕರಾದ ಮಂಡ್ಯ ರಮೇಶ್, ವಿಷಯ ಮಂಡನೆ: ಜೈ ಕರ್ನಾಟಕ ಸಂಘಟನೆಯ ಅಧ್ಯಕ್ಷರಾದ ಪ್ರಸಾದ್ ರಕ್ಷಿದಿ, ಸ್ಥಳ: ಕಿರು ರಂಗಮಂದಿರ, ಕಲಾಮಂದಿರ ಆವರಣ, ಮೈಸೂರು, ಬೆಳಗ್ಗೆ 10.30 ರಿಂದ.

■ **ಎನ್‌ಐಇ ಪ್ರಥಮ ದರ್ಜೆ ಕಾಲೇಜು:** ಓರಿಯೆಂಟೇಷನ್ ಡೇ, ಮುಖ್ಯ ಅತಿಥಿಗಳು: ಮೈಸೂರು ವಿವಿಯ ಜೆನೆಟಿಕ್ಸ್, ಜೆನೊಮಿಕ್ಸ್ ವಿಭಾಗದ ಮುಖ್ಯಸ್ಥರಾದ ಡಾ.ಸುತ್ತೂರು ಎಸ್.ಮಾಲಿನಿ, ಹೆಚ್‌ಡಿಎಫ್‌ಸಿ ಬ್ಯಾಂಕ್ ಮುಖ್ಯಸ್ಥರಾದ ಸುಬ್ರಹ್ಮಣ್ಯ.ಕೆ. ಸ್ಥಳ: ಡೈಮಂಡ್ ಜೂಬ್ಲಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್, ಎನ್‌ಐಇ ಕಾಲೇಜು ಆವರಣ, ಬೆಳಗ್ಗೆ 10 ರಿಂದ.

■ **ಶಂಕರ ಕಣ್ಣಿನ ಆಸ್ಪತ್ರೆ, ಬೆಂಗಳೂರು, ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ, ವಿನಾಯಕ ಕ್ರೀಡಾ ಹಾಗೂ ಸಮಾಜ ಸೇವಾ ಸಂಸ್ಥೆ, ಸರ್ಕಾರಿ ಆಸ್ಪತ್ರೆ, ಆಶೋಕಪುರಂ, ಮೈಸೂರು:** ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ, ಸ್ಥಳ: ಸರ್ಕಾರಿ ಆಸ್ಪತ್ರೆ, 6ನೇ ಕ್ರಾಸ್, ಅಶೋಕಪುರಂ,ಮೈಸೂರು, ಬೆಳಗ್ಗೆ 9 ರಿಂದ.

■ **ವಿದ್ಯಾವರ್ಧಕ ಸಂಘ, ವಿದ್ಯಾವರ್ಧಕ ಪಾಲಿಟೆಕ್ನಿಕ್ ಕಾಲೇಜು, ಮೈಸೂರು:** ಮೊದಲ ವರ್ಷದ ಡಿಪ್ಲೊಮಾ ಇಂಜಿನಿಯರಿಂಗ್ ವಿದ್ಯಾರ್ಥಿಗಳ ಪರಿಚಯ ಕಾರ್ಯಕ್ರಮ, ಅಧ್ಯಕ್ಷತೆ: ವಿವಿ ಸಂಘದ ಗೌರವಾಧ್ಯಕ್ಷ ಗುಂಡಪ್ಪ ಗೌಡ, ಮುಖ್ಯ ಅತಿಥಿ: ಜೆ.ಕೆ ಟೈರ್ & ಇಂಡಸ್ಟ್ರೀಸ್ ಲಿಮಿಟೆಡ್‌ನ ಜನರಲ್ ಮ್ಯಾನೇಜರ್ ಗೋಪಾಲ್ ಗೌಡ, ಸ್ಥಳ: ಸಾಹುಕಾರ್ ಚೆನ್ನಯ್ಯ ಸಭಾಂಗಣ, ವಿವಿಸಿಇ ಕಾಲೇಜು ಆವರಣ, ಬೆಳಗ್ಗೆ 10.30 ರಿಂದ.

■ **ಕಾಮಾಕ್ಷಿ ಆಸ್ಪತ್ರೆ:** ಫೌಂಡರ್ಸ್ ಡೇ, ಪ್ರತಿಭಾ ಪುರಸ್ಕಾರ, ಸನ್ಮಾನ ಕಾರ್ಯಕ್ರಮ, ಅಧ್ಯಕ್ಷತೆ: ಆಸ್ಪತ್ರೆ ಮ್ಯಾನೇಜಿಂಗ್ ಟ್ರಸ್ಟಿ ಎಂ.ಮಹೇಶ್ ಶೆಣೈ, ಸ್ಥಳ: ಕಾಮಾಕ್ಷಿ ಆಸ್ಪತ್ರೆ, ಕುವೆಂಪುನಗರ, ಮಧ್ಯಾಹ್ನ 1 ರಿಂದ.

■ **ಪುರಿ ಜಗನ್ನಾಥ ಸಾಂಸ್ಕೃತಿಕ ಮತ್ತು ಕಲ್ಯಾಣ ಟ್ರಸ್ಟ್ ಮೈಸೂರು:** ಜಗನ್ನಾಥ ರಥ ಯಾತ್ರೆ, ಸ್ನಾನ ಪೂರ್ಣಿಮಾ, ಮುಖ್ಯ ಅತಿಥಿ: ಮೈಸೂರು–ಕೊಡಗು ಸಂಸದರಾದ ಯದುವೀರ್ ಒಡೆಯರ್, ಗೌರವ ಅತಿಥಿ: ಶಾಸಕ, ಟಿ.ಎಸ್.ಶ್ರೀವತ್ಸ, ಸ್ಥಳ: ಮೈಸೂರು ಜಗನ್ನಾಥ ದೇವಸ್ಥಾನ, ವಿದ್ಯಾರಣ್ಯಪುರಂ, ಬೆಳಗ್ಗೆ 11ರಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಭಗಂದರ (ಫಿಸ್ಟೂಲ), ಚರ್ಮದ ಕಾಯಿಲೆ, ಮೂಗು ಸೋರುವಿಕೆ, ಕಟ್ಟಿದ ಮೂಗು, ಸೀನುವುದು, ಗಂಟಲು ನೋವು, ತಲೆ ನೋವು ಸಮಸ್ಯೆಗಳಿಗೆ ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್, ಬೆಳಗ್ಗೆ 10ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಗೀತಾರಾಧನ, 6.30 ಚಿಂತನ, 6.35 ಮತ್ತು ಸಂಜೆ 6.10: ಸಸ್ಯ ಸಿರಿ–ಆಹಾರವಾಗಿ ಔಷಧೀಯ ಸಸ್ಯಗಳು, ಪ್ರಸ್ತುತಿ: ಡಾ.ಟಿ.ಶಿವಕುಮಾರ್, 6.40 ಪದಸಂಸ್ಕೃತಿ–ಕನ್ನಡ ಪದಗಳ ಬಳಕೆ ಕಲಿಕೆಯ ವಿಶಿಷ್ಟ ಬಾನುಲಿ ಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಸಿ.ಎಸ್.ನಂದಿತಾ, 7.45 ಚಿತ್ರಗೀತೆಗಳು, 8.30 ಚಿತ್ರಗೀತೆಗಳು, 9.00–ನೆನಪಿನಂಗಳ (ಧ್ವನಿ ಮುದ್ರಣ ಭಂಡಾರದಿಂದ ಆಯ್ದ ಕಾರ್ಯಕ್ರಮ), 1. ನಾಡಿನ ಹಿರಿಯ ಕವಿ ಡಾ.ಜಿ.ಎಸ್.ಶಿವರುದ್ರಪ್ಪ ಅವರ ಸಾಹಿತ್ಯ ಕುರಿತು ಮಾತನಾಡುತ್ತಾರೆ ಡಾ.ಎಚ್.ಎಸ್. ವೆಂಕಟೇಶಮೂರ್ತಿ, 2. ಸಾಹಿತ್ಯ ಕ್ಷೇತ್ರದ ಹಿರಿಯ ವಿದ್ವಾಂಸರಾದ ಪು.ತಿ.ನ ಅವರ ಕಾವ್ಯದ ಕುರಿತು ಮಾತನಾಡುತ್ತಾರೆ ಡಾ.ಎನ್.ಎಸ್ ಲಕ್ಷ್ಮೀನಾರಾಯಣ ಭಟ್ಟ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಹೈದರಾಬಾದ್ ಸಹೋದರರ ಯುಗಳ ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು,11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಗೇಮ್ ಷೋ 2ನೇ ವರ್ಷದ ಸಂಭ್ರಮ. ಪ್ರಸ್ತುತಿ–ಕೀರ್ತನಾ ವಿ. ಮತ್ತು ಚಿನ್ಮಯಿ ಕೆ.ಎಸ್., **ಮಧ್ಯಾಹ್ನ:** 12.05 ವನಿತಾ ವಿಹಾರ, 12.35 ದೇವರನಾಮ, 12.45 ನಮ್ಮ ಆರೋಗ್ಯ –ಅಕಾಲ ಪ್ರೌಢಾವಸ್ಥೆ–ಕಾರಣಗಳು ಮತ್ತು ಚಿಕಿತ್ಸೆ ಈ ಕುರಿತು ಪೆಡಿಯಾಟ್ರಿಕ್ ಎಂಡೋಕ್ರೈನಾಲಜಿಸ್ಟ್ ಡಾ.ಅರುಣ್ ಅವರೊಂದಿಗೆ ಸಂದರ್ಶನ. ಸಂದರ್ಶಕರು–ತೇಜಸ್ವಿನಿ ಗಿರೀಶ್, 1.00 ಪ್ರಗತಿ ಪಥ –ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ–ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಕುರಿತು ಮಾಹಿತಿ. 1.20 ಭಾವಗೀತೆಗಳು–ಅಂಬಿಕಾ.ಕೆ.ರಾವ್, 1.30 ಮತ್ತು ಸಂಜೆ 5.20 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.30 ಪ್ರದೇಶ ಸಮಾಚಾರ, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ಮೋಹನ್–ಕ್ಲ್ಯಾರಿಯೋನೆಟ್ ವಾದನ, 4.00 ಮಹಿಳಾರಂಗ–ಭಾವಸಂಗಮ–ಭಾವಗೀತೆಗಳನ್ನಾಧರಿಸಿದ ಕಾರ್ಯಕ್ರಮ. ಪ್ರಸ್ತುತಿ –ಕೆ.ಜಿ.ನಂದಿನಿ, 4.30 ಹಿಂದಿ ಚಿತ್ರಗೀತೆಗಳು, 4.45 'ಭಾಷಾಭಾರತಿ'–ವಿಶೇಷ ಹಿಂದಿ ಪಾಠ ಸರಣಿ–ಸಹಯೋಗ ಭಾರತೀಯ ಭಾಷಾ ಸಂಸ್ಥಾನ, ಮೈಸೂರು. 5.00 ಡಾ.ಅಗರ್ ವಾಲ್ಸ್ ಕಣ್ಣಿನ ಆಸ್ಪತ್ರೆ–ಪ್ರಾಯೋಜಿತ ಆರೋಗ್ಯ ಕಾರ್ಯಕ್ರಮ. ವಿಷಯ–ಡಯಾಬಿಟಿಕ್ ರೆಟಿನೋಪತಿ, ಭಾಗವಹಿಸುತ್ತಾರೆ–ಡಾ.ಕೃಷ್ಣ ನಗರ್ದ್, ಪ್ರಸ್ತುತಿ–ತೇಜಸ್ವಿನಿ ಗಿರೀಶ್, ಪ್ರಾಯೋಜಕರು–ಡಾ.ಅಗರ್‌ವಾಲ್ಸ್ ಕಣ್ಣಿನ ಆಸ್ಪತ್ರೆ, ಕುವೆಂಪುನಗರ, ಮೈಸೂರು. 6.30 ಜಿಲ್ಲಾ ವಾರ್ತಾ ಪತ್ರ, 6.51 ಕೃಷಿರಂಗ: ಕೃಷಿ ದೀವಿಗೆ–ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ ಕುರಿತ ಬಾನುಲಿ ಸರಣಿ ಕಾರ್ಯಕ್ರಮ. ಆಲೂಗೆಡ್ಡೆ ಬೆಳೆಯ ಉತ್ಪಾದನಾ ತಾಂತ್ರಿಕತೆಗಳು ಈ ಕುರಿತು ಹೊಳೆನರಸೀಪುರ ತಾಲೂಕಿನ ಗುಂಜೇವಿನ ಕೃಷಿ ಸಂಶೋಧನಾ ಕೇಂದ್ರದ ಹಿರಿಯ ಕ್ಷೇತ್ರ ಅಧೀಕ್ಷಕರಾದ ಡಾ.ಎಂ.ಎಸ್.ನಾಗರಾಜ್ ಅವರೊಂದಿಗೆ ಸಂದರ್ಶನ. ಸಂದರ್ಶಕರು–ಎನ್.ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಯುವವಾಣಿ : ಯುವ ಸೆಲೆಬ್ರಿಟಿ–ಮೈಸೂರಿನ ಬಾಲ ಪ್ರತಿಭೆ ಈಗ ಯುವ ಪ್ರತಿಭೆಯಾಗಿ ಬಹಳಷ್ಟು ರಿಯಾಲಿಟಿ ಶೋಗಳಲ್ಲಿ ಭಾಗವಹಿಸಿ ಹಲವಾರು ಚಲನಚಿತ್ರಗಳಲ್ಲಿ ನಟಿಸಿರುವ ಮಹೇಂದ್ರಪ್ರಸಾದ್.ಎಂ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ದಿಗ್ವಿಜಯ್.ಬಿ, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ–ಮಹಾರಾಜಪುರಂ ಎಸ್.ರಾಮಚಂದ್ರನ್ ಅವರ ಹಾಡುಗಾರಿಕೆಯಲ್ಲಿ ಮುತ್ತುಸ್ವಾಮಿ ದೀಕ್ಷಿತರ ಕೃತಿಗಳು, 10.00 'ಶ್ರೀ ವಿದ್ಯಾವಿಶಾರದ' ಶ್ರೀ ಜಯಚಾಮರಾಜ ಒಡೆಯರ್ ವಿರಚಿತ ದೇವಿಕೃತಿಗಳನ್ನು ಆಧರಿಸಿದ ಬಾನುಲಿ ಸರಣಿ. ಪ್ರಸ್ತುತಿ–ವಿದ್ವಾನ್ ವಿ.ನಂಜುಂಡಸ್ವಾಮಿ, 10.30 ಸವಿನೆನಪು.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಕುತ್ತಿಗೆ ನೋವು, ಸ್ಪಾಂಡಿಲೋಸಿಸ್, ಭುಜನೋವು, ಬೆನ್ನು ನೋವಿಗೆ ಯೋಗ ಚಿಕಿತ್ಸಾ ಶಿಬಿರ, ಅರ್ಥೈಟಿಸ್, ಅಸೃಗ್ದರ (ಗರ್ಭಾಶಯ ರಕ್ತಸ್ರಾವ), ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9.30 ರಿಂದ.

■ **ಭಾನವಿ ಆಸ್ಪತ್ರೆ:** ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ, ಪೀಡಿಯಾಟಿಷಿಯನ್, ಪೆಡಿಯಾಟ್ರಿಕ್ ಎಂಡೋಕ್ರೈನಾಲಜಿಸ್ಟ್ ತಜ್ಞರಿಂದ ಉಚಿತ ಸಮಾಲೋಚನೆ ಶಿಬಿರ, ಸ್ಥಳ: ಭಾನವಿ ಆಸ್ಪತ್ರೆ, ಕುವೆಂಪುನಗರ, ಬೆಳಗ್ಗೆ 9.30 ರಿಂದ.

■ **ಧನ್ಯ ಸ್ಕೂಲ್ ಆಫ್ ಯೋಗ, ಮುದ್ರಾ ಪ್ರಾಣಾಯಾಮ ರಿಸರ್ಚ್ ಸೆಂಟರ್, ಮೈಸೂರು:** ಮುದ್ರಾ ಪ್ರಾಣಾಯಾಮ ಶಿಬಿರ, ಸ್ಥಳ: ಮಹಿಳಾ ಸಮಾಜ, ಜೆಎಲ್‌ಬಿ ರಸ್ತೆ, ಮೈಸೂರು, ಸಂಜೆ 5.30 ರಿಂದ.

ಎಲ್-ನಿನೋ ಪರಿಣಾಮ ಮುನ್ಸೂಚನೆ ಹಿನ್ನೆಲೆ

ಬರ ಪರಿಸ್ಥಿತಿ ನಿಭಾಯಿಸಲು ಅಧಿಕಾರಿಗಳು ಈಗಲೇ ಅಗತ್ಯ ಸಿದ್ಧತೆ ಕೈಗೊಳ್ಳಬೇಕು

ನಗರಾಭಿವೃದ್ಧಿ ಸಚಿವರೂ ಆದ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಸೂಚನೆ

ಮೈಸೂರು,ಜೂ.28(ಪಿಎಂ)– ಈ ಬಾರಿ ಎಲ್–ನಿನೋ ಪರಿಣಾಮದಿಂದ ಬರ ಪರಿಸ್ಥಿತಿ ನಿರ್ಮಾಣವಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ಇದ್ದು, ಹಾಗಾಗಿ ಈಗಲೇ ಪರಿಸ್ಥಿತಿ ನಿಭಾಯಿಸಲು ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಅಧಿಕಾರಿಗಳಿಗೆ ನಗರಾಭಿವೃದ್ಧಿ ಹಾಗೂ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಪ್ರಕೃತಿ ವಿಕೋಪ ಮೇಲುಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ನಿರ್ದೇಶನ ನೀಡಿದರು.



ಮೈಸೂರು ಜಿಪಂನ ಅಬ್ದುಲ್ ನಜೀರ್‌ಸಭಾ ಸಭಾಂಗಣದಲ್ಲಿ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕುಡಿಯುವ ನೀರಿನ ಪರಿಸ್ಥಿತಿ ಹಾಗೂ ಮುಂಗಾರು ಬಿತ್ತನೆ ಪ್ರಗತಿ ಕುರಿತು ಭಾನುವಾರ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ಮೈಸೂರು ಜಿಪಂನ ಅಬ್ದುಲ್ ನಜೀರ್‌ಸಭಾ ಸಭಾಂಗಣದಲ್ಲಿ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕುಡಿಯುವ ನೀರಿನ ಪರಿಸ್ಥಿತಿ ಹಾಗೂ ಮುಂಗಾರು ಬಿತ್ತನೆ ಪ್ರಗತಿ ಕುರಿತು ಭಾನುವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದು ಅವರು ಸೂಚನೆ ನೀಡಿದರು.

ರಾಜ್ಯದಲ್ಲಿ ಬಹುತೇಕ ಕಡೆಗಳಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗುವ ಸಾಧ್ಯತೆ ಇದ್ದು, ಮಳೆ ಕೊರತೆ ಎದುರಾಗಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಲಿದೆ. ನಾವು ಸಮಯ ವ್ಯರ್ಥ ಮಾಡದೇ ಕಾರ್ಯಪ್ರವೃತ್ತರಾಗಬೇಕಿದೆ. ಬರ ಪರಿಸ್ಥಿತಿ ತೀವ್ರತೆ ಯಾವ ಭಾಗದಲ್ಲಿ ಹೆಚ್ಚಿರುತ್ತದೆ ಎಂದು ಅಂದಾಜಿಸಬೇಕು. ಕೇವಲ ಆಗಸ್ಟ್ ಮಾತ್ರವಲ್ಲದೆ, ಮುಂದಿನ ಮಾರ್ಚ್‌ವರೆಗೂ ಮಳೆ ಅಭಾವ ಸಾಧ್ಯತೆ ಇದೆ. ಹಾಗಾಗಿ ಈಗಲೇ ಪರಿಸ್ಥಿತಿ ನಿಭಾಯಿಸಲು ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಜೊತೆಗೆ ಹೆಚ್ಚು ನೀರು ಅಗತ್ಯವಿಲ್ಲದ ಪರ್ಯಾಯ ಕೃಷಿ ಬೆಳೆ ಬೆಳೆಯಲು ರೈತರನ್ನು ಸಜ್ಜುಗೊಳಿಸಬೇಕು ಎಂದು ನಿರ್ದೇಶನ ನೀಡಿದರು.

ಜುಲೈ–ಆಗಸ್ಟ್‌ನಲ್ಲಿ ಘೋಷಣೆ ಸಾಧ್ಯತೆ: ಬರ ಘೋಷಣೆಯಾದರೆ ವಿಪತ್ತು ನಿರ್ವಹಣೆ ನಿಧಿ ಸಹ ಲಭ್ಯವಾಗಿ ಸಿದ್ಧತೆ ಕೈಗೊಳ್ಳಲು ಅನುಕೂಲವಾಗಲಿದೆ. ಅದು ಜುಲೈ ಕೊನೆ ಅಥವಾ ಆಗಸ್ಟ್‌ನಲ್ಲಿ ಮಳೆ ಬರಲಿಲ್ಲವೆಂದರೆ ಆಗ, ಬರ ಘೋಷಣೆಯಾಗಲಿದೆ. ಬಹುತೇಕ ಮಳೆ ಕೊರತೆ ಎದುರಾಗಲಿದ್ದು, ಬರ ಘೋಷಣೆ ಯಾದ ನಂತರ ನಿಧಿ ಲಭ್ಯವಾಗಲಿದೆ ಎಂದರು.

ಅರಣ್ಯ ಇಲಾಖೆಯಿಂದ ವಿಳಂಬ ಸಲ್ಲ: ತುರ್ತಾಗಿ ಬೋರ್‌ವೆಲ್ ಕೊರೆಯುವ ಪರಿಸ್ಥಿತಿ ಎದುರಾಗಬಹುದು. ಜೊತೆಗೆ ಪೈಪ್‌ಲೈನ್ ದುರಸ್ತಿ ಕಾಮಗಾರಿ ಮಾಡಬೇಕಾಗಬಹುದು. ಇಂತಹ ಸನ್ನಿವೇಶದಲ್ಲಿ ಅರಣ್ಯ ಇಲಾಖೆಯವರು ಅನುಮತಿ ನೀಡಲು ಅನಗತ್ಯವಾಗಿ ವಿಳಂಬ ಮಾಡಬಾರದು. ಆ ಮೂಲಕ ಇನ್ನಷ್ಟು ಸಮಸ್ಯೆಗೆ ಕಾರಣವಾಗಬಾರದು ಎಂದರು.

ಎರಡೂ ಜಿಲ್ಲೆಗಳಲ್ಲಿ ಮಳೆ ಅಭಾವ: ಕೃಷಿ ಇಲಾಖೆ ಮೈಸೂರು ಜಂಟಿ ನಿರ್ದೇಶಕ ರವಿ ಮಾತನಾಡಿ, ಜಿಲ್ಲೆಗೆ ಸಂಬಂಧಿಸಿದಂತೆ (ಮಿ.ಮೀ.ನಲ್ಲಿ ಮಳೆ ವಿವರ) ಈ ವರ್ಷ ಪೂರ್ವ ಮುಂಗಾರು ಅವಧಿಯ ಏಪ್ರಿಲ್ ಶೇ.85ರಷ್ಟು ಹಾಗೂ ಮೇನಲ್ಲಿ ಶೇ.23ರಷ್ಟು ಮಳೆ ಕೊರತೆಯಾಗಿದೆ. ಜೂನ್ 28ರವರೆಗೆ ಶೇ.56ರಷ್ಟು ಮಳೆ ಕೊರತೆ ಇದೆ. ಒಟ್ಟಾರೆ ಜನವರಿಯಿಂದ ಇಲ್ಲಿಯವರೆಗೆ 287 ಮಿ.ಮೀ. ಮಳೆಯಾಗಬೇಕಿತ್ತು. ಆದರೆ ಆಗಿಲ್ಲ. ಶೇ.40ರಷ್ಟು ಕೊರತೆಯಾಗಿದೆ ಎಂದು ಮಾಹಿತಿ ನೀಡಿದರು.

ಈ ಮೂರು ತಿಂಗಳಲ್ಲಿ ಮಳೆ ಕೊರತೆ ಯಾಗಿದೆ. ಕಳೆದ ವರ್ಷ ಇದೇ ಅವಧಿಗೆ ಮಳೆ ಹೆಚ್ಚಿನ ಪ್ರಾಮಾಣದಲ್ಲಿ ಆಗಿತ್ತು. ಏಪ್ರಿಲ್, ಮೇನಲ್ಲಿ ವಾಡಿಕೆಗಿಂತ ಶೇ.5ರಷ್ಟು ಹೆಚ್ಚು ಮಳೆಯಾಗಿತ್ತು. ಕಳೆದ ವರ್ಷ ಜಿಲ್ಲೆಯಲ್ಲಿ ಮಳೆ ಸಹಜ ಸ್ಥಿತಿಯಲ್ಲಿ ಆಗಿದೆ. ಬಿತ್ತನೆ ಸಂಬಂಧ ಈ ವರ್ಷ 3 ಲಕ್ಷದ 76 ಸಾವಿರ 609 ಹೆಕ್ಟೇರ್ ಪ್ರದೇಶದಲ್ಲಿ ಗುರಿ ಇದೆ. ಪೂರ್ವ ಮುಂಗಾರು ಮತ್ತು ಮುಂಗಾರು ಎರಡನ್ನು ಸೇರಿಸಿ 1,61,216 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ ಎಂದರು.

ಬಿತ್ತನೆಯಲ್ಲಿ ಅಂತಹ ವ್ಯತ್ಯಾಸವಿಲ್ಲ: ಅಂದರೆ ಶೇ.48.8ರಷ್ಟು ಬಿತ್ತನೆಯಾಗಿದೆ. ಕಳೆದ ವರ್ಷದ ಇದೇ ಅವಧಿಗೆ ಬಿತ್ತನೆಯು ಶೇ.49.8 ಆಗಿತ್ತು. ಹಾಗಾಗಿ ಬಿತ್ತನೆಯಲ್ಲಿ ಅಂತಹ ವ್ಯತ್ಯಾಸ ಉಂಟಾಗಿಲ್ಲ. ಆದರೆ ಬಿತ್ತನೆ ಆಗಿರುವ ಬೆಳೆಗಳು ಬಾಡುವಂತೆ ಆಗಿವೆ. ಒಂದು ವಾರ ಕಳೆದರೆ ಕೆಲ ಬೆಳೆಗಳಿಗೆ ಸಮಸ್ಯೆಯಾಗಲಿದೆ. ಈಗ ಹಲಸಂದೆ ಹೂ ಬಿಡುವ ಸಮಯ. ಹಾಗಾಗಿ ಮಳೆ ಅಗತ್ಯವಾಗಿದೆ. ಹೆಸರು ಮತ್ತು ಉದ್ದು ಕಾಳುಕಟ್ಟುವ ಅವಧಿಯಾಗಿದ್ದು, ಇದಕ್ಕೂ ಮಳೆ ಅಗತ್ಯವಿದೆ. ಹಾಗಾಗಿ ಮಳೆ ಬಾರದೇ ಇದ್ದರೆ ಇಳುವರಿ ಮೇಲೆ ಪರಿಣಾಮ ಉಂಟಾಗಲಿದೆ ಎಂದು ವಿವರಿಸಿದರು.

ಹವಾಮಾನ ಮುನ್ಸೂಚನೆಯಂತೆ ಜೂನ್ ಅಂತ್ಯದಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಮತ್ತೆ ಆಗಸ್ಟ್‌ನಲ್ಲಿ ಮಳೆ ಬಂದರೂ ಅತಿಯಾದ ಮಳೆಯಾಗುವ ಸಾಧ್ಯತೆ ಇದೆ. ಬಿತ್ತನೆ ಬೀಜಕ್ಕೆ ಯಾವುದೇ ಕೊರತೆ ಇಲ್ಲ. 1650 ಕ್ವಿಂ. ಬಿತ್ತನೆ ಬೀಜ ಈಗಾಗಲೇ ವಿತರಣೆ ಮಾಡಲಾಗಿದೆ. ಗೊಬ್ಬರ ಸಂಬಂಧ ಮಧ್ಯಪ್ರಾಚ್ಯ ಯುದ್ಧದಿಂದ ಆಮದು ಕಡಿಮೆಯಾಗಿದೆ. ಆದರೆ ನಮ್ಮ ಜಿಲ್ಲೆಯಲ್ಲಿ ಯಾವುದೇ ಸಮಸ್ಯೆ ಉಂಟಾಗಿಲ್ಲ ಎಂದು ತಿಳಿಸಿದರು.

ಬಿಳಿಸುಳಿ ರೋಗ: ಹೆಚ್‌ಡಿ ಕೋಟೆ, ಪಿರಿಯಾಪಟ್ಟಣ, ಹುಣಸೂರು ತಾಲೂಕುಗಳಲ್ಲಿ 46 ಸಾವಿರ ಹೆಕ್ಟೇರ್‌ನಲ್ಲಿ ಮುಸುಕಿನ ಜೋಳ ಬಿತ್ತನೆಯಾಗಿದೆ. ಈ ಪೈಕಿ ಹೆಚ್.ಡಿ.ಕೋಟೆ, ಸರಗೂರು ಭಾಗದಲ್ಲಿ ಬಿಳಿಸುಳಿ ರೋಗ ಕಾಣಿಸಿಕೊಂಡಿದೆ. ಪಿರಿಯಾಪಟ್ಟಣ ಹಾಗೂ ಕೆಆರ್ ನಗರದಲ್ಲೂ ಕಾಣಿಸಿಕೊಂಡಿದೆ. ಅದಕ್ಕೆ ಸಾಕಷ್ಟು ಪರಿಹಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಡಾ.ಯತೀಂದ್ರ, ಹೆಚ್ಚು ನೀರು ಅಪೇಕ್ಷಿಸುವ ಬೆಳೆ ಬೆಳೆಯದಂತೆ ಅರಿವು ಮೂಡಿಸಬೇಕು. ಮಳೆ ಅಭಾವ ಇದ್ದಾಗ ಸೂಕ್ತ ಬೆಳೆ ಬಗ್ಗೆ ಮಾಹಿತಿ ನೀಡಬೇಕು ಎಂದು ಸೂಚಿಸಿದರು.

ಚಾಮರಾಜನಗರ ಜಿಲ್ಲೆಯ ಕೃಷಿ ಜಂಟಿ ನಿರ್ದೇಶಕರು ಮಾತನಾಡಿ, ಜಿಲ್ಲೆಯಲ್ಲಿ ಜೂನ್‌ನಲ್ಲಿ ಪರಿಣಾಮಕಾರಿ ಮಳೆಯಾಗಿಲ್ಲ. ಶೇ.18ರಷ್ಟು ಮಳೆ ಕೊರತೆಯಾಗಿದೆ. ಎಲ್ಲಾ ಬೆಳೆಗಳು ಬೆಳವಣಿಗೆ ಹಂತದಲ್ಲಿವೆ. ಒಂದು ವಾರದಲ್ಲಿ ಮಳೆಯಾಗದಿದ್ದರೆ ಇಳುವರಿ ಕಡಿಮೆಯಾಗಲಿದೆ. ಶೇ.25ರಿಂದ 30ರಷ್ಟು ಇಳುವರಿ ಕೊರತೆಯಾಗಲಿದೆ. ಸುಮಾರು 10 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಗುರಿ ಇದೆ. ಮಳೆ ಅಭಾವ ಕಾರಣದ ಹಿನ್ನೆಲೆಯಲ್ಲಿ ರಾಗಿ ಬೆಳೆಯಲು ಉತ್ತೇಜನ ನೀಡಲಾಗುತ್ತಿದೆ ಎಂದರು.

ಇದೇ ವೇಳೆ ಕೆಆರ್ ನಗರ ಶಾಸಕ ಡಿ. ರವಿಶಂಕರ್ ಮಾತನಾಡಿ, ರೈತರಿಗೆ ಅಗತ್ಯವಿರುವ ರಸಗೊಬ್ಬರ ಪೂರೈಸಬೇಕು. ಅವರ ಬೇಡಿಕೆ ಅನುಸಾರ ರಸಗೊಬ್ಬರ ಪೂರೈಕೆ ಮಾಡಬೇಕೆಂದು ನಿರ್ದೇಶನ ನೀಡುವಂತೆ ಸಚಿವರನ್ನು ಕೋರಿದರು.

ಕೃಷಿಗಿಲ್ಲ ನೀರು: ಅಧೀಕ್ಷಕ ಇಂಜಿನಿಯರ್ ರಘುಪತಿ ಮಾತನಾಡಿ, ಕಬಿನಿ ಮತ್ತು ಕೆಆರ್‌ಎಸ್ ಜಲಾಶಯಗಳಲ್ಲಿ 9 ಟಿಎಂಸಿಯಷ್ಟು ಸಂಗ್ರಹಣೆ (ಲೈಫ್ ಸ್ಟೋರೇಜ್) ಇದೆ. ಪ್ರತಿ ತಿಂಗಳಿಗೆ ಮೈಸೂರು, ಬೆಂಗಳೂರು ಹಾಗೂ ಸುಮಾರು 30 ಗ್ರಾಮಗಳಿಗೆ ಎರಡೂವರೆ ಟಿಎಂಸಿ ನೀರು ಬೇಕಾಗುತ್ತದೆ. ಈಗಿರುವ ನೀರಿನಲ್ಲಿ ಸುಮಾರು ಮೂರೂವರೆ ತಿಂಗಳಿಗೆ ಕುಡಿಯುವ ನೀರಿಗೆ ಸಮಸ್ಯೆಯಾಗದು. ಅಲ್ಲದೆ, ಹೇಮಾವತಿ ಮತ್ತು ಹಾರಂಗಿ ಸೇರಿದಂತೆ ನಾಲ್ಕು ಜಲಾಶಯಗಳಿಂದ 24 ಟಿಎಂಸಿ ನೀರು ಸಂಗ್ರಹಣೆ ಇದೆ. ಎಲ್ಲವೂ ಸೇರಿದರೆ 9ರಿಂದ 10 ತಿಂಗಳವರೆಗೆ ಕುಡಿಯುವ ನೀರಿಗೆ ಸಮಸ್ಯೆಯಾಗದು. ಆದರೆ ಬೆಳೆಗಳಿಗೆ ನೀಡಲು ಮುಂದಿನ ಜುಲೈನಲ್ಲಿ ಸಭೆ ಬಳಿಕ ನಿರ್ಧಾರ ಕೈಗೊಳ್ಳಬೇಕಾಗುತ್ತದೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಗೆ ಸಂಬಂಧಿಸಿದಂತೆ ಗ್ರಾಮೀಣ ಕುಡಿಯುವ ನೀರು ಸಂಬಂಧ (ಮೈಸೂರು) ಮಾಹಿತಿ ನೀಡಿದ ಅಧಿಕಾರಿಗಳು, ಟಾಸ್ಕ್ ಫೋರ್ಸ್ ಕಮಿಟಿ ವತಿಯಿಂದ ಕುಡಿಯುವ ನೀರಿನ ಅಭಾವ ಇರುವಡೆ ಪೂರೈಸಲಾಗುತ್ತಿದೆ. ಐದು ಗ್ರಾಪಂಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಡಾ.ಯತೀಂದ್ರ, ಅಧಿಕಾರಿಗಳು ನೀಡುವ ಮಾಹಿತಿ ಹಾಗೂ ವಾಸ್ತವ ಪರಿಸ್ಥಿತಿಯೇ ಬೇರೆ ಇರಬಾರದು ಎಂದು ಸೂಚನೆ ನೀಡಿದರು.

ಬಳಿಕ ಸಂಸದ ಸುನೀಲ್ ಬೋಸ್ ಮಾತನಾಡಿ, ಸಚಿವರಿಗೆ ಅಧಿಕಾರಿಗಳು ಸರಿಯಾದ ಮಾಹಿತಿ ನೀಡಬೇಕು. ನಾವು ಸಮಸ್ಯೆ ಪರಿಹರಿಸಲು ಸೂಚಿಸಿದಾಗ ಅನುದಾನ ಇಲ್ಲ ಎಂದು ಸಬೂಬು ಹೇಳಬಾರದು. ಏನೇ ಇದ್ದರೂ ಸಚಿವರ ಗಮನಕ್ಕೆ ತರಬೇಕು ಎಂದು ಸೂಚನೆ ನೀಡಿದರು. ಇದಕ್ಕೆ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಅಗತ್ಯವಿರುವ ಕಡೆಗಳಲ್ಲಿ ಬೋರ್‌ವೆಲ್ ಕೊರೆಸಿ, ಬೋರ್‌ವೆಲ್‌ನಲ್ಲಿ ನೀರು ಬಾರದಿದ್ದರೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲು ಕ್ರಮ ವಹಿಸಬೇಕು ಎಂದು ಚಾಮರಾಜನಗರ ಜಿಪಂ ಸಿಇಓ ಅವರಿಗೆ ಸೂಚನೆ ನೀಡಿದರು.

ಶಾಸಕರಾದ ತನ್ವೀರ್ ಸೇಠ್, ಕೆ.ಹರೀಶ್ ಗೌಡ, ಟಿ.ಎಸ್.ಶ್ರೀವತ್ಸ, ಡಿ.ರವಿಶಂಕರ್, ಡಾ. ಡಿ.ತಿಮ್ಮಯ್ಯ, ಗಣೇಶ್‌ಪ್ರಸಾದ್, ಅನಿಲ್ ಚಿಕ್ಕಮಾದು, ದರ್ಶನ್ ಧ್ರುವನಾರಾಯಣ್, ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಜಿಪಂ ಸಿಇಓ ಯುಕೇಶ್ ಕುಮಾರ್, ಚಾಮರಾಜನಗರ ಜಿಲ್ಲಾಧಿಕಾರಿ ಶ್ರೀರೂಪಾ, ಜಿಪಂ ಸಿಇಓ ಮೋನಾ ರೋತ್, ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಚಾಮರಾಜನಗರ ಎಸ್‌ಪಿ ಮುತ್ತುರಾಜ್ ಸೇರಿದಂತೆ ಅಧಿಕಾರಿಗಳು ಪಾಲ್ಗೊಂಡಿದ್ದರು.

ಸಭೆಗೆ ಸೂಕ್ತ ಮಾಹಿತಿ ನೀಡದ ಪಾಲಿಕೆ ಅಧಿಕಾರಿಗಳಿಗೆ ತರಾಟೆ

●ಪ್ರತ್ಯೇಕ ಸಭೆ ನಡೆಸಲು ಡಿಸಿಗೆ ಸಚಿವ ಡಾ.ಯತೀಂದ್ರ ಸೂಚನೆ ●ಕೇವಲ ಒಂದು ಪೇಜ್ ಮಾಹಿತಿ ನೀಡಿದರೆ ಹೇಗೆ ; ಅಧಿಕಾರಿಗಳ ವಿರುದ್ಧ ಅಸಮಾಧಾನ

ಮೈಸೂರು,ಜೂ.28(ಪಿಎಂ)– ಮಾಹಿತಿ ಸಮರ್ಪಕ ರೀತಿ ನೀಡಿಲ್ಲವೆಂದು ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳನ್ನು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸೇರಿದಂತೆ ಶಾಸಕರು ತರಾಟೆಗೆ ತೆಗೆದುಕೊಂಡರು. ಅಲ್ಲದೆ, ಶೀಘ್ರದಲ್ಲಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕುಡಿಯುವ ನೀರು ಸಂಬಂಧ ಪ್ರತ್ಯೇಕ ಸಭೆ ನಡೆಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಮೈಸೂರು ಜಿಪಂನ ಅಬ್ದುಲ್ ನಜೀರ್ ಸಭಾ ಸಭಾಂಗಣದಲ್ಲಿ ಮೈಸೂರು–ಚಾಮರಾಜನಗರ ಜಿಲ್ಲೆಗಳ ಸಂಬಂಧ ಭಾನುವಾರ ಹಮ್ಮಿಕೊಂಡಿದ್ದ ಕುಡಿಯುವ ನೀರಿನ ಪರಿಸ್ಥಿತಿ ಹಾಗೂ ಮುಂಗಾರು ಬಿತ್ತನೆ ಪ್ರಗತಿ ಕುರಿತು ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇವಲ ಒಂದು ಪೇಜ್ ಮಾಹಿತಿ ಕೊಟ್ಟರೇ ಹೇಗೆಂದು ಡಾ.ಯತೀಂದ್ರ ಅಸಮಾಧಾನ ವ್ಯಕ್ತಪಡಿಸಿದರಲ್ಲದೆ, ಮೈಸೂರು ನಗರದಲ್ಲಿ ಸಾಕಷ್ಟು ಸಮಸ್ಯೆಗಳಿವೆ ಎಂದು ಮೂರು ವಿಧಾನಸಭಾ ಕ್ಷೇತ್ರಗಳ ಶಾಸಕರು ಸಭೆಯಲ್ಲಿ ಹೇಳಿದ್ದಾರೆ. ಹಾಗಾಗಿ ಅದಕ್ಕೆ ಪ್ರತ್ಯೇಕ ಸಭೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾಧಿಕಾರಿಗಳಿಗೆ ತಿಳಿಸಿದ್ದೇನೆ. ಸಾಧ್ಯವಾದಲ್ಲಿ ನಾನು ಸದರಿ ಸಭೆಯಲ್ಲಿ ಪಾಲ್ಗೊಳ್ಳಲಿದ್ದೇನೆ ಎಂದು ತಿಳಿಸಿದರು.

ಪಾಲಿಕೆ, ವಾಣಿವಿಲಾಸ ನೀರು ಸರಬರಾಜು ಕಾರ್ಯಾಗಾರದ ಅಧಿಕಾರಿಗಳು ಸೂಕ್ತ ರೀತಿಯಲ್ಲಿ ಸಭೆಗೆ ಮಾಹಿತಿ ಒದಗಿಸಿಲ್ಲ ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಅಸಮಾಧಾನ ವ್ಯಕ್ತಪಡಿಸಿದರು. ಪಾಲಿಕೆ ಆಯುಕ್ತರು ಸಭೆಗೆ ಹಾಜರಿರಲಿಲ್ಲ. ಅವರ ಕೆಳ ಹಂತದ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದು ನೀಡಿದ ಮಾಹಿತಿ ಸೂಕ್ತವಾಗಿಲ್ಲ ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದರು.

ಇದಕ್ಕೂ ಮುನ್ನ ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ಮೈಸೂರು ನಗರದಲ್ಲಿ ಹೆಚ್ಚು ಜನಸಂಖ್ಯೆಯಿದೆ. ಮೈಸೂರಿನ ನಗರದ ಕುಡಿಯುವ ನೀರಿನ ಬಗ್ಗೆ ಒಂದೇ ಒಂದು ಅಂಕಿ ಅಂಶ ಸಭೆಗೆ ನೀಡಿರುವ ಈ ಕೈಪಿಡಿಯಲ್ಲಿ ಇಲ್ಲ. 65 ವಾರ್ಡ್‌ವಾರು ಯಾವ ವಾರ್ಡ್‌ನಲ್ಲಿ ಏನು ಸಮಸ್ಯೆ ಇದೆ ಎಂದು ಮಾಹಿತಿ ಕೊಡಬೇಕಲ್ಲವೇ? ಮೈಸೂರು ನಗರ ಸಂಬಂಧ ಪಾಲಿಕೆಯಿಂದ ಕೈಗೊಂಡಿರುವ ಪ್ರಗತಿ ಕೆಲಸಗಳ ಬಗ್ಗೆ ಯಾವುದಾದರೂ ಒಂದು ದಾಖಲೆ ಈಗ ನಿಮ್ಮ ಬಳಿ ಇದೆಯೇ? ಎಂದು ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ಮೈಸೂರು ಜಿಲ್ಲೆಯಲ್ಲಿ ನಗರ ಸೇರುವುದಿಲ್ಲವೇ? ನನ್ನ ಕ್ಷೇತ್ರದ ಬಗ್ಗೆ ಒಂದು ಅಕ್ಷರ ಇಲ್ಲ. ನನ್ನ ಕ್ಷೇತ್ರದ 20 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ನನ್ನ ಕ್ಷೇತ್ರದ ವಸತಿ ಪ್ರದೇಶಕ್ಕೆ ಮೀಸಲಿರುವ ನೀರನ್ನು ಯಾವುದೇ ಕಾರಣಕ್ಕೂ ಕೈಗಾರಿಕಾ ಪ್ರದೇಶಗಳಿಗೆ ಪೂರೈಸಬಾರದು ಎಂದು ಸೂಚನೆ ನೀಡಿದರು. ಅಲ್ಲದೆ, ಇದಕ್ಕೂ ಮುನ್ನ ಬೋರ್‌ವೆಲ್ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದಾಗ, ಕೆಲವೊಂದು ಮಾಹಿತಿ ಸಹ ತಪ್ಪಿದೆ ಎಂದು ಶಾಸಕ ತನ್ವೀರ್ ಸೇಠ್ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಮಾತನಾಡಿ, ಸಚಿವರು ಸೂಚನೆ ನೀಡಿದ್ದು, ಯಾವುದೇ ಸಭೆಯಾದರೂ ಮೈಸೂರು ಪಾಲಿಕೆ ವ್ಯಾಪ್ತಿಯ ಸಂಬಂಧ ಪ್ರತ್ಯೇಕ ಕೈಪಿಡಿ ಮಾಡಿಸಲು ಸೂಚನೆ ನೀಡಿದ್ದಾರೆ. ಅದರಂತೆ ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಕರ್ನಾಟಕದಲ್ಲಿ ಎಸ್‌ಐಆರ್: ಜೂ.30ರಿಂದ ಮನೆ ಮನೆಗೆ ಭೇಟಿ

ಬೆಂಗಳೂರು: ರಾಜ್ಯದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಆರಂಭವಾಗಿದ್ದು, ಜೂನ್ 30ರಿಂದ ಜುಲೈ 29ರವರೆಗೆ ಚುನಾವಣಾಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ.



ಈ ವೇಳೆ ಬಿಎಲ್‌ಒಗಳು ಎಸ್‌ಐಆರ್ ಅರ್ಜಿಯನ್ನು ನೀಡಲಿದ್ದು, ಮತದಾರರು ಅರ್ಜಿಯನ್ನು ಭರ್ತಿ ಮಾಡಿ ಸಹಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕಾಗಿದೆ. ಮತದಾರರ ಪಟ್ಟಿಯಲ್ಲಿರುವ ಹೆಸರುಗಳ ಪರಿಶೀಲನೆ, ತಿದ್ದುಪಡಿ, ಹೊಸ ಮತದಾರರ ಹೆಸರು ಸೇರ್ಪಡೆ, ಮೃತಪಟ್ಟವರು ಹಾಗೂ ಸ್ಥಳಾಂತರಗೊಂಡವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಪ್ರಕ್ರಿಯೆಯೂ ಈ ಅವಧಿಯಲ್ಲಿ ನಡೆಯಲಿದೆ.

ಚುನಾವಣಾ ಆಯೋಗದ ಸೂಚನೆಯಂತೆ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಭಾಗವಹಿಸಿ ಅಗತ್ಯ ಮಾಹಿತಿಯನ್ನು ಸಲ್ಲಿಸುವುದು ಅತ್ಯಂತ ಮುಖ್ಯವಾಗಿದೆ. ಅರ್ಜಿ ಸಲ್ಲಿಸದಿದ್ದಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯದಿರುವ ಸಾಧ್ಯತೆ ಇರುವುದರಿಂದ, ಮತದಾನದ ಹಕ್ಕಿನ ಮೇಲೂ ಪರಿಣಾಮ ಬೀಳಬಹುದು.

ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ ನಂತರ ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಿ, ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆ ಮತ್ತು ಸಲಹೆ ಸಲ್ಲಿಕೆಗೆ ಅವಕಾಶ ನೀಡಲಾಗುವುದು. ಅಕ್ಟೋಬರ್ 3ರಂದು ಹಕ್ಕು ಮತ್ತು ಆಕ್ಷೇಪಣೆಗಳ ವಿಚಾರಣೆ ಹಾಗೂ ವಿಲೇವಾರಿ ನಡೆಸಿ, ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು.

ಅಗತ್ಯ ದಾಖಲೆಗಳು: ಎಸ್‌ಐಆರ್ ವೇಳೆ ಕುಟುಂಬದ ಸದಸ್ಯರ ಗುರುತಿನ ಚೀಟಿ, ಮತದಾರರ ಗುರುತಿನ ಚೀಟಿ (ವೋಟರ್ ಐಡಿ), ಆಧಾರ್ ಕಾರ್ಡ್, ವಿಳಾಸ ದೃಢೀಕರಣ ದಾಖಲೆ ಹಾಗೂ ಪಾಸ್‌ಪೋರ್ಟ್ ಭಾವಚಿತ್ರ ಸಲ್ಲಿಸಬೇಕಿದೆ.

ಶುಭ ಹಾರೈಕೆ



ಮೈಸೂರಿನಲ್ಲಿ ನಡೆದ ಕರ್ನಾಟಕ ಜೂನಿಯರ್ಸ್ ಕ್ರಿಕೆಟ್ ಟೂರ್ನಮೆಂಟ್‌ನ ಉದ್ಘಾಟನಾ ಪಂದ್ಯವಾಡಿದ ಮೈಸೂರು ಹಾಗೂ ಮಡಿಕೇರಿ ತಂಡಕ್ಕೆ ಮೈಸೂರು ನಗರ ಜೆಡಿಎಸ್ ಅಧ್ಯಕ್ಷರು ಹಾಗೂ ನಗರಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಆಯೋಜಕರಾದ ಕೀರ್ತನ್ ಕುಮಾರ್, ಹೇಮಂತ್, ರಾಕೇಶ್, ಧನ್ವಿನ್ ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಎಂಐಎಫ್‌ಎಸ್‌ಇ, ನೆಕ್ಸ್‌ಜೆನ್ ಕಾಲೇಜಿನ 2026–27 ನೇ ಸಾಲಿನ ತರಗತಿಗಳು ಆರಂಭ

ಜು. 1ರಂದು ಕರಿಯರ್ ಓರಿಯೆಂಟೇಶನ್, ಸ್ಪಾಟ್ ಅಡ್ಮಿಷನ್, ಉಚಿತ ಕರಿಯರ್ ಕೌನ್ಸೆಲಿಂಗ್

ಮೈಸೂರು, ಜೂ. 28– ಮೈಸೂರಿನ ಸರಸ್ವತಿಪುರಂನಲ್ಲಿರುವ ಎಂಐಎಫ್‌ಎಸ್‌ಇ (MIFSE) ನೆಕ್ಸ್‌ಜೆನ್ ಕಾಲೇಜಿನಲ್ಲಿ 2026–27 ನೇ ಸಾಲಿನ ತರಗತಿಗಳು ಜು.1 ರಿಂದ ಕರಿಯರ್ ಓರಿಯೆಂಟೇಶನ್ ಕಾರ್ಯಕ್ರಮದೊಂದಿಗೆ ಆರಂಭಗೊಳ್ಳಲಿವೆ.

ಕಾರ್ಯಕ್ರಮವನ್ನು ಮಂಗಳೂರು ವಿಶ್ವವಿದ್ಯಾಲಯದ ಮಾಜಿ ಕುಲಪತಿ ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ ಉದ್ಘಾಟಿಸಿ, ವೃತ್ತಿಪರ ಕೋರ್ಸ್‌ಗಳು, ಉದ್ಯೋಗಾವಕಾಶಗಳು ಹಾಗೂ ಭವಿಷ್ಯದ ಕರಿಯರ್ ಕುರಿತು ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಮಾರ್ಗದರ್ಶನ ನೀಡಲಿದ್ದಾರೆ.

ಅಗ್ನಿ ಮತ್ತು ಕೈಗಾರಿಕಾ ಸುರಕ್ಷತೆ, ಲಾಜಿಸ್ಟಿಕ್ಸ್ ಅಂಡ್ ಸಪ್ಲೈ ಚೈನ್ ಮ್ಯಾನೇಜ್‌ಮೆಂಟ್ ಸೇರಿದಂತೆ ವಿವಿಧ ಉದ್ಯೋಗಾಧಾರಿತ ಕೋರ್ಸ್‌ಗಳ ಬಗ್ಗೆ ಅವರು ವಿವರವಾದ ಮಾಹಿತಿ ನೀಡಲಿದ್ದಾರೆ.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂಐಎಫ್‌ಎಸ್‌ಇ ಅಂಡ್ ಮಿನರ್ವಾ ಕಾಲೇಜು ಅಧ್ಯಕ್ಷರಾದ ವಿನೋದ್ ಕೆ. ಜಾನ್ ವಹಿಸಲಿದ್ದು, ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಿದ್ದಾರೆ.

ಎಂಐಎಫ್‌ಎಸ್‌ಇ ಸಂಸ್ಥೆ ಮಂಗಳೂರು, ಮೈಸೂರು, ಬೆಂಗಳೂರು, ಉಡುಪಿ, ತುಮಕೂರು ಹಾಗೂ ಬೆಳ್ತಂಗಡಿ ಸೇರಿದಂತೆ 6 ಶಾಖೆಗಳ ಮೂಲಕ ಸಾವಿರಾರು ವಿದ್ಯಾರ್ಥಿಗಳಿಗೆ ತರಬೇತಿ ನೀಡಿ ದೇಶ–ವಿದೇಶದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಉದ್ಯೋಗ ಕಲ್ಪಿಸಿದೆ. ಸಂಸ್ಥೆಯು ಮಂಗಳೂರು ವಿಶ್ವವಿದ್ಯಾಲಯ, ಮೈಸೂರು ವಿಶ್ವವಿದ್ಯಾಲಯ ಹಾಗೂ ಬೆಂಗಳೂರು ಸಿಟಿ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಸಹಯೋಗದೊಂದಿಗೆ ಕಾರ್ಯನಿರ್ವಹಿಸುತ್ತಿದೆ.

ಜು. 1ರಂದು ಸ್ಪಾಟ್ ಅಡ್ಮಿಷನ್‌ನಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ವಿಶೇಷ ಶುಲ್ಕ ರಿಯಾಯಿತಿ, ಉಚಿತ ಸ್ಪೋಕನ್ ಇಂಗ್ಲಿಷ್ ತರಬೇತಿ, ವ್ಯಕ್ತಿತ್ವ ವಿಕಸನ ತರಗತಿಗಳು, ಸಂದರ್ಶನ ತರಬೇತಿ, ಉಚಿತ ಇಂಡಸ್ಟ್ರಿಯಲ್ ವಿಸಿಟ್‌ಗಳ ಸೌಲಭ್ಯವಿದೆ.

ಹೆಚ್ಚಿನ ಮಾಹಿತಿಗೆ ದೂ: 90087 17027, ವೆಬ್‌ಸೈಟ್: www.mifse.com ಮೂಲಕ ಸಂಪರ್ಕಿಸಬಹುದು ಎಂದು ಎಂಐಎಫ್‌ಎಸ್‌ಇ ಸಂಸ್ಥೆ ಪ್ರಕಟಣೆ ತಿಳಿಸಿದೆ.

ಪ್ರಧಾನಿ ಮೋದಿಗೆ ಸೆಷಲ್ಸ್ ದೇಶದ 'ಗಾರ್ಡಿಯನ್ ಆಫ್ ದಿ ಬ್ಲೂ ಹಾರಿಜಾನ್' ಪ್ರಶಸ್ತಿ ಗೌರವ



ವಿಕ್ಟೋರಿಯ: ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೆಷಲ್ಸ್ ದೇಶದ ಅತ್ಯುನ್ನತ ಪ್ರಶಸ್ತಿ 'ಗಾರ್ಡಿಯನ್ ಆಫ್ ದಿ ಬ್ಲೂ ಹಾರಿಜಾನ್' ಅನ್ನು ನೀಡಿ ಗೌರವಿಸಲಾಗಿದೆ. ಪರಿಸರ ಸಂರಕ್ಷಣೆ ಮತ್ತು ಸಣ್ಣ ದ್ವೀಪ ಅಭಿವೃದ್ಧಿಶೀಲ ರಾಷ್ಟ್ರಗಳ ಆಕಾಂಕ್ಷೆಗಳನ್ನು ಮುನ್ನಡೆಸುವ ದೃಢ ಬದ್ಧತೆಗಾಗಿ ಸೆಷಲ್ಸ್ ದೇಶವು ಭಾರತದ ಪ್ರಧಾನಿಗೆ ಪ್ರಶಸ್ತಿ ನೀಡಿದ್ದು, ಸೆಷಲ್ಸ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನಿ ಅವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದ್ದಾರೆ. ಇದು ಪ್ರಧಾನಿ ಮೋದಿ ಅವರಿಗೆ ದೊರೆತ 34ನೇ ಅಂತರರಾಷ್ಟ್ರೀಯ ಪ್ರಶಸ್ತಿಯಾಗಿದೆ.

ಈ ಸಂದರ್ಭದಲ್ಲಿ ಸೆಷಲ್ಸ್ ದೇಶಕ್ಕೆ ಧನ್ಯವಾದ ಸಲ್ಲಿಸಿರುವ ಪ್ರಧಾನಿ ಮೋದಿ, ನಾನು ಈ ಗೌರವವನ್ನು ವಿನಮ್ರವಾಗಿ ಸ್ವೀಕರಿಸುತ್ತೇನೆ. ಅಲ್ಲದೆ ಹವಾಮಾನ ಬದಲಾವಣೆಯ ಸವಾಲನ್ನು ಎದುರಿಸುತ್ತಿರುವ ಎಲ್ಲ ದೇಶಗಳಿಗೂ ಅರ್ಪಿಸುತ್ತೇನೆ ಎಂದರು.

ಗುದ್ದಲಿಪೂಜೆ



ಚಾಮುಂಡೇಶ್ವರಿ ಕ್ಷೇತ್ರದ ಹೂಟಗಳ್ಳಿ ನಗರಸಭೆ ವ್ಯಾಪ್ತಿಯ ಬೆಳವಾಡಿ ಗ್ರಾಮದಲ್ಲಿ ಭಾನುವಾರ ಕೋಟ್ಯಾಂತರ ರೂ. ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಜಿ.ಟಿ.ದೇವೇಗೌಡರು ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ಬೆಳವಾಡಿ ಬೋರಪ್ಪ, ಶಿವಮೂರ್ತಿ, ರಾಮಚಂದ್ರ ಶಿವಕುಮಾರಸ್ವಾಮಿ, ಮೊಬೈಲ್ ರಮೇಶ್, ಯೋಗೇಶ್, ಭಾಗ್ಯ ಲೋಕೇಶ್, ಶಿವಣ್ಣ, ಶಿವರಾಮು, ರವಿಕುಮಾರ್, ಕೆಂಪೇಗೌಡ ಟೈಗರ್ಸ್‌ನ ಮನು, ಕಿಶೋರ್, ಪ್ರಮೋದ್, ಸುರೇಶ್ ಸೇರಿದಂತೆ ನೂರಾರು ಜಿ.ಟಿ.ಡಿ ಅಭಿಮಾನಿಗಳು ಉಪಸ್ಥಿತರಿದ್ದರು.

ಸಂಚಾರ ನಿಯಮ ಉಲ್ಲಂಘಿಸಿದ ಪೊಲೀಸ್ ಇಲಾಖೆಯ ಗಸ್ತು ವಾಹನ

ಸೀಟ್ ಬೆಲ್ಟ್ ಧರಿಸದ ಕಾರಣ 71 ಪ್ರಕರಣ ದಾಖಲು

ಮೈಸೂರು, ಜೂ.28(ಬಿಸಿಟಿ, ಎಂಕೆ)– ಸಾರ್ವಜನಿಕರಿಗೆ ಸಂಚಾರಿ ನಿಯಮಗಳ ಪಾಠ ಮಾಡುವ ಮೈಸೂರು ನಗರ ಪೊಲೀಸ್ ಇಲಾಖೆಯ ಗಸ್ತು ವಾಹನವೊಂದರ ವಿರುದ್ಧವೇ 71 ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಾಖಲಾಗಿದ್ದು, ಇಲಾಖೆಯ ಕಾರ್ಯವೈಖರಿಯನ್ನೇ ಪ್ರಶ್ನಿಸುವಂತಾಗಿದೆ.



ದಂಡ ವಿಧಿಸಲಾಗಿರುವ ವಾಹನ

ಪೊಲೀಸ್ ಇಲಾಖೆಯ 112 ತುರ್ತು ಸೇವೆ ಹಾಗೂ ಗಸ್ತು ವಾಹನ (ಕೆಎ–55–ಜಿ–0433)ದ ವಿರುದ್ಧ 2024ರ ಜು.5 ರಿಂದ 2026ರ ಜೂ.10 ರವರೆಗಿನ 23 ತಿಂಗಳ ಅವಧಿಯಲ್ಲಿ ಒಟ್ಟು 71 ಬಾರಿ ಸೀಟ್ ಬೆಲ್ಟ್ ಹಾಕದಿರುವುದಕ್ಕೆ ಪ್ರಕರಣ ದಾಖಲಾಗಿದ್ದು, ಶೇ.50 ರಷ್ಟು ರಿಯಾಯ್ತಿ ನೀಡಿದರೂ 18,250 ರೂ.ದಂಡ ಪಾವತಿ ಮಾಡಬೇಕಾಗುತ್ತದೆ.

ದೊಡ್ಡಗಡಿಯಾರ, ನ್ಯೂ ಕೋರ್ಟ್ ಕಾಂಪ್ಲೆಕ್ಸ್, ಕುವೆಂಪುನಗರ, ಸಯ್ಯಾಜಿ ರಾವ್ ರಸ್ತೆ, ಜೆ.ಕೆ. ಮೈದಾನ ಮತ್ತು ಉದಯಗಿರಿ ವೃತ್ತದಲ್ಲಿ ಸಂಚಾರ ನಿಯಮ ಉಲ್ಲಂಘನೆ ಸಂಬಂಧ ಇಂಟೆಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್ (ಐಟಿಎಂಎಸ್) ಕ್ಯಾಮೆರಾ ಮೂಲಕ ಪ್ರಕರಣಗಳು ದಾಖಲಾಗಿವೆ.


ರಸ್ತೆ ಸುರಕ್ಷತೆ, ಸಂಚಾರ ನಿಯಮ ಪಾಲನೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ನೀಡಬೇಕಾದ ಹಾಗೂ ನಿಯಮ ಉಲ್ಲಂಘನೆಯಾದಾಗ ದಂಡ ವಸೂಲಿ ಮಾಡಬೇಕಾದ ಪೊಲೀಸರೇ ಇಷ್ಟೊಂದು ದಂಡ ಬಾಕಿ ಉಳಿಸಿಕೊಂಡಿದ್ದರೆ ಹೇಗೆ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಕಾನೂನು ಎಲ್ಲರಿಗೂ ಒಂದೇ: ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಸರ್ಕಾರಿ ಮತ್ತು ಪೊಲೀಸ್ ಇಲಾಖೆ ವಾಹನಗಳ ಹೊಣೆಗಾರಿಕೆ ಕುರಿತು 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯಿಸಿದ ಡಿಸಿಪಿ ಸುಂದರ್‌ರಾಜ್, ಸಂಚಾರ ಕಾನೂನುಗಳು ಎಲ್ಲರಿಗೂ ಸಮಾನವಾಗಿ ಅನ್ವಯಿಸುತ್ತವೆ. ನಿಯಮ ಉಲ್ಲಂಘನೆಯನ್ನು ಯಾರೇ ಮಾಡಿದರು ಅದು ಉಲ್ಲಂಘನೆಯೇ ಎಂದು ತಿಳಿಸಿದ್ದಾರೆ.

ಸರ್ಕಾರಿ ಕಾರಿನ ಹಿಂಬದಿ ಸೀಟ್‌ನಲ್ಲಿ ಕುಳಿತುಕೊಳ್ಳುವ ಅಧಿಕಾರಿಗಳು ಅಥವಾ ವಿಐಪಿಗಳ ಬದಲು ಚಾಲಕರು ಸಂಚಾರ ನಿಯಮ ಉಲ್ಲಂಘನೆಯ ದಂಡವನ್ನು ಪಾವತಿಸಬೇಕಾಗುತ್ತದೆ. 112 ಗಸ್ತು ವಾಹನದ ಮೇಲಿರುವ ಕೇಸ್‌ಗಳ ಬಗ್ಗೆ ಪರಿಶೀಲನೆ ನಡೆಸಿ, ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಟೂರ್ನಿ

ಶಿವಮೊಗ್ಗ ಯೋಧಾಸ್ ವಿರುದ್ಧ ಭರ್ಜರಿ ಜಯಗಳಿಸಿದ ಕೋಸ್ಟಲ್ ಕಿಂಗ್ಸ್ ಮಂಗಳೂರು



ಕೋಸ್ಟಲ್ ಕಿಂಗ್ಸ್ ಮಂಗಳೂರು ತಂಡದ ಬಿ.ಆರ್.ರತನ್

ಹುಬ್ಬಳ್ಳಿ, ಜೂ.28(ವಿವಿಹೆಚ್)– ಇಲ್ಲಿನ ಹುಬ್ಬಳ್ಳಿ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಮಹಾರಾಜ ಟ್ರೋಫಿ ಕೆಎಸ್‌ಸಿಎ ಟಿ20 ಟೂರ್ನಿಯಲ್ಲಿ ಕೋಸ್ಟಲ್ ಕಿಂಗ್ಸ್ ಮಂಗಳೂರು ತಂಡ ಶಿವಮೊಗ್ಗ ಯೋಧಾಸ್ ವಿರುದ್ಧ ಮಳೆ ಬಾಧಿತ ಪಂದ್ಯದಲ್ಲಿ ಭರ್ಜರಿ 8 ವಿಕೆಟ್‌ಗಳ ಜಯ ಸಾಧಿಸಿದೆ.

ಮಳೆಯಿಂದಾಗಿ ಪಂದ್ಯವನ್ನು 17 ಓವರ್‌ಗಳಿಗೆ ಸೀಮಿತಗೊಳಿಸಲಾಗಿತ್ತು. ಮೊದಲು ಬ್ಯಾಟಿಂಗ್ ಮಾಡಿದ ಶಿವಮೊಗ್ಗ ಯೋಧಾಸ್ ತಂಡ 17 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು ಕೇವಲ 113 ರನ್ ಗಳಿಸಿತು.

ಕರಾವಳಿ ಕಿಂಗ್ಸ್ ಪರ ಅನುಭವಿ ವೇಗಿ ವಾಸುಕಿ ಕೌಶಿಕ್ (2/15) ಆರಂಭದಲ್ಲೇ ಆಘಾತ ನೀಡಿದರೆ, ಪಾದಾರ್ಪಣೆ ಪಂದ್ಯವಾಡಿದ 17 ವರ್ಷದ ಯುವ ಆಟಗಾರ ಬಿ.ಆರ್. ರತನ್ (3/16) ಕೆಳ ಕ್ರಮಾಂಕವನ್ನು ಧ್ವಂಸ ಮಾಡಿದರು.

113 ರನ್‌ಗಳ ಗುರಿ ಬೆನ್ನತ್ತಿದ ಕರಾವಳಿ ಕಿಂಗ್ಸ್ ಕೇವಲ 12.4 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 118 ರನ್ ಗಳಿಸಿ ಸುಲಭ ಜಯ ದಾಖಲಿಸಿತು.

ಆರಂಭಿಕರಾದ ಮುರಳೀಧರ ವೆಂಕಟೇಶ್ ಮತ್ತು ನಿಕಿನ್ ಜೋಸ್ ಭರ್ಜರಿ ಬ್ಯಾಟಿಂಗ್ ಮೂಲಕ ತಂಡದ ಗೆಲುವಿಗೆ ಬುನಾದಿ ಹಾಕಿದರು. ವೆಂಕಟೇಶ್ 25 ಎಸೆತಗಳಲ್ಲಿ 45 ರನ್ (4 ಬೌಂಡರಿ, 3 ಸಿಕ್ಸರ್) ಸಿಡಿಸಿದರೆ, ನಿಕಿನ್ ಜೋಸ್ 25 ಎಸೆತಗಳಲ್ಲಿ 31 ರನ್ (2 ಬೌಂಡರಿ, 2 ಸಿಕ್ಸರ್) ಗಳಿಸಿದರು.

ನಂತರ ಸಿದ್ಧಾರ್ಥ್ ಅಖಿಲ್ ಅಜೇಯ 22 ಮತ್ತು ರಾಜ್ವೀರ್ ವಾಧ್ವಾ ಅಜೇಯ 10 ರನ್ ಗಳಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು.

ಇದಕ್ಕೂ ಮೊದಲು ಬ್ಯಾಟಿಂಗ್ ಮಾಡಿದ ಶಿವಮೊಗ್ಗ ಯೋಧಾಸ್ ಪರ ಲುವ್ನಿತ್ ಸಿಸೋಡಿಯಾ 35 ರನ್ ಹಾಗೂ ಹರ್ಷಿಲ್ ಧರ್ಮಾನಿ 28 ರನ್ ಗಳಿಸಿದರು. ಆದರೆ ಆರಂಭಿಕ ಕುಸಿತದಿಂದ ತಂಡ ದೊಡ್ಡ ಮೊತ್ತ ದಾಖಲಿಸಲು ಸಾಧ್ಯವಾಗಲಿಲ್ಲ.

ಕರಾವಳಿ ಕಿಂಗ್ಸ್ ಪರ ಕೌಶಿಕ್ ಮೊದಲಿಗೆ ನವೀನ್ ಎಂ.ಜಿ. ಅವರನ್ನು 10 ರನ್‌ಗೆ ಕ್ಲೀನ್ ಬೌಲ್ಡ್ ಮಾಡಿ, ಬಳಿಕ ಕೆ.ವಿ. ಅನೀಶ್ ಅವರನ್ನು ಗೋಲ್ಡನ್ ಡಕ್‌ಗೆ ಔಟ್ ಮಾಡಿದರು. ನಾಯಕ ಸ್ಮರಣ್ ರವಿಚಂದ್ರನ್ ಕೂಡ ಬೇಗನೆ ಪೆವಿಲಿಯನ್ ಸೇರಿದರು.

ಇನ್ನು ಪಾದಾರ್ಪಣೆ ಪಂದ್ಯದಲ್ಲೇ ರತನ್ ಅದ್ಭುತ ಪ್ರದರ್ಶನ ನೀಡಿ ಕೊನೆಯ ಮೂರು ವಿಕೆಟ್‌ಗಳನ್ನು ಪಡೆದು ಶಿವಮೊಗ್ಗದ ಇನ್ನಿಂಗ್ಸ್‌ಗೆ ತೆರೆ ಎಳೆದರು. ಆ ಮೂಲಕ ಚೊಚ್ಚಲ ಪಂದ್ಯದಲ್ಲಿಯೇ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದು ಗಮನ ಸೆಳೆದರು.

ಮೈಸೂರು ಮಿತ್ರ ಸೋಮವಾರ 29 ಜೂನ್ 2026

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ... ಎಲ್ಲಾದ್ರು ಪಿಕ್ನಿಕ್ ಕರ್ಕೊಂಡು ಹೋಗ್ರಿ, ಸರಿ ಅಂತ ಗಂಡ ಹೆಂಡತಿಯನ್ನು ಸ್ಮಶಾನಕ್ಕೆ ಕರ್ಕೊಂಡ್ ಹೋದ.

ಹೆಂಡತಿ : ರೀ ನಿಮ್ಗೇನು ತಲೆ ಕೆಟ್ಟಿದ್ಯಾ ಇಲ್ಲಿಗೆ ಕರ್ಕೊಂಡು ಬಂದಿದ್ದೀರಲ್ಲ!

ಗಂಡ : ಅಯ್ಯೋ ಹುಚ್ಚಿ.. ಜನ ಇಲ್ಲಿಗೆ ಬರ್ಲಿಕ್ಕೂ ಅಂತ ಸಾಯ್ತಾರೆ ಗೊತ್ತಾ!

ಮೈಸೂರು ಮಿತ್ರ

ಸೋಮವಾರ, ಜೂನ್ 29, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಸೇತುವೆ ಮತ್ತು ಗೋಡೆಯನ್ನು ಒಂದೇ ಪದಾರ್ಥಗಳಿಂದ ಕಟ್ಟುತ್ತಾರೆ. ಆದರೆ, ಸೇತುವೆ ಜನರನ್ನು ಕೂಡಿಸಿದರೆ, ಗೋಡೆ ಜನರನ್ನು ಪ್ರತ್ಯೇಕಿಸುತ್ತದೆ. ಆದ್ದರಿಂದ ನಾವು ಯಾರ ಜೊತೆ ಇರಬೇಕು. ಎಂಬುದನ್ನು ಸರಿಯಾಗಿ ನಿರ್ಧರಿಸಬೇಕು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು } ಅಕ್ಕ ನಮ್ಮವಳಾದ್ರೆ, ಭಾವ ನಮ್ಮೋನಾ?

ನಿಮ್ಮ ಪತ್ರಗಳು

ಸಾಂಸ್ಕೃತಿಕ ನಗರಿ ಮೈಸೂರಲ್ಲಿ ಕಸದ ಸಮಸ್ಯೆ, ನಾಗರಿಕರ ಬೇಜವಾಬ್ದಾರಿ

ಮಾನ್ಯರೆ,

ಸ್ವಚ್ಛ ನಗರಿ ಎಂದು ಹೆಸರಾಗಿದ್ದ ಮೈಸೂರಿನ ಇಂದಿನ ಪರಿಸ್ಥಿತಿ ತೀರಾ ಕಳವಳಕಾರಿ. ನಗರದ ರಸ್ತೆ ಬದಿಗಳು, ಖಾಲಿ ಸೈಟುಗಳು, ರಿಂಗ್ ರಸ್ತೆಯ ಆಸುಪಾಸುಗಳು ಕಸದ ಕೊಂಪೆಯಾಗಿ ಮಾರ್ಪಾಡುತ್ತಿರುವುದು ಅತ್ಯಂತ ವಿಷಾದನೀಯ ಸಂಗತಿ.

ನಮ್ಮ ನಗರದ ಪ್ರಮುಖ ಸಮಸ್ಯೆಗಳ ಕಡೆಗೆ ನಾನು ಸಾರ್ವಜನಿಕರ ಹಾಗೂ ಅಧಿಕಾರಿಗಳ ಗಮನ ಸೆಳೆಯಲು ಬಯಸುತ್ತೇನೆ: ಪೌರಕಾರ್ಮಿಕರು ಪ್ರತಿದಿನ ಮನೆ ಮನೆಗೆ ಬಂದು ಕಸ ಸಂಗ್ರಹಿಸುತ್ತಿದ್ದರೂ ಜನರು ತಡರಾತ್ರಿ ಅಥವಾ ಮುಂಜಾನೆ ರಸ್ತೆ ಬದಿಗಳಲ್ಲಿ ಕಸ ಎಸೆದು ಹೋಗುತ್ತಿದ್ದಾರೆ. ಸರಸ್ವತಿಪುರಂ, ಕುವೆಂಪುನಗರ, ಗಂಗೋತ್ರಿ, ಸಿದ್ಧಾರ್ಥ ಬಡಾವಣೆಗಳಂತಹ ಪ್ರತಿಷ್ಠಿತ ಏರಿಯಾಗಳಲ್ಲೂ ವಿದ್ಯಾವಂತರೇ ಈ ರೀತಿ ಮಾಡುತ್ತಿರುವುದು ದೊಡ್ಡ ದುರಂತ. ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ನೀಡದೆ ಇರುವುದು ಪೌರಕಾರ್ಮಿಕರಿಗೆ ದೊಡ್ಡ ತಲೆನೋವಾಗಿದೆ. ಎಷ್ಟು ಜಾಗೃತಿ ಮೂಡಿಸಿದರೂ ನಾಗರಿಕರು ಇದಕ್ಕೆ ಸ್ಪಂದಿಸುತ್ತಿಲ್ಲ.

ಹಳೆಯ ಕಟ್ಟಡಗಳನ್ನು ಕೆಡವಿದಾಗ ಬರುವ ಇಟ್ಟಿಗೆ, ಸಿಮೆಂಟ್ ಮುಂತಾದ ಬಿಲ್ಡಿಂಗ್ ವೇಸ್ಟ್‌ಗಳನ್ನು ರಸ್ತೆ ಬದಿ ಹಾಗೂ ಖಾಲಿ ಜಾಗಗಳಲ್ಲಿ ಅಕ್ರಮವಾಗಿ ಸುರಿಯಲಾಗುತ್ತಿದೆ. ಆಟೋ ಅಥವಾ ದ್ವಿಚಕ್ರ ವಾಹನಗಳಲ್ಲಿ ಹೋಗುತ್ತಾ, ರಸ್ತೆ ಬದಿಗಳಿಗೆ ಕಸದ ಪ್ಲಾಸ್ಟಿಕ್ ಕವರ್‌ಗಳನ್ನು ಎಸೆದು ಹೋಗುವ ಸಂಸ್ಕೃತಿ ಹೆಚ್ಚಾಗಿದೆ.

ಮೈಸೂರು ಮಹಾನಗರಪಾಲಿಕೆ (MCC) ಎಷ್ಟೇ ಸರ್ಕಸ್ ಮಾಡಿದರೂ, ಸಾರ್ವಜನಿಕರಲ್ಲಿ ಕನಿಷ್ಠ ನಾಗರಿಕ ಪ್ರಜ್ಞೆ ಇಲ್ಲದಿದ್ದರೆ ಯಾವ ಸರ್ಕಾರವೂ ನಗರವನ್ನು ಸ್ವಚ್ಛವಾಗಿಡಲು ಸಾಧ್ಯವಿಲ್ಲ. ಪರಿಸರವನ್ನು ಹಾಳು ಮಾಡುತ್ತಿರುವ ಇಂತಹ ಬೇಜವಾಬ್ದಾರಿ ಜನರಿಂದಾಗಿ ಇಂದು ಇಡೀ ನಗರದ ಆರೋಗ್ಯಕ್ಕೆ ಕುತ್ತು ಬಂದಿದೆ. ನಮ್ಮ ಪರಿಸರವನ್ನು ನಾವೇ ಕಾಪಾಡಿಕೊಳ್ಳದಿದ್ದರೆ ಮುಂದಿನ ಪೀಳಿಗೆಗೆ ನಾವು ಕೊಡುವ ಕೊಡುಗೆಯಾದರೂ ಏನು? ಇನ್ನಾದರೂ ಮೈಸೂರಿನ ನಾಗರಿಕರು ಎಚ್ಚೆತ್ತುಕೊಂಡು ಜವಾಬ್ದಾರಿಯಿಂದ ನಡೆದುಕೊಳ್ಳಬೇಕಿದೆ. ಪಾಲಿಕೆಯು ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ಕಠಿಣ ದಂಡ ವಿಧಿಸಬೇಕೆಂದು ಈ ಪತ್ರದ ಮೂಲಕ ಆಗ್ರಹಿಸುತ್ತೇನೆ. **–ಮೈಸೂರಿನ ಜಾಗೃತ ನಾಗರಿಕರು.**

ಬೋಗಾದಿ–ಗದ್ದಿಗೆ ಮುಖ್ಯ ರಸ್ತೆಯಲ್ಲಿ ಅಪಘಾತಗಳ ಸರಮಾಲೆ

ಮಾನ್ಯರೆ,

ಮೈಸೂರಿನ ಬೋಗಾದಿ–ಗದ್ದಿಗೆ ಮುಖ್ಯ ರಸ್ತೆಯು ನಾಲ್ಕು ಪಥದ ಉತ್ತಮವಾದ ರಸ್ತೆಯಾಗಿರುವುದರಿಂದ ವಾಹನ ಸವಾರರು ಅತಿವೇಗವಾಗಿ ವಾಹನ ಚಲಾಯಿಸಿಕೊಂಡು ಹೋಗುತ್ತಿದ್ದು, ಪ್ರತಿದಿನವೂ ಒಂದಿಲ್ಲೊಂದು ಅಪಘಾತಗಳು ಸಂಭವಿಸುತ್ತಿವೆ. ಅದರಲ್ಲೂ ಎಸ್‌ಬಿಎಂ ನೌಕರರ ಬಡಾವಣೆ ಗೇಟಿನಲ್ಲಿ ಹಾಗೂ ದಾಸನಕೊಪ್ಪಲು ಗೇಟಿನಲ್ಲಿ ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿದ್ದುದರಿಂದ ಎರಡೂ ಕಡೆಗಳಲ್ಲಿ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿತ್ತು. ವೇಗವಾಗಿ ಬಂದ ವಾಹನಗಳು ಅಳವಡಿಸಿದ್ದ ಬ್ಯಾರಿಕೇಡ್ ಗಳಿಗೆ ಗುದ್ದಿದ ಪರಿಣಾಮ, ಚೆಲ್ಲಾಪಿಲ್ಲಿಯಾಗಿ ಬಿದ್ದವುಗಳನ್ನು ಸರಿಪಡಿಸದ ಕಾರಣ ಬ್ಯಾರಿಕೇಡ್‌ಗಳು ರಸ್ತೆಯ ಪಕ್ಕದಲ್ಲೇ ಬಿದ್ದಿವೆ. ಸಂಬಂಧ ಪಟ್ಟ ಪೊಲೀಸ್ ಠಾಣೆಯ ಅಧಿಕಾರಿಗಳು ಆದಷ್ಟು ಬೇಗನೆ ಬ್ಯಾರಿಕೇಡ್‌ಗಳನ್ನು ವೈಜ್ಞಾನಿಕವಾಗಿ ಅಳವಡಿಸಿ ಅಪಘಾತಗಳು ಸಂಭವಿಸುವುದನ್ನು ತಡೆಯಲು ಕ್ರಮವಹಿಸಬೇಕು. ಸಾಧ್ಯವಾದರೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ವೈಜ್ಞಾನಿಕವಾಗಿ ರೋಡ್ ಹಂಪ್ ನಿರ್ಮಾಣ ಮಾಡುವುದು ಸೂಕ್ತ. **–ಬೆಸಗರಹಳ್ಳಿ ರವಿಪ್ರಸಾದ್, ಮೈಸೂರು.**

ರಾಜ್ಯಪಾಲರು ಮಧ್ಯೆ ಪ್ರವೇಶಿಸಲಿ

ಮಾನ್ಯರೆ,

1916ರಲ್ಲಿ ಸ್ಥಾಪನೆಯಾದ ಹಾಗೂ ರಾಜ್ಯದಲ್ಲಿ ಸ್ಥಾಪನೆಗೊಂಡ ಮೊಟ್ಟಮೊದಲ ವಿಶ್ವವಿದ್ಯಾನಿಲಯ ಎಂಬ ಹಿರಿಮೆಗೆ ಪಾತ್ರವಾಗಿರುವ ಮೈಸೂರು ವಿಶ್ವವಿದ್ಯಾನಿಲಯ ಖಾಯಂ ಉಪನ್ಯಾಸಕರ ಕೊರತೆಯನ್ನು ಎದುರಿಸುತ್ತಿದೆಯೆಂದು ಮಾಧ್ಯಮಗಳಲ್ಲಿ ವರದಿಯಾಗಿದೆ. ಒಟ್ಟಾರೆ 570 ಖಾಯಂ ಬೋಧಕರ ಹುದ್ದೆಗಳ ಪೈಕಿ 402 ಹುದ್ದೆಗಳು ಖಾಲಿ ಇವೆ ಎಂದು ಹೇಳಲಾಗಿದ್ದು, ಬರೋಬ್ಬರಿ ಶೇ.70ರಷ್ಟು ಅತಿಥಿ ಉಪನ್ಯಾಸಕರ ಮೇಲೆಯೇ ವಿವಿ ಅವಲಂಬಿತವಾಗಿದೆ ಎಂಬುದು ನಿಜಕ್ಕೂ ಶೋಚನೀಯ. ಸದ್ಯಕ್ಕೆ ಕೇವಲ 169 ಮಂದಿ ಖಾಯಂ ಬೋಧಕರು ಇದ್ದು, ಇವರಲ್ಲಿ ಕೂಡ ಬಹುತೇಕರು 50 ವರ್ಷ ದಾಟಿದವರು ಎಂದು ಹೇಳಲಾಗುತ್ತಿದೆ. ಬೋಧಕರ ನೇಮಕಾತಿ ಪ್ರಕ್ರಿಯೆಗೆ ರಾಜ್ಯ ಸರ್ಕಾರದಿಂದ ಇನ್ನೂ ಅನುಮತಿ ದೊರೆತಿಲ್ಲ ಹಾಗೂ ಈ ವಿಷಯದಲ್ಲಿ ಯಾವುದೇ ಪ್ರಗತಿಯೂ ಆಗಿಲ್ಲ ಎಂಬ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಅವರ ಹತಾಶೆಯೊಂದಿಗೆ ಕೂಡಿದ ಮಾತುಗಳು ವಿವಿ ಎದುರಿಸುತ್ತಿರುವ ಗಂಭೀರ ಸಮಸ್ಯೆಯತ್ತ ಬೆಳಕು ಚೆಲ್ಲುತ್ತದೆ. ರಾಜ್ಯದ ಎಲ್ಲಾ ವಿಶ್ವ ವಿದ್ಯಾನಿಲಯಗಳ ಕುಲಾಧಿಪತಿಗಳೂ ಆಗಿರುವ ರಾಜ್ಯಪಾಲರು ಈ ಬಗ್ಗೆ ರಾಜ್ಯ ಸರ್ಕಾರಕ್ಕೆ ಸೂಕ್ತ ಸೂಚನೆ ನೀಡಿ ಖಾಯಂ ಬೋಧಕರ ನೇಮಕಾತಿಗೆ ತುರ್ತು ಅನುಮತಿ ನೀಡಲು ಅಗತ್ಯ ಕ್ರಮ ಕೈಗೊಳ್ಳಬೇಕಾಗಿದೆ.

–ಕೆ.ವಿ.ವಾಸು, ವಕೀಲರು–ನೋಟರಿ, ಮೈಸೂರು.

ಅವೈಜ್ಞಾನಿಕ ಕರಡು ನಿಯಮ ಕೈಬಿಡಿ...

ಮಾನ್ಯರೆ,

ಪಿಯು ಉಪನ್ಯಾಸಕರನ್ನು ಪ್ರೌಢಶಾಲೆಗಳಿಗೆ ನಿಯೋಜಿಸುವ ಸರ್ಕಾರದ ಕರಡು ನಿಯಮ–2026 ಅತ್ಯಂತ ಅವೈಜ್ಞಾನಿಕವಾಗಿದೆ. ಇದು ಹತ್ತು ಸಾವಿರಕ್ಕೂ ಹೆಚ್ಚು ಉಪನ್ಯಾಸಕರ ವೃತ್ತಿ ಗೌರವಕ್ಕೆ ಧಕ್ಕೆ ತರುವುದಲ್ಲದೆ ಪದವಿಪೂರ್ವ ಶಿಕ್ಷಣದ ಗುಣಮಟ್ಟ ಹಾಗೂ ಸ್ವಾಯತ್ತತೆಯನ್ನು ಸಂಪೂರ್ಣವಾಗಿ ನಾಶಪಡಿಸುತ್ತದೆ. ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿದ್ದರೆ ಸರ್ಕಾರವು ನೇರ ನೇಮಕಾತಿ ಮಾಡಬೇಕೇ ಹೊರತು, ಪಿಯು ಉಪನ್ಯಾಸಕರ ಅರ್ಹತೆಯನ್ನು ಕಡೆಗಣಿಸಿ ಬೇರೆಡೆಗೆ ವರ್ಗಾಯಿಸುವುದು ಸರಿಯಲ್ಲ.ಯಾವುದೇ ಸಮಾಲೋಚನೆ ನಡೆಸದೆ ಏಕಪಕ್ಷೀಯವಾಗಿ ಕೈಗೊಂಡಿರುವ ಈ ನಿರ್ಧಾರ ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ವಿರುದ್ಧವಾಗಿದ್ದು, ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಆಟವಾಡಿದಂತಾಗಿದೆ. ಸರ್ಕಾರವು ತಕ್ಷಣವೇ ತನ್ನ ಹಠಮಾರಿ ಧೋರಣೆಯನ್ನು ಕೈಬಿಟ್ಟು ಈ ಕರಡು ನಿಯಮವನ್ನು ಹಿಂಪಡೆಯಬೇಕು. **–ಡಾ.ವಿಜಯಕುಮಾರ್ ಎಚ್.ಕೆ.**



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಆರೋಗ್ಯವೇ ಬದುಕಿನ ಅಮೂಲ್ಯ ನಿಧಿ...

ಆರೋಗ್ಯವೇ ಮಹಾಭಾಗ್ಯ ಗಾದೆ ಮಾತು ಮಾನವ ಜೀವನದ ಅತ್ಯಂತ ಶ್ರೇಷ್ಠ ಸತ್ಯವನ್ನು ಪ್ರತಿಪಾದಿಸುತ್ತದೆ. ಹಣ, ಆಸ್ತಿ ಅಧಿಕಾರ, ವಿದ್ಯೆ, ಖ್ಯಾತಿ ಎಲ್ಲವನ್ನೂ ಗಳಿಸಿದರೂ ಆರೋಗ್ಯ ಇಲ್ಲದಿದ್ದರೆ ಅವುಗಳ ಸಾರ್ಥಕತೆ ಕ್ಷೀಣಿಸುತ್ತದೆ. ಆರೋಗ್ಯವಂತ ವ್ಯಕ್ತಿಯೇ ಜೀವನದ ಸವಾಲುಗಳನ್ನು ಧೈರ್ಯದಿಂದ ಎದುರಿಸಿ, ತನ್ನ ಕನಸುಗಳನ್ನು ನನಸಾಗಿಸಬಲ್ಲನು. ಆದ್ದರಿಂದಲೇ ಆರೋಗ್ಯವನ್ನು ಎಲ್ಲಾ ಸಂಪತ್ತಿಗಿಂತ ಮಿಗಿಲಾದ ಸಂಪತ್ತು ಎಂದು ಪರಿಗಣಿಸಲಾಗಿದೆ.

ಇಂದಿನ ಯಾಂತ್ರಿಕ ಮತ್ತು ದಾವಂತ ಬದುಕಿನಲ್ಲಿ ಅನಾರೋಗ್ಯಕರ ಆಹಾರ ಪದ್ಧತಿ, ದೈಹಿಕ ಚಟುವಟಿಕೆಯ ಕೊರತೆ, ಮಾನಸಿಕ ಒತ್ತಡ ಹಾಗೂ ಪರಿಸರ ಮಾಲಿನ್ಯದಿಂದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಇಂತಹ ಸಂದರ್ಭದಲ್ಲಿ ಉತ್ತಮ ಆಹಾರ, ನಿಯಮಿತ ವ್ಯಾಯಾಮ, ಯೋಗ, ಸಮರ್ಪಕ ನಿದ್ರೆ ಮತ್ತು ಸಕಾರಾತ್ಮಕ ಮನೋಭಾವದ ಮೂಲಕ ಆರೋಗ್ಯ ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಆದ್ಯತೆಯಾಗಬೇಕಿದೆ. ಆರೋಗ್ಯವಂತ ಸಮಾಜವೇ ಸುಭದ್ರ ರಾಷ್ಟ್ರದ ಅಡಿಪಾಯವಾಗಿರುವುದರಿಂದ, ಆರೋಗ್ಯದ ಮಹತ್ವವನ್ನು ಅರಿತು ಅದನ್ನು ಜೀವನದ ಮಹತ್ವವನ್ನಾಗಿಸಿಕೊಳ್ಳುವುದು ಅತ್ಯಗತ್ಯವಾಗಿದೆ.

ಮನುಷ್ಯನಿಗೆ ಎಲ್ಲಕ್ಕಿಂತ ಮುಖ್ಯವಾದುದು ಆರೋಗ್ಯ. ಆರೋಗ್ಯ ಸರಿಯಾಗಿದ್ದರೆ ಏನನ್ನು ಬೇಕಾದರೂ ಮಾಡಬಹುದು. ಯಾವುದೇ ಸಾಧನೆಗಳನ್ನಾದರೂ ಮಾಡಬಹುದು. ಹಣ, ಆಸ್ತಿ, ಅಧಿಕಾರ, ಸಂಪತ್ತುಗಳಿಗಿಂತ ಬಹು ಮುಖ್ಯವಾದುದು ಉತ್ತಮ ಆರೋಗ್ಯ. ಹಾಗಾಗಿಯೇ ಆರೋಗ್ಯವೇ ಮಹಾಭಾಗ್ಯ ಎನ್ನಲಾಗುತ್ತದೆ.

ಪ್ರಸ್ತುತ ಸನ್ನಿವೇಶದಲ್ಲಿ ಮನುಷ್ಯರ ಬದಲಾದ ಜೀವನ ಶೈಲಿಯಿಂದಾಗಿ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮಗಳುಂಟಾಗಿ ಆರೋಗ್ಯವನ್ನು ಹದಗೆಡಿಸಿಕೊಂಡು ನರಳುವುದು ಸರ್ವೇ ಸಾಮಾನ್ಯವಾಗಿದೆ. ಆದ್ದರಿಂದ ನಿಯಮಿತ ಆಹಾರ ಸೇವನೆ, ವ್ಯಾಯಾಮ ಮೊದಲಾದವುಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಆರೋಗ್ಯವನ್ನು ಕಾಪಾಡಿಟ್ಟುಕೊಳ್ಳುವುದು ಅಗತ್ಯವಾಗಿದೆ. ಹಿಂದಿನ ಕಾಲದಲ್ಲಿ ಚೆನ್ನಾಗಿ ತಿಂದು ಮೈ ಕೈಗೆ ಕೆಲಸ ಕೊಟ್ಟು ದೇಹವನ್ನು ಸದೃಢವಾಗಿಟ್ಟುಕೊಂಡು 80/90/100 ವರ್ಷಗಳವರೆಗೆ ಯಾವುದೇ ಗಂಭೀರವಾದ ಕಾಯಿಲೆಗಳಿಗೆ ತುತ್ತಾಗದೇ ಆರೋಗ್ಯವನ್ನು ಚೆನ್ನಾಗಿ ನೋಡಿಕೊಳ್ಳುತ್ತಿದ್ದರು. ಆದರೆ ಈಗ ಒತ್ತಡದ ಬದುಕಿನಿಂದಾಗಿ, ಆರೋಗ್ಯವನ್ನು ಸಂಪೂರ್ಣವಾಗಿ ಕಡೆಗಣಿಸಿ, ಬೇಡವಾದ ಆಹಾರಗಳನ್ನು ಸೇವಿಸುತ್ತಾ ಅನಾರೋಗ್ಯಕ್ಕೆ ಒಳಗಾಗಿ ಅತೀ ಸಣ್ಣ ವಯಸ್ಸಿನಲ್ಲಿ ಗಂಭೀರ ಕಾಯಿಲೆಗಳಿಗೆ ತುತ್ತಾಗುತ್ತಿರುವುದು ನಿಜಕ್ಕೂ ವಿಷಾದನೀಯ.

ಆರೋಗ್ಯದ ಮಹತ್ವ

ಆರೋಗ್ಯ ಮನುಷ್ಯನಿಗೆ ಅಗತ್ಯವಾಗಿ ಬೇಕಾಗಿದ್ದು, ಅದನ್ನು ಚೆನ್ನಾಗಿ ನೋಡಿಕೊಂಡರೆ ಅಸಾಧ್ಯವಾದುದನ್ನು ಸಾಧ್ಯವಾಗಿಸಿಕೊಳ್ಳಬಹುದು.

ದೈಹಿಕ ಆರೋಗ್ಯ: ದೈಹಿಕವಾಗಿ ಆರೋಗ್ಯವನ್ನು ಕಾಪಾಡಿಕೊಂಡರೆ ಕಾಯಿಲೆಗಳು ಬರದಂತೆ ತಡೆಗಟ್ಟಬಹುದು. ಕೆಲಸಗಳನ್ನು ಆಯಾಸವಿಲ್ಲದಂತೆ ನಿರ್ವಹಿಸಬಹುದು. ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಅಗತ್ಯವಾದ ಅಂಶವಾಗಿದ್ದು, ಆರೋಗ್ಯದ ಹಿತದೃಷ್ಟಿಯಿಂದ ಸದೃಢವಾಗಿರಲು ಸಹಾಯಕವಾಗಿರುತ್ತದೆ.

ಮಾನಸಿಕ ಆರೋಗ್ಯ: ದೈಹಿಕ ಆರೋಗ್ಯದಂತೆ ಮಾನಸಿಕ ಆರೋಗ್ಯವು ಬಹಳ ಮುಖ್ಯ. ಪ್ರಸ್ತುತ ದಿನಗಳಲ್ಲಿ ಇದರ ಅಗತ್ಯ ಹೆಚ್ಚಾಗಿದೆ. ಮನಸ್ಸನ್ನು ಸಮತೋಲನದಲ್ಲಿಟ್ಟುಕೊಂಡು ಆಲೋಚನೆಗಳಲ್ಲಿ ಸ್ಪಷ್ಟತೆ ಹೊಂದಿ, ಭಾವನೆಗಳನ್ನು ಸರಿಯಾಗಿ ಅರ್ಥೈಯಿಸಿಕೊಂಡು ಸರಿಯಾಗಿ ಕಾರ್ಯನಿರ್ವಹಿಸುವುದಕ್ಕೆ ಮಾನಸಿಕ ಆರೋಗ್ಯವು ಚೆನ್ನಾಗಿರಲೇಬೇಕು.

ರೋಗ ನಿರೋಧಕ ಶಕ್ತಿ: ಯಾವುದೇ ಕಾಯಿಲೆಗಳು ಬಂದರೂ ಅದನ್ನು ಎದುರಿಸುವಂತಹ ಶಕ್ತಿ ರೋಗನಿರೋಧಕಗಳಿಗಿರುತ್ತದೆ. ಈ ರೋಗನಿರೋಧಕ ಶಕ್ತಿ ಪ್ರತಿಯೊಬ್ಬರಲ್ಲಿಯು ಇರುತ್ತದೆ. ಇವುಗಳಿಂದ ಆರೋಗ್ಯವನ್ನು ಚೆನ್ನಾಗಿ ನೋಡಿಕೊಳ್ಳಲು ಸಾಧ್ಯವಿದೆ.

ಉತ್ತಮ ಆರೋಗ್ಯಕ್ಕೆ ಅನುಸರಿಸಬೇಕಾದ ನಿಯಮಗಳು

ಉತ್ತಮವಾದ ಆರೋಗ್ಯ ಎಲ್ಲರ ಕನಸಾಗಿದ್ದು ಅದು ಪ್ರಯತ್ನವಿಲ್ಲದೇ ಸುಖಾಸುಮ್ಮನೆ ಬರುವುದಿಲ್ಲ. ಅದಕ್ಕೆ ದೇಹವನ್ನು ದಂಡಿಸುವ, ಪೌಷ್ಠಿಕ ಆಹಾರ ಸೇವನೆ ಮಾಡಲೇಬೇಕಾಗಿರುತ್ತದೆ. ಕೇವಲ ಬಾಯಿಗೆ ರುಚಿಯಾಗಿರುವುದನ್ನು ಸೇವಿಸುವುದನ್ನು ಸಾಧ್ಯವಾದಷ್ಟು ಬಿಟ್ಟು, ದೇಹಕ್ಕೆ ಅಗತ್ಯವಾಗಿ ಬೇಕಾಗಿರುವುದನ್ನು ಸೇವಿಸುವುದನ್ನು ರೂಢಿಸಿಕೊಳ್ಳಬೇಕಿದೆ.

ಸಮತೋಲನ ಆಹಾರ ಸೇವನೆ: ಇಂದಿನ ಆಧುನಿಕ ಯುಗದಲ್ಲಿ ಮನೆಯ ಆಹಾರಕ್ಕಿಂತ ಬೀದಿ ಬದಿಯಲ್ಲಿ ಹಾಗೂ ಹೋಟೆಲ್‌ಗಳಲ್ಲಿ ಸಿಗುವ ಆಹಾರವನ್ನು ಸೇವಿಸುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇದಕ್ಕೆ ಕಾರಣಗಳು ಏನೇ ಇದ್ದರೂ ಮನೆಯಲ್ಲಿ ಊಟ ಮಾಡುವುದನ್ನು, ದೇಹಕ್ಕೆ ಉಪಯುಕ್ತವಾದ ಪೌಷ್ಠಿಕವಾದ ಆಹಾರವನ್ನು ಸೇವಿಸುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಶುದ್ಧವಾದ ಹಣ್ಣು, ತರಕಾರಿಗಳನ್ನು ತಿನ್ನುವ ಮೂಲಕ ಆರೋಗ್ಯವನ್ನು ಸಮತೋಲನದಲ್ಲಿಟ್ಟುಕೊಳ್ಳಬೇಕು.

ರಾಗಿಮುದ್ದೆ, ಕಾಳುಗಳು, ಹಣ್ಣುಗಳ ಸೇವನೆಯಿಂದ ದೇಹಕ್ಕೆ ಅಗತ್ಯವಾದ ಪ್ರೋಟೀನ್‌ಗಳು ದೊರಕುತ್ತವೆ. ಇವುಗಳನ್ನು ಕಡೆಗಣಿಸಿ ಪಿಜ್ಜಾ, ಬರ್ಗರ್, ನೂಡಲ್ಸ್ ಮೊದಲಾದ ಜಂಕ್‌ಫುಡ್‌ಗಳ ಸೇವನೆ ಅತಿಯಾದರೆ ಹಣ ಕೊಟ್ಟು ಆರೋಗ್ಯವನ್ನು ಹದಗೆಡಿಸಿಕೊಂಡು ಕಾಯಿಲೆಗಳನ್ನು ತಾವಾಗಿಯೇ ಕರೆದಂತಾಗುತ್ತದೆ. ಯಾವುದಕ್ಕೆ ಆದರೂ ಮಿತಿ ಇರಬೇಕು. ಅತಿಯಾದರೆ ಅಮೃತವು ವಿಷ ಎಂಬಂತೆ ಹೋಟೆಲ್ ಅಥವಾ ಫಾಸ್ಟ್‌ಫುಡ್‌ನ ಆಹಾರ ಬಾಯಿಗೆ ರುಚಿಕರವಾಗಿದ್ದರೂ ದೇಹಕ್ಕೆ ಮಾರಕವಾಗಿ ಕಾಯಿಲೆಗಳು ಬರಲು ಕಾರಣವಾಗುತ್ತದೆ. ಹಾಗಾಗಿ ಆಹಾರ ಸೇವನೆಯಲ್ಲಿ ಸಮತೋಲನವನ್ನು ಕಾಯ್ದುಕೊಂಡರೆ ಆರೋಗ್ಯವನ್ನು ಸರಿಯಾಗಿಟ್ಟುಕೊಳ್ಳಬಹುದು.



> ‘ಆರೋಗ್ಯವೇ ಮಹಾಭಾಗ್ಯ’ ಎಂಬುದು ಕೇವಲ ಗಾದೆಯಲ್ಲ, ಅದು ಬದುಕಿನ ಮಹತ್ವದ ಸಂದೇಶ. ಆರೋಗ್ಯವಂತ ವ್ಯಕ್ತಿಯೇ ತನ್ನ ಕುಟುಂಬ, ಸಮಾಜ, ರಾಷ್ಟ್ರದ ಅಭಿವೃದ್ಧಿಗೆ ಅಮೂಲ್ಯ ಕೊಡುಗೆ ನೀಡಬಲ್ಲನು. ಆದ್ದರಿಂದ ‘ಚಿಕಿತ್ಸೆಗಿಂತ ಮುನ್ನೆಚ್ಚರಿಕೆಯೇ ಶ್ರೇಷ್ಠ’ ತತ್ವವನ್ನು ಅಳವಡಿಸಿಕೊಂಡು ಆರೋಗ್ಯದ ಬಗ್ಗೆ ಜಾಗ್ರತೆಯಿಂದ ಬದುಕೋಣ.

ನಿಯಮಿತ ವ್ಯಾಯಾಮ

ವ್ಯಾಯಾಮ, ನಡಿಗೆ, ಯೋಗಾಸನ ಇವುಗಳನ್ನು ನಿಯಮಿತವಾಗಿ ಮಾಡಿಕೊಂಡು ಬಂದರೆ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ನಮ್ಮಲ್ಲಿ ಬಹುತೇಕರಿಗೆ ಆರೋಗ್ಯ ಹದಗೆಟ್ಟಾಗ, ಸಮಸ್ಯೆಗಳು ಬಂದಾಗ ಮಾತ್ರ ವ್ಯಾಯಾಮದ ನೆನಪಾಗುತ್ತದೆ. ಉಳಿದಂತೆ ಎಲ್ಲವನ್ನೂ ಮರೆತು ಜೀವಿಸುತ್ತಾರೆ. ವಾಹನಗಳ ಅತಿಯಾದ ಬಳಕೆಯಿಂದಾಗಿ ಒಂದು ಕಿ.ಮೀ. ಕೂಡ ನಡೆಯಲಿಕ್ಕಾಗದು. ನೆಲದ ಮೇಲೆ ಕುಳಿತು ಊಟ ಮಾಡಲಾಗದು. ಅರ್ಧ ಗಂಟೆ ವ್ಯಾಯಾಮವನ್ನು ಮಾಡಿ ಬೆವರನ್ನು ಸುರಿಸಲಾಗದು ಹೀಗೆ ನಮ್ಮ ಕಾರಣಗಳ ಪಟ್ಟಿ ಬೆಳೆಯುತ್ತಲೇ ಹೋಗುವುದೇ ವಿನಃ ಅವುಗಳನ್ನು ಸರಿಪಡಿಸಿಕೊಂಡು ನಿಯಮಿತವಾಗಿ ವ್ಯಾಯಾಮ ಮಾಡುವುದನ್ನು ರೂಢಿಸಿಕೊಳ್ಳುವ ಮನೋಭಾವವನ್ನು ಬೆಳೆಸಿಕೊಂಡಾಗ ಆರೋಗ್ಯವನ್ನು ಚೆನ್ನಾಗಿ ಕಾಪಾಡಿಕೊಳ್ಳಬಹುದು.

ಹೆಚ್ಚಾಗಿ ನೀರು ಕುಡಿಯುವುದು: ಆರೋಗ್ಯ ಕೆಡುವುದಕ್ಕೆ ಬಹುತೇಕ ಕಾರಣ ನಾವು ಕುಡಿಯುವ ಅಶುದ್ಧ ನೀರು. ಕಾಯಿಸಿ ಆರಿಸಿದ ನೀರನ್ನು ಕುಡಿಯಿರಿ ಎಂಬ ಸಲಹೆಯನ್ನು ಕಿವಿಗೆ ಹಾಕಿಕೊಳ್ಳುವುದಿಲ್ಲ. ಎಷ್ಟೋ ಸಲ ನೀರು ಕುಡಿಯುವುದನ್ನೇ ಮರೆಯುತ್ತೇವೆ. ನೀರನ್ನು ಹೆಚ್ಚಾಗಿ ಕುಡಿಯುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಆರಂಭದಲ್ಲಿ ಇದರಿಂದ ಕಿರಿಕಿರಿ ಉಂಟಾದರೂ ಅಭ್ಯಾಸ ಮಾಡಿಕೊಂಡರೆ ಆರೋಗ್ಯಕ್ಕೆ ಅನುಕೂಲವಾಗುತ್ತದೆ.

ಸಾಕಷ್ಟು ನಿದ್ರೆ: ಯುವಕರಾಗಲೀ, ವಯಸ್ಸಾದವರಾಗಲೀ ಜಂಗಮವಾಣಿಗೆ(ಮೊಬೈಲ್ ಫೋನ್) ದಾಸರಾಗಿದ್ದು, ಇದನ್ನು ಬಿಟ್ಟು ಇರಲಾಗದಂತಹ ಸ್ಥಿತಿ ನಿರ್ಮಾಣವಾಗಿದೆ. ಅದರಲ್ಲಿಯೂ ಮುಖ್ಯವಾಗಿ ವಿಶ್ರಾಂತಿ ಬೇಕಿದ್ದಾಗ, ನಿದ್ದೆ ಮಾಡುವಾಗಲೂ ಫೋನ್ ಎಂಬ ಮಾಯಾಜಾಲಕ್ಕೆ ಸಿಲುಕಿ, ಕಲ್ಪನಾಲೋಕದಲ್ಲಿ ವಿಹರಿಸುತ್ತಾ ಸಮಯವನ್ನೇ ಮರೆತು ಆರೋಗ್ಯ ಕಡೆಗಣಿಸುತ್ತೇವೆ. ಕನಿಷ್ಠ ಏಳರಿಂದ ಎಂಟು ಗಂಟೆ ಕಾಲ ನಿದ್ದೆ ಮಾಡಬೇಕೆಂಬ ನಿಯಮವನ್ನು ಮುರಿಯುವುದರಿಂದ ಅತಿಯಾದ ಬಳಲಿಕೆ ಉಂಟಾಗಿ ಕಾಯಿಲೆಗಳಿಗೆ ಆಹ್ವಾನ ನೀಡಿದಂತಾಗುತ್ತದೆ. ಹಾಗಾಗಿ ಕೆಲಸ ಮಾಡಿ ವಿಶ್ರಾಂತಿ ಪಡೆಯಬೇಕಾಗಿರುವ ದೇಹಕ್ಕೆ ಸಾಕಷ್ಟು ನಿದ್ರೆ ಮಾಡುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬಹುದು.

ವೈಯಕ್ತಿಕ ಸ್ವಚ್ಛತೆ ಕಾಪಾಡುವುದು: ಕೈ–ಕಾಲುಗಳನ್ನು ತೊಳೆಯುವುದು, ಉಗುರುಗಳನ್ನು ಕತ್ತರಿಸುವುದು, ತಲೆಕೂದಲು ಸರಿಯಾಗಿ ಬಾಚಿಕೊಳ್ಳುವುದು, ಹೀಗೆ ಸರಳ ಹಾಗೂ ಅಗತ್ಯವಾದ ವೈಯಕ್ತಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದರ ಮೂಲಕ ಆರೋಗ್ಯವನ್ನು ಚೆನ್ನಾಗಿ ನೋಡಿಕೊಳ್ಳಬಹುದು. ವೈಯಕ್ತಿಕ ಸ್ವಚ್ಛತೆ ಮನುಷ್ಯರಿಗೆ ಅಗತ್ಯ ಹಾಗೂ ಅನಿವಾರ್ಯವಾಗಿ ಬೇಕಾದದ್ದು. ಇದು ಸದೃಢ ಆರೋಗ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಅತಿ ಪ್ರಮುಖವಾದುದು.

ಒತ್ತಡ ನಿರ್ವಹಣೆ: ಒಳ್ಳೆಯ ಹವ್ಯಾಸಗಳಿಂದಾಗಿ ಒತ್ತಡಗಳನ್ನು ನಿರ್ವಹಣೆ ಮಾಡಬಹುದಾಗಿದೆ. ಧ್ಯಾನ, ಯೋಗ, ಪ್ರಾಣಾಯಾಮ ಮೊದಲಾದ ಹವ್ಯಾಸಗಳಿಂದ ಒತ್ತಡ ಕಡಿಮೆ ಮಾಡಿಕೊಳ್ಳಬಹುದು. ಇದರಿಂದ ಮಾನಸಿಕವಾಗಿ ಆರೋಗ್ಯ ಕಾಪಾಡಿಕೊಳ್ಳಬಹುದಾಗಿದೆ.

ನಿಯಮಿತ ಆರೋಗ್ಯ ತಪಾಸಣೆ: ಕಾಯಿಲೆ ಹೆಚ್ಚಾದಾಗ ವೈದ್ಯರ ಬಳಿ ಹೋಗುವುದಕ್ಕಿಂತ ಕಾಲಕಾಲಕ್ಕೆ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸುವುದು ಒಳಿತು. ಇದರಿಂದ ಸಮಸ್ಯೆಗಳು ಕಂಡು ಬಂದರೆ ಅವುಗಳನ್ನು ಆರಂಭದಲ್ಲಿಯೇ ಗುಣ ಪಡಿಸಿಕೊಳ್ಳಬಹುದು.

ಸಮಯಕ್ಕೆ ಸರಿಯಾಗಿ ಆಹಾರ ಸೇವನೆ: ತಿನ್ನುವುದನ್ನು ಬಿಡುವುದರಿಂದ, ತಿಂಡಿ, ಊಟ ಎರಡನ್ನೂ ಒಟ್ಟಾಗಿ ಮಾಡುವುದರಿಂದ, ಸಣ್ಣವಾಗಬಹುದೆಂಬ ಭ್ರಮೆಯಿಂದ, ಮತ್ತೆ ಕೆಲವರು ಕೆಲಸದ ಒತ್ತಡದಿಂದಾಗಿ ಸರಿಯಾದ ಸಮಯಕ್ಕೆ ಆಹಾರ ಸೇವನೆ ಮಾಡುವುದಿಲ್ಲ. ಇದರಿಂದ ಆರೋಗ್ಯ ಹದಗೆಡುತ್ತದೆಯೇ ವಿನಃ ಬೇರೇನೂ ಉಪಯೋಗವಾಗದು. ಸರಿಯಾದ ಸಮಯಕ್ಕೆ ಆಹಾರ ಸೇವನೆ ಮಾಡುವುದನ್ನು ಅಭ್ಯಾಸ ಮಾಡಿಕೊಂಡಾಗ ಹೊಸತರಲ್ಲಿ ಸಮಸ್ಯೆಗಳಾದರೂ ಮುಂದೆ ಅದರಿಂದ ಆರೋಗ್ಯ ಕಾಪಾಡಿಕೊಳ್ಳಬಹುದು.

ಸಕಾರಾತ್ಮಕ ಆಲೋಚನೆ: ಅನಗತ್ಯ ಚಿಂತೆಗಳನ್ನು ಬಿಟ್ಟು, ಅನಾವಶ್ಯಕವಾಗಿ ಮತ್ತೊಬ್ಬರ ಮೇಲೆ ಅಸೂಯೆಪಡುವುದ ಬಿಟ್ಟು ಎಲ್ಲರೊಂದಿಗೆ ಒಂದಾಗಿ ಸಂತೋಷದಿಂದ ಬಾಳುತ್ತಾ ಸಕಾರಾತ್ಮಕ ಆಲೋಚನೆಗಳಲ್ಲಿ ತೊಡಗಿದಾಗ ಬಹುತೇಕ ಆರೋಗ್ಯ ಚೆನ್ನಾಗಿರುತ್ತದೆ. ನಗು ದಿವ್ಯವಾದ ಔಷಧಿಯಂತೆ ಕಾರ್ಯನಿರ್ವಹಿಸಬಲ್ಲದು. ಒಳ್ಳೆಯ ಆಲೋಚನೆಗಳು ನಮ್ಮನ್ನು ಮತ್ತಷ್ಟು, ಮಗದಷ್ಟು ಸದೃಢವಾಗಿಸಬಲ್ಲದು. ಹೀಗಾಗಿ ಒಳ್ಳೆಯ ಆಲೋಚನೆಗಳನ್ನು ರೂಢಿಸಿಕೊಳ್ಳಬೇಕು. ಇಂತಹ ಸರಳ ನಿಯಮಗಳನ್ನು ರೂಢಿಸಿಕೊಂಡಾಗ ಆರೋಗ್ಯವನ್ನು ಕಾಪಾಡಿಕೊಂಡು ಉತ್ತಮವಾಗಿ ಜೀವಿಸಬಹುದು.

ಆರೋಗ್ಯವೇ ಮಹಾಭಾಗ್ಯ: ಹಣ ಮಾಡಬೇಕು, ಆಸ್ತಿ ಮಾಡಬೇಕು. ಸಂಪತ್ತನ್ನು ಕೂಡಿಡಬೇಕೆಂದು ಆರೋಗ್ಯವನ್ನು ಕಡೆಗಣಿಸಿದರೆ ಮುಂದೆ ದುಡಿದಿದ್ದೆಲ್ಲವನ್ನೂ ಆರೋಗ್ಯ ನಿರ್ವಹಣೆಗಾಗಿ ಖರ್ಚು ಮಾಡಬೇಕಾಗುತ್ತದೆ. ಆದ್ದರಿಂದ ಆರೋಗ್ಯದಿಂದ ಇರುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಆರೋಗ್ಯಕ್ಕಿಂತ ಮಹಾಭಾಗ್ಯ ಇಡೀ ಜಗತ್ತಿನಲ್ಲಿ ಮತ್ತೊಂದು ಇರಲಾರದು.

ಆರೋಗ್ಯ ಒಂದಿದ್ದರೆ ಇಡೀ ಜಗತ್ತನ್ನೇ ಗೆಲ್ಲಬಹುದು. ಹಾಗಾಗಿ ಆರೋಗ್ಯವನ್ನು ಕಾಪಾಡಿಕೊಂಡು ಸದೃಢತೆಯಿಂದ ಬಾಳುವುದನ್ನು ಅಭ್ಯಾಸ ಮಾಡಿಕೊಂಡರೆ ಆರೋಗ್ಯ ಮಹಾಭಾಗ್ಯವಾಗಿ ಬದಲಾಗಿ ಬದುಕಿನಲ್ಲಿ ಆಸರೆಯಾಗಿ ನೆಲೆ ನಿಲ್ಲುವುದು. ನಮ್ಮವರಿಗಾಗಿ, ನಮ್ಮನ್ನೇ ನಂಬಿಕೊಂಡವರಿಗಾಗಿ, ನಮಗಾಗಿ ನಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವ ಅತ್ಯುನ್ನತ ಜವಾಬ್ದಾರಿ ನಮ್ಮದಾಗಿದೆ.

ಆರೋಗ್ಯವು ಮನುಷ್ಯನ ಜೀವನದ ನಿಜವಾದ ಸಂಪತ್ತು. ಹಣ, ಆಸ್ತಿ, ಅಧಿಕಾರ ಮತ್ತು ಖ್ಯಾತಿಯನ್ನು ಗಳಿಸಿದರೂ ಆರೋಗ್ಯವಿಲ್ಲದಿದ್ದರೆ ಅವೆಲ್ಲವೂ ನಿರರ್ಥಕವಾಗುತ್ತವೆ. ಆದ್ದರಿಂದ ಸಮತೋಲನ ಆಹಾರ, ನಿಯಮಿತ ವ್ಯಾಯಾಮ, ಸಾಕಷ್ಟು ನಿದ್ರೆ, ವೈಯಕ್ತಿಕ ಸ್ವಚ್ಛತೆ ಹಾಗೂ ಸಕಾರಾತ್ಮಕ ಚಿಂತನೆಯ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಆರೋಗ್ಯಕರ ಜೀವನ ಶೈಲಿಯನ್ನು ಅಳವಡಿಸಿಕೊಂಡಾಗ ಮಾತ್ರ ನೆಮ್ಮದಿಯಿಂದ ಯಶಸ್ವಿ ಜೀವನ ನಡೆಸಲು ಸಾಧ್ಯವಾಗುತ್ತದೆ. ಹೀಗಾಗಿ ‘ಆರೋಗ್ಯವೇ ಮಹಾಭಾಗ್ಯ’ ನುಡಿಯು ಅಕ್ಷರಶಃ ಸತ್ಯವಾಗಿದೆ.

ಆರೋಗ್ಯವೇ ಮಾನವನ ಜೀವನದ ನಿಜವಾದ ಸಂಪತ್ತು. ಹಣ, ಆಸ್ತಿ, ಅಧಿಕಾರ, ಖ್ಯಾತಿ ಎಲ್ಲವನ್ನೂ ಗಳಿಸಬಹುದಾದರೂ ಕಳೆದು ಹೋದ ಆರೋಗ್ಯವನ್ನು ಮರಳಿ ಪಡೆಯುವುದು ಸುಲಭವಲ್ಲ. ಆದ್ದರಿಂದ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಮೊದಲ ಕರ್ತವ್ಯವಾಗಬೇಕು. ಸಮತೋಲಿತ ಆಹಾರ, ನಿಯಮಿತ ವ್ಯಾಯಾಮ, ಯೋಗ–ಧ್ಯಾನ, ಸ್ವಚ್ಛತೆ, ಉತ್ತಮ ನಿದ್ರೆ ಹಾಗೂ ಸಕಾರಾತ್ಮಕ ಮನೋಭಾವ ಇವುಗಳನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಂಡರೆ ಆರೋಗ್ಯಕರ ಬದುಕನ್ನು ಕಟ್ಟಿಕೊಳ್ಳಬಹುದು.

‘ಆರೋಗ್ಯವೇ ಮಹಾಭಾಗ್ಯ’ ಎಂಬುದು ಕೇವಲ ಗಾದೆಯಲ್ಲ, ಅದು ಬದುಕಿನ ಮಹತ್ವದ ಸಂದೇಶವಾಗಿದೆ. ಆರೋಗ್ಯವಂತ ವ್ಯಕ್ತಿಯೇ ತನ್ನ ಕುಟುಂಬ, ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಅಮೂಲ್ಯವಾದ ಕೊಡುಗೆ ನೀಡಬಲ್ಲನು.

ಆದ್ದರಿಂದ ‘ಚಿಕಿತ್ಸೆಗಿಂತ ಮುನ್ನೆಚ್ಚರಿಕೆಯೇ ಶ್ರೇಷ್ಠ’ ತತ್ವವನ್ನು ಅಳವಡಿಸಿಕೊಂಡು ಆರೋಗ್ಯದ ಬಗ್ಗೆ ಜಾಗ್ರತೆಯಿಂದ ಬದುಕೋಣ. ಆರೋಗ್ಯವನ್ನು ನಮ್ಮ ಜೀವನದ ಅಮೂಲ್ಯ ನಿಧಿಯೆಂದು ಭಾವಿಸಿ ಕಾಪಾಡಿದರೆ, ನಮ್ಮ ಬದುಕು ಸುಖ, ಸಂತೋಷ, ನೆಮ್ಮದಿ ಮತ್ತು ಯಶಸ್ಸಿನಿಂದ ಸದಾ ಸಮೃದ್ಧವಾಗಿರುತ್ತದೆ. ಆರೋಗ್ಯವನ್ನು ಕಾಪಾಡೋಣ, ಆರೋಗ್ಯವಂತ ಭಾರತವನ್ನು ನಿರ್ಮಿಸೋಣ.

ಕೊಲ್ಲೂರು ಮೂಕಾಂಬಿಕೆಗೆ ವಿಶೇಷ ಪೂಜೆ ಸಲ್ಲಿಸಿದ ಡಿಸಿಎಂ

ಉಡುಪಿ: ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ದಂಪತಿ ಸಮೇತ ಭಾನುವಾರ ಬೆಳಗ್ಗೆ ಕೊಲ್ಲೂರು ಶ್ರೀಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ, ಬಳಿಕ ಚಂಡಿಕಾ ಹೋಮದಲ್ಲಿ ಪಾಲ್ಗೊಂಡರು. ಪೂಜೆಯ ಬಳಿಕ ದೇವಾಲಯದ ಆಡಳಿತ ಮಂಡಳಿ ವತಿಯಿಂದ ಡಾ.ಪರಮೇಶ್ವರ್ ಅವರಿಗೆ ದೇವಿಯ ಪ್ರಸಾದ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಕೊಲ್ಲೂರು ದೇವಸ್ಥಾನಕ್ಕೆ ಬರುವ ಭಕ್ತರ ಅಭಿವೃದ್ಧಿಗೆ ದರ್ಶನ, ಪಾರ್ಕಿಂಗ್, ವಸತಿ ಸೇರಿದಂತೆ ಎಲ್ಲಾ ರೀತಿಯ ಮೂಲ ಸೌಕರ್ಯ ನೀಡುವ ನಿಟ್ಟಿನಲ್ಲಿ ಸಮಗ್ರ ಯೋಜನೆ ತಯಾರಿಸಿದ್ದು, ಅದನ್ನು ಕಾರ್ಯಗತಗೊಳಿಸಲು ಉದ್ದೇಶಿಸಲಾಗಿದೆ ಎಂದರು. ಮುಜರಾಯಿ ಇಲಾಖೆ ದೇವಸ್ಥಾನಗಳಿಗೆ ಸಂಬಂಧಿಸಿದಂತೆ ಒತ್ತುವರಿಯಾಗಿರುವ ಎಲ್ಲಾ ಜಮೀನನ್ನು ತೆರವುಗೊಳಿಸಲು ಆಯುಕ್ತರಿಗೆ ಸೂಚಿಸಲಾಗಿದೆ. ಅದೇ ರೀತಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೂ ಸೂಚನೆ ನೀಡಲಾಗಿದೆ ಎಂದರು



ಡಿಸಿಎಂ ಡಾ.ಜಿ. ಪರಮೇಶ್ವರ್ ಅವರು ದಂಪತಿ ಸಮೇತ ಭಾನುವಾರ ಕೊಲ್ಲೂರು ಶ್ರೀಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಕೆಪಿಸಿಸಿ ಅಧ್ಯಕ್ಷರಿಗೆ ಮೈಸೂರಲ್ಲಿ ಸ್ವಾಗತ...



ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರದಲ್ಲಿ ಪ್ರಥಮ ಬಾರಿಗೆ ಭಾನುವಾರ ಮೈಸೂರಿಗೆ ಆಗಮಿಸಿದ್ದ ಬಿ.ಕೆ.ಹರಿಪ್ರಸಾದ್ ಅವರನ್ನು ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಹಾಗೂ ಮೈಸೂರು ನಗರ ಯುವ ಕಾಂಗ್ರೆಸ್ ವತಿಯಿಂದ ಸ್ವಾಗತಿಸಲಾಯಿತು. ಈ ವೇಳೆ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದೀಪಕ್ ಶಿವಣ್ಣ, ಕೆಆರ್ ನಗರ ಪುರಸಭೆ ಉಪಾಧ್ಯಕ್ಷ ವಿನಯ್‌ಕುಮಾರ್, ಪಕ್ಷದ ಮುಖಂಡರಾದ ಪೈಲ್ವಾನ್ ಸುನಿಲ್, ಮೈಸೂರು ನಗರ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರತಾಪ್, ಕೆಆರ್ ಕ್ಷೇತ್ರದ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹೇಮಂತ್, ಚಾಮರಾಜ ಕ್ಷೇತ್ರದ ಪ್ರಧಾನ ಕಾರ್ಯದರ್ಶಿ ಚಂದ್ರು, ಬ್ಲಾಕ್ ಉಪಾಧ್ಯಕ್ಷ ರಾಕೇಶ್, ಕಾಂಗ್ರೆಸ್ ಮುಖಂಡರಾದ ವಿಕ್ರಂ ಜೈನ್, ವಿನೋದ್, ಮಂಜೇಶ್, ರಾಘವೇಂದ್ರ ಮತ್ತಿತರರು ಉಪಸ್ಥಿತರಿದ್ದರು.

ಜಗದ್ಗುರು ಶ್ರೀ ಶ್ರೀ ಗೋವಿಂದಾನಂದ ಸರಸ್ವತಿ ಸ್ವಾಮಿಗಳ ಚಾತುರ್ಮಾಸ್ಯ ವ್ರತ

ಇಂದು ರಾಮಂದಿರದಲ್ಲಿ ಸಭೆ

ಮೈಸೂರು, ಜೂ.28– ಶ್ರೀ ಭಾಗವತೀಯ ಜಗದ್ಗುರು ಶ್ರೀ ಶ್ರೀ ಗೋವಿಂದಾನಂದ ಸರಸ್ವತಿ ಮಹಾಸ್ವಾಮೀಜಿ ಅವರ ಚಾತುರ್ಮಾಸ್ಯ ವ್ರತದ ಹಿನ್ನೆಲೆಯಲ್ಲಿ ಅಗತ್ಯ ಪೂರ್ವ ಸಿದ್ಧತೆಗಳು, ಕಾರ್ಯಕ್ರಮಗಳ ರೂಪುರೇಖೆ ಹಾಗೂ ವ್ಯವಸ್ಥಾಪನಾ ವಿಚಾರಗಳನ್ನು ಚರ್ಚಿಸಲು ಜಯನಗರ ಶ್ರೀರಾಮಮಂದಿರದಲ್ಲಿ ಜೂ.29ರಂದು ಸಂಜೆ 6 ಗಂಟೆಗೆ ಸಭೆಯನ್ನು ಆಯೋಜಿಸಲಾಗಿದೆ.

ಶ್ರೀ ಗೋವಿಂದಾನಂದ ಸರಸ್ವತಿ ಮಹಾಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಸಭೆ ನಡೆಯಲಿದ್ದು, ಶಾಸಕ ಟಿ.ಎಸ್.ಶ್ರೀವತ್ಸ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್ ಇನ್ನಿತರರು ಭಾಗವಹಿಸಲಿದ್ದಾರೆ. ಭಕ್ತಾದಿಗಳು ಹಾಗೂ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಬೇಕಾಗಿ ಪ್ರಕಟಣೆಯಲ್ಲಿ ತಿಳಿಸಿದೆ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ

ಸೋಮವಾರ 29 ಜೂನ್ 2026

ಐರಿಷ್ ನೆಲದಲ್ಲಿ ಟೀಂ ಇಂಡಿಯಾ ವೈಟ್‌ವಾಷ್

ಬೆಲ್‌ಫಾಸ್ಟ್, ಜೂ.28(ವಿವಿಹೆಚ್)– ಇಲ್ಲಿನ ಸಿವಿಲ್ ಸರ್ವೀಸ್ ಕ್ರಿಕೆಟ್ ಸ್ಟೇಡಿಯಂನಲ್ಲಿ ಭಾನುವಾರ ನಡೆದ ಎರಡನೇ ಹಾಗೂ ಅಂತಿಮ ಟ್ವೆಂಟಿ–20 ಅಂತರ ರಾಷ್ಟ್ರೀಯ ಪಂದ್ಯದಲ್ಲಿ ಐರ್ಲೆಂಡ್ ತಂಡವು, ಪ್ರವಾಸಿ ಭಾರತ ವಿರುದ್ಧ 1 ರನ್ ಗೆಲುವು ಸಾಧಿಸುವ ಮೂಲಕ ಸರಣಿಯನ್ನು ವಶಪಡಿಸಿಕೊಂಡಿದೆ. ಇತ್ತ ಎರಡೂ ಟಿ20 ಪಂದ್ಯಗಳನ್ನು ಸೋತ ಭಾರತ ವೈಟ್‌ವಾಷ್ ಮುಖಭಂಗ ಅನುಭವಿಸಿದೆ.

ಕ್ರಿಕೆಟ್ ಶಿಶು ಎಂದೇ ಪರಿಗಣಿಸಿದ್ದ ಐರ್ಲೆಂಡ್, ತಾವಾಡಿದ ಎರಡೂ ಟಿ20 ಪಂದ್ಯದಲ್ಲಿಯೂ ಗೆಲುವು ದಾಖಲಿಸುವ ಮೂಲಕ ಟೀಂ ಇಂಡಿಯಾ ವಿರುದ್ಧ ವೈಟ್‌ವಾಷ್ ಮಾಡಿದ ದಾಖಲೆಯನ್ನು ಬರೆಯಿತು. ಶ್ರೇಯಸ್ ಅಯ್ಯರ್ ನಾಯಕರಾಗಿ ಚೊಚ್ಚಲ ಸರಣಿಯನ್ನೇ ಸೋಲುವ ಮೂಲಕ, ಚೊಚ್ಚಲ ಸರಣಿ ಸೋತ ನಾಯಕ ಎಂಬ ಅನಗತ್ಯ ದಾಖಲೆ ಬರೆದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಐರ್ಲೆಂಡ್, ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 154 ರನ್‌ಗಳ ಸವಾಲಿನ ಮೊತ್ತ ಪೇರಿಸಿತ್ತು. ಮೂರನೇ ಕ್ರಮಾಂಕದಲ್ಲಿ ಕ್ರೀಸಿಗಿಳಿದ ಹ್ಯಾರಿ ಟೆಕ್ಟರ್, 47 ಎಸೆತಗಳಲ್ಲಿ ಐದು ಬೌಂಡರಿ ಹಾಗೂ ಒಂದು ಸಿಕ್ಸರ್ ಸಹಿತ 53 ರನ್ ಬಾರಿಸಿದರು. ಮಧ್ಯಮ ಕ್ರಮಾಂಕದಲ್ಲಿ ಬೆಂಜಮಿನ್ ಕಾಲಿಟ್ಸ್ 37 ರನ್‌ಗಳ ಉಪಯುಕ್ತ ಕಾಣಿಕೆ ನೀಡಿದರು.

ಚೊಚ್ಚಲ ಪಂದ್ಯದಲ್ಲೇ ಭಾರತದ ವೇಗಿ ಪ್ರಿನ್ಸ್ ಯಾದವ್ ಮೂರು ವಿಕೆಟ್ ಕಬಳಿಸಿದರು. ಅರ್ಷದೀಪ್ ಸಿಂಗ್ ಹಾಗೂ ಶಿವಂ ದುಬೆ ತಲಾ ಎರಡು ವಿಕೆಟ್ ಗಳಿಸಿದರು

155 ರನ್ ಗುರಿ ಬೆನ್ನತ್ತಿದ ಭಾರತ ತಂಡವು ಆರಂಭಿಕ ಆಘಾತ ಅನುಭವಿಸಿತು. ಸಂಜು ಸ್ಯಾಮ್ಸನ್, ಅಭಿಷೇಕ್ ಶರ್ಮಾ ಡಕ್ ಔಟ್ ಆದರು. ತಿಲಕ್ ವರ್ಮಾ(55 ರನ್: 46 ಎಸೆತ) ಕೆಲ ಕಾಲ ಭರವಸೆ ಮೂಡಿಸಿದರು. ಹರ್ಷಿತ್ ರಾಣಾ (21 ರನ್) ಗಳಿಸಿದರು ಕೂಡ ತಂಡವನ್ನು ಗೆಲುವಿನ ದಡ ದಾಟಿಸುವಲ್ಲಿ ವಿಫಲರಾದರು. ಇದರೊಂದಿಗೆ ಟೀಂ ಇಂಡಿಯಾ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 153 ರನ್ ಕಲೆಹಾಕಿ 1 ರನ್ ನಿಂದ ಪರಾಭವಗೊಂಡು ಸರಣಿ ಕೈಚೆಲ್ಲಿತು.

ಇತ್ತ ಐರ್ಲೆಂಡ್ ಪರ ಜೈ ಮೂಂದ್ರ, ಮ್ಯಾಥ್ಯು ಹೊಲಾರ್ಡ್ ತಲಾ 3 ವಿಕೆಟ್ ಕಬಳಿಸಿ, ಗಮನಸೆಳೆದರು.

ಆಸ್ಟ್ರೇಲಿಯಾ ವನಿತೆಯರ ತಂಡದ ವಿರುದ್ಧ ಸೋತು ಟೂರ್ನಿಯಿಂದ ಹೊರಬಿದ್ದ ಭಾರತ

ಲಂಡನ್: ಇಲ್ಲಿನ ಲಾರ್ಡ್ಸ್ ಮೈದಾನದಲ್ಲಿ ಭಾನುವಾರ ನಡೆದ ಐಸಿಸಿ ವನಿತೆಯರ ಟಿ20 ವಿಶ್ವಕಪ್ ಟೂರ್ನಿಯ ಗುಂಪು ಹಂತದ ಪಂದ್ಯದಲ್ಲಿ ಭಾರತ ವನಿತೆಯರ ತಂಡದ ವಿರುದ್ಧ ಆಸ್ಟ್ರೇಲಿಯಾ ವನಿತೆಯರ ತಂಡ 6 ವಿಕೆಟ್ ಭರ್ಜರಿ ಗೆಲುವು ದಾಖಲಿಸಿತು. ಇತ್ತ ಆಸೀಸ್ ವಿರುದ್ಧ ಮಕಾಡೆ ಮಲಗಿದ ಟೀಮ್ ಇಂಡಿಯಾ ಪಂದ್ಯಾವಳಿಯಿಂದ ಹೊರಬಿದ್ದಿತು.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ ನಾಯಕಿ ಹರ್ಮನ್‌ಪ್ರೀತ್ ಕೌರ್ (56ರನ್, 27ಎ) ಅರ್ಧಶತಕದ ನೆರವಿನಿಂದ ನಿಗದಿತ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 170 ರನ್ ಕಲೆಹಾಕಿತು. ಈ ಮೊತ್ತವನ್ನು ಸರಾಗವಾಗಿ ಬೆನ್ನತ್ತಿದ ಆಸೀಸ್ ವನಿತೆಯರ ತಂಡ ಎಲ್ಲಿಸ್ ಪೆರ್ರಿ (56ರನ್, 38ಎ) ಹಾಗೂ ಗಾರ್ಡ್ನರ್ (53ರನ್ 29ಎ) ಅರ್ಧಶತಕದ ನೆರವಿನಿಂದ 19 ಓವರ್‌ಗಳಲ್ಲಿ ಕೇವಲ 4 ವಿಕೆಟ್ ಕಳೆದುಕೊಂಡು 172 ರನ್ ಗಳಿಸಿ ಗೆಲುವಿನ ನಗೆ ಬೀರಿತು.

ಈ ಗೆಲುವಿನೊಂದಿಗೆ ಗ್ರೂಪ್ 'ಎ'ನಲ್ಲಿ ಎಲ್ಲಾ 5 ಪಂದ್ಯಗಳನ್ನು ಗೆದ್ದ ಆಸೀಸ್ ವನಿತೆಯರ ತಂಡ ಅಜೇಯರಾಗಿ ಸೆಮಿಸ್‌ಗೆ ಲಗ್ಗೆಯಿಟ್ಟಿತು.



ಸರಣಿ ಗೆದ್ದ ಸಂಭ್ರಮದಲ್ಲಿ ಐರ್ಲೆಂಡ್ ತಂಡದ ಆಟಗಾರರು.



ನಾಡಪ್ರಭು ಕೆಂಪೇಗೌಡರ 517ನೇ ಜಯಂತೋತ್ಸವ ಪ್ರಯುಕ್ತ ಚಾಮುಂಡಿಬೆಟ್ಟದ ಪ್ರಧಾನ ಅರ್ಚಕರಾದ ಶಶಿಶೇಖರ ದೀಕ್ಷಿತ್ ಆವರಿಗೆ ಕೆಂಪೇಗೌಡ ಪ್ರಶಸ್ತಿ ನೀಡಿ ಗೌರವಿಸಲಾಯಿತು ಈ ಸಂದರ್ಭದಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ಹರೀಶ್ ಗೌಡ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಡಾ.ಎಂ.ಬಿ. ಮಂಜೇಗೌಡ ಸೇರಿದಂತೆ ಜಿಲ್ಲಾ ಒಕ್ಕಲಿಗರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ತಾಂಡವಪುರದ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯಕ್ಕೆ ಗೌರವ



ಮೈಸೂರು, ಜೂ. 28– ಮಹಾರಾಜ ಎಜುಕೇಷನ್ ಟ್ರಸ್ಟ್‌ನ ಅಂಗಸಂಸ್ಥೆಯಾದ ಮಹಾರಾಜ ತಾಂಡವಪುರ ತಾಂತ್ರಿಕ ಮಹಾವಿದ್ಯಾಲಯವು ಐಐಟಿ ಮದ್ರಾಸ್‌ನಲ್ಲಿ ನಡೆದ ಪಾಲ್ಸ್ ಪಾರ್ಟನರ್ ಮೀಟ್ 2025–26 ಕಾರ್ಯಕ್ರಮದಲ್ಲಿ ಕರ್ನಾಟಕ ಪ್ರದೇಶದ ಅತ್ಯುತ್ತಮ PALS ಪಾಲುದಾರ ಸಂಸ್ಥೆ ಎಂಬ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನವಾಗಿದೆ.

ಐಐಟಿ ಮದ್ರಾಸ್‌ನ ಟಿಟಿಜೆ (TTJ) ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಐಐಟಿ ಮದ್ರಾಸ್‌ನ ಪ್ರಾಧ್ಯಾಪಕರಾದ ಪ್ರೊ. ಅರುಣ್ ಕೆ. ತಂಗಿರಾಲ ಹಾಗೂ ಕ್ಯಾಡ್ ಸೆಂಟರ್ ಟ್ರೈನಿಂಗ್ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್‌ನ ಅಧ್ಯಕ್ಷ ಪಾರ್ಥಸಾರಥಿ ರಂಗರಾಜನ್ ಅವರು ಪ್ರಶಸ್ತಿ ಪ್ರದಾನ ಮಾಡಿದರು. ಈ ವೇಳೆ PALS ಸಂಯೋಜಕಿ ಡಾ. ಕೆ.ಎನ್. ರಂಜಿತ್, ಶ್ರೀಮತಿ ರಜನಿ, ಶ್ರೀಮತಿ ಎನ್.ಎಸ್. ಮೇಘನಾ, ಮಲ್ಲಿಕಾರ್ಜುನ, ಪ್ರಿನ್ಸಿಪಾಲ್ ಪ್ರೊ. ವೈ.ಟಿ. ಕೃಷ್ಣೇಗೌಡ, ಮಹಾರಾಜ ಎಜುಕೇಷನ್ ಟ್ರಸ್ಟ್‌ನ ಜಂಟಿ ಕಾರ್ಯ ದರ್ಶಿ ಡಾ. ಹೆಚ್.ಕೆ. ಚೇತನ್ ಉಪಸ್ಥಿತರಿದ್ದರು.

ಯೋಗೇಶ್ ಪ್ರಭುಗೆ ಪಿಹೆಚ್.ಡಿ ಪದವಿ



ಮೈಸೂರು: ಡಾ. ಎಂ. ಮಹೇಶ್ ಅವರ ಮಾರ್ಗದರ್ಶನದಲ್ಲಿ ಯೋಗೇಶ್ ಪ್ರಭು.ಹೆಚ್.ಎನ್. ಅವರು ಅರ್ಥಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವ ವಿದ್ಯಾನಿಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ಸಾಂಸ್ಕೃತಿಕ ಕಾರ್ಯಕ್ರಮ



ಗಿರಿಜಾ ಕಲ್ಯಾಣ ಮಹೋತ್ಸವದ ಅಂಗವಾಗಿ ನಂಜನಗೂಡು ಶ್ರೀಕಂಠೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನಂಜನಗೂಡಿನ ಶ್ರೀ ವಿದ್ಯಾ ಸಂಗೀತ ಮತ್ತು ನೃತ್ಯ ಶಾಲೆಯ ಮುಖ್ಯೋಪಾಧ್ಯಾಯಿನಿಯಾದ ಗುರು ವಿದುಷಿ ಶ್ರೀವಿದ್ಯಾಆರ್, ವೈಷ್ಣವಿ ಸುಬ್ರಹ್ಮಣ್ಯ ಶಾಸ್ತ್ರೀಯ ಸಂಗೀತ ಕಛೇರಿ ಯಶಸ್ವಿಯಾಗಿ ನಡೆಸಿಕೊಟ್ಟರು. ಮೃದಂಗವನ್ನು ತುಮಕೂರು ಬಿ.ಶಶಿಶಂಕರ್ ಮತ್ತು ಶಾಂತಕುಮಾರ್ ವಯಲಿನ್ ನುಡಿಸಿದರು.

ಪೋಷಕರು ಮಕ್ಕಳ ದಾರಿದೀಪಗಳು



ಮೈಸೂರು, ಜೂ.28– ಮಗುವಿನ ಸರ್ವಾಂಗೀಣ ಬೆಳವಣಿಗೆಗೆ ಪೋಷಕರ ಪಾತ್ರ ಮಹತ್ವವಾಗಿದ್ದು ತ್ಯಾಗ, ಪ್ರೀತಿ, ರಕ್ಷಣೆ ಹಾಗೂ ಮನದ ಮಾತು ಬಾಳಿಗೆ ಭದ್ರ ಬುನಾದಿಯಾಗಬೇಕೆಂದು ಶೈಕ್ಷಣಿಕ ಸಲಹೆಗಾರರು, ಲೇಖಕರು ಹಾಗೂ ಚಿಂತಕರು ಆದ ಡಾ. ಮೊಹಮ್ಮದ್ ಹುಮಾಯೂನ್ ಎನ್ ಅಭಿಪ್ರಾಯಪಟ್ಟರು.

ಅನಂತಾಗೀತಾ ವಿದ್ಯಾಲಯದಲ್ಲಿ ಪೋಷಕರನ್ನು ಉದ್ದೇಶಿಸಿ ಮಾತನಾಡುತ್ತಾ, ಪ್ರಸ್ತುತ ವಿದ್ಯಾರ್ಥಿಗಳಿಗೆ ಪೋಷಕರು ವಾತ್ಸಲ್ಯ ಹಾಗೂ ವಿಶ್ವಾಸದೊಂದಿಗೆ ಕಲಿಕೆಯ ರೀತಿ–ನೀತಿ, ಮೌಲ್ಯ, ಸಂಸ್ಕೃತಿ–ಸಂಸ್ಕಾರಗಳ ಜೊತೆಗೆ ಸತ್ಯ, ನಂಬಿಕೆ ಹಾಗೂ ಸರ್ವರೊಡನೆ ಸ್ಪಂದಿಸುವ–ಸಹಕರಿಸುವ ಕೌಶಲ್ಯಗಳನು ಚಿಕ್ಕವಯಸ್ಸಿನಿಂದಲೇ ರೂಢಿ ಮಾಡಬೇಕೆಂದು ಕರೆ ನೀಡಿದರು.

ತಂದೆ–ತಾಯಿ ಜೊತೆ ಮನೆಯ ಹಿರಿಯರು ಅಂದರೆ ಅಜ್ಜಿ –ತಾತ ಹಾಗೂ ಸಂಬಂಧಿಕರೊಡನೆ ಬೆರೆತು ಶಿಸ್ತು, ಸಮಯಪಾಲನೆ ಹಾಗೂ ವಿನಯತೆಯನ್ನು ಅಂತರ್ಗತವಾಗಿಸಿಕೊಳ್ಳಬೇಕೆಂದು ಡಾ. ಹುಮಾಯೂನ್ ಮನವರಿಕೆ ಮಾಡಿಕೊಟ್ಟರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಲೋಕೇಶ ಹೆಚ್.ಪಿ, ಶಿಕ್ಷಕರು ಪೋಷಕರು ಹಾಜರಿದ್ದರು.

ಮೈಸೂರು ಮಿತ್ರ ಸೋಮವಾರ 29 ಜೂನ್ 2026

ಪೋಲಿಯೋ ಮುಕ್ತ ಜಿಲ್ಲೆಗೆ ಶಾಸಕ ರವಿ ಗಣಿಗ ಮನವಿ



ಶಾಸಕ ರವಿಕುಮಾರ್ ಗಣಿಗ ಮಗುವಿಗೆ ಪೋಲಿಯೋ ಲಸಿಕೆ ಹಾಕಿದರು.

ಮಂಡ್ಯ, ಜೂ.28– ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಜೂ.28ರಿಂದ ಜು.1ರವರೆಗೆ ಹಮ್ಮಿಕೊಳ್ಳಲಾಗಿದ್ದು, 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಿ ಜಿಲ್ಲೆಯನ್ನು ಪೋಲಿಯೋ ಮುಕ್ತ ಮಾಡಬೇಕು ಎಂದು ಶಾಸಕ ಪಿ.ರವಿಕುಮಾರ್ ಗಣಿಗ ಮನವಿ ಮಾಡಿದರು.

ನಗರದ ಗುತ್ತಲು ಬಡಾವಣೆಯ ಸಾದತ್ ನಗರದ ಸರ್ಕಾರಿ ಕಿರಿಯ ಉರ್ದು ಶಾಲೆಯಲ್ಲಿ ನಡೆದ ಪಲ್ಸ್ ಪೋಲಿಯೋ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲಾದ್ಯಂತ ಜೂ.28ರಿಂದ ಜು.1ರವರೆಗೆ ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ 5 ವರ್ಷ ದೊಳಗಿನ ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದ್ದು, ಪೋಷಕರು ತಪ್ಪದೇ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಗೊಳಿಸಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಆರ್.ನಂದಿನಿ ಮಾತನಾಡಿ, 2014ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಭಾರತವನ್ನು ಪೋಲಿಯೋ ಮುಕ್ತ ದೇಶ ಎಂದು ಘೋಷಿಸಿದೆ. ಆದರೂ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಆಫ್ಘಾನಿಸ್ತಾನಗಳಲ್ಲಿ ಕೆಲವು ಪೋಲಿಯೋ ಪ್ರಕರಣಗಳು ವರದಿಯಾಗುತ್ತಿದ್ದು, ಹೆಚ್ಚಿನ ನಿಗಾ ವಹಿಸುವ ಹಿನ್ನೆಲೆ, ಮುಂಜಾಗ್ರತಾ ಕ್ರಮವಾಗಿ ಭಾರತದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಮುಂದುವರಿಸಲಾಗಿದ್ದು ಪೋಲಿಯೋ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈಜೋಡಿಸ ಬೇಕು ಎಂದರು.

ಕಾರ್ಯಕ್ರಮದಲ್ಲಿ ರೆಡ್‌ಕ್ರಾಸ್ ಸಂಸ್ಥೆ ಉಪಾಧ್ಯಕ್ಷೆ ಮೀರಾ, ಡಿಹೆಚ್‌ಓ ಡಾ.ಮೋಹನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪೋಲಿಯೋ ನಿರ್ಮೂಲನೆಗೆ ಸಹಕರಿಸಿ: ಶಾಸಕ ಉದಯ್



ಶಾಸಕ ಉದಯ್ ಮಗುವಿಗೆ ಪೋಲಿಯೋ ಲಸಿಕೆ ಹಾಕಿದರು.

ಮದ್ದೂರು, ಜೂ.28– 5 ವರ್ಷದೊಳಗಿನ ಪ್ರತಿ ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಪೋಲಿಯೋ ನಿರ್ಮೂಲನೆ ಮಾಡಲು ಸಹಕರಿಸಬೇಕು ಎಂದು ಶಾಸಕ ಕೆ.ಎಂ.ಉದಯ್ ತಿಳಿಸಿದರು.

ನಗರದ ಸರ್ಕಾರಿ ಬಸ್ ನಿಲ್ದಾಣ ಸಮೀಪ ಭಾನುವಾರ ಆರೋಗ್ಯ ಇಲಾಖೆ ಹಾಗೂ ಇನ್ನರ್ ವ್ಹೀಲ್ ಸಂಸ್ಥೆಯಿಂದ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನಲ್ಲಿ 13,824 ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಿದ್ದು, ಭಾನುವಾರ ನಗರ ಸೇರಿದಂತೆ ತಾಲೂಕಿನಾದ್ಯಂತ 113 ಬೂತ್‌ಗಳನ್ನು ನಿರ್ಮಿಸಿ ಪಲ್ಸ್ ಪೋಲಿಯೋ ಹನಿ ಹಾಕಲು 460 ಸಿಬ್ಬಂದಿ ನಿಯೋಜನೆ ಮಾಡಲಾಗಿದೆ ಎಂದರು.

ಅಭಿಯಾನದ ಮೊದಲ ದಿನ ಬೂತ್‌ಗಳ ಮೂಲಕ ಲಸಿಕೆ ನೀಡಲಾಗುತ್ತದೆ. ನಂತರದ ದಿನಗಳಲ್ಲಿ ಆರೋಗ್ಯ ಕಾರ್ಯಕರ್ತರು ಮನೆ–ಮನೆಗೆ ಭೇಟಿ ನೀಡಿ ಲಸಿಕೆ ಹಾಕದ ಮಕ್ಕಳಿಗೆ ಹನಿಗಳನ್ನು ಹಾಕುತ್ತಾರೆ. ಪಾಲಕರು ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿಕೊಳ್ಳಬೇಕೆಂದು ಮನವಿ ಮಾಡಿದರು. ತಾಲೂಕು ಆರೋಗ್ಯಾಧಿಕಾರಿ ಡಾ.ಜಿ.ರವಿಶಂಕರ್, ಇನ್ನರ್‌ವ್ಹೀಲ್ ಅಧ್ಯಕ್ಷೆ ಶ್ವೇತ, ಸಹ ಕಾರ್ಯದರ್ಶಿ ಜ್ಯೋತಿ, ರೋಟರಿ ಮಾಜಿ ಅಧ್ಯಕ್ಷರಾದ ಶಶಿಗೌಡ, ಚನ್ನಂಕೇಗೌಡ, ಸದಸ್ಯರಾದ ಮಹೇಶ್, ಯೋಗೇಶ್, ಪ್ರತಾಪ್ ಸೇರಿದಂತೆ ಇತರರಿದ್ದರು.

ನಾಡಪ್ರಭು ಕೆಂಪೇಗೌಡರ ಕೆಲಸಗಳು ಇಂದಿಗೂ ಜೀವಂತ

ಕೆಂಪೇಗೌಡರ ಜಯಂತಿಯಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ



ಕೆಂಪೇಗೌಡರ ಜಯಂತಿಯನ್ನು ಶಾಸಕ ದರ್ಶನ್ ಪುಟ್ಟಣ್ಣಯ್ಯ, ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್ ಉದ್ಘಾಟಿಸಿದರು.

ಚಿನಕುರಳಿ, ಜೂ.28– ನಾಡಪ್ರಭು ಕೆಂಪೇಗೌಡರು ಬೆಂಗಳೂರು ನಗರ ನಿರ್ಮಿಸುವ ಜೊತೆಗೆ ಕೆರೆ ಕಟ್ಟೆಗಳನ್ನು ನಿರ್ಮಿಸಿ ನೀರು ನಿರ್ವಹಣೆ, ಬಳಕೆ ಮಾಡುವ ಬಗ್ಗೆಯೂ ಅರಿವು ಮೂಡಿಸುವ ಕೆಲಸ ಮಾಡಿದ್ದರು ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದರು.

ಇಲ್ಲಿಗೆ ಸಮೀಪದ ರಾಗಿಮುದ್ದನಹಳ್ಳಿಯಲ್ಲಿ ನಾಡಪ್ರಭು ಕೆಂಪೇಗೌಡ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ನಾಡಪ್ರಭು ಕೆಂಪೇಗೌಡರ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, 12ನೇ ಶತಮಾನದಲ್ಲಿ ನಾಡಪ್ರಭು ಕೆಂಪೇಗೌಡರು ಮಾಡಿದಂತಹ ಕೆಲಸಗಳು ಇಂದಿಗೂ ಜೀವಂತವಾಗಿವೆ. ಕೆಂಪೇಗೌಡರು ಬೆಂಗಳೂರು ನಗರ ನಿರ್ಮಾಣ ಮಾಡಲು ಅಂದಿನ ದಿನಗಳಲ್ಲಿಯೇ ಸಿಟಿಪ್ಲಾನ್‌ನಲ್ಲಿ ಅಡಿಪಾಯ ಹಾಕಿದರು. ಜೊತೆಗೆ ಕೆರೆ ಕಟ್ಟೆಗಳನ್ನು ನಿರ್ಮಿಸಿ ಮಳೆಗಾಲದಲ್ಲಿ ಬರುವ ನೀರನ್ನು ಹೇಗೆ ಸಂಗ್ರಹ ಮಾಡಬೇಕು. ಬಳಕೆ ಮಾಡುವ ವಿಧಾನದ ಬಗ್ಗೆಯೂ ಅರಿವು ಮೂಡಿಸಿದ್ದರು. ಹೀಗಾಗಿ ಹಿಂದೆ ಮಳೆ ಸ್ವಲ್ಪ ಕಡಿಮೆಯಾದರೂ ಸರಿಯಾದ ಸಮಯಕ್ಕೆ ಮಳೆಯಾಗುತ್ತಿತ್ತು. ಆದರೆ ಇದೀಗ ನಾವೆಲ್ಲಾ ಸಣ್ಣ ನಾಲೆಗಳು, ಹಳ್ಳ, ಕೆರೆ–ಕಟ್ಟೆಗಳನ್ನು ಮುಚ್ಚಿಕೊಂಡಿದ್ದೇವೆ. ಕೆರೆ ಕಟ್ಟೆಗಳು ಬತ್ತಿ ಹೋಗುತ್ತಿವೆ ಇದರಿಂದಾಗಿ ಸರಿಯಾದ ಸಮಯಕ್ಕೆ ಮಳೆಯಾಗುತ್ತಿಲ್ಲ. ಅಂತರ್ಜಲ ಕುಸಿತವಾಗಿದೆ. ಹಾಗಾಗಿ ನಾವೆಲ್ಲರೂ ಕೆಂಪೇಗೌಡರ ಜಯಂತಿ ಆಚರಿಸುವ ಜೊತೆಗೆ ಅವರ ಆಶಯ, ಉದ್ದೇಶಗಳನ್ನು ಸಹ ಈಡೇರಿಸುವ ಕೆಲಸವನ್ನು ಮಾಡಬೇಕಾಗಿದೆ ಎಂದರು.

ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್ ಮಾತನಾಡಿ, ನಾಡಪ್ರಭು ಕೆಂಪೇಗೌಡರಂತೆಯೇ ಒಕ್ಕಲುತನ ಮಾಡುವ ಒಕ್ಕಲಿಗ ಸಮುದಾಯವು ಸಮಾಜದ ಎಲ್ಲಾ ಸಮುದಾಯಗಳನ್ನು ಜೊತೆಯಾಗಿ ತೆಗೆದುಕೊಂಡು ಹೋಗುವ ಕೆಲಸ ಮಾಡುತ್ತಿದೆ. ಜಯಂತಿಗಳು ಜಾತಿಗೆ ಸೀಮಿತಗೊಳ್ಳಬಾರದು ಎಂದರು.

ಕೆಂಪೇಗೌಡರು 500 ವರ್ಷಗಳ ಹಿಂದೆಯೇ ಬೆಂಗಳೂರು ನಗರ ನಿರ್ಮಾಣ ಮಾಡಿದರು. ಅವರಂತೆಯೇ ನಮ್ಮ ಚಾಮರಾಜ ಒಡೆಯರ್ ಅವರು ಮೈಸೂರು ನಗರ ನಿರ್ಮಿಸಿದ ವೇಳೆ ಈ ಭಾಗದ ರಾಗಿಮುದ್ದನಹಳ್ಳಿ, ಚಿನಕುರಳಿ, ಕುಂಬಾರ ಕೊಪ್ಪಲು, ಗುಮ್ಮನಹಳ್ಳಿ ಸೇರಿದಂತೆ ಬಹುತೇಕ ಹಿರಿಯರು ಮೈಸೂರು ನಗರ ನಿರ್ಮಾಣಕ್ಕೆ ಎತ್ತಿನಗಾಡಿ, ಲಾರಿಗಳಲ್ಲಿ ಕಲ್ಲುಗಳನ್ನು ಸಾಗಾಣಿಕೆ ಮಾಡಿ ನಗರ ನಿರ್ಮಾಣಕ್ಕೆ ಸಹಕರಿಸಿದ್ದಾರೆ. ಅಂದಿನಿಂದ ಇಂದಿನವರೆಗೂ ಅದೇ ಕಸುಬು ಮಾಡಿಕೊಂಡು ಜೀವನ ನಡೆಸುತ್ತಿದ್ದಾರೆ. ಯುವ ಸಮುದಾಯ ಯಾವುದೇ ತೊಂದರೆ ಇಲ್ಲದೆ ಕಸುಬು ನಡೆಸಿಕೊಂಡು ಜೀವನ ನಡೆಸಲು ಶಾಸಕರು ಸಹಕಾರ ನೀಡಬೇಕು. ಯುವ ಸಮುದಾಯ ರಾಜಕೀಯವನ್ನು ಬದಿಗೊತ್ತಿ ಬದುಕು ಕಟ್ಟಿಕೊಂಡು ಮುನ್ನಡೆಯಬೇಕು. ಹೈನುಗಾರಿಕೆ ಹೈನೋದ್ಯಮವಾಗಿ ಬೆಳೆಯುತ್ತಿದೆ ಯುವ ಸಮುದಾಯ ಹೈನುಗಾರಿಕೆಯ ಕಡೆಗೆ ಮುಖ ಮಾಡಬೇಕು ಎಂದು ಮನವಿ ಮಾಡಿದರು.

ಈ ವೇಳೆ ರೈತ ಸಂಘದ ಮುಖಂಡರಾದ ಕುಮಾರ್, ಆರ್.ಸಿ.ಸೋಮಕುಮಾರ್ ಅವರು ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು 10 ಗ್ರಾಂ ಚಿನ್ನದ ಉಂಗುರ ವನ್ನು ತೊಡಿಸುವ ಮೂಲಕ ಅಭಿಮಾನ ಮೆರೆದರು. ಬಳಿಕ ನಾಡಪ್ರಭು ಕೆಂಪೇಗೌಡ ಸೇವಾ ಟ್ರಸ್ಟ್‌ನ ನಾಮಫಲಕ ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ಲೋಕೇಶ್, ಉಪಾಧ್ಯಕ್ಷ ವಿಷಕಂಠೇಗೌಡ, ಗೌರವಾಧ್ಯಕ್ಷ ರಾಜು, ಯ.ಜವರೇಗೌಡ, ರಾಜೇಗೌಡ, ನಾಗಣ್ಣ ಆರ್.ಎ.ಶ್ಯಾಮ್, ಚಿಕ್ಕೇಗೌಡ, ರಾಘವ ಪ್ರಕಾಶ್, ನೀರು ಬಳಕೆದಾರರ ಮಹಾ ಮಂಡಲ ಅಧ್ಯಕ್ಷ ಆರ್.ಎ.ನಾಗಣ್ಣ ದಸಂಸ ಮುಖಂಡ ರಾಮು, ಡೇರಿ ಅಧ್ಯಕ್ಷ ಕಪಡಿಗೌಡ, ಟ್ರಸ್ಟ್‌ನ ಎಲ್ಲಾ ನಿರ್ದೇಶಕರು, ಗ್ರಾಮಸ್ಥರು ಹಾಜರಿದ್ದರು.

ಎಸ್‌ಎಂಗೆ 'ಕರ್ನಾಟಕ ರತ್ನ' ಘೋಷಿಸಲು ಒತ್ತಾಯ



ನಿವೃತ್ತ ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡರಿಗೆ ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಮದ್ದೂರು, ಜೂ.28– ಮಾಜಿ ಮುಖ್ಯ ಮಂತ್ರಿ ಎಸ್.ಎಂಕೃಷ್ಣ ಅವರು ರಾಜ್ಯ ಹಾಗೂ ಬೆಂಗಳೂರು ನಗರಕ್ಕೆ ನೀಡಿರುವ ಕೊಡುಗೆ ಪರಿಗಣಿಸಿ ಸರ್ಕಾರ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಗೌರವಿಸಬೇಕೆಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಶ್ರೀನಿಶ್ಚಲಾನಂದನಾಥ ಸ್ವಾಮೀಜಿ ಒತ್ತಾಯಿಸಿದರು.

ನಗರದ ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘ ತಾಲೂಕು ಘಟಕ ಹಾಗೂ ಚುಂಚಶ್ರೀ ಗೆಳೆಯರ ಬಳಗ ಆಯೋಜಿಸಿದ್ದ ಶ್ರೀನಾಡಪ್ರಭು ಕೆಂಪೇಗೌಡರ 517ನೇ ಜಯಂತ್ಯೋತ್ಸವದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಬೆಂಗಳೂರನ್ನು ವಿಶ್ವ ಮಟ್ಟದಲ್ಲಿ ಗುರುತಿಸುವಂತೆ ಅಭಿವೃದ್ಧಿ ಪಡಿಸಿದ ಎಸ್.ಎಂ.ಕೃಷ್ಣ ಅವರ ಸಾಧನೆಯನ್ನು ಮಾತಿನಲ್ಲಿ ಬಣ್ಣಿಸಲು ಸಾಧ್ಯವಿಲ್ಲ. ನಾಡಪ್ರಭು ಕೆಂಪೇಗೌಡ ಆದರ್ಶಗಳನ್ನು ಗುರಿಯಾಗಿಸಿಕೊಂಡು ಎಸ್.ಎಂ.ಕೃಷ್ಣ ಅವರು ಹಲವು ಸಾಧನೆ ಮಾಡಿರುವ ಕಾರಣ ಮುಂಬರುವ ದಿನಮಾನಗಳಲ್ಲಿ ಎಸ್.ಎಂ. ಕೃಷ್ಣ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಗೌರವಿಸುವ ಮೂಲಕ ಸಮುದಾಯಕ್ಕೆ ಬಹುದೊಡ್ಡ ಕೊಡುಗೆ ನೀಡಲು ಶಾಸಕರು ಹಾಗೂ ಒಕ್ಕಲಿಗರ ಸಂಘದ ನಿರ್ದೇಶಕರು ಮುಖ್ಯಮಂತ್ರಿಗಳಿಗೆ ಮನವಿ ಮಾಡಬೇಕೆಂದರು.

ಒಕ್ಕಲಿಗ ಸಮುದಾಯಕ್ಕಾಗಿ ರಾಜ್ಯದ ಪ್ರತಿಯೊಂದು ತಾಲೂಕು, ಜಿಲ್ಲೆಯಲ್ಲೂ ವಿದ್ಯಾರ್ಥಿ ನಿಲಯ ಹಾಗೂ ಸಮುದಾಯದ ಭವನಗಳನ್ನು ನಿರ್ಮಿಸಿ ಆರ್ಥಿಕವಾಗಿ ಹಿಂದುಳಿದಿರುವ ಸಮುದಾಯಕ್ಕೆ ಹೆಚ್ಚಿನ ಶಕ್ತಿ ತುಂಬುವಂತಹ ಕೆಲಸವಾಗಬೇಕೆಂದು ಮತ್ತು ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಪದವಿ ಪರೀಕ್ಷೆಗಳಲ್ಲಿ ಅತ್ಯಧಿಕ ಅಂಕಗಳಿಸಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳನ್ನು ಗುರುತಿಸಿ ಸಂಘದ ವತಿಯಿಂದ ಸಾರ್ವಜನಿಕವಾಗಿ ಅಭಿನಂದಿಸಿ ಪ್ರೋತ್ಸಾಹಿಸಬೇಕೆಂದು ಕಿವಿಮಾತು ಹೇಳಿದರು. ಶಾಸಕ ಕೆ.ಎಂ. ಉದಯ್ ಮಾತನಾಡಿ, ಕೆಂಪೇಗೌಡರ ಜಯಂತಿಯಲ್ಲಿ ಸೀಮಿತ ಜನರು ಮಾತ್ರ ಭಾಗವಹಿಸುತ್ತಿರುವುದರಿಂದ ಸಮುದಾಯದ ಐಕ್ಯತೆಗೆ ಧಕ್ಕೆಯಾಗುತ್ತಿದ್ದು, ಮುಂದಾದರೂ ಪ್ರತಿಯೊಬ್ಬರು ಸಂಘಟಿತರಾಗಿ ಇಂತಹ ಜಯಂತಿಗಳಲ್ಲಿ ಪಾಲ್ಗೊಂಡು ಸಮುದಾಯಕ್ಕೆ ಹೆಚ್ಚಿನ ಶಕ್ತಿ ತುಂಬಬೇಕು.

ಚುನಾವಣೆ ಸಂದರ್ಭ ರಾಜಕೀಯ ಮಾಡಬೇಕೇ ಹೊರತು ಸಂಘಟನೆ ವಿಚಾರ ಬಂದಾಗ ಎಲ್ಲರೂ ಪಕ್ಷಾತೀತವಾಗಿ ಒಗ್ಗಟ್ಟಿನಿಂದ ಕೆಲಸ ಮಾಡುವ ಮೂಲಕ ಇತರೆ ಸಮುದಾಯಗಳಂತೆ ಒಗ್ಗಟ್ಟು ಪ್ರದರ್ಶಿಸಿ ನಮ್ಮತನ ಉಳಿಸಿಕೊಳ್ಳಬೇಕೆಂದರು.

ವೇದಿಕೆಯಲ್ಲಿ ನಿವೃತ್ತ ನ್ಯಾಯಮೂರ್ತಿ ಟಿ.ಜಿ.ಶಿವಶಂಕರೇಗೌಡ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಬಾಲು, ರಾಘವೇಂದ್ರ, ಚುಂಚಶ್ರೀ ಗೆಳೆಯರ ಬಳಗದ ಅಧ್ಯಕ್ಷ ಡಾ.ಬಿ. ಕೃಷ್ಣ, ಒಕ್ಕಲಿಗರ ಸಂಘದ ಅಧ್ಯಕ್ಷ ವಿ.ಟಿ. ರವಿಕುಮಾರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಸಂದರ್ಶ್, ಎಪಿಎಂಸಿ ಮಾಜಿ ಉಪಾಧ್ಯಕ್ಷೆ ಮಹತಾ, ಪೂರ್ಣಪ್ರಜ್ಞ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಚ್. ಆರ್.ಅನಂತೇಗೌಡ, ಅಖಿಲ ಕರ್ನಾಟಕ ನಾಡಪ್ರಭು ಕೆಂಪೇಗೌಡ ಒಕ್ಕಲಿಗರ ಸಂಘದ ತಾಲೂಕು ಅಧ್ಯಕ್ಷ ಶಿವಲಿಂಗಯ್ಯ, ನಿರ್ದೇಶಕರಾದ ಪಿ.ಶಿವಪ್ಪ, ಸುರೇಶ್, ದೇವ ಕುಮಾರ್, ಶಿವಲಿಂಗಯ್ಯ ಹಾಜರಿದ್ದರು.

ಒಂದನೇ ಪುಟದಿಂದ

ಅರ್ಹ ಮತದಾರರ ಉಳಿಸದಿದ್ದರೆ ಕಾಂಗ್ರೆಸ್ ಮಾರಣ ಹೋಮ

ಬಿಜೆಪಿ ಬಹುಮತದಿಂದ ಅಧಿಕಾರ ಹಿಡಿಯುವ ಬದಲು ಹಿಂಭಾಗಿಲಿನಿಂದ ಅಧಿಕಾರಕ್ಕೆ ಬಂದು ಆಡಳಿತ ನಡೆಸುತ್ತಿದೆ. ಆದ ಕಾರಣ ಕಾಂಗ್ರೆಸ್ ಕಾರ್ಯಕರ್ತರು ಎಚ್ಚೆತ್ತುಕೊಳ್ಳಬೇಕು. ಬಿಜೆಪಿ ಷಡ್ಯಂತ್ರ ಯಶಸ್ವಿಯಾಗದಂತೆ ಎಚ್ಚರಿಕೆ ವಹಿಸಬೇಕು. ಇದರಿಂದ ನಿಮಗೆ ಎಸ್‌ಐಆರ್ ಅಳಿವು ಉಳಿವಿನ ಪ್ರಶ್ನೆಯಾಗಿದೆ ಜೋಕೆ ಎಂದರು.

ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುವ ರೈತರು, ಹಿಂದುಳಿದವರು, ದಲಿತರು, ಅಲ್ಪಸಂಖ್ಯಾತರು ಸೇರಿದಂತೆ ಹಲವು ವರ್ಗದವರ ದೊಡ್ಡ ಪಡೆಯೇ ಇದೆ. ಈ ವರ್ಗವೆ ಬಿಜೆಪಿಯವರ ಮೂಲ ಟಾರ್ಗೆಟ್ ಆಗಿದೆ. ಬಿಜೆಪಿ ಎಸ್‌ಐಆರ್ ಪ್ರಕ್ರಿಯೆ ವೇಳೆ ಕಾಂಗ್ರೆಸ್ ಗೆ ಮತ ಹಾಕುವ ಮತದಾರರನ್ನು ಮತದಾರರ ಪಟ್ಟಿಯಿಂದ ತೆಗೆಸುವ ಹುನ್ನಾರ ನಡೆಸುತ್ತಿದೆ. ಆದ್ದರಿಂದ ಮೈಯೆಲ್ಲಾ ಕಣ್ಣಾಗಿ, ಕಿವಿಯಾಗಿ ಕೆಲಸ ಮಾಡಬೇಕು ಎಂದು ಕಾಂಗ್ರೆಸಿಗರಿಗೆ ಸೂಚಿಸಿದರು.

ಇತ್ತೀಚಿನ ಚುನಾವಣೆಯಲ್ಲಿ ಮತ ಹಂಚಿಕೆಯಲ್ಲಿ ಬಿಜೆಪಿಗೆ ಶೇಕಡ 34 ರಷ್ಟಿದ್ದರೆ ಕಾಂಗ್ರೆಸ್ ಗೆ ಶೇಕಡ 64 ರಷ್ಟಿದೆ. ಈಗ ಎಸ್‌ಐಆರ್ ಮೂಲಕ ಶೇಕಡ 10 ರಷ್ಟು ಮತವನ್ನು ಕಿತ್ತುಕೊಂಡರೆ ಕಾಂಗ್ರೆಸ್ ಪರಿಸ್ಥಿತಿ ಏನಾಗಬೇಡ ಎಂದು ಯೋಚಿಸಿ ಎಂದು ಸಲಹೆ ನೀಡಿದರು.

ಉದಾಹರಣೆಗೆ ಚಾಮರಾಜ ಕ್ಷೇತ್ರದ ಶಾಸಕ ಹರೀಶ್‌ಗೌಡರು 5 ಸಾವಿರ ಮತಗಳ ಅಂತರದಿಂದ ಗೆಲವು ಸಾಧಿಸಿದ್ದಾರೆ. ಎಸ್‌ಐಆರ್ ನಿಂದ ಚಾಮರಾಜ ಕ್ಷೇತ್ರದ ಶೇಕಡ 10 ರಷ್ಟು ಮತಗಳು ಮತದಾರರ ಪಟ್ಟಿಯಿಂದ ತೆಗೆದರೆ ಮುಂದಿನ ಚುನಾವಣೆಯಲ್ಲಿ ಹರೀಶ್‌ಗೌಡರ ಸ್ಥಿತಿ ಏನಾಗುತ್ತದೆ ಎಂದು ಸಿದ್ದರಾಮಯ್ಯ ಅವರು ಉದಾಹರಣೆ ಸಹಿತ ಕಾಂಗ್ರೆಸ್ ಕಾರ್ಯಕರ್ತರಿಗೆ ಪರಿಸ್ಥಿತಿಯನ್ನು ಮನವರಿಕೆ ಮಾಡಿಕೊಟ್ಟರು. ನಮ್ಮ ದೇಶದಲ್ಲಿ 141 ಕೋಟಿ ಜನಸಂಖ್ಯೆ ಇದ್ದು, 96 ಕೋಟಿ ಮತದಾರರಿದ್ದಾರೆ, ಬಹಳಷ್ಟು ಜನರು 1 ಸಾವಿರದಿಂದ 5 ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಇಂತಹ ಕಡೆ ಎಸ್‌ಐಆರ್ ಮೂಲಕ ನಾಲ್ಕೈದು ಸಾವಿರ ಮತಗಳನ್ನು ಕಿತ್ತು ಹಾಕಿದರೆ ನಮ್ಮವರ ಗೆಲುವು ತೀರಾ ಕಷ್ಟವಾಗುತ್ತದೆ ಎಂದು ಸಿದ್ದರಾಮಯ್ಯ ಅವರು ಹೇಳಿದರು.

ಚುನಾವಣೆಯಲ್ಲಿ ಸಾವಿರಾರು ಮತಗಳ ಲೆಕ್ಕ ಹಾಕುವುದು ಬೇಡ. ಒಂದೊಂದು ಮತಕ್ಕೂ ಬಹಳ ಮೌಲ್ಯವಿದೆ. ಎ.ಆರ್. ಕೃಷ್ಣಮೂರ್ತಿ ಅವರು ಕೇವಲ ಒಂದು ಮತದ ಅಂತರದಿಂದ ಸೋಲಲಿಲ್ಲವೆ. ಆದ ಕಾರಣ ಪ್ರತಿಯೊಂದು ಮತದ ಮೌಲ್ಯವನ್ನು ಪರಿಗಣಿಸಬೇಕು. ಈ ನಿಟ್ಟಿನಲ್ಲಿ ಎಸ್‌ಐಆರ್ ವೇಳೆ ಮತದಾರರ ಪಟ್ಟಿಯಿಂದ ಒಬ್ಬನೆ ಒಬ್ಬ ಅರ್ಹ ಮತದಾರರ ಹೆಸರು ಕೈಬಿಡದಂತೆ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

ಭಾರತದಲ್ಲಿ ಈಗ ಸಂವಿಧಾನಬದ್ಧವಾದ ಚುನಾವಣಾ ಆಯೋಗ ಅಸ್ಥಿತ್ವದಲ್ಲಿ ಇಲ್ಲ. ಇದನ್ನು ಸಾಬೀತು ಮಾಡುವ ಬಹಳಷ್ಟು ನಿದರ್ಶನಗಳು ಈಗಾಗಲೇ ನಡೆದಿದೆ ಎಂದು ಸಿದ್ದರಾಮಯ್ಯ ಅವರು ಆಪಾದಿಸಿದರು.

ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ, ತುಮಕೂರು ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು, ಬೂತ್ ಮಟ್ಟದ ಏಜೆಂಟ್‌ಗಳು ಸಮಾವೇಶದಲ್ಲಿ ಭಾಗವಹಿಸಿದ್ದರು. ರಾಜ್ಯಸಭಾ ಸದಸ್ಯ ಜಿ.ಸಿ. ಚಂದ್ರಶೇಕರ್, ಶಾಸಕರಾದ ಡಾ.ಹೆಚ್.ಸಿ.ಮಹಾದೇವಪ್ಪ, ಕೆ.ಹರೀಶ್ ಗೌಡ, ಕೆ.ವೆಂಕಟೇಶ್, ಡಿ.ರವಿಶಂಕರ್, ದರ್ಶನ್ ಧ್ರುವನಾರಾಯಣ್, ಶಿವಲಿಂಗೇಗೌಡ, ಎ.ಎಸ್. ಪೊನ್ನಣ್ಣ, ಹೆಚ್.ಎಂ. ಗಣೇಶ್ ಪ್ರಸಾದ್, ಡಾ.ಡಿ.ತಿಮ್ಮಯ್ಯ, ಕೆ.ಶಿವಕುಮಾರ್, ಮಾಜಿ ಸಚಿವೆ ರಾಣಿ ಸತೀಶ್, ಕೋಟೆ ಶಿವಣ್ಣ, ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್, ಆರ್.ನರೇಂದ್ರ, ಜಿ.ಎನ್.ನಂಜುಂಡಸ್ವಾಮಿ, ಕಳಲೆ ಕೇಶವಮೂರ್ತಿ, ಮಾಜಿ ಸಭಾಪತಿ ವಿ.ಆರ್.ಸುದರ್ಶನ್, ಮಾಜಿ ಉಪ ಸಭಾಪತಿ ಮರಿತಿಬ್ಬೇಗೌಡ ಸೇರಿದಂತೆ ಹಲವರು ಸಮಾವೇಶದಲ್ಲಿ ಹಾಜರಿದ್ದರು.

ಮತದಾನದ ಹಕ್ಕು ಎಕೆ 47, ಫೈಟರ್ ಜೆಟ್, ಬಾಂಬ್ ನಂತೆ ಪ್ರಬಲ ಅಸ್ತ್ರ

ಮೈಸೂರು: ಪ್ರಜಾಪ್ರಭುತ್ವವನ್ನು ಶಕ್ತಿಯುತಗೊಳಿಸಲು ಮತದಾನ ನಮಗೆ ಎಕೆ 47, ಫೈಟರ್ ಜೆಟ್, ಬಾಂಬ್ ನಂತೆ ಪ್ರಬಲ ಅಸ್ತ್ರವಾಗಿದ್ದು, ಎಸ್‌ಐಆರ್ ವೇಳೆ ಈ ಅಸ್ತ್ರವನ್ನು ಸಂರಕ್ಷಿಸಿಕೊಳ್ಳಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಕಾಂಗ್ರೆಸ್ ಕಾರ್ಯಕರ್ತರಿಗೆ ಸಲಹೆ ನೀಡಿದರು.

ಎಸ್‌ಐಆರ್ ಪ್ರಕ್ರಿಯೆ ವೇಳೆ ನಮ್ಮ ಮತವನ್ನು ನಾವು ರಕ್ಷಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಮತದಾರರ ಪಟ್ಟಿಯಿಂದ ಅರ್ಹ ಮತದಾರರ ಹೆಸರು ಕೈಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು. ಇದನ್ನು ದೇಶದ ಎರಡನೇ ಸ್ವಾತಂತ್ರ್ಯ ಹೋರಾಟ ಎಂದು ಭಾವಿಸಿ ಎಂದು ಹೇಳಿದರು.

ಇದರಿಂದ ನಾವು ಎಚ್ಚೆತ್ತುಕೊಳ್ಳದಿದ್ದರೆ ಬಿಜೆಪಿ ತನ್ನ ಕುತಂತ್ರ ಷಡ್ಯಂತ್ರದಿಂದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡುತ್ತದೆ. ಇದರ ಪರಿಣಾಮ ಮತ್ತೆ ಗುಲಾಮಗಿರಿ ವ್ಯವಸ್ಥೆ ಅಸ್ಥಿತ್ವಕ್ಕೆ ಬರುತ್ತದೆ ಎಂದು ಎಚ್ಚರಿಕೆ ನೀಡಿದರು.

ಜಾತಿ ಆಧಾರದ ಮೇಲೆ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಹೊರಗಿಡಲಿದ್ದಾರೆ. ಇತ್ತೀಚಿನ ಮತಗಳ್ಳತನ ಇದಕ್ಕೆಲ್ಲಾ ಸ್ಪಷ್ಟ ಉದಾಹರಣೆಗಳಾಗಿವೆ. ಮಹಾರಾಷ್ಟ್ರದ ಚುನಾವಣೆಯಲ್ಲಿ ಕೇವಲ 17 ಸೆಕಂಡ್ ಗೆ ಒಂದರಂತೆ ಮತದಾನವಾಗಿದೆ ಎಂದು ಆರೋಪಿಸಿದರು.

ಆದ ಕಾರಣ ಬಿಜೆಪಿಯವರು ತಮ್ಮ ಅನುಕೂಲಕ್ಕೆ ತಕ್ಕಂತೆ ಎಸ್‌ಐಆರ್ ಬಳಸಿಕೊಳ್ಳದಂತೆ ನೋಡಿಕೊಳ್ಳಬೇಕು. ಬಿಜೆಪಿಯವರ ದುರುಪಯೋಗ ತಪ್ಪಿಸಬೇಕು. ಈ ಹಿನ್ನೆಲೆಯಲ್ಲಿ ಎಲ್ಲರೂ ಒಗ್ಗಟ್ಟಾಗಿ ಹೋರಾಟ ಮಾಡಬೇಕು ಎಂದು ಹರಿಪ್ರಸಾದ್ ಅವರು ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ ನೀಡಿದರು.

ಕಾಂಗ್ರೆಸಿಗರಿಗೆ ಭೂರಿ ಭೋಜನದ ಸವಿ

ಮೈಸೂರು: ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ ಮೊದಲ ಬಾರಿಗೆ ಮೈಸೂರಿಗೆ ಆಗಮಿಸಿದ ಸಿದ್ದರಾಮಯ್ಯ ಅವರು ಮೈಸೂರಿನ ಟಿ.ಕೆ. ಬಡಾವಣೆಯ ತಮ್ಮ ನಿವಾಸದಲ್ಲಿ ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರಿಗೆ ಭೂರಿ ಭೋಜನದ ವ್ಯವಸ್ಥೆ ಮಾಡಿದರು. ಮನೆಯ ಬಳಿ ಎರಡು ವಿಶಾಲವಾದ ಜರ್ಮನ್ ಟೆಂಟ್ ಹಾಕಿಸಿ ಅಲ್ಲಿ ಭೋಜನದ ವ್ಯವಸ್ಥೆ ಮಾಡಲಾಗಿತ್ತು. ಸಮಾವೇಶದಲ್ಲಿ ಪಾಲ್ಗೊಂಡವರಿಗೆ ಸಿದ್ದರಾಮಯ್ಯ ಸಸ್ಯಹಾರ ಹಾಗೂ ಮಾಂಸಹಾರದ ಊಟದ ವ್ಯವಸ್ಥೆ ಮಾಡಿದ್ದರು. ಈ ವೇಳೆ ಯಾವುದೇ ಗದ್ದಲವಾಗದಂತೆ ಬಿಗಿ ಪೊಲೀಸ್ ವ್ಯವಸ್ಥೆ ಮಾಡಲಾಗಿತ್ತು.

ಗುಲಾಮಗಿರಿಯೇ ನಿಶ್ಚಿತ

ಬಿಜೆಪಿ ಕುತಂತ್ರ ಯಶಸ್ವಿಯಾಗಲು ಬಿಡಬೇಡಿ. ಎಸ್‌ಐಆರ್ ವೇಳೆ ಬಿಎಲ್‌ಒಗಳು ಸಮನ್ವಯ ಮಾಡಿಕೊಂಡು ಕೆಲಸ ಮಾಡಬೇಕು. ಪ್ರತಿ ಮನೆಗೆ ತೆರಳಿ ಜನರಿಂದ ಮಾಹಿತಿ ಪಡೆದು ಮತದಾರರ ಪಟ್ಟಿಯಿಂದ ಅವರ ಹೆಸರು ಹೊರಗಿಡ ದಂತೆ ನೋಡಿಕೊಳ್ಳಬೇಕು. ಈ ಸಂಬಂಧ ಪ್ರತಿ ಭೂತ್ ನಲ್ಲೂ ಸ್ಥಳೀಯ ಇಬ್ಬರು ಮತದಾರರನ್ನು ಆಯ್ಕೆ ಮಾಡಬೇಕು ಎಂದು ಹೇಳಿದರು.

ಯಾರಿಗೆಲ್ಲಾ ಸಂಸದರಾಗುವ, ಶಾಸಕರಾಗುವ ಆಸೆ ಇದೆಯೊ ಅವರೆಲ್ಲಾ ಈ ಕೆಲಸ ಮಾಡಲೇಬೇಕು. ಈ ಮೂಲಕ ನರೇಂದ್ರ ಮೋದಿ ಅವರ ಕುತಂತ್ರ ಬಯಲು ಮಾಡಬೇಕು. ಪ್ರಜಾಪ್ರಭುತ್ವ, ಸಂವಿಧಾನ, ಉಳಿಸಬೇಕು. ಇದರಿಂದ ಎಚ್ಚೆತ್ತುಕೊಳ್ಳದಿದ್ದರೆ ದೇಶದಲ್ಲಿ ಒಮ್ಮೆ ಪ್ರಜಾಪ್ರಭುತ್ವ ಪತನವಾದರೆ ಮತ್ತೆ ಗುಲಾಮಗಿರಿ ವ್ಯವಸ್ಥೆ ಬರುತ್ತದೆ ಎಚ್ಚರ ಎಂದರು. ಪಕ್ಷ ಸಂಘಟನೆಗಾಗಿ ಈ ಸಮಾವೇಶ ಮಾಡಿಲ್ಲ. ಪರಿಣಾಮಕಾರಿ ಯಾದ ಜಾಗೃತಿಗಾಗಿ ಇದನ್ನು ಆಯೋಜಿಸಲಾಗಿದೆ. ಇದನ್ನು ಅರ್ಥ ಮಾಡಿಕೊಂಡು ಎಸ್‌ಐಆರ್ ವೇಳೆ ಮೈಮರೆಯದೆ ಕೆಲಸ ಮಾಡಬೇಕು ಎಂದು ಸಿದ್ದರಾಮಯ್ಯ ಸಲಹೆ ನೀಡಿದರು.

ಪೌರತ್ವ ರದ್ದಾಗುವ ಭೀತಿ

ನಗರ ಪಾಲಿಕೆ ಮಟ್ಟದಲ್ಲಿ ದಾಖಲೆಗಳು ಸುಲಭವಾಗಿ ದೊರೆಯಲಿದೆ. ಈ ಬಗ್ಗೆ ಕಾಂಗ್ರೆಸ್ ಬಿಎಲ್ ಒ ಹಾಗೂ ಕಾರ್ಯಕರ್ತರು ಜನರಿಗೆ ಮಾಹಿತಿ ನೀಡಬೇಕು, ಜಾಗೃತಿ ಮೂಡಿಸಬೇಕು ಎಂದು ಯತೀಂದ್ರ ಹೇಳಿದರು. ಎಸ್‌ಐಆರ್ ಪ್ರಕ್ರಿಯೆಯಿಂದ ಬಿಜೆಪಿಗೆ ಅನುಕೂಲವಾಗಿದೆ. ಬಿಹಾರ, ಪಶ್ಚಿಮ ಬಂಗಾಳ, ಮಹಾರಾಷ್ಟ್ರ ಚುನಾವಣೆಯ ಫಲಿತಾಂಶ ಇದಕ್ಕೆ ಸ್ಪಷ್ಟ ನಿದರ್ಶನ. ಇದರ ಪರಿಣಾಮ ತಮಿಳುನಾಡಿನಲ್ಲಿ ಸ್ಟಾಲಿನ್, ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಅವರಂತಹ ಅತಿರಥ ಮಹಾರಥರೆ ಚುನಾವಣೆಯಲ್ಲಿ ಸೋಲುವಂತಾಯಿತು ಎಂದು ಆತಂಕ ವ್ಯಕ್ತಪಡಿಸಿದರು. ಚುನಾವಣಾ ಆಯೋಗ ನಿಸ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸದೆ ಬಿಜೆಪಿಗೆ ಅನುಕೂಲ ಮಾಡಿಕೊಡುತ್ತಿದೆ. ಆದ ಕಾರಣ ಕಾಂಗ್ರೆಸ್ ಕಾರ್ಯಕರ್ತರು ಎಚ್ಚರ ವಹಿಸಬೇಕು. ಇದು ನಿಮ್ಮ ಅಳಿವು ಉಳಿವಿನ ಪ್ರಶ್ನೆಯಾಗಿದೆ. ಆ ಕಾರಣ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಎಂದು ಯತೀಂದ್ರ ಅವರು ಕಾಂಗ್ರೆಸ್ ನವರಿಗೆ ಗಂಭೀರ ಸಲಹೆ ನೀಡಿದರು.

ಹೋಟೆಲ್‌ಗಳಿಗೆ ಬಾಂಬ್ ಬೆದರಿಕೆ

ಲಾಬಿ, ಉದ್ಯಾನ ಸೇರಿದಂತೆ ಹೋಟೆಲ್‌ನ ಎಲ್ಲಾ ಭಾಗಗಳಲ್ಲಿ ಸಮಗ್ರ ತಪಾಸಣೆ ನಡೆಸಲಾಯಿತು. ಆದರೆ ಯಾವುದೇ ಸ್ಫೋಟಕ ವಸ್ತು ಅಥವಾ ಅನುಮಾನಾಸ್ಪದ ವಸ್ತು ಪತ್ತೆಯಾಗಿಲ್ಲ. ನಂತರ ಪೊಲೀಸರು ಈ ಬೆದರಿಕೆ ಇ–ಮೇಲ್ ಹುಸಿಯಾಗಿದೆ ಎಂದು ಸ್ಪಷ್ಟಪಡಿಸಿದರು. ಇ–ಮೇಲ್ ಕಳುಹಿಸಿದ ವ್ಯಕ್ತಿ ತನ್ನನ್ನು ಅನಂತಮ್ ಅರಿಯಪ್ಪನ್ ಎಂದು ಪರಿಚಯಿಸಿಕೊಂಡಿದ್ದು, ತಮಿಳುನಾಡಿನ ರಾಜಕೀಯ ಪಕ್ಷವೊಂದರ ನಾಯಕ ಎಂದು ಹೇಳಿಕೊಂಡಿದ್ದಾನೆ. ಇ–ಮೇಲ್‌ನಲ್ಲಿ ಐಸೊಪ್ರೊಪನಾಲ್ ಹಾಗೂ ಕಾರ್ಬನ್ ಟೆಟ್ರಾಕ್ಲೋರೈಡ್ ಒಳಗೊಂಡ ರಾಸಾಯನಿಕ ಬಾಂಬ್‌ಗಳನ್ನು ಮೈಸೂರಿನ ಮೂರು ಹೋಟೆಲ್‌ಗಳಲ್ಲಿ ಇರಿಸಲಾಗಿದೆ. ಈ ಕೃತ್ಯವನ್ನು ಆಲ್ ಇಂಡಿಯಾ ರೆವಲ್ಯೂಷನರಿ ಸ್ಟೂಡೆಂಟ್ಸ್ ಫೆಡರೇಷನ್ ಸದಸ್ಯರು ನಡೆಸಿದ್ದಾರೆ ಎಂದು ಇ–ಮೇಲ್‌ನಲ್ಲಿ ಉಲ್ಲೇಖಿಸಲಾಗಿದ್ದು, ಆ ಸಂಘಟನೆಯನ್ನು ಸಿಪಿಐ (ಮಾವೋವಾದಿ) ಸಂಘಟನೆಯ ವಿದ್ಯಾರ್ಥಿ ಘಟಕ ಎಂದು ವಿವರಿಸಲಾಗಿದೆ. ಇ–ಮೇಲ್‌ನಲ್ಲಿ ಮೂರು ಹೋಟೆಲ್‌ಗಳ ಬಗ್ಗೆ ಉಲ್ಲೇಖವಿದ್ದರೂ, ಇದುವರೆಗೆ ರಾಯಲ್ ಆರ್ಕಿಡ್ ಮೆಟ್ರೋಪೋಲ್ ಹಾಗೂ ಫಾರ್ಚೂನ್ ಜೆ.ಪಿ. ಪ್ಯಾಲೇಸ್ ಹೋಟೆಲ್‌ಗಳಿಗೆ ಮಾತ್ರ ಇಂತಹ ಬೆದರಿಕೆ ಇ–ಮೇಲ್ ಬಂದಿರುವುದು ದೃಢಪಟ್ಟಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಚಾಮುಂಡೇಶ್ವರಿ ಕ್ಷೇತ್ರದ ಜನರ ಆಶೀರ್ವಾದ; ನನ್ನ ಬೆಂಬಲವಿತ್ತು

ಅವರು ಮುಖ್ಯಮಂತ್ರಿ ಆಗಲೇಬೇಕೆಂದು ಮೊದಲ ಬಾರಿಗೆ ಘೋಷಿಸಿದ್ದೇ ನಾನು. ನಂತರ ರಾಜ್ಯದಲ್ಲೇ ಮೊದಲಿಗೆ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ನಡೆದ 'ಕುಮಾರಪರ್ವ'ದ ಮೂಲಕ ಅಪಾರ ಜನಬೆಂಬಲ ದೊರಕಿತು. ಹಾಗಾಗಿ ಕುಮಾರಸ್ವಾಮಿ ಅವರು ಚಾಮುಂಡೇಶ್ವರಿ ಕ್ಷೇತ್ರದ ಜನರ ಶಕ್ತಿ ಹಾಗೂ ನನ್ನ ಬೆಂಬಲದಿಂದಲೇ ಎರಡು ಬಾರಿ ಮುಖ್ಯಮಂತ್ರಿಯಾದರು ಎಂದರು.

ಕ್ಷೇತ್ರದ ಜನ ಜೊತೆಗಿದ್ದಾರೆ: ಅಭಿವೃದ್ಧಿ ವಿಚಾರದಲ್ಲಿ ನಾನು ಯಾವುದೇ ರಾಜಕಾರಣ ಮಾಡಲು ಹೋಗಲ್ಲ. ಯಾವುದೇ ಸರ್ಕಾರವಾಗಲೀ, ಯಾರೇ ಮುಖ್ಯಮಂತ್ರಿಗಳಾಗಿರಲೀ ಕ್ಷೇತ್ರದ ಅಭಿವೃದ್ಧಿ ಮುಖ್ಯ. ನನ್ನ ಬಗ್ಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿರುವ ಮಾತುಗಳನ್ನು ನಾನು ಕೇಳಿಲ್ಲ. ನಾನು ಯಾವುದೇ ಸಾಮಾಜಿಕ ಜಾಲತಾಣಗಳನ್ನು ನೋಡುವುದಿಲ್ಲ. ಕರೆ ಬಂದರೆ ಸ್ವೀಕರಿಸುತ್ತೇನೆ, ನಾನು ಕರೆ ಮಾಡಬೇಕಾದರೆ ಸಹಾಯಕರ ನೆರವು ಪಡೆಯುತ್ತೇನೆ. ಏನೇ ಆದರೂ ಚಾಮುಂಡೇಶ್ವರಿ ಕ್ಷೇತ್ರದ ಜನರೇ ನನ್ನ ಶಕ್ತಿ ಮುಂದೆಯೂ ನೀವೇ ಸ್ಪರ್ಧೆ ಮಾಡಬೇಕು, ನೀವೇ ಶಾಸಕರಾಗಬೇಕು, ನಿಮ್ಮೊಂದಿಗೆ ನಾವಿದ್ದೇವೆ ಎಂದು ವಿಶ್ವಾಸ ತುಂಬಿದ್ದಾರೆ. ಜನರ ತೀರ್ಮಾನದಂತೆ ನಾನು ಮುನ್ನಡೆಯುತ್ತೇನೆ ಎಂದು ಸ್ಪಷ್ಟಪಡಿಸಿದರು.

ನಾನು ಎಲ್ಲಿ ಹೋಗಿದ್ದೇನೆ?: ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿದ್ದಾಗ ದಸರಾ ಉದ್ಘಾಟನೆ ವೇಳೆ ಚಾಮುಂಡಿಬೆಟ್ಟದಲ್ಲಿ ನಾನು ಮಾತನಾಡುವಾಗ ಸಿದ್ದರಾಮಯ್ಯ ಏಕೆ ರಾಜೀನಾಮೆ ನೀಡಬೇಕು ಎಂದು ಪ್ರಶ್ನಿಸಿದ್ದೆ. ಅಷ್ಟಕ್ಕೆ ನಾನು ಕಾಂಗ್ರೆಸ್‌ಗೆ ಸೇರುತ್ತೇನೆ ಎಂದು ವದಂತಿ ಹಬ್ಬಿಸಿದರು. ನಾನೇದರೂ ಕಾಂಗ್ರೆಸ್‌ಗೆ ಹೋಗಿ ಬಿಟ್ಟಿದ್ದೀನಾ?. ಕಾಂಗ್ರೆಸ್ ಶಾಸಕರಿಗೆ ನೀಡಿರುವಂತೆ ಚಾಮುಂಡೇಶ್ವರಿ ಕ್ಷೇತ್ರಕ್ಕೂ 25 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದೆ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ ವಿಶೇಷ ಅನುದಾನ ಕೊಡುವಂತೆ ಭೇಟಿ ಮಾಡಿ ಮನವಿ ಮಾಡಿದ್ದೆ. ಉಪಚುನಾವಣೆ ಬಳಿಕ ಅನುದಾನ ನೀಡುವ ಭರವಸೆ ನೀಡಿದ್ದರು. ಅವರು ಸಿಎಂ ಹುದ್ದೆಗೆ ರಾಜೀನಾಮೆ ನೀಡಿದ ನಂತರವೂ ನೆನಪಿಸಿದ್ದೆ. ಮೊನ್ನೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಸಭೆಯಲ್ಲಿ ಭೇಟಿ ಮಾಡಿದ್ದು ಬಿಟ್ಟರೆ ಈವರೆಗೆ ವೈಯಕ್ತಿಕವಾಗಿ ಭೇಟಿ ಮಾಡಿಲ್ಲ. ಮುಂದಿನ ದಿನಗಳಲ್ಲಿ ಭೇಟಿಯಾಗಿ ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ಮನವಿ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಕುಮಾರಸ್ವಾಮಿ ಪಕ್ಷ ಕಟ್ಟುತ್ತಾರೆ: ಹೆಚ್.ಡಿ.ಕುಮಾರಸ್ವಾಮಿ ಅವರು ತಾವು ಎರಡು ಕಾಲನ್ನೂ ಹೊರಗಿಟ್ಟಿದ್ದಾರೆಂದು ಹೇಳಿರುವ ಬಗ್ಗೆ ಪ್ರತಿಕ್ರಿಯಿಸಿದ ಜಿಟಿಡಿ, ಒಂದೂವರೆ ವರ್ಷಗಳಿಂದ ನಮ್ಮ ಸಂಪರ್ಕದಲ್ಲಿ ಇಲ್ಲವೆಂದು ಅವರೇ ಹೇಳಿಲ್ಲವೇ? ಆದರೆ ಈಗ ಆಡಿರುವ ಮಾತನ್ನು ನಾನು ಕೇಳಿಲ್ಲ. ಅವರಷ್ಟು ಅನುಭವ ನನಗಿಲ್ಲ. ಕುಮಾರಸ್ವಾಮಿ ಎರಡು ಬಾರಿ ಮುಖ್ಯಮಂತ್ರಿ ಆಗಿದ್ದವರು. ಈಗ ಕೇಂದ್ರ ಸಚಿವರಾಗಿದ್ದಾರೆ. ನನ್ನನ್ನೂ ಎರಡು ಬಾರಿ ಸಚಿವರನ್ನಾಗಿ ಮಾಡಿದ್ದಾರೆ. ಜಯಪ್ರಕಾಶ್ ನಾರಾಯಣ್ ಅವರು ಕಟ್ಟಿದ ಪಕ್ಷವನ್ನು ಉಳಿಸಿಕೊಳ್ಳಲು ಹೆಚ್.ಡಿ.ದೇವೇಗೌಡರು ಶ್ರಮಿಸಿದರು. ಈಗ ಪಕ್ಷ ಉಳಿಸುವ ಕೆಲಸವನ್ನು ಕುಮಾರಸ್ವಾಮಿ ಅವರು ಮಾಡುತ್ತಾರೆ ಎಂದು ಹೇಳಿದರು.

ಹಾಗಾದರೆ ನೀವು ಪಕ್ಷ ಸಂಘಟನೆ ಮಾಡುವುದಿಲ್ಲವೇ, ಪಕ್ಷ ಕಟ್ಟುವುದಿಲ್ಲವೇ ಎಂದು ಪ್ರಶ್ನಿಸಿದಾಗ, ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಮಾತ್ರ ನನ್ನ ಧ್ಯೇಯ. 2028 ರ ಚುನಾವಣೆಯಲ್ಲಿ ಸ್ಪರ್ಧಿಸುವಂತೆ ಒತ್ತಡ ಹೇರಿದ್ದಾರೆ. ನಿಮ್ಮ ಬೆಂಬಲಕ್ಕೆ ನಾವಿರುತ್ತೇವೆ ಎಂದು ಭರವಸೆ ನೀಡಿದ್ದಾರೆ. ಇದರಿಂದ ಚಾಮುಂಡೇಶ್ವರಿ ಕ್ಷೇತ್ರದ ಅಭಿವೃದ್ಧಿ ಬಿಟ್ಟರೆ ನನಗೆ ಬೇರೆ ರಾಜಕಾರಣ ಗೊತ್ತಿಲ್ಲ ಎಂದು ಜಿ.ಟಿ.ದೇವೇಗೌಡರು ಸ್ಪಷ್ಟನೆ ನೀಡಿದರು. ಆದರೆ ಜೆಡಿಎಸ್ ಪಕ್ಷದಿಂದ ದೂರ ಸರಿದಿದ್ದಾರೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ಜಿ.ಟಿ.ದೇವೇಗೌಡರು ಸ್ಪಷ್ಟ ಉತ್ತರ ನೀಡಲಿಲ್ಲ.

ಕಾಂಗ್ರೆಸ್ ಅಧಿಕಾರಕ್ಕೆ

ಸರ್ಕಾರದ ಜವಾಬ್ದಾರಿ ನೀಡಲಾಗಿದೆ. ನಾನು ಎಲ್ಲರನ್ನು ಒಟ್ಟಾಗಿ ಕರೆದುಕೊಂಡು ಹೋಗುತ್ತೇನೆ. 6 ವರ್ಷಗಳ ಹಿಂದೆ ಕಷ್ಟಕಾಲದಲ್ಲಿ ರಾಜ್ಯದಲ್ಲಿ ಪಕ್ಷದ ನೇತೃತ್ವ ವಹಿಸಿಕೊಂಡೆ. ಕಾಂಗ್ರೆಸ್ ಪಕ್ಷದ ಇತಿಹಾಸ ದೇಶದ ಇತಿಹಾಸ, ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ. ಜವಹರಲಾಲ್ ನೆಹರು ಅವರ ಕಾಲದಿಂದಲೂ ಕಾಂಗ್ರೆಸ್ ಪಕ್ಷ ದೇಶವನ್ನು ಕಟ್ಟಲು ಶ್ರಮಿಸಿದೆ. ಸಂವಿಧಾನದ ಮೂಲಕ ಪ್ರತಿಯೊಬ್ಬ ಪ್ರಜೆಗೂ ಹಕ್ಕುಗಳನ್ನು ಕೊಟ್ಟಿದೆ. ಸಮಾಜದ ಪ್ರತಿಯೊಂದು ವರ್ಗಕ್ಕೂ ನ್ಯಾಯ ಒದಗಿಸಿದೆ ಎಂದು ಹೇಳಿದರು.

ಪಕ್ಷದ ನಾಲ್ಕು ಆಧಾರ ಸ್ತಂಭ: ಇಂಟೆಕ್ ಮೂಲಕ ದೇಶದ ಶ್ರಮಿಕರ, ಕಾರ್ಮಿಕರ ಬಲ ಹೆಚ್ಚಾಗಿದೆ. ಯಾವುದೇ ರಾಜಕೀಯ ತೀರ್ಮಾನ ತೆಗೆದುಕೊಂಡರು ಕಾಂಗ್ರೆಸ್ ಕಾರ್ಯಕಾರಿ ಸಮಿತಿಯಲ್ಲಿ ಇಂಟೆಕ್ ಸದಸ್ಯರು ಮುಖ್ಯವಾಗುತ್ತಾರೆ. ಇಂದಿರಾಗಾಂಧಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದ ಸಂಧರ್ಭದಲ್ಲಿ ಇಂಟೆಕ್, ಎನ್‌ಎಸ್‌ಯುಐ, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್ ಇವು ಕಾಂಗ್ರೆಸ್ ಪಕ್ಷದ ನಾಲ್ಕು ಆಧಾರ ಸ್ತಂಭಗಳು ಎಂದು ಹೇಳಿದ್ದರು. ನಾನು ವಿದ್ಯಾರ್ಥಿ ನಾಯಕನಾಗಿ ನಂತರ ಮುಖ್ಯವಾಹಿನಿ ರಾಜಕೀಯಕ್ಕೆ ಬಂದವನು. ನನಗೆ ಸಂಘಟನೆಯ ಶಕ್ತಿಯ ಬಗ್ಗೆ ಅರಿವಿದೆ ಎಂದರು.

ಮುಕ್ತ ಸಮಾಜ ನಿರ್ಮಾಣಕ್ಕೆ: ತನ್ವೀರ್

ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಎಂದು ಹೇಳಿದರು.

2.19 ಲಕ್ಷಕ್ಕೂ ಹೆಚ್ಚು ಮಕ್ಕಳಿಗೆ ಲಸಿಕೆ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಐದು ವರ್ಷದೊಳಗಿನ ಒಟ್ಟು 2,19,521 ಮಕ್ಕಳನ್ನು ಗುರುತಿಸಿ ಎಲ್ಲರಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಜಿಲ್ಲೆಯಾದ್ಯಂತ ಒಟ್ಟು 1,641 ಪೋಲಿಯೋ ಬೂತ್‌ಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಮೈಸೂರು ನಗರದಲ್ಲಿನ ಚಾಮುಂಡಿ ಬೆಟ್ಟ, ಅರಮನೆ ಆವರಣ ಹಾಗೂ ಮೃಗಾಲಯ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ 49 ವಿಶೇಷ ಟ್ರಾನ್ಸಿಟ್ ಪಾಯಿಂಟ್‌ಗಳನ್ನು ತೆರೆಯಲಾಗಿದೆ. ಜೂ.29 ರಿಂದ ಜು.1 ರವರೆಗೆ ಮನೆ ಮನೆಗೆ ಭೇಟಿ ನೀಡಿ ಪೋಲಿಯೋ ಲಸಿಕೆ ಹಾಕಲಾಗುವುದು. ಇದಕ್ಕಾಗಿ 821 ತಂಡಗಳನ್ನು ರಚಿಸಲಾಗಿದ್ದು, ಸುಮಾರು 7 ಲಕ್ಷಕ್ಕೂ ಅಧಿಕ ಮನೆಗಳಿಗೆ ಭೇಟಿ ನೀಡಲಾಗುವುದು. ಮೇಲ್ವಿಚಾರಣೆಗೆ 328 ಸುಪರ್ವೈಸರ್‌ಗಳನ್ನು ನೇಮಿಸಲಾಗಿದೆ. ಬಸ್ ನಿಲ್ದಾಣ ಹಾಗೂ ಚೆಕ್‌ಪೋಸ್ಟ್‌ಗಳಲ್ಲಿ ಸಂಚರಿಸುವ ಮಕ್ಕಳಿಗಾಗಿ 3 ಮೊಬೈಲ್ ತಂಡಗಳನ್ನು ನಿಯೋಜಿಸಲಾಗಿದೆ ಎಂದು ಹೇಳಿದರು.

ಹಾಡಿ ಮಕ್ಕಳಿಗೆ ಆದ್ಯತೆ: ಲಸಿಕೆ ಗುಣಮಟ್ಟ ಕಾಯ್ದುಕೊಳ್ಳಲು ಜಿಲ್ಲಾದ್ಯಂತ 168 ಐಎಲ್‌ಆರ್ ಡೀಪ್ ಫ್ರೀಜರ್ ಪಾಯಿಂಟ್‌ಗಳನ್ನು ಗುರುತಿಸಲಾಗಿದೆ. ಹಾಡಿಗಳು ಸೇರಿದಂತೆ ಒಟ್ಟು 1,396 ಹೈ–ರಿಸ್ಕ್ ಪ್ರದೇಶಗಳನ್ನು ಗುರುತಿಸಿ, ಅಲ್ಲಿನ ಮಕ್ಕಳಿಗೂ ಲಸಿಕೆ ತಲುಪಿಸಲು ವಿಶೇಷ ಆದ್ಯತೆ ನೀಡಲಾಗಿದೆ.

ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ನಗರಪಾಲಿಕೆ ಮಾಜಿ ಸದಸ್ಯ ಆರಿಫ್ ಹುಸೇನ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ, ಜಿಪಂ ಸಿಇಓ ಎಸ್.ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ನಗರ ಪೊಲೀಸ್ ಉಪ ಆಯುಕ್ತ ಸುಂದರ್ ರಾಜ್ ಮತ್ತಿತರರು ಉಪಸ್ಥಿತರಿದ್ದರು.

ತಜ್ಞ ವೈದ್ಯರಿಂದ ಸೇವೆ...

ಆರೋಗ್ಯ ಕೇಂದ್ರಗಳಲ್ಲಿ ಸೇವೆಗಾಗಿ ಎಂಬಿಬಿಎಸ್ ಪದವಿ ಪಡೆದಿರುವ ವೈದ್ಯರು, ಜಿಎನ್‌ಎಂ ತರಬೇತಿ ಹೊಂದಿರುವ ಇಬ್ಬರು ನರ್ಸಿಂಗ್ ಅಧಿಕಾರಿಗಳು ಹಾಗೂ ಒಬ್ಬರು ಲ್ಯಾಬ್ ಟೆಕ್ನಿಷಿಯನ್ ಒಳಗೊಂಡ ನುರಿತ ತಂಡವನ್ನು ಈಗಾಗಲೇ ನಿಯೋಜಿಸಲಾಗಿದೆ. ಹಾಗೆಯೇ ತಜ್ಞ ವೈದ್ಯರಿಂದ ವಾರದಲ್ಲಿ ಎರಡ್ಮೂರು ದಿನ ಸೇವೆ ನೀಡಲು ನಿಯೋಜಿಸಲಾಗುವುದು.

- ಡಾ.ಪಿ.ಸಿ.ಕುಮಾರಸ್ವಾಮಿ, ಜಿಲ್ಲಾ ಆರೋಗ್ಯಾಧಿಕಾರಿ

ಮತಾಂತರ ಪ್ರಕರಣ ಕಠಿಣ ಕಾನೂನು ಕ್ರಮಕ್ಕೆ ಮಹಿಳಾ ಬಿಜೆಪಿ ಆಗ್ರಹ



ಅನಿತಾ ಪೂವಯ್ಯ

ಮಡಿಕೇರಿ: ಕುಶಾಲನಗರದ ನಿಸರ್ಗ ಧಾಮ ವ್ಯಾಪ್ತಿಯಲ್ಲಿ ನಡೆದಿರುವ ಮತಾಂತರ ಪ್ರಕರಣದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕೆಂದು ಜಿಲ್ಲಾ ಮಹಿಳಾ ಬಿಜೆಪಿ ಒತ್ತಾಯಿಸಿದೆ. ಮಹಿಳೆ ಹಾಗೂ ಆಕೆಯ ಪುತ್ರನ ಮತಾಂತರ ಪ್ರಕರಣ ಖಂಡನೀಯವಾಗಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ಮಹಿಳಾ ಜಿಲ್ಲಾಧ್ಯಕ್ಷೆ ಅನಿತಾ ಪೂವಯ್ಯ, ಆಗ್ರಹಿಸಿದ್ದಾರೆ.

ಮತಾಂತರ ಪ್ರಕರಣವನ್ನು ವಿರೋಧಿಸಿ ಹಿಂದೂ ಸಂಘಟನೆ ವತಿಯಿಂದ ಜೂ. 30ರಂದು ಕುಶಾಲನಗರದಲ್ಲಿ ನಡೆಯುವ ಜನಾಂದೋಲನಕ್ಕೆ ಮಹಿಳಾ ಬಿಜೆಪಿ ಸಂಪೂರ್ಣ ಬೆಂಬಲವನ್ನು ನೀಡಲಿದೆ. ಅಮಾಯಕ ಹಿಂದೂ ಮಹಿಳೆಯರ ಮತಾಂತರವನ್ನು ಮತ್ತು ಹಿಂದೂಗಳ ಭಾವನೆಗೆ ಧಕ್ಕೆ ತರುವ ಯಾವುದೇ ಘಟನೆಗಳನ್ನು ಬಿಜೆಪಿ ಸಹಿಸುವುದಿಲ್ಲ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪವಿತ್ರ ಭೂಮಿ ಕಾವೇರಿ ನಾಡಿನಲ್ಲಿ ಮತಾಂತರ ಮತ್ತು ಲವ್ ಜಿಹಾದ್ ನಂಥ ವಿಷಬೀಜಗಳನ್ನು ಬಿತ್ತುತ್ತಿರುವವರನ್ನು ಪೊಲೀಸ್ ಇಲಾಖೆ ತಕ್ಷಣ ಪತ್ತೆ ಹಚ್ಚಬೇಕು. ಜಿಲ್ಲೆಯಲ್ಲಿ ಈವರೆಗೆ ನಡೆದಿರುವ ಪ್ರಕರಣಗಳ ಬಗ್ಗೆ ರಾಜ್ಯ ಗೃಹ ಇಲಾಖೆ ಉನ್ನತ ಮಟ್ಟದ ತನಿಖೆಗೆ ಆದೇಶಿಸಬೇಕು. ರಾಜ್ಯ ಸರಕಾರ ಮತಾಂತರ ಮತ್ತು ಲವ್ ಜಿಹಾದ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಶಾಸಕರಿಂದ ಪಲ್ಸ್ ಪೋಲಿಯೋಗೆ ಚಾಲನೆ



ಶಾಸಕರಾದ ಎ.ಎಸ್. ಪೊನ್ನಣ್ಣ ಮಗುವಿಗೆ ಪೋಲಿಯೋ ಹನಿ ಹಾಕುವುದರ ಮೂಲಕ ಪಲ್ಸ್ ಪೋಲಿಯೋಗೆ ಚಾಲನೆ ನೀಡಿದರು.

ಮಡಿಕೇರಿ, ಜೂ.28: ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ನೀಡುವ ಮೂಲಕ ಜಿಲ್ಲೆಯಾದ್ಯಂತ ಭಾನುವಾರ ಚಾಲನೆ ದೊರೆಯಿತು. ಶಾಸಕರಾದ ಎ.ಎಸ್. ಪೊನ್ನಣ್ಣ ವಿರಾಜಪೇಟೆ ತಮ್ಮ ಗೃಹ ಕಚೇರಿಯಲ್ಲಿ, ಡಾ.ಮಂತರ್ ಗೌಡ ಸೋಮವಾರಪೇಟೆಯ ತಾಲೂಕು ಆಸ್ಪತ್ರೆಯಲ್ಲಿ ಶಿಶುಗಳಿಗೆ ಪೋಲಿಯೋ ಹನಿ ನೀಡಿ ಸಂದೇಶ ಸಾರಿದರು.

ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ ರಾಷ್ಟ್ರ ಪೋಲಿಯೋ ಮುಕ್ತವಾಗಿದ್ದರೂ ಸಹ, ಇತರೆ ದೇಶಗಳಲ್ಲಿ ಪೋಲಿಯೋ ಪ್ರಕರಣಗಳು ಇರುವುದರಿಂದ ಹೆಚ್ಚಿನ ಎಚ್ಚರ ವಹಿಸಬೇಕಿದೆ. ಆದ್ದರಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಹನಿ ಕೊಡಿಸಬೇಕು ಎಂದರು. 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ನೀಡುವುದರಿಂದ ಮಕ್ಕಳ ಬೆಳವಣಿಗೆ ಸಂದರ್ಭದಲ್ಲಿ ಉಂಟಾಗಬಹುದಾದ ವಿಕಲತೆಯನ್ನು ತಡೆಯಬಹುದಾಗಿದೆ. ಈ ಬಗ್ಗೆ ಎಲ್ಲರಿಗೂ ಮಾಹಿತಿ ನೀಡಿ ಶಿಶುಗಳಿಗೆ ಪೋಲಿಯೋ ಹನಿ ಹಾಕಿಸಬೇಕು ಎಂದರು.

ಶಾಸಕ ಡಾ.ಮಂತರ್ ಗೌಡ ಮಾತನಾಡಿ 5 ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ 2 ಹನಿ ನೀಡುವುದರಿಂದ ಮಕ್ಕಳ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದರು.

ದೇಶ ಪೋಲಿಯೋ ಮುಕ್ತವಾಗಿದ್ದರೂ ವಿಶ್ವದ ಹಲವು ರಾಷ್ಟ್ರಗಳಲ್ಲಿ ಪೋಲಿಯೋ ಇನ್ನೂ ಜೀವಂತವಿದೆ. ಹೀಗಾಗಿ ಮತ್ತೆ ಕಾಣಿಸಿಕೊಳ್ಳುವ ಸಾಧ್ಯತೆ ಇರುವುದರಿಂದ ಈ ಬಗ್ಗೆ ಎಚ್ಚರ ವಹಿಸಬೇಕು. 5 ವರ್ಷದೊಳಗಿನ ಮಕ್ಕಳಿಗೆ ಪ್ರತಿ ಬಾರಿ ಪೋಲಿಯೋ ಲಸಿಕೆ ಹಾಕಿಸಿ, ಪೋಲಿಯೋ ನಿರ್ಮೂಲನೆಗೆ ಶ್ರಮಿಸಬೇಕಿದೆ ಎಂದರು.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಸಭಾಪತಿ ರವೀಂದ್ರ ರೈ, ಡಿಹೆಚ್‌ಒ ಡಾ. ಸತೀಶ್ ಕುಮಾರ್, ಮಾತನಾಡಿದರು.

ಜೂ.29 ಮತ್ತು 30ರಂದು ಗ್ರಾಮೀಣ ಜೂ.29ರಿಂದ ಜುಲೈ 1ರವರೆಗೆ ನಗರ ಪ್ರದೇಶದಲ್ಲಿ ಮನೆ ಮನೆಗೆ ಭೇಟಿ ನೀಡಿ ಪೋಲಿಯೋ ಲಸಿಕೆಯಿಂದ ಬಿಟ್ಟು ಹೋಗಿರುವ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುತ್ತದೆ ಎಂದು ಡಾ. ಮಧುಸೂದನ ವಿವರಿಸಿದರು. ತಾಲೂಕು ವೈದ್ಯಾಧಿಕಾರಿ ಡಾ. ಸನತ್ ಕುಮಾರ್, ಡಾ.ಯತಿರಾಜು, ಡಾ. ಇಂದೂಧರ, ರೋಟರಿ ಸಂಸ್ಥೆಯ ಮನೋಹರ್ ಕಾಮತ್, ರತನ್ ತಮ್ಮಯ್ಯ, ಡಾ.ಚಂದ್ರಶೇಖರ್, ಡಾ. ದಿವ್ಯಾ ರಾಣಿ, ಆರೋಗ್ಯ ಶಿಕ್ಷಣಾಧಿಕಾರಿ ಪಾಲಕ್ಷ, ಶ್ರೀಕಾಂತ್, ದೇವರಾಜು ಇತರರಿದ್ದರು.

ಕ್ಲೀನ್ ಕೂರ್ಗ್ ತಂಡದ ಸದಸ್ಯರಿಂದ ಸೈಕಲ್ ಜಾಥಾ ಶಾಸಕ ಎ.ಎಸ್.ಪೊನ್ನಣ್ಣರ ಭೇಟಿ



ಕ್ಲೀನ್ ಕೂರ್ಗ್ ತಂಡ ಹಮ್ಮಿಕೊಂಡಿರುವ ಸೈಕಲ್ ಜಾಥಾ ತಂಡದ ಸದಸ್ಯರು ಶಾಸಕ ಎ.ಎಸ್. ಪೊನ್ನಣ್ಣ ಅವರನ್ನು ಭೇಟಿ ಮಾಡಿದರು.

ನಾಪೋಕ್ಲು, ಜೂ.28–ಕೊಡಗಿನ ಪರಿಸರವನ್ನು ಸ್ವಚ್ಛ, ಸುಂದರ ಹಾಗೂ ಸುರಕ್ಷಿತವಾಗಿಡುವ ಉದ್ದೇಶದಿಂದ ಕ್ಲೀನ್ ಕೂರ್ಗ್ ತಂಡ ಹಮ್ಮಿಕೊಂಡಿರುವ ಸೈಕಲ್ ಜಾಥಾದ ಅಂಗವಾಗಿ ತಂಡದ ಸದಸ್ಯರು ಶಾಸಕ ಎ.ಎಸ್. ಪೊನ್ನಣ್ಣರ ಗೃಹ ಕಚೇರಿಗೆ ಭೇಟಿ ನೀಡಿ ಅಭಿಯಾನದ ಉದ್ದೇಶ ಮತ್ತು ಕಾರ್ಯ ಯೋಜನೆ ಕುರಿತು ವಿವರಿಸಿದರು.

ಶಾಸಕರು ತಂಡದ ಪರಿಸರ ಕಾಳಜಿ ಹಾಗೂ ಸಾಮಾಜಿಕ ಬದ್ಧತೆಯನ್ನು ಶ್ಲಾಘಿಸಿ, 'ಸ್ವಚ್ಛ ಕೊಡಗು' ಎಂಬ ಸಂಕಲ್ಪವನ್ನು ಸಾಕಾರ ಗೊಳಿಸಲು ಪ್ರತಿ ಯೊಬ್ಬ ನಾಗರಿಕರ ಸಹ ಭಾಗಿತ್ವ ಅಗತ್ಯವೆಂದು ಅಭಿಪ್ರಾಯಪಟ್ಟರು. ಕ್ಲೀನ್ ಕೂರ್ಗ್ ತಂಡದ ಈ ಜನಜಾಗೃತಿ ಅಭಿಯಾನಕ್ಕೆ ತಮ್ಮ ಸಂಪೂರ್ಣ ಬೆಂಬಲ ಮತ್ತು ಶುಭ ಹಾರೈಕೆಗಳನ್ನು ತಿಳಿಸಿ, ಪರಿಸರ ಸಂರಕ್ಷಣೆಯಂತಹ ಉತ್ತಮ ಕಾರ್ಯಗಳು ನಿರಂತರವಾಗಿ ನಡೆಯಬೇಕೆಂದು ಆಶಿಸಿದರು.

ತಂಡದ ಸದಸ್ಯರಾದ ಬಡುವಂಡ ಅರುಣ್ ಅಪ್ಪಚ್ಚು, ಅಚ್ಚಕಾಳಿರ ಅಶ್ವಥ್, ಕಟ್ಟೇರ ಗೌತಮ್, ಐಚೆಟ್ಟಿರ ಸುಬ್ಬಯ್ಯ, ಚಂಗಂಡ ಮುತ್ತಣ್ಣ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ನೋಟ್ ಬುಕ್, ಲೇಖನ, ಕೊಡೆಗಳ ವಿತರಣೆ



ಬಡ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಲೇಖನ ಸಾಮಗ್ರಿಗಳು ಮತ್ತು ಕೊಡೆಗಳನ್ನು ವಿತರಿಸಲಾಯಿತು.

ವಿರಾಜಪೇಟೆ: ವಿ.ಬಾಡಗ ಗ್ರಾಮದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಡ ವಿದ್ಯಾರ್ಥಿಗಳಿಗೆ ನೋಟ್ ಬುಕ್ ಹಾಗೂ ಲೇಖನ ಸಾಮಗ್ರಿಗಳು ಮತ್ತು ಕೊಡೆಗಳನ್ನು ವಿತರಿಸಲಾಯಿತು.

ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೇ.90 ರಷ್ಟು ಬುಡಕಟ್ಟು ಜನಾಂಗಕ್ಕೆ ಸೇರಿದ ಜೇನು ಕುರುಬ ಮತ್ತು ಎರವ ಜನಾಂಗದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ಪೋಷಕರ ಬಡತನದ ಹಿನ್ನೆಲೆಯಿಂದಾಗಿ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರು ದಾನಿಗಳಾದ ಕಂಜಿತಂಡ ಗಿಣಿಮೊಣ್ಣಪ್ಪ ರವರ ಪುತ್ರ ಕಂಜಿತಂಡ ಪೂವಣ್ಣ ಮತ್ತು ದೇಚಿ ಪೂವಣ್ಣ ದಂಪತಿಗಳು ಎಲ್ಲಾ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಮತ್ತು ಲೇಖನ ಸಾಮಗ್ರಿಗಳೊಂದಿಗೆ ಸಿಹಿ ಹಂಚಿ ವಿಶೇಷ ಭೋಜನದ ವ್ಯವಸ್ಥೆಯನ್ನು ಮಾಡಿದ್ದರು.

ನಂಜುಂಡಮಾಡ ನರೇಂದ್ರ ಕಾವೇರಿ ನರೇಂದ್ರ ದಂಪತಿ, ಮುಖ್ಯ ಶಿಕ್ಷಕಿ ಕೆ.ಸಿ.ಗೀತಾಂಜಲಿ, ಸಹ ಶಿಕ್ಷಕಿ ಕಾವೇರಮ್ಮ, ಶಾಲಾಭಿವೃದ್ಧಿ ಸಮಿತಿ ಸದಸ್ಯರು, ಹಿರಿಯ ವಿದ್ಯಾರ್ಥಿಗಳ ಸಂಘ, ಮತ್ತು ಶಿಕ್ಷಕವರ್ಗ ಸಿಬ್ಬಂದಿಗಳು ಹಾಜರಿದ್ದರು.

ನಗರ ಮಹಿಳಾ ಕಾಂಗ್ರೆಸ್‌ನಿಂದ ಪರಿಸರ ದಿನಾಚರಣೆ



ನಗರ ಮಹಿಳಾ ಕಾಂಗ್ರೆಸ್ ಕಾರ್ಯಕರ್ತೆಯರು ಮಹಿಳಾ ಪ್ರಥಮ ದರ್ಜೆ ಕಾಲೇಜ್‌ನಲ್ಲಿ ಪರಿಸರ ದಿನಾಚರಣೆಯನ್ನಾಚರಿಸಿದರು.

ಮಡಿಕೇರಿ, ಜೂ.28–ನಗರ ಮಹಿಳಾ ಕಾಂಗ್ರೆಸ್ ವತಿಯಿಂದ ಪರಿಸರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ನಗರದ ಮಹಿಳಾ ಪ್ರಥಮ ದರ್ಜೆ ಕಾಲೇಜ್‌ನಲ್ಲಿ ಸಸಿಗಳನ್ನು ನೆಟ್ಟು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ನಗರ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶಶಿಕಲಾ, ಪರಿಸರ ಉಳಿದರೆ ಮಾತ್ರ ನಾವು ಉಳಿಯಲು ಸಾಧ್ಯ. ಮುಂದಿನ ಪೀಳಿಗೆಯ ಸುಂದರ ಭವಿಷ್ಯಕ್ಕಾಗಿ ಪರಿಸರ ರಕ್ಷಣೆಯ ಹೊಣೆ ನಮ್ಮೆಲ್ಲರ ಮೇಲಿದೆ ಎಂದರು.

ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪವಿತ್ರ ಎಸ್., ನಗರ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್ ಆಚಾರ್ಯ, ಪ್ರಧಾನ ಕಾರ್ಯದರ್ಶಿ ಚೇತನ್ ಕೋಚನ, ನಗರ ಸಭೆ ಮಾಜಿ ಅಧ್ಯಕ್ಷೆ ಜುಲೇಕಾಬಿ, ಉಪಾಧ್ಯಕ್ಷೆ ಲೀಲಾ ಶೇಷಮ್ಮ, ಹೊಟ್ಟೆಯಂಡ ಫ್ಯಾನ್ಸಿ ಪಾರ್ವತಿ, ಮೂಡ ಸದಸ್ಯೆ ಮಿನಾಜ್ ಪ್ರವೀಣ್, ಪ್ರಮುಖರಾದ ಧನಲಕ್ಷ್ಮಿ ಪನ್ನ, ಹರಿಣಾಕ್ಷಿ, ರೇವತಿ ರಮೇಶ್, ಪ್ರೇಮ ನಿಂಗಪ್ಪ, ಪ್ರೇಮ ಕೃಷ್ಣಪ್ಪ, ವಿಮಲ, ರೈಸ ಖಾನ್, ತಾಜುನ್ನಿಸ, ರೀನಾ, ಶೈನಾಜ್, ಅರ್ಜುನ್ ಸೂರ್ಯ, ಪ್ರಾಂಶುಪಾಲ ಹೆಚ್. ವಿಮಲಾ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

ಸುಸ್ಥಿರ ಅಭಿವೃದ್ಧಿಗೆ ಮತ್ತಷ್ಟು ಒತ್ತು ನೀಡುವುದು ಅಗತ್ಯ

ಕೆಂಪೇಗೌಡರ ಜಯಂತಿಯಲ್ಲಿ ಶಾಸಕ ಡಾ.ಮಂತರ್ ಗೌಡ ಅಭಿಮತ



ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಶಾಸಕರು ಪ್ರಶಸ್ತಿ ಪತ್ರ ವಿತರಿಸಿದರು.

ಮಡಿಕೇರಿ: ಆದರ್ಶ ಆಡಳಿತಗಾರ, ನಾಡಪ್ರಭು ಕೆಂಪೇಗೌಡರು ಬೆಂಗಳೂರನ್ನು ಮಾದರಿ ನಗರವನ್ನಾಗಿ ನಿರ್ಮಿಸಿದ್ದರು, ಆದರೆ ಇಂದು ಬೆಂಗಳೂರು ಮಿತಿಮೀರಿ ಬೆಳೆದಿದ್ದು, ಸುಸ್ಥಿರ ಅಭಿವೃದ್ಧಿಗೆ ಮತ್ತಷ್ಟು ಒತ್ತು ನೀಡಬೇಕಿದೆ ಎಂದು ಶಾಸಕ ಡಾ.ಮಂತರ್ ಗೌಡ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಗಾಂಧಿ ಭವನದಲ್ಲಿ ಶನಿವಾರ ನಡೆದ ಕೆಂಪೇಗೌಡರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅವರು, ರಾಜ್ಯದ ಮಲೆನಾಡು ಭಾಗದಲ್ಲಿ, ಅದರಲ್ಲೂ ಕೊಡಗು ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾದಲ್ಲಿ ಇಡೀ ನಾಡಿಗೆ ಹಾಗೂ ದಕ್ಷಿಣ ಭಾರತಕ್ಕೆ ಸುಭಿಕ್ಷೆ ತರಲಿದೆ. ಆದ್ದರಿಂದ ಬೆಂಗಳೂರಿನ ಅಭಿವೃದ್ಧಿಯಲ್ಲಿ ಶೇ.1ರಷ್ಟು ಪಾಲನ್ನು ಜಿಲ್ಲೆಗೆ ನೀಡುವಂತೆ ನಗರ ಅಭಿವೃದ್ಧಿ ಸಚಿವರ ಜತೆ ಚರ್ಚಿಸಲಾಗಿದೆ. ಎಂದು ಹೇಳಿದರು.

ಕುಶಾಲನಗರದಲ್ಲಿ ಒಕ್ಕಲಿಗರ ಸಂಘಕ್ಕೆ ಜಾಗ ಒದಗಿಸುವುದು ಮತ್ತು ಭವನ ನಿರ್ಮಾಣಕ್ಕೆ ಪ್ರಯತ್ನಿಸಲಾಗುವುದು, ಜತೆಗೆ ಸೋಮವಾರಪೇಟೆಯ ಒಕ್ಕಲಿಗರ ಸಂಘಕ್ಕೆ 50 ಲಕ್ಷ ರೂ.ಅನುದಾನ, ಹಾಗೆಯೇ ಕುವೆಂಪು ಶಾಲೆ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಲಾಗುವುದು, ಜತೆಗೆ ಕೊಡಗು ಗೌಡ ವಿದ್ಯಾಸಂಘಕ್ಕೆ 25 ಲಕ್ಷ ರೂ ಬಿಡುಗಡೆ ಮಾಡಲಾಗುವುದು, ಹಾಗೆಯೇ ಗುಡ್ಡೆಮನೆ ಅಪ್ಪಯ್ಯ ಗೌಡರ ಪ್ರತಿಮೆ ಬಳಿ ಉದ್ಯಾನವನ ಅಭಿವೃದ್ಧಿಗೆ ಅನುದಾನ ನೀಡಲಾಗುವುದು ಎಂದರು.

ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಎಸ್.ಎಂ.ಚಂಗಪ್ಪ, ಜಿಲ್ಲಾ ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಆನಂದ್ ಕರಂದ್ಲಾಜೆ, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ಹರಪಳ್ಳಿ ರವೀಂದ್ರ, ಉಪ ವಿಭಾಗಾಧಿಕಾರಿ ನಿತಿನ್ ಚಕ್ಕಿ, ನಿವೃತ್ತ ಪ್ರಾಂಶುಪಾಲ ಸಿ.ಬಿ. ರಾಮಚಂದ್ರ, ಡಿ.ಎಸ್.ಆನಂದ, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ವಿ.ಪಿ.ಮೋಹನ್ ಮಾತನಾಡಿದರು. ಕೆಂಪೇಗೌಡರ ಜೀವನ ಚರಿತ್ರೆ ಕುರಿತು ಪ್ರೌಢಶಾಲೆ ಹಾಗೂ ಪಿಯು ಕಾಲೇಜಿನ ವಿದ್ಯಾರ್ಥಿಗಳಿಗೆ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರವನ್ನು ಶಾಸಕರು ವಿತರಿಸಿದರು. ಸರ್ವೋದಯ ಸಮಿತಿ ಜಿಲ್ಲಾ ಅಧ್ಯಕ್ಷ ಅಂಬೆಕಲ್ಲು ಕುಶಾಲಪ್ಪ, ಶಾಂತಳ್ಳಿ ಲೋಕೇಶ್, ಸೂರ್ತಲೆ ಸೋಮಣ್ಣ, ಗಣಿ ಪ್ರಸಾದ್, ವಿ.ಪಿ.ಸುರೇಶ್, ಅನಿಲ್ ಎಚ್.ಟಿ, ಶಿರಸ್ತೇದಾರ ದೇವರಾಜು ಇದ್ದರು.

ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಗೆ ಅಗತ್ಯ ಕಾಮಗಾರಿ



ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಭೂಮಿಪೂಜೆ ನೆರವೇರಿಸಿದರು

ಗುಂಡ್ಲುಪೇಟೆ ಜೂ.28(ಸೋಮ್.ಜಿ)–ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ತಾಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಗೆ ಅಗತ್ಯವಾದ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಹೇಳಿದರು.

ತಾಲೂಕಿನ ತೆರಕಣಾಂಬಿ ಗ್ರಾಮದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ 1.5 ಕೋಟಿ ವೆಚ್ಚದಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ತಾವು ಶಾಸಕರಾಗಿ ಆಯ್ಕೆಯಾದ ನಂತರ ಸರ್ಕಾರದಿಂದ 21 ಕೋಟಿ ಅನುದಾನ ತಂದು ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿ ಕಾಮಗಾರಿಗೆ ಬಳಕೆ ಮಾಡಲಾಗುತ್ತಿದೆ. ಈಗಾಗಲೇ ಬೇಗೂರು ಗ್ರಾಮದಲ್ಲಿ ಸುಸಜ್ಜಿತ ಹತ್ತಿಮಾರುಕಟ್ಟೆ ನಿರ್ಮಿಸಲಾಗಿದೆ. ಪ್ರತಿದಿನವೂ ಕೋಟ್ಯಾಂತರ ರೂಪಾಯಿ ವಹಿವಾಟು ನಡೆಸುವ ಪಟ್ಟಣದ ಎಪಿಎಂಸಿಯಲ್ಲಿ ರಸ್ತೆಗಳು ಹಾಳಾಗಿದ್ದ ಹಿನ್ನೆಲೆಯಲ್ಲಿ 3 ಕೋಟಿ ವೆಚ್ಚದಲ್ಲಿ ಹೊಸದಾಗಿ ರಸ್ತೆ ಹಾಗೂ ಚರಂಡಿಯನ್ನು ನಿರ್ಮಾಣ ಕಾಮಗಾರಿಗೆ ಸದ್ಯ ಭೂಮಿಪೂಜೆ ಮಾಡಲಾಗಿದೆ ಎಂದು ಹೇಳಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷ ಆರ್.ಎಸ್.ನಾಗರಾಜು, ನಿರ್ದೇಶಕರಾದ ಪಿ.ಮಹದೇವಪ್ಪ, ಮಾಡ್ರಹಳ್ಳಿ ಮಹದೇವಪ್ಪ ಸೋಮಹಳ್ಳಿ ಶಿವನಾಗಪ್ಪ ವಿರೂಪಾಕ್ಷ, ಕಾರ್ಯದರ್ಶಿ ಶ್ರೀಧರ್, ಚಾಮುಲ್ ನಿರ್ದೇಶಕ ಎಚ್.ಎಸ್.ನಂಜುಂಡ ಪ್ರಸಾದ್, ಮುಖಂಡರಾದ ಮೃತ್ಯುಂಜಯಪ್ಪ, ತಾಪಂ ಮಾಜಿ ಅಧ್ಯಕ್ಷ ಎಚ್.ಎನ್.ಬಸವ ರಾಜು, ಗಾ.ಪಂ. ಮಾಜಿ ಅಧ್ಯಕ್ಷ ನಾರಾಯಣನಾಯ್ಕ, ಮನು, ಪರಮೇಶ್ವರಪ್ಪ, ಚಂದ್ರು ಸೇರಿದಂತೆ ಹಲವರು ಇದ್ದರು.

ಮಕ್ಕಳ ಆರೋಗ್ಯ ರಕ್ಷಣೆಗಾಗಿ ತಪ್ಪದೇ ಪೋಲಿಯೋ ಹನಿ ಹಾಕಿಸಿ



ಜಿ. ಪಂ. ಸಿಇಓ ಮೋನಾ ರೋತ್ ಮಗುವಿಗೆ ಲಸಿಕೆ ಹಾಕುವುದರ ಮೂಲಕ ಚಾಲನೆ ನೀಡಿದರು.

ಚಾಮರಾಜನಗರ, ಜೂ.28–ಮಕ್ಕಳನ್ನು ಮಾರಕವಾಗಿ ಕಾಡುವ ಪೋಲಿಯೋ ರೋಗದಿಂದ ರಕ್ಷಿಸಿಕೊಳ್ಳಲು ಪ್ರತಿಯೊಬ್ಬ ನಾಗರಿಕರು ತಮ್ಮ ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿ ಹಾಕಿಸುವಂತೆ ಜಿ. ಪಂ. ಸಿಇಓ ಮೋನಾ ರೋತ್ ಸಲಹೆ ಮಾಡಿದರು.

ತಾಲೂಕಿನ ಕುದೇರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಅವರಣದಲ್ಲಿಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಜಿಲ್ಲೆಯಾದ್ಯಂತ ಮೂರು ದಿನಗಳ ಕಾಲ ಆಯೋಜಿಸಲಾಗಿರುವ 'ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ'ಕ್ಕೆ ಚಾಲನೆ ನೀಡಿ, ಪಲ್ಸ್ ಪೋಲಿಯೋ ಅಭಿಯಾನವನ್ನು ಭಾರತದಲ್ಲಿ 1995ರಿಂದ ನಿರಂತರವಾಗಿ ರಾಷ್ಟ್ರೀಯ ಕಾರ್ಯಕ್ರಮವಾಗಿ ಆಯೋಜಿಸಲಾಗುತ್ತಿದೆ. ಎಲ್ಲಾ ಇಲಾಖೆಗಳ ಸಹಕಾರದಿಂದ ಜಿಲ್ಲೆಯಲ್ಲಿಯೂ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪೋಲಿಯೋ ಹನಿಯಿಂದ ಮಕ್ಕಳ ಶಾಶ್ವತ ಅಂಗವಿಕಲತೆ ತಡೆಯಬಹುದಾಗಿದೆ. ಸಿ.ಇ.ಓ ಮೋನಾ ರೋತ್ ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಇಲಾಖೆಯ ಮೈಸೂರು ವಿಭಾಗೀಯ ಕಚೇರಿಯ ಉಪ ನಿರ್ದೇಶಕ ಡಾ. ಮಲ್ಲಿಕಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಚಿದಂಬರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ. ರಾಜೇಶ್‌ಕುಮಾರ್, ತಾಲೂಕು ವೈದ್ಯಾಧಿಕಾರಿ ಡಾ.ಶ್ರೀನಿವಾಸ್, ಡಾ. ಪೂರ್ಣಿಮ, ವಾರ್ತಾ ಇಲಾಖೆಯ ಸಹಾಯಕ ಸುರೇಶ್ ಕುಮಾರ್, ಆರೋಗ್ಯ ಇಲಾಖೆಯ ಲೆಕ್ಕಪತ್ರ ವ್ಯವಸ್ಥಾಪಕ ಹೇಮಂತ್ ಕುಮಾರ್, ಗ್ರಾಪಂ ಅಭಿವೃದ್ಧಿ ಅಧಿಕಾರಿ ಗೋವಿಂದಯ್ಯ, ಅಂಗನವಾಡಿ ಮೇಲ್ವಿಚಾರಕಿ ಕಲಾವತಿ, ಗ್ರಾಮದ ಮುಖಂಡ ಆಶೋಕ್, ಮಧು, ರವಿ, ಪುಟ್ಟ ಶೆಟ್ಟಿ ಆರೋಗ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.

ಪತ್ರಕರ್ತರ ದತ್ತಿಪ್ರಶಸ್ತಿ ನಿಧಿಗೆ 1.10 ಲಕ್ಷ ರೂ ಚೆಕ್ ವಿತರಣೆ

ಡಿಯುಡಬ್ಲ್ಯೂಜೆ ಕಾರ್ಯಕ್ಕೆ ಎನ್.ಮಹೇಶ್ ಮೆಚ್ಚುಗೆ



ಮಾಜಿ ಸಚಿವ ಎನ್.ಮಹೇಶ್, ಗುತ್ತಿಗೆದಾರ ಹೊಸೂರು ಜಗದೀಶ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ದತ್ತಿಪ್ರಶಸ್ತಿ ನಿಧಿಗೆ ಚೆಕ್ ನೀಡಿದರು.

ಚಾಮರಾಜನಗರ: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ದತ್ತಿ ಪ್ರಶಸ್ತಿ ನಿಧಿಗೆ ಮಾಜಿ ಸಚಿವ ಎನ್.ಮಹೇಶ್ ತಮ್ಮ ಪತ್ನಿ ವಿಜಯಮಹೇಶ್ ಹೆಸರಿನಲ್ಲಿ ಹಾಗೂ ಗುತ್ತಿಗೆದಾರ ಹೊಸೂರು ಜಗದೀಶ್ ತಂದೆ ಸಿದ್ದಲಿಂಗದೇವರು ಹೆಸರಿನಲ್ಲಿ ತಲಾ 1.10 ಲಕ್ಷ ರೂ.ಗಳ ಚೆಕನ್ನು ಸಂಘಕ್ಕೆ ನೀಡಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಸಂಘದ ಅಧ್ಯಕ್ಷ ಸಿದ್ದಲಿಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಪ್ರಸಾದ್ ಎಸ್ ಲಕ್ಕೂರು ಅವರಿಗೆ ಚೆಕ್‌ಗಳನ್ನು ನೀಡಿದರು. ಸಂಘದಿಂದ ಅವರನ್ನು ಸನ್ಮಾನಿಸಲಾಯಿತು.

ಚೆಕ್ ವಿತರಿಸಿದ ಮಾಜಿ ಸಚಿವ ಎನ್. ಮಹೇಶ್ ಮಾತನಾಡಿ, ಪ್ರತಿವರ್ಷವೂ ತಮ್ಮ ಧರ್ಮಪತ್ನಿ ವಿಜಯಮಹೇಶ್ ಅವರನ್ನು ನೆನಪಿಸುವ ಕೆಲಸವನ್ನು ಪತ್ರಿಕಾ ಗೆಳೆಯರು ಮಾಡುತ್ತಿದ್ದೀರಿ. ನೋಡಲಿಕ್ಕೆ ಪ್ರಶಸ್ತಿ ಸಣ್ಣದು ಅನ್ನಿಸುತ್ತದೆ. ಆದರೆ ಅದರ ವ್ಯಾಪ್ತಿ ಬಹಳ ದೊಡ್ಡದು ಮಹತ್ತರ ತೀರ್ಮಾನ ಮಾಡಿದ್ದೀರಿ. ಅದು ಯಶಸ್ಸಿನ ಹಂತಕ್ಕೆ ಬಂದಿದೆ. ಪ್ರಶಸ್ತಿ 10ಸಾವಿರದ ಜೊತೆಗೆ ದತ್ತಿ ಪ್ರಶಸ್ತಿಗೂ ಲಕ್ಷ ರೂ ಚೆಕ್ ಕೊಡುತ್ತಿದ್ದೇನೆ ಎಂದು ತಿಳಿಸಿದರು.

ಗುತ್ತಿಗೆದಾರ ಹೊಸೂರು ಜಗದೀಶ್ ಮಾತನಾಡಿ ನಾನೂ ಕೂಡ ತಮ್ಮ ತಂದೆ ಸಿದ್ದಲಿಂಗದೇವರುರವರ ಹೆಸರಿನಲ್ಲಿ ಪ್ರತಿ ವರ್ಷ ಪ್ರಶಸ್ತಿ ನೀಡುತ್ತಾ ಬರುತ್ತಿದ್ದು, ಈ ಬಾರಿ 1.10 ಲಕ್ಷ ರೂ. ದತ್ತಿ ಪ್ರಶಸ್ತಿ ನಿಧಿಗೆ ನೀಡಿದ್ದೇನೆ. ಎಲ್ಲ ಪತ್ರಕರ್ತರಿಗೂ ಒಳ್ಳೆಯದಾಗಲಿ ಎಂದು ಪತ್ರಿಕಾ ಸ್ನೇಹಿತರಿಗೆ ಆಭಾರಿಯಾಗಿರುತ್ತೇನೆ ಎಂದರು

ಸಂಘದ ಪ್ರಧಾನ ಕಾರ್ಯದರ್ಶಿ ಪ್ರಸಾದ್ ಎಸ್.ಲಕ್ಕೂರು, ರಾಜ್ಯ ಕಾರ್ಯಕಾರಿಣಿ ಸದಸ್ಯ ಮಹೇಂದ್ರ, ಖಜಾಂಚಿ ಪುಟ್ಟರಾಜು, ಹಾಜರಿದ್ದರು.

ಪತ್ರಕರ್ತರ ಒತ್ತಡ ನಿವಾರಣೆಗೆ ಕ್ರೀಡೆ ಸಹಕಾರಿ



ಗುಂಡು ಎಸೆಯುವ ಮೂಲಕ ಜಿ.ಪಂ.ಸಿಇಓ ಮೋನಾರೋತ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

ಚಾಮರಾಜನಗರ: ಸದಾ ಒತ್ತಡದಲ್ಲಿರುವ ಪತ್ರಕರ್ತರು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಕ್ರೀಡಾಕೂಟ ಸಹಕಾರಿ ಎಂದು ಜಿ.ಪಂ ಸಿಇಓ ಮೋನಾರೋತ್ ಹೇಳಿದರು.

ನಗರದ ರಾಮಸಮುದ್ರ ದೀನಬಂಧು ಶಾಲಾವರಣದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ಪತ್ರಿಕಾ ದಿನಾಚರಣೆ ಪ್ರಯುಕ್ತ ಭಾನುವಾರ ಸಂಘದ ಸದಸ್ಯರು, ಕುಟುಂಬದವರಿಗೆ ಆಯೋಜಿಸಿದ್ದ ವಾರ್ಷಿಕ ಕ್ರೀಡಾಕೂಟಕ್ಕೆ ಗುಂಡು ಎಸೆಯುವ ಮೂಲಕ ಚಾಲನೆ ನೀಡಿ, ಮಾಧ್ಯಮ ಕ್ಷೇತ್ರಕ್ಕೆ ಸಮಾಜದಲ್ಲಿ ತನ್ನದೆ ಆದ ಘನತೆ ಗೌರವವಿದೆ. ಇಂಥ ರಂಗದಲ್ಲಿ ಕೆಲಸ ಮಾಡುವ ಪತ್ರಕರ್ತರು ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಬೇಕು. ಹೀಗಾಗಿ ಕ್ರೀಡಾಕೂಟದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದರು.

ಡಿವೈಎಸ್‌ಪಿ ಸ್ನೇಹರಾಜ್ ಮಾತನಾಡಿ, ಜೀವನದಲ್ಲಿ ಏಳುಬೀಳು ಬಹಳ ಸಹಜ. ಸೋತಾಗ ಮತ್ತೆ ಗೆಲ್ಲೋದು ಹೇಗೆ ಎಂಬುದನ್ನು ಕ್ರೀಡೆ ಹೇಳಿಕೊಡುತ್ತದೆ. ಅದಕ್ಕೋಸ್ಕರ ಮಕ್ಕಳಲ್ಲಿ ಕ್ರೀಡಾ ಸ್ಫೂರ್ತಿಯನ್ನು ಸೇರಿಸಬೇಕಾಗುತ್ತದೆ. ನಾವು ಸಣ್ಣ ವಯಸ್ಸಿನಲ್ಲಿ ಸಾಂಸ್ಕೃತಿಕವಾಗಿ ಆಡುತಿದ್ದ ಹಳಗುಳಿ ಮನೆ ಕವಡೆ ಆಟ ನಶಿಸಿಹೋಗಿದೆ. ಮಕ್ಕಳು ಮಣ್ಣಿನಲ್ಲಿ ಬಿದ್ದು ಆಟ ಆಡುವುದನ್ನು ನೋಡೆ ಇಲ್ಲ. ಎಲ್ಲರೂ ಫೋನ್, ಟಿವಿ ಆಕರ್ಷಣೆಗೆ ಒಳಗಾಗಿದ್ದಾರೆ. ಹಾಗಾಗಿ ನಮ್ಮ ಹಂತದಲ್ಲಿ ಬದಲಾವಣೆ ತರೋಣ ಮಕ್ಕಳನ್ನು ಟಿವಿ, ಮೊಬೈಲ್‌ಗೆ ಸೀಮಿತ ಮಾಡದೆ ಮಣ್ಣಿನಲ್ಲಿ ಆಟ ಆಡಲು ಬಿಡೋಣ. ಮಕ್ಕಳ ಬಾಲ್ಯವನ್ನು ನಾವು ಕಿತ್ತುಕೊಳ್ಳುವುದು ಬೇಡ ಎಂದರು.

ದೀನಬಂಧು ಟ್ರಸ್ಟ್ ಗೌರವ ಕಾರ್ಯದರ್ಶಿ ಜಿ.ಎಸ್.ಜಯದೇವ್ ಮಾತನಾಡಿ, ನಿಜವಾದ ಅಭಿವೃದ್ಧಿ ಕಾರ್ಯ ಎಂದರೆ ಪ್ರತಿಯೊಬ್ಬರೂ ತಮ್ಮ ತಮ್ಮ ಕುಟುಂಬದೊಂದಿಗೆ ನೆಮ್ಮದಿಯಿಂದ ಇರಿ. ಸಂತೋಷವಾಗಿರಿ. ಆಗ ನಿಮ್ಮ ಮನಸ್ಸು ಉಲ್ಲಾಸದಿಂದ ಕೆಲಸ ಮಾಡಲು ಸಾಧ್ಯ, ಒತ್ತಡದಿಂದ ಹೊರಬರುವುದಕ್ಕೆ ಕ್ರೀಡೆಯೂ ಬಹಳ ಒಳ್ಳೆಯ ಸಾಧನ ಎಂದರು.

ಅಧ್ಯಕ್ಷ ಆರ್.ಎನ್.ಸಿದ್ದಲಿಂಗ ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಘದ ರಾಜ್ಯ ಪರಿಷತ್ ಸದಸ್ಯ ಮಹೇಂದ್ರ, ಪ್ರಧಾನ ಕಾರ್ಯದರ್ಶಿ ಪ್ರಸಾದ್ ಎಸ್.ಲಕ್ಕೂರು, ಖಜಾಂಚಿ ಆರ್.ಸಿ. ಪುಟ್ಟರಾಜು, ಕ್ರೀಡಾಪಟು ವಿ. ಶ್ರೀನಿವಾಸ ಪ್ರಸಾದ್ ಹಾಗೂ ಪತ್ರಕರ್ತರು, ಕುಟುಂಬದವರು ಭಾಗವಹಿಸಿದ್ದರು.

ಮಹಿಳೆಯರು, ಮಕ್ಕಳು ಲೆಮನ್ ಅಂಡ್ ಸ್ಪೂನ್, ಬಾಲ್ ಇನ್‌ದ ಬಕೆಟ್, ಮ್ಯೂಸಿಕ್ ಚೇರ್, ಕಣ್ಣಿಗೆ ಬಟ್ಟೆ ಕಟ್ಟಿ ಮಡಕೆ ಹೊಡೆಯುವುದು, ಓಟ, ಗುಂಡು ಎಸೆತ ಆಟದಲ್ಲಿ ಸಂಭ್ರಮಿಸಿದರೆ. ಸ್ಲೋ ಬೈಕ್ ರೇಸ್‌ನಲ್ಲಿ ಪತ್ರಕರ್ತರು ಮಿಂಚಿದರು.

ಪೋಲಿಯೋ ಮುಕ್ತ ಭಾರತಕ್ಕೆ ಪ್ರತಿಯೊಬ್ಬರೂ ಶ್ರಮಿಸಿ

ಗುಂಡ್ಲುಪೇಟೆ, ಜೂ 28(ಸೋಮ್.ಜಿ)–ಪೋಲಿಯೋ ಮುಕ್ತ ಭಾರತವನ್ನು ನಿರ್ಮಿಸಲು ಪ್ರತಿಯೊಬ್ಬರೂ ಶ್ರಮಿಸುವ ಮೂಲಕ ಸಹಕಾರ ನೀಡಬೇಕೆಂದು ಪುರಸಭೆ ಮುಖ್ಯಾಧಿಕಾರಿ ಶರವಣ ಹೇಳಿದರು.

ಪಟ್ಟಣದ ಪಲ್ಸ್ ಪೋಲಿಯೋ ಲಸಿಕಾ ಕೇಂದ್ರಕ್ಕೆ ಭೇಟಿ ನೀಡಿ ಮಗುವಿಗೆ ಪೋಲಿಯೋ ಹನಿ ಹಾಕುವುದರ ಮೂಲಕ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಾಧಿಕಾರಿ ಶರವಣ ಪೋಲಿಯೋ ವೈರಸ್ ದಾಳಿಯಿಂದ ಮಕ್ಕಳನ್ನು ರಕ್ಷಿಸಲು ಮತ್ತು ಅವರಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಈ ಲಸಿಕೆ ಅತ್ಯಗತ್ಯ. ಪೋಷಕರು ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸದೆ ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿಗಳನ್ನು ಹಾಕಿಸಬೇಕು, ಎಂದು ಹೇಳಿದರು

ಮನೆ ಮನೆಗೆ ಭೇಟಿ: ಇಂದು ಪ್ರಮುಖ ಕೇಂದ್ರಗಳಲ್ಲಿ ಲಸಿಕೆ ನೀಡಲಾಗುತ್ತಿದ್ದು, ಇಂದಿನಿಂದ ಮೂರು ದಿನಗಳ ಕಾಲ ಲಸಿಕಾ ಕಾರ್ಯಕರ್ತರ ತಂಡಗಳು ಪ್ರತಿಯೊಂದು ಮನೆ ಮನೆಗೂ ಭೇಟಿ ನೀಡಲಿವೆ. ಎಂದರು. ಆರೋಗ್ಯ ನಿರೀಕ್ಷಕರಾದ ಪರಮೇಶ್, ಸಿದ್ಧರಾಜು, ಮೂರ್ತಿ ಹಾಗೂ ಪುರಸಭೆಯ ಸಿಬ್ಬಂದಿವರ್ಗದವರು ಜೊತೆಯಲ್ಲಿದ್ದರು.

ವಿಶ್ವಕರಾಟೆ ದಿನ: ಗಮನ ಸೆಳೆದ ಜಾಥಾ, ಕರಾಟೆ ಪ್ರದರ್ಶನ



ನಗರದಲ್ಲಿ ಜಾಥಾ, ಕರಾಟೆ ಪ್ರದರ್ಶನ ನಡೆಯಿತು.

ಚಾಮರಾಜನಗರ: ವಿಶ್ವ ಕರಾಟೆ ದಿನದ ಅಂಗವಾಗಿ ಜಿಲ್ಲಾ ಕರಾಟೆ ಅಸೋಸಿಯೇಷನ್ ವತಿಯಿಂದ ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದಿಂದ ಹೊರಟ ಜಾಥಾವು ರಥದ ಬೀದಿ, ವೀರಭದ್ರೇಶ್ವರ ದೇವಸ್ಥಾನ, ದೊಡ್ಡರಸನಕೊಳದ ರಸ್ತೆ ಮೂಲಕ ಅಂಬೇಡ್ಕರ್ ಕ್ರೀಡಾಂಗಣದವರೆಗೆ ಕಾಲ್ನಡಿಗೆ ಜಾಥಾ, ಕರಾಟೆ ಪ್ರದರ್ಶನ ನಡೆಯಿತು.

ಚಾಮರಾಜೇಶ್ವರ ದೇವಸ್ಥಾನದ ಆವರಣದಿಂದ ಹೊರಟ ಜಾಥಾಕ್ಕೆ ನಗರಸಭಾ ಹಿರಿಯ ಆರೋಗ್ಯ ಅಧಿಕಾರಿ ಮಂಜುನಾಥ್ ಚಾಲನೆ ನೀಡಿ , ಕರಾಟೆ ಕಲೆಯು ಕೇವಲ ಒಂದು ಆತ್ಮರಕ್ಷಣೆಯ ತಂತ್ರವಲ್ಲ; ಇದು ದೈಹಿಕ ಸದೃಢತೆ, ತೀಕ್ಷ್ಣವಾದ ಮಾನಸಿಕ ಗಮನ, ಸ್ವಯಂ–ಶಿಸ್ತು ಹಾಗೂ ಭಾವನಾತ್ಮಕ ಸಮತೋಲನವನ್ನು ಒದಗಿಸುತ್ತದೆ. ನಿಯಮಿತ ಅಭ್ಯಾಸವು ಸ್ನಾಯುಗಳ ಬಲವನ್ನು, ಏಕಾಗ್ರತೆಯನ್ನು ಹೆಚ್ಚಿಸಿ, ಒತ್ತಡವನ್ನು ಕಡಿಮೆ ಮಾಡುತ್ತದೆ ಎಂದರು.

ಅಧ್ಯಕ್ಷ ರಾಜೇಂದ್ರ, ಕಾರ್ಯದರ್ಶಿ ಸೆನ್ಸಾಯ್ ಗಣೇಶ ಮೂರ್ತಿ, ಗೌರವಾಧ್ಯಕ್ಷ ಸೆನ್ಸಾಯ್ ನಾಗೇಂದ್ರ, ಖಜಾಂಚಿ ಯೋಗೇಶ್, ಕರಾಟೆ ತರಬೇತಿದಾರರಾದ ರವೀಶ್, ರಮೇಶ್, ಫೈಸಾಲ್, ರಿಹಾನ್, ಶಿವರಾಜ್, ಮಯೂರ, ಮಹಮ್ಮದ್ ಮೊದಲಾದವರು ಹಾಜರಿದ್ದರು.

ಮೈಸೂರು ಮಿತ್ರ

ಸೋಮವಾರ 29 ಜೂನ್ 2026

ಸಂವಿಧಾನದಿಂದ ಎಲ್ಲಾ ವರ್ಗದವರು ಸಮಾಜದ ಮುಖ್ಯವಾಹಿನಿಗೆ

ಡಾ.ಅಂಬೇಡ್ಕರ್ ಅವರ ಮೊಮ್ಮಗ ಭೀಮರಾವ್ ಯಶವಂತರಾವ್ ಅಂಬೇಡ್ಕರ್ ಅಭಿಮತ

ಹೆಚ್.ಡಿ.ಕೋಟೆ, ಜೂ.28– ಡಾ.ಬಿ.ಆರ್. ಅಂಬೇಡ್ಕರ್ ರಚಿಸಿದ ಸಂವಿಧಾನವು ದೇಶದ ಆರ್ಥಿಕಾಭಿವೃದ್ಧಿಗೆ ಮಾತ್ರವಲ್ಲದೇ ಸಮಾಜದ ಎಲ್ಲಾ ವರ್ಗದ ಜನರನ್ನು ಮುಖ್ಯವಾಹಿನಿಗೆ ತಂದು ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಹಬಾಳ್ವೆ ಸ್ಥಾಪಿಸುವ ಮಹತ್ತರ ಉದ್ದೇಶ ಒಳಗೊಂಡಿದೆ ಎಂದು ಡಾ.ಅಂಬೇಡ್ಕರ್ ಅವರ ಮೊಮ್ಮಗ ಹಾಗೂ ರಾಷ್ಟ್ರೀಯ ಬೌದ್ಧ ಮಹಾಸಭಾ ಅಧ್ಯಕ್ಷ ಭೀಮರಾವ್ ಯಶವಂತರಾವ್ ಅಂಬೇಡ್ಕರ್ ತಿಳಿಸಿದರು.

ಪಟ್ಟಣದ ಜೂನಿಯರ್ ಕಾಲೇಜು ಮೈದಾನದಲ್ಲಿ ಹೆಚ್.ಡಿ.ಕೋಟೆ ತಾಲೂಕು ಆದಿ ಕರ್ನಾಟಕ (ಹೊಲಯ) ಮಹಾಸಭಾದಿಂದ ಆಯೋಜಿಸಿದ್ದ 2570ನೇ ಗೌತಮ ಬುದ್ಧ ಜಯಂತಿ, ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತ್ಯಧಿಕ ಅಂಕ ಗಳಿಸಿದ ಪ್ರತಿಭಾನ್ವಿತ ವಿದ್ಯಾರ್ಥಿಗಳ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಂವಿಧಾನದಲ್ಲಿ ಪ.ಜಾತಿ, ಪಂಗಡ ಮಾತ್ರವಲ್ಲದೇ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಅವಕಾಶ, ಸಾಮಾಜಿಕ ನ್ಯಾಯ ಮತ್ತು ಸಹಬಾಳ್ವೆಗೆ ಒತ್ತು ನೀಡುವ ಅನೇಕ ಪ್ರಗತಿಪರ ಅಂಶಗಳನ್ನು ಅಳವಡಿಸಲಾಗಿದೆ ಎಂದರು.

ಡಾ.ಅಂಬೇಡ್ಕರ್ ಅವರು 1956ರಲ್ಲಿ ನಾಗ್ಪುರದಲ್ಲಿ ತಮ್ಮ ಸಾವಿರಾರು ಅನುಯಾಯಿಗಳೊಂದಿಗೆ ಬೌದ್ಧ ಧರ್ಮ ಸ್ವೀಕರಿಸುವ ಮೂಲಕ ದೇಶದಲ್ಲಿ ಬೌದ್ಧ ಧರ್ಮದ ಪುನರುಜ್ಜೀವನಕ್ಕೆ ನಾಂದಿ ಹಾಡಿದರು. ಅವರ ಆಶಯದಂತೆ ದೇಶದ ಲಕ್ಷಾಂತರ ಜನರು ಬೌದ್ಧ ಧರ್ಮ ಸ್ವೀಕರಿಸಿದ್ದು, 1961ರ ಜನಗಣತಿಯ ಪ್ರಕಾರ ಮಹಾರಾಷ್ಟ್ರ ರಾಜ್ಯದಲ್ಲಿಯೇ 21 ಲಕ್ಷ ಮಂದಿ ಬೌದ್ಧ ಧರ್ಮ ಸ್ವೀಕರಿಸಿದ್ದರು ಎಂದು ವಿವರಿಸಿದರು.



ಕಾರ್ಯಕ್ರಮವನ್ನು ಭೀಮರಾವ್ ಯಶವಂತರಾವ್ ಅಂಬೇಡ್ಕರ್ ಉದ್ಘಾಟಿಸಿದರು.

ಅಂಬೇಡ್ಕರ್ ಅವರ ಆಶಯದಂತೆ ಎಲ್ಲರೂ ಬೌದ್ಧ ಧರ್ಮದ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಬನವಾಡಿಯಲ್ಲಿ ನಿರ್ಮಾಣವಾಗುವ ಬೌದ್ಧ ವಿಹಾರದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ದೊರೆಯುವ ವ್ಯವಸ್ಥೆ ಕಲ್ಪಿಸಲಾಗುವುದು. ಪೋಷಕರು ತಮ್ಮ ಮಕ್ಕಳನ್ನು ಅಲ್ಲಿಗೆ ದಾಖಲಿಸಿ ಉತ್ತಮ ಭವಿಷ್ಯ ರೂಪಿಸಿಕೊಡಬೇಕು ಎಂದು ಕರೆ ನೀಡಿದರು.

ಚಾಮರಾಜನಗರದ ನಳಂದ ವಿವಿ ಬಂತೆ ಬೋಧಿದತ್ತ ಮಾತನಾಡಿ, ಡಾ.ಅಂಬೇಡ್ಕರ್ ಅವರು ದಲಿತ ಸಮುದಾಯಕ್ಕೆ ಮಾತ್ರವಲ್ಲದೆ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಗೌರವಯುತ ಬದುಕಿನ ಮಾರ್ಗವನ್ನು ತೋರಿದ ಮಹಾನ್ ನಾಯಕರು ಎಂದು ಹೇಳಿದರು.

ಈ ಭಾಗದಲ್ಲಿ ದೇಶದ ಅತಿದೊಡ್ಡ ಬೌದ್ಧ ವಿಹಾರ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದ್ದು, ತಾಲೂಕಿನ ಬನವಾಡಿಯಲ್ಲಿ 75 ಎಕರೆ ಜಾಗವನ್ನು ದಾನವಾಗಿ ನೀಡಲಾಗುತ್ತಿದೆ. ಅಲ್ಲಿ ನಿರ್ಮಾಣವಾಗಲಿರುವ ಬೌದ್ಧ ವಿಹಾರವು ಧಾರ್ಮಿಕ ಕೇಂದ್ರವಾಗುವುದರ ಜೊತೆಗೆ ಶಿಕ್ಷಣ ಮತ್ತು ಸಾಮಾಜಿಕ ಪರಿವರ್ತನೆಯ ಕೇಂದ್ರವಾಗಲಿದೆ ಎಂದು ತಿಳಿಸಿದರು.

ಈ ವೇಳೆ ಅತೀ ಹೆಚ್ಚು ಅಂಕ ಪಡೆದ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಅಂಬೇಡ್ಕರ್ ಭವನದ ಆವರಣದಲ್ಲಿ ಅಂಬೇಡ್ಕರ್ ಪ್ರತಿಮೆಗೆ ಶಾಸಕ ಅನಿಲ್ ಚಿಕ್ಕಮಾದು ಅವರು ಪುಷ್ಪಾರ್ಚನೆ ನೆರವೇರಿಸಿ ಮೆರವಣಿಗೆಗೆ ಚಾಲನೆ ನೀಡಿದರು. ನಂತರ ಅಂಬೇಡ್ಕರ್ ಪ್ರತಿಮೆಯನ್ನು ಬೆಳ್ಳಿ ರಥದಲ್ಲಿಟ್ಟು ಜಾನಪದ ಕಲಾ ತಂಡಗಳೊಂದಿಗೆ ಜೂನಿಯರ್ ಕಾಲೇಜು ಮೈದಾನದವರೆಗೆ ಮೆರವಣಿಗೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಅಂತರಸಂತೆ ಬಂತೆ ಗೌತಮಿ, ಕಲ್ಯಾಣ ಬಂತೆ, ಉರಿಲಿಂಗ ಪೆದ್ದಿ ಮಠದ ಜ್ಞಾನಪ್ರಕಾಶ ಸ್ವಾಮೀಜಿ, ಆದಿ ಕರ್ನಾಟಕ ಮಹಾಸಭಾದ ತಾಲೂಕು ಅಧ್ಯಕ್ಷ ಹೆಚ್.ಡಿ.ಶಿವರಾಜು, ಮಲ್ಲಿಕಾರ್ಜುನ ಮಲ್ಲಯ್ಯ, ಬೌದ್ಧ ಮಹಾಸಭಾ ರಾಜ್ಯಾಧ್ಯಕ್ಷ ಸಿದ್ದರಾಜು, ಸೋಮೇಶ್, ಸಂದೀಪ್, ಪುಟ್ಟಮ್ಮಣಿ, ಜಯಪ್ರಕಾಶ್ ಚಿಕ್ಕಣ್ಣ, ಕೆ.ಕೃಷ್ಣ ನಾಯಕ, ಹೆಚ್.ಸಿ.ನರಸಿಂಹಮೂರ್ತಿ, ಮುದ್ದುಮಲ್ಲಯ್ಯ, ಶಿವಣ್ಣ, ವೆಂಕಟಸ್ವಾಮಿ, ಲಕ್ಷ್ಮಣ್, ಹೆಚ್.ಸಿ.ಮಂಜುನಾಥ್, ಭಾಗ್ಯಲಕ್ಷ್ಮಿ, ಶಿವಣ್ಣ, ಮರಿದೇವಯ್ಯ, ಮಹದೇವ, ಚಾ.ನಂಜುಂಡಮೂರ್ತಿ, ಪುಟ್ಟಯ್ಯ, ರಾಜಣ್ಣ, ನಂಜಪ್ಪ ರಾಜು, ಉಮೇಶ್, ಕ್ರೀಡಾಪಟು ನಾಗೇಂದ್ರ ಸೇರಿದಂತೆ ಇತರರಿದ್ದರು.

> ಸ್ವಾತಂತ್ರ್ಯ ನಂತರ ದೇಶದ ಮೊದಲ ಕಾನೂನು ಸಚಿವರಾಗಿ ಸೇವೆ ಸಲ್ಲಿಸಿದ ಡಾ.ಅಂಬೇಡ್ಕರ್ ಅವರು ಕಾರ್ಮಿಕರ ಹಕ್ಕುಗಳ ರಕ್ಷಣೆ, ನೀರಾವರಿ ಅಭಿವೃದ್ಧಿ ಹಾಗೂ ರಾಷ್ಟ್ರದ ಪ್ರಗತಿಗೆ ಪೂರಕವಾದ ಹಲವು ದೂರದೃಷ್ಟಿಯ ಯೋಜನೆಗಳನ್ನು ರೂಪಿಸಿದ್ದರು. ಉತ್ತರ ಭಾರತದ ಪ್ರಮುಖ ನದಿಗಳನ್ನು ದಕ್ಷಿಣ ಭಾರತದ ನದಿಗಳೊಂದಿಗೆ ಸಂಪರ್ಕಿಸುವ ನದಿ ಜೋಡಣೆ ಯೋಜನೆಯಂತಹ ಮಹತ್ವಾಕಾಂಕ್ಷೆಯ ಕನಸನ್ನು ಹೊಂದಿದ್ದರು.
>
> –ಭೀಮರಾವ್ ಯಶವಂತರಾವ್ ಅಂಬೇಡ್ಕರ್

ಶಾರದ ನೃತ್ಯ ಶಾಲೆ ನೂತನ ಕಟ್ಟಡಕ್ಕೆ ಭೂಮಿ ಪೂಜೆ



ಶಾರದ ನೃತ್ಯ ಶಾಲೆ ನೂತನ ಕಟ್ಟಡಕ್ಕೆ ವಾಟಾಳು ಶ್ರೀಗಳು ಭೂಮಿ ಪೂಜೆ ನೆರವೇರಿಸಿದರು.

ತಿ.ನರಸೀಪುರ, ಜೂ.28– ನೃತ್ಯ ಕೇವಲ ಮನರಂಜನೆ ಕಲೆಯಲ್ಲ. ಅದು ಭಾರತೀಯ ಸಂಸ್ಕೃತಿ, ಸಂಪ್ರದಾಯ ಹಾಗೂ ಆಧ್ಯಾತ್ಮಿಕ ಮೌಲ್ಯಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ಮಹತ್ತರ ಮಾಧ್ಯಮವಾಗಿದೆ ಎಂದು ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಸೇಂಟ್ ಮೇರಿಸ್ ಶಾಲೆ ಶಾರದ ನೃತ್ಯ ಶಾಲೆ ನೂತನ ಕಟ್ಟಡಕ್ಕೆ ಭಾನುವಾರ ಭೂಮಿ ಪೂಜೆ ನೆರವೇರಿಸಿ ಆಶೀರ್ವಚನ ನೀಡಿ ಮಾತನಾಡಿದ ಅವರು, ಕಲೆ ಉಳಿಸಿ ಬೆಳೆಸುವ ಉದ್ದೇಶದಿಂದ ನೃತ್ಯ ಶಾಲೆ ನಿರ್ಮಾಣವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿ. ಇಂತಹ ಶಿಕ್ಷಣ ಸಂಸ್ಥೆಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ಶಿಸ್ತು, ಸಂಸ್ಕಾರ ಹಾಗೂ ಸೃಜನಶೀಲತೆ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಡ್ಯಾನ್ಸ್ ಮಾಸ್ಟರ್ ಬಸವರಾಜು ಹಾಗೂ ಪುಷ್ಪ ಮೇಡಂ ಅವರ ಹಲವು ವರ್ಷಗಳ ಕನಸು ಇಂದು ನನಸಾಗುತ್ತಿರುವುದು ಸಂತಸದ ವಿಷಯ. ಕೇವಲ 12 ವಿದ್ಯಾರ್ಥಿಗಳಿಂದ ಆರಂಭವಾದ ಶಾರದ ನೃತ್ಯ ಶಾಲೆ ಇಂದು ನೂರಾರು ವಿದ್ಯಾರ್ಥಿಗಳಿಗೆ ನೃತ್ಯ ಶಿಕ್ಷಣ ನೀಡುತ್ತಿರುವುದು ಅವರ ಪರಿಶ್ರಮಕ್ಕೆ ಸಾಕ್ಷಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಡ್ಯಾನ್ಸ್ ಮಾಸ್ಟರ್ ಬಸವರಾಜು ಮಾತನಾಡಿ, ಗ್ರಾಮೀಣ ಬಡ ಹಾಗೂ ಪ್ರತಿಭಾವಂತ ಮಕ್ಕಳಿಗೆ ಕಡಿಮೆ ಶುಲ್ಕದಲ್ಲಿ ನೃತ್ಯ ತರಬೇತಿ ನೀಡುವುದು ಶಾರದ ನೃತ್ಯ ಶಾಲೆ ಮುಖ್ಯ ಉದ್ದೇಶವಾಗಿದೆ. ಪ್ರತಿವರ್ಷ ಅಕಾಡೆಮಿ ವತಿಯಿಂದ ನೃತ್ಯ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಅನೇಕ ಪ್ರತಿಭೆಗಳನ್ನು ನೃತ್ಯ ಕ್ಷೇತ್ರಕ್ಕೆ ಪರಿಚಯಿಸಲಾಗಿದೆ ಎಂದರು.

ಈ ವೇಳೆ ಶಾರದ ನೃತ್ಯ ಶಾಲೆ ಮುಖ್ಯಸ್ಥೆ ಪುಷ್ಪ, ಉಪನ್ಯಾಸಕ ಮೂಗೂರು ಕುಮಾರಸ್ವಾಮಿ, ಕೆಇಬಿ ನಿವೃತ್ತ ನೌಕರ ಸಿದ್ದಲಿಂಗಸ್ವಾಮಿ, ತಾಲೂಕು ಉಪ್ಪಾರ ಸಂಘದ ಅಧ್ಯಕ್ಷ ಸೋಮಣ್ಣ, ಎಂ.ಸುರೇಶ್, ಆಲಗೂಡು ರಂಗೂ ನಾಯಕ್, ಶೃತಿ, ಶೋಭಾ, ಶ್ರೀಕಾಂತ್ ಮತ್ತಿತರರಿದ್ದರು.

ಟ್ರ್ಯಾಕ್ಟರ್ ಪಲ್ಟಿ: ರೈತ ಮಹಿಳೆ ಸ್ಥಳದಲ್ಲೇ ಸಾವು



ನಂಜನಗೂಡು, ಜೂ.28– ಟ್ರಾಕ್ಟರ್ ಪಲ್ಟಿಯಾಗಿ ರೈತ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಮುಳ್ಳೂರಿನಲ್ಲಿ ನಡೆದಿದೆ.

ಗ್ರಾಮದ ನಿವಾಸಿ ಸತೀಶ್ ಎಂಬುವರ ಪತ್ನಿ ಕೆಂಪಮ್ಮ(35) ಸಾವನ್ನಪ್ಪಿದವರು. ಈಕೆ ತಮ್ಮ ಜಮೀನಿನಲ್ಲಿ ಒಕ್ಕಣೆಯಾದ ಭತ್ತವನ್ನು ಟ್ರಾಕ್ಟರ್‌ನಲ್ಲಿ ತುಂಬಿಕೊಂಡು ನಡೆದುಕೊಂಡು ಬರುತ್ತಿದ್ದ ವೇಳೆ ಟ್ರಾಕ್ಟರ್ ಚಾಲಕ ಭತ್ತ ತೂಕ ಮಾಡಲು ತಡವಾಗುತ್ತದೆ. ಆದ್ದರಿಂದ ಟ್ರಾಕ್ಟರ್ ಹತ್ತುವಂತೆ ತಿಳಿಸಿದ್ದಾನೆ. ಚಾಲಕನ ಮಾತಿನಂತೆ ಟ್ರಾಕ್ಟರ್‌ನ ಟ್ರೈಲರ್‌ನಲ್ಲಿ ಕುಳಿತುಕೊಂಡು ಬರುತ್ತಿದ್ದ ವೇಳೆ ಟ್ರಾಕ್ಟರ್ ಚಾಲಕ ಅಜಾಗರೂಕತೆಯಿಂದ ಹಾಗೂ ಅತೀ ವೇಗವಾಗಿ ವಾಹನ ಚಾಲನೆ ಮಾಡಿದ್ದರಿಂದ ಏಕಾಏಕಿ ಗದ್ದೆಗೆ ಟ್ರಾಕ್ಟರ್ ಪಲ್ಟಿಯಾದ ಪರಿಣಾಮ ಕೆಂಪಮ್ಮ ಟ್ರಾಕ್ಟರ್‌ನಿಂದ ಕೆಳಕ್ಕೆ ಬಿದ್ದಿದ್ದಾರೆ. ಈ ವೇಳೆ ಟ್ರಾಕ್ಟರ್ ಚಕ್ರ ಅವರ ತಲೆ ಮೇಲೆ ಹರಿದ ಪರಿಣಾಮ ತೀವ್ರವಾಗಿ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಬಿಳಿಗೆರೆ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಶವವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಿದರು. ಈ ಸಂಬಂಧ ಬಿಳಿಗೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶ್ರೀಬಲ್ಲೇಶ್ವರಸ್ವಾಮಿಗೆ ವಿಶೇಷ ಪೂಜೆ



ಮೂಗೂರು ಸಮೀಪದ ವಾಟಾಳು ಗ್ರಾಮದ ಶ್ರೀಬಲ್ಲೇಶ್ವರಸ್ವಾಮಿಗೆ ಭಾನುವಾರ ಹೂವಿನ ಅಲಂಕಾರದೊಂದಿಗೆ ವಿಶೇಷ ಪೂಜೆ ಸಂಭ್ರಮದಿಂದ ನಡೆಯಿತು. ಈ ವೇಳೆ ನೂರಾರು ಭಕ್ತರು ದೇವರ ದರ್ಶನ ಪಡೆದರು.

ಕೆ.ಆರ್.ನಗರದಲ್ಲಿ ಪೋಲಿಯೋ ಲಸಿಕೆ ಅಭಿಯಾನಕ್ಕೆ ಚಾಲನೆ

ಕೆ.ಆರ್.ನಗರ, ಜೂ.28– ಮಕ್ಕಳಲ್ಲಿ ಶಾಶ್ವತ ಅಂಗವಿಕಲತೆ ಉಂಟು ಮಾಡುವ 'ಪೋಲಿಯೋ ಮೈಲಿಟಿಸ್' ವೈರಸ್ ನಿಯಂತ್ರಣಕ್ಕಾಗಿ ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನ ಮಕ್ಕಳಿಗೆ ಇಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.



ಪೋಲಿಯೋ ಲಸಿಕೆ ಕಾರ್ಯಕ್ರಮಕ್ಕೆ ಶಾಸಕ ಡಿ.ರವಿಶಂಕರ್ ಚಾಲನೆ ನೀಡಿದರು.

ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಮಗುವಿಗೆ ಲಸಿಕೆ ಹಾಕುವ ಮೂಲಕ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 2 ಹನಿ ಲಸಿಕೆ ಪ್ರತಿ ಮಗುವಿನ ಭವಿಷ್ಯ ಸುರಕ್ಷಿತಗೊಳಿಸಲಿದೆ. ಅದಕ್ಕಾಗಿ ಪೋಷಕರು ತಪ್ಪದೇ 5 ವರ್ಷದೊಳಗಿನ ತಮ್ಮ ಮಗುವಿಗೆ ಪೋಲಿಯೋ ಹಾಕಿಸಬೇಕೆಂದು ಮನವಿ ಮಾಡಿದರು.

ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನಲ್ಲಿ 5 ವರ್ಷದೊಳಗಿನ 14,749 ಮಕ್ಕಳಿಗೆ ಎಲ್ಲಾ ಸರ್ಕಾರಿ ಆಸ್ಪತ್ರೆ, ಅಂಗನವಾಡಿ ಕೇಂದ್ರ, ಬಸ್ ನಿಲ್ದಾಣ, ರೈಲು ನಿಲ್ದಾಣ, ಸರ್ಕಾರಿ ಶಾಲೆ ಇನ್ನಿತರ ಕಡೆ ಪೋಲೀಯೋ ಹನಿ ಹಾಕುವ ಕಾರ್ಯಕ್ಕೆ 172 ಲಸಿಕಾ ಕೇಂದ್ರ ತೆರೆಯಲಾಗಿದ್ದು, 688 ಸಿಬ್ಬಂದಿ ಸೇರಿದಂತೆ 33 ಮೇಲ್ವಿಚಾರಕ ಸಿಬ್ಬಂದಿಗಳು ಕಾರ್ಯ ನಿರ್ವಹಣೆ ಮಾಡುತ್ತಿದ್ದಾರೆ. ಇಂದು ತಪ್ಪಿಸಿಕೊಂಡ ಮಕ್ಕಳಿಗೆ ನಾಳೆ, ನಾಡಿದ್ದು ನಿಮ್ಮ ಮನೆ ಬಾಗಿಲಿಗೆ ಆರೋಗ್ಯ ಸಿಬ್ಬಂದಿ ಭೇಟಿ ನೀಡಿ 2 ಹನಿ ಪೋಲಿಯೋ ಲಸಿಕೆ ಹಾಕಲಿದ್ದಾರೆ ಎಂದರು.

ಆರೋಗ್ಯವಂತ ಮಕ್ಕಳಿಗಾಗಿ, ಅಂಗವಿಕಲತೆ ಬಾರದಿರಲು ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಹನಿ ಹಾಕಿಸಿ ಎಂದರಲ್ಲದೆ ಪೋಲಿಯೋ ಮುಕ್ತ ರಾಷ್ಟ್ರವನ್ನಾಗಿ ಮಾಡಲು ಸರ್ಕಾರ ನಿರ್ಧರಿಸಿ ಸಾಕಷ್ಟು ಕಾರ್ಯಕ್ರಮ ಜಾರಿಗೆ ತರುವ ಜೊತೆಗೆ ಸಂಘ ಸಂಸ್ಥೆ ಮತ್ತು ರೋಟರಿ ಸಂಸ್ಥೆ ಸೇರಿದಂತೆ ಇತರ ಸಂಸ್ಥೆಗಳ ಸಹಾಯದೊಂದಿಗೆ ಪೋಲಿಯೋ ನಿರ್ಮೂಲನೆ ಮಾಡಲು ತೀರ್ಮಾನಿಸಿದೆ ಎಂದು ಮಾಹಿತಿ ನೀಡಿದರು.

ಈ ವೇಳೆ ಆರೋಗ್ಯ ರಕ್ಷಾ ಕಮಿಟಿ ಅಧ್ಯಕ್ಷ ಹೆಚ್.ಹೆಚ್.ನಾಗೇಂದ್ರ, ಸದಸ್ಯರಾದ ಕೆಂಚಿ ಮಂಜು, ಸಾಗರ್, ನಾಗರತ್ನ, ಸಮಿವುಲ್ಲಾ, ತಾಲೂಕು ಆಸ್ಪತ್ರೆ ಆಡಳಿತಾಧಿಕಾರಿ ಡಾ.ನವೀನ್‌ಕುಮಾರ್, ತಾಲೂಕು ಆರೋಗ್ಯಾಧಿಕಾರಿ ಸಿ.ನಟರಾಜ್, ಹಿರಿಯ ಪ್ರಸೂತಿ ತಜ್ಞರಾದ ಡಾ.ದರ್ಶನ್, ಡಾ.ಭವಾನಿ, ಡಾ.ಜಯಮಾಲ, ಆರ್.ಬಿ.ಎಸ್.ಕೆ.ವೈದ್ಯರಾದ ಡಾ.ಮೋನಿಕಾ, ಡಾ.ಅಂಬಿಕಾದಾಸ್, ಡಾ.ದಿನೇಶ್, ತಾಲೂಕು ಹಿರಿಯ ಆರೋಗ್ಯ ಶಿಕ್ಷಣಾಧಿಕಾರಿ ಸಿ.ಎಂ.ರೇಖಾ, ಆರೋಗ್ಯ ಸುರಕ್ಷಾಧಿಕಾರಿ ಪಾರ್ವತಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಹೆಚ್.ಜೆ.ಮಹೇಶ್ ಸೇರಿದಂತೆ ಇತರರಿದ್ದರು.

> ಆರೋಗ್ಯವಂತ ಸಮಾಜ ನಿರ್ಮಾಣಗೊಂಡಾಗ ಮಾತ್ರ ದೇಶ ಎಲ್ಲಾ ರೀತಿಯಲ್ಲೂ ಅಭಿವೃದ್ಧಿ ಕಾಣಲು ಸಾಧ್ಯ. ಅದಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆರೋಗ್ಯ ಕ್ಷೇತ್ರಕ್ಕೆ ಹೆಚ್ಚು ಅನುದಾನ ನೀಡುವುದರ ಜೊತೆಗೆ ಸಾರ್ವಜನಿಕರಿಗೆ ಉಪಯುಕ್ತವಾದ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ.
>
> –ಡಿ.ರವಿಶಂಕರ್, ಶಾಸಕ.

ಸರಗೂರಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ



ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಡಾ.ಟಿ.ರವಿಕುಮಾರ್ ಉದ್ಘಾಟಿಸಿದರು.

ಸರಗೂರು, ಜೂ.28– ಭಾರತ ಸರ್ಕಾರದ ಸೂಚನೆಯಂತೆ ಸತತ 31ನೇ ವರ್ಷವೂ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಯತ್ತ ಸಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ತಿಳಿಸಿದರು.

ಪಟ್ಟಣದ ಕೆಎಸ್ಆರ್‌ಟಿಸಿ ನಿಲ್ದಾಣದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 2014ರಲ್ಲೇ ಭಾರತ ದೇಶವನ್ನು ಪೋಲಿಯೋ ಮುಕ್ತ ರಾಷ್ಟ್ರ ಎಂದು ಘೋಷಿಸಲಾಗಿದ್ದು, ನೆರೆಹೊರೆಯ ದೇಶಗಳಲ್ಲಿ ಇನ್ನೂ ಪೋಲಿಯೋ ಪ್ರಕರಣ ಕಂಡು ಬರುತ್ತಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಭಾರತ ಸರ್ಕಾರದ ಸೂಚನೆಯಂತೆ ಸತತ 31ನೇ ವರ್ಷವೂ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳಾದ ಸಾಗರೆ, ಸರಗೂರು, ಶಾಂತಿಪುರ, ಬಡಗಲಪುರ, ಬಿ.ಮಟಕೆರೆ ಮುಳ್ಳೂರು, ದಡದಹಳ್ಳಿ, ಕೆ.ಬೆಳತ್ತೂರು ಹಾಗೂ ಸಂಚಾರಿ ಗಿರಿಜನ ಆರೋಗ್ಯ ಘಟಕಗಳಾದ ಎಂ.ಸಿ.ತೊಳಲು ಸೇರಿದಂತೆ ಇನ್ನಿತರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಲು 68 ಬೂತ್‌ಗಳು, 1 ಟ್ರಾನ್ಸ್ ಬೂತ್ ಗಳನ್ನು ವ್ಯವಸ್ಥೆ ಮಾಡಲಾಗಿದೆ. ಅಲ್ಲದೇ 288 ಸಿಬ್ಬಂದಿ ಹಾಗೂ ಸ್ವಯಂ ಸೇವಕ ರನ್ನು ನೇಮಿಸಲಾಗಿದೆ. 14 ಮೇಲ್ವಿ ಚಾರಕರು ಸೇರಿದಂತೆ ವೈದ್ಯಾಧಿಕಾರಿ ಗಳನ್ನು ನೇಮಕ ಮಾಡಲಾಗಿದೆ. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವ ಮೂಲಕ ಅಭಿಯಾನ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಈ ವೇಳೆ ಪಪಂ ಅಧ್ಯಕ್ಷೆ ಚೈತ್ರಾ, ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಪಾರ್ಥಸಾರಥಿ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಚಲುವರಾಜು, ಮಹದೇವ್, ಸರಗೂರು ಹೋರಾಟ ಸಮಿತಿ ಸಂಚಾಲಕ ಕೃಷ್ಣ, ರಾಮಚಂದ್ರನಾಯಕ್, ಶರಣಪ್ಪ, ಗಿರೀಶ್, ಸಾರ್ವಜನಿಕರಿದ್ದರು.

ಡಾ.ಯತೀಂದ್ರ ರಾಜಕೀಯದಲ್ಲಿ ಉತ್ತುಂಗಕ್ಕೇರಲಿ

ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಕಾರ್ಯದರ್ಶಿ ಎಂ.ರಮೇಶ್



ಡಾ.ಯತೀಂದ್ರ ಹುಟ್ಟುಹಬ್ಬ ಹಿನ್ನೆಲೆ ವೆಂಕಟೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ತಿ.ನರಸೀಪುರ: ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಧಣಿವರಿಯದ ನಾಯಕರಾಗಿದ್ದು, ಅವರು ರಾಜಕೀಯದಲ್ಲಿ ಮತ್ತಷ್ಟು ಉತ್ತುಂಗಕ್ಕೇರಲಿ ಎಂದು ಕೆಪಿಸಿಸಿ ಹಿಂದುಳಿದ ವರ್ಗಗಳ ರಾಜ್ಯ ಕಾರ್ಯದರ್ಶಿ ಎಂ.ರಮೇಶ್ ಹಾರೈಸಿದರು.

ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರ 47ನೇ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ಪಟ್ಟಣದ ಶ್ರೀವೆಂಕಟೇಶ್ವರ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಸಿಹಿ ಹಂಚಿ ಮಾತನಾಡಿದ ಅವರು, ಸರಳ ಸಜ್ಜನಿಕೆಯ ಸಾಕಾರ ಮೂರ್ತಿಯಾಗಿರುವ ಡಾ.ಯತೀಂದ್ರ ಅವರು ತಾವು ಮುಖ್ಯಮಂತ್ರಿಗಳ ಮಗ ಎಂದು ಎಲ್ಲಿಯೂ ಯಾರೊಂದಿಗೂ ಹಮ್ಮಿನಿಂದ ಮಾತನಾಡಿಲ್ಲ. ಸಾರ್ವಜನಿಕರೊಂದಿಗೆ ಸಾಮಾನ್ಯ ಪ್ರಜೆಯಂತೆ ಬೆರೆತು ಅವರ ಕೆಲಸ ಕಾರ್ಯಗಳನ್ನು ಮಾಡಿ ಕೊಡುವ ಮೂಲಕ ರಾಜ್ಯಕ್ಕೆ ಮಾದರಿ ಶಾಸಕರಾಗಿ ಈಗ ಸಚಿವರಾಗಿದ್ದಾರೆ. ಅವರ ಹುಟ್ಟುಹಬ್ಬವನ್ನು ಇಂದು ಸಾಮಾಜಿಕ ಕಾರ್ಯಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸುತ್ತಿದ್ದೇವೆ. ಡಾ.ಯತೀಂದ್ರ ಅವರು ಎಂದಿಗೂ ಕ್ಷೇತ್ರದ ಹಾಗೂ ಕ್ಷೇತ್ರದ ಜನರ ಅಭಿವೃದ್ಧಿಯತ್ತ ಚಿತ್ತಹರಿಸುವ ಜನಸೇವಕರಂತೆ ಹಗಲಿರುಳು ಶ್ರಮಿಸುತ್ತಿದ್ದಾರೆ. ಅವರಿಗೆ ದೇವರು ಮತ್ತಷ್ಟು ಅಭಿವೃದ್ಧಿ ಕೆಲಸ ಮಾಡಲು ಆಯಸ್ಸು ಆರೋಗ್ಯ ನೀಡಲಿ. ಆ ಮೂಲಕ ಕ್ಷೇತ್ರವು ಸಮಗ್ರ ಅಭಿವೃದ್ಧಿಯತ್ತ ಸಾಗಲಿ ಎಂದರು.

ತಾಲೂಕು ಕುರುಬ ಸಂಘದ ಮಾಜಿ ನಿರ್ದೇಶಕ ಎಂ.ಕೆ.ಸಹದೇವ್ ಮಾತನಾಡಿ, ವರುಣ ಕ್ಷೇತ್ರದ ಅಭಿವೃದ್ಧಿಗೆ ನೂರಾರು ಕೋಟಿ ಅನುದಾನ ತಂದು ಕ್ಷೇತ್ರದ ಜನರಿಗೆ ಬೇಕಾದ ಮೂಲ ಸೌಕರ್ಯಕ್ಕೆ ಆದ್ಯತೆ ನೀಡಿ ಜನಸೇವೆಯನ್ನೇ ತಮ್ಮ ಕಾಯಕ ಮಾಡಿಕೊಂಡಿರುವ ಯತೀಂದ್ರ ಅವರಿಗೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅಧಿಕಾರದೊಂದಿಗೆ ಆರೋಗ್ಯವೂ ದೊರಕಲಿ ಎಂದು ಆಶಿಸಿದರು.

ಈ ವೇಳೆ ಪುರಸಭಾ ಮಾಜಿ ಸದಸ್ಯ ಮೆಡಿಕಲ್ ನಾಗರಾಜ್, ಹಾರ್ಡ್‌ವೇರ್ ಗಿರೀಶ್, ಭೈರಾಪುರ ಗ್ರಾಪಂ ಮಾಜಿ ಅಧ್ಯಕ್ಷ ಎ.ಜೆ. ವೆಂಕಟೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಮಹೇಶ್, ತಿರುಮಕೂಡಲು ಕುಮಾರ್, ರಾಜಣ್ಣ, ಬಂಗಾರಿ, ಶಿವ ಕುಮಾರ್, ಮಂಜುನಾಥ್, ಬುದ್ಧಿವಂತ, ಶ್ರೀಕಂಠ, ಮಹದೇವಸ್ವಾಮಿ, ಶಂಕರ್, ಇದ್ದಾರೆ.

ಮೂಗೂರಲ್ಲಿ ಪೋಲಿಯೋ ಅಭಿಯಾನಕ್ಕೆ ಚಾಲನೆ



ಮೂಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆಡಳಿತ ಹಿರಿಯ ವೈದ್ಯಾಧಿಕಾರಿ ಡಾ.ರಮೇಶ್ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಹಿರಿಯ ಆರೋಗ್ಯ ಸುರಕ್ಷಾಧಿಕಾರಿ ಮೀನಾಕ್ಷಿ, ನಿರೀಕ್ಷಣಾಧಿಕಾರಿ ಸಿದ್ದಲಿಂಗಪ್ಪ, ಅನಿತಾ, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಕೇಂದ್ರದ ಸಿಬ್ಬಂದಿ ಹಾಜರಿದ್ದರು.


ದೇವನೂರಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮ

ನಂಜನಗೂಡು: ತಾಲೂಕಿನ ದೇವನೂರು ಗ್ರಾಮದ ಶ್ರೀಗುರು ಮಲ್ಲೇಶ್ವರ ಮಹಾಸಂಸ್ಥಾನ ದಾಸೋಹ ಮಠದಲ್ಲಿ ಜು.1 ಹಾಗೂ 2ರಂದು ವಿವಿಧ ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ.ಡಿ.ಎಸ್.ಸದಾಶಿವಮೂರ್ತಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜು.1ರಂದು ಬೆಳಗ್ಗೆ 10.30ಕ್ಕೆ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ನೂತನ ಬಸವ ಮಹಾದ್ವಾರ ಉದ್ಘಾಟಿಸಲಿದ್ದು, ತುಮಕೂರಿನ ಶ್ರೀಸಿದ್ಧಲಿಂಗ ಸ್ವಾಮೀಜಿ ಜೀರ್ಣೋದ್ಧಾರಗೊಂಡ ಕಲ್ಯಾಣಿ ಉದ್ಘಾಟಿಸಲಿದ್ದಾರೆ. ಬಳಿಕ ನಡೆಯುವ ಧಾರ್ಮಿಕ ಸಭೆಯನ್ನು ಮಾಜಿ ಸಿಎಂ ಸಿದ್ದರಾಮಯ್ಯ ಉದ್ಘಾಟಿಸಲಿದ್ದು, ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ವಿಚಾರ ಗೋಷ್ಠಿ ನಡೆಯಲಿದ್ದು, ಹಿರಿಯ ಪ್ರಾಧ್ಯಾಪಕ ಡಾ.ವೈ.ಹೆಚ್.ನಾಯಕ್ ವಾಡಿ ಅವರು ಶ್ರೀಮಠದ ಚಾರಿತ್ರಿಕ ಹಿನ್ನೆಲೆ ಕುರಿತು, ಡಾ.ರಾಜಶೇಖರ ಜಮದಂಡಿ ಅವರು ಶ್ರೀಗುರು ಮಲ್ಲೇಶ್ವರರ ದರ್ಶನ ಕುರಿತು ಹಾಗೂ ಪ್ರೊ.ಡಿ.ಎಸ್.ಸದಾಶಿವಮೂರ್ತಿ ಅವರು ಶ್ರೀಮಠದ ಗುರು ಪರಂಪರೆ ಕುರಿತು ವಿಷಯ ಮಂಡಿಸಲಿದ್ದಾರೆ.

ಜು.2ರಂದು ಬೆಳಗ್ಗೆ 8ಗಂಟೆಗೆ ಶ್ರೀಗುರು ಮಲ್ಲೇಶ್ವರರ ರಥೋತ್ಸವ ನಡೆಯಲಿದ್ದು, ಬೆಳಗ್ಗೆ 10.30ಕ್ಕೆ ಮಹದೇಶ್ವರಬೆಟ್ಟ ಸಾಲೂರು ಮಠದ ಡಾ.ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಸಮ್ಮುಖದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸಂಸದ ಯದುವೀರ್ ಅಧ್ಯಕ್ಷತೆ ವಹಿಸಲಿದ್ದಾರೆ. ರಾತ್ರಿ 8.30ಕ್ಕೆ ನೂತನ ಕಲ್ಯಾಣಿಯಲ್ಲಿ ಶ್ರೀಗುರು ಮಲ್ಲೇಶ್ವರರ ತೆಪ್ಪೋತ್ಸವ ನಡೆಯಲಿದ್ದು, ಈ ಸಂದರ್ಭ ಬಾಣ ಬಿರುಸುಗಳ ಪ್ರದರ್ಶನ ನಡೆಯಲಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಇನ್ನಿತರರು ಹಾಜರಿದ್ದರು.

ನಾಗೇಂದ್ರ ನಿಧನ



ನಂಜನಗೂಡು: ನಗರದ ಕನಕದಾಸ ವಿದ್ಯಾರ್ಥಿ ನಿಲಯದ ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡ ಕೆ.ನಾಗೇಂದ್ರ (68) ಭಾನುವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸೋಮವಾರ ಬೆಳಗ್ಗೆ 11 ಗಂಟೆಗೆ ಪರಶುರಾಮ ದೇವಾಲಯದ ಬಳಿಯ ಸ್ಮಶಾನದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವಿವಿಧ ಸೇವಾ ಕಾರ್ಯಗಳ ಮೂಲಕ

ಸಚಿವ ಡಾ.ಯತೀಂದ್ರ ಹುಟ್ಟುಹಬ್ಬ ಅರ್ಥಪೂರ್ಣ ಆಚರಣೆ

ತಿ.ನರಸೀಪುರ, ಜೂ.28– ನಗರಾಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹುಟ್ಟುಹಬ್ಬವನ್ನು ತಿ.ನರಸೀಪುರ ಹಾಗೂ ವರುಣ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರು ವಿವಿಧ ಸೇವಾ ಕಾರ್ಯಗಳ ಮೂಲಕ ಸಂಭ್ರಮದಿಂದ ಆಚರಿಸಿದರು.

ಬೆಳಗ್ಗೆ ಪಟ್ಟಣದ ಶ್ರೀಗುಂಜಾ ನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು ಸಚಿವ ಡಾ.ಯತೀಂದ್ರ ಅವರ ಹೆಸರಿನಲ್ಲಿ ವಿಶೇಷ ಪೂಜೆ ಮಾಡಿಸಿ ಅವರ ಆಯಸ್ಸು, ಆರೋಗ್ಯ ಹಾಗೂ ಜನಸೇವೆಗೆ ಇನ್ನಷ್ಟು ಶಕ್ತಿ ದೊರೆಯಲಿ ಎಂದು ಪ್ರಾರ್ಥಿಸಿದರು.

ಬಳಿಕ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ತೆರಳಿ ತಾಲೂಕು ಆಡಳಿತ ವೈದ್ಯಾಧಿಕಾರಿ ಡಾ.ಅಭಿಲಾಷ್ ಸಮ್ಮುಖದಲ್ಲಿ ರೋಗಿಗಳಿಗೆ ಹಣ್ಣು–ಬ್ರೆಡ್ ವಿತರಿಸಿದರು. ನಂತರ ಕಾರ್ಯಕರ್ತರು ಕಾಲೇಜು ರಸ್ತೆಯಲ್ಲಿರುವ ತಾಲೂಕು ಕುರುಬರ ಸಂಘದ ಮುಂಭಾಗ ಅಳವಡಿಸಿದ್ದ ಸಚಿವರ ಕಟೌಟ್‌ಗೆ ಕ್ಷೀರಾಭಿಷೇಕ ನಡೆಸಿ, ಕೇಕ್ ಕತ್ತರಿಸುವ ಮೂಲಕ ಅಭಿಮಾನ ವ್ಯಕ್ತಪಡಿಸಿದರು. ಈ ವೇಳೆ ಸಾರ್ವಜನಿಕರಿಗೆ ಉಪಹಾರ ವಿತರಿಸುವ ಮೂಲಕ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಡಾ.ಯತೀಂದ್ರ ಹುಟ್ಟುಹಬ್ಬದ ಅಂಗವಾಗಿ ಕಾಂಗ್ರೆಸ್ ಕಾರ್ಯಕರ್ತರು ಶ್ರೀಗುಂಜಾ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದರು.

ಜಿಪಂ ಮಾಜಿ ಸದಸ್ಯ ಕೆ.ಮಹದೇವ್ ಮಾತನಾಡಿ, ಸಚಿವ ಡಾ.ಯತೀಂದ್ರ ಅವರು ಸರಳತೆ, ಸೌಜನ್ಯ ಮತ್ತು ಜನಪರ ಕಾಳಜಿಯಿಂದ ಜನಮನ ಗೆದ್ದಿರುವ ನಾಯಕರಾಗಿದ್ದು, ವರುಣ ಕ್ಷೇತ್ರದ ಶಾಸಕರಾಗಿದ್ದ ಸಂದರ್ಭ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿ ಕ್ಷೇತ್ರವನ್ನು ಮಾದರಿಯಾಗಿ ರೂಪಿಸಿದ್ದರು. ಈಗ ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾಗಿ ರಾಜ್ಯದ ಅಭಿವೃದ್ಧಿಗೆ ಇನ್ನಷ್ಟು ಕೊಡುಗೆ ನೀಡುವ ಸಾಮರ್ಥ್ಯ ಹೊಂದಿದ್ದಾರೆ. ಅವರಿಗೆ ದೇವರು ಉತ್ತಮ ಆರೋಗ್ಯ, ದೀರ್ಘಾಯುಷ್ಯ ನೀಡಿ ಜನಸೇವೆ ಮುಂದುವರಿಸುವ ಶಕ್ತಿ ನೀಡಲಿ ಎಂದು ಹೇಳಿದರು.

ತಾಲೂಕು ಕುರುಬರ ಸಂಘದ ಅಧ್ಯಕ್ಷ ಮನ್ನೇಹುಂಡಿ ಮಹೇಶ್ ಮಾತನಾಡಿ, ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಅವರ ಜನ್ಮದಿನದ ಅಂಗವಾಗಿ ತಿ.ನರಸೀಪುರ ಹಾಗೂ ವರುಣ ಕ್ಷೇತ್ರಗಳ ಕಾಂಗ್ರೆಸ್ ಕಾರ್ಯಕರ್ತರು ವಿವಿಧ ಸೇವಾ ಕಾರ್ಯಕ್ರಮ ಗಳನ್ನು ಹಮ್ಮಿಕೊಂಡಿದ್ದು, ರಾಜಕೀಯ ಕ್ಷೇತ್ರದಲ್ಲಿ ಅವರಿಗೆ ಇನ್ನಷ್ಟು ಉನ್ನತ ಸ್ಥಾನ ಮಾನ ದೊರೆತು ಜನಸೇವೆ ಮಾಡುವ ಅವಕಾಶ ಹೆಚ್ಚಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಕುರುಬರ ಸಂಘದ ಮಾಜಿ ಅಧ್ಯಕ್ಷ ಟಿ.ಎಸ್.ಪ್ರಶಾಂತ್ ಬಾಬು, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಕೆಂಪಯ್ಯನಹುಂಡಿ ಮಹದೇವಣ್ಣ, ಪುರಸಭಾ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಸಿ.ಪ್ರಕಾಶ್, ಸದಸ್ಯರಾದ ಬಾದಾಮಿ ಮಂಜು, ಎಲ್.ಮಂಜುನಾಥ್, ಬೇಬಿ ಹೇಮಂತ್, ತಾಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ, ತಾಲೂಕು ಕುರುಬರ ಸಂಘದ ನಿರ್ದೇಶಕ ಅರುಣ್ ಕುಮಾರ್, ತಾಪಂ ಮಾಜಿ ಅಧ್ಯಕ್ಷ ಅಂದಾನಿ, ಬೆಟ್ಟದ ಪ್ರಾಧಿಕಾರದ ನಿರ್ದೇಶಕಿ ಭಾಗ್ಯಮ್ಮ, ಕಿರಗಸೂರು ಗ್ರಾಪಂ ಮಾಜಿ ಅಧ್ಯಕ್ಷೆ ಚಂದ್ರಮ್ಮ, ನಿಂಗರಾಜು, ಆಲಗೂಡು ನಾಗರಾಜು, ಫೈನಾನ್ಸ್ ಕಾಂತರಾಜು, ರಾಮನಂಜಯ್ಯ, ಬಣ್ಣ ಬಸವರಾಜು, ಜೋಗಿ ಕೃಷ್ಣ, ಪುರಸಭಾ ಮಾಜಿ ಸದಸ್ಯ ಗುರುಸ್ವಾಮಿ, ಗೋಪಿ, ಕೆಎಸ್ಆರ್‌ಟಿಸಿ ರಾಜಣ್ಣ, ಚಿಕ್ಕ ನಾಗರಾಜು, ಏಳು ಮಲೆ ಮಂಜು, ವೆಂಕಿ, ಹುಣಸೂರು ನಾಗರಾಜು, ವಸಂತ, ಗರ್ಗೇಶ್ವರಿ, ಗೋಪಾಲರಾಜು ಚೌಹಳ್ಳಿ ಮಲ್ಲೇಶ್, ದಯಾನಂದ್ ಹಲವರಿದ್ದರು.

ಡಾ.ಯತೀಂದ್ರ ರಾಜಕೀಯ ಕ್ಷೇತ್ರದ ಮಿನುಗುವ ನಕ್ಷತ್ರ

ಎಪಿಎಂಸಿ ಮಾಜಿ ಅಧ್ಯಕ್ಷ ಎನ್.ಅನಿಲ್ ಕುಮಾರ್ ಮಾತನಾಡಿ, ಸಚಿವ ಡಾ.ಯತೀಂದ್ರ ಅವರು ರಾಜಕೀಯ ಕ್ಷೇತ್ರದಲ್ಲಿ ಸದಾ ಮಿನುಗುವ ನಕ್ಷತ್ರದಂತಿರುವ ನಾಯಕ. ಸಾಮಾನ್ಯ ಕಾರ್ಯಕರ್ತರಿಗೂ ಸ್ಪಂದಿಸುವ ಅಪರೂಪದ ಗುಣ ಅವರಲ್ಲಿದೆ. ಅವರಿಗೆ ಭಗವಂತ ಉತ್ತಮ ಆರೋಗ್ಯ, ದೀರ್ಘಾಯುಷ್ಯ ನೀಡಿ ಇನ್ನಷ್ಟು ಜನಸೇವೆ ಮಾಡುವ ಶಕ್ತಿ ಕರುಣಿಸಲಿ. ಮುಂದಿನ ದಿನಗಳಲ್ಲಿ ತಂದೆ ಸಿದ್ದರಾಮಯ್ಯ ಅವರಂತೆ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸುವ ಅವಕಾಶ ದೊರೆಯಲಿ. ಸರಳ ಸಜ್ಜನಿಕೆಯ ಸಾಕಾರ ಮೂರ್ತಿಯಾಗಿರುವ ಡಾ.ಯತೀಂದ್ರ ಅವರು ತಾವು ಮುಖ್ಯಮಂತ್ರಿಗಳ ಮಗ ಎಂದು ಎಲ್ಲೂ ಯಾರೊಂದಿಗೂ ಹಮ್ಮಿನಿಂದ ಮಾತನಾಡಿಲ್ಲ. ಸಾರ್ವಜನಿಕ ರೊಂದಿಗೆ ಸಾಮಾನ್ಯ ಪ್ರಜೆಯಂತೆ ಬೆರೆತು ಅವರ ಕೆಲಸ ಕಾರ್ಯಗಳನ್ನು ಮಾಡಿಕೊಡುತ್ತಿದ್ದು, ಅಲ್ಲದೇ ಶಿಕ್ಷಣ, ಕ್ರೀಡೆ, ಸೇರಿದಂತೆ ಸಂಕಷ್ಟದಲ್ಲಿರುವವರಿಗೆ ವೈಯಕ್ತಿಕ ನೆರವು ನೀಡುವ ಮೂಲಕ ಸೇವಾ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದು, ಸ್ಥಳೀಯ ಮಟ್ಟದಲ್ಲಿ ಜನರ ಸಮಸ್ಯೆಗಳನ್ನು ಬಗೆಹರಿಸುವ ಮೂಲಕ ರಾಜ್ಯಕ್ಕೆ ಮಾದರಿಯಾಗಿದ್ದಾರೆ ಎಂದರು.

ಮೈಸೂರು ಮಿತ್ರ

ಸ್ವಲ್ಪ ಪ್ರಮಾಣದ ಅಮಲು ಪದಾರ್ಥ ಬಳಸಿದರೂ ರಾಜ್ಯದಲ್ಲಿ ಗುಟ್ಕಾ, ಪಾನ್ ಮಸಾಲಾ ಸಂಪೂರ್ಣ ನಿಷೇಧ

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎಚ್ಚರಿಕೆ

ಬೆಂಗಳೂರು: ಪಾನ್ ಮಸಾಲಾ, ಗುಟ್ಕಾ ಹಾಗೂ ಅಡಿಕೆ ಪದಾರ್ಥಗಳಲ್ಲಿ ಸ್ವಲ್ಪ ಪ್ರಮಾಣದ ಅಮಲು ಪದಾರ್ಥಗಳನ್ನು ಬೆರೆಸಿ ಮಾರಾಟ ಮಾಡುತ್ತಿರುವುದು ಗಮನಕ್ಕೆ ಬಂದಿದ್ದು, ಇದು ತಕ್ಷಣವೇ ನಿಲ್ಲದಿದ್ದರೆ ರಾಜ್ಯದಲ್ಲಿ ಎಲ್ಲಾ ರೀತಿಯ ಪಾನ್ ಮಸಾಲಾ ಹಾಗೂ ಗುಟ್ಕಾಗಳನ್ನು ಸಂಪೂರ್ಣವಾಗಿ ನಿಷೇಧಿಸುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ 31ನೇ ಸಂಸ್ಥಾಪನಾ ದಿನ ಹಾಗೂ 'ಅಂತರರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನ'ದ ಅಂಗವಾಗಿ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 'ನಶಾ ಮುಕ್ತ ಭಾರತ ಅಭಿಯಾನ'ದಲ್ಲಿ ಮಾತನಾಡಿದ ಅವರು, ಮಾದಕದ್ರವ್ಯ ಮುಕ್ತ ಕರ್ನಾಟಕ ರೂಪಿಸುವುದು ನಮ್ಮ ಸರ್ಕಾರದ ಮುಖ್ಯ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ನಾವು ನಿರಂತರವಾಗಿ ಕಠಿಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದೇವೆ. ವ್ಯಸನಮುಕ್ತ ನಾಳಿನ ಸುಂದರ ಕನಸನ್ನು ನನಸಾಗಿಸಲು ಶಿಕ್ಷಣ ಸಂಸ್ಥೆಗಳು, ಪೋಷಕರು ಮತ್ತು ನಾಗರಿಕರು ಒಟ್ಟಾಗಿ ಮುನ್ನಡೆಯಬೇಕು ಎಂದು ಕರೆ ನೀಡಿದರು.



ದೊಡ್ಡ ಸವಾಲಾಗಿದೆ: ನೀವೆಲ್ಲರೂ ಈ ಅಭಿಯಾನದ ರಾಯಭಾರಿಗಳು. ಮಾದಕ ವ್ಯಸನ ತಡೆಯುವುದು ಇಂದಿನ ದೊಡ್ಡ ಸವಾಲಾಗಿದ್ದು, ಯುವ ಪೀಳಿಗೆ ಈ ವ್ಯಸನದ ಸುಳಿಗೆ ಸಿಲುಕದಂತೆ ತಡೆಯುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಜೀವ ರಕ್ಷಣೆಯ ವೃತ್ತಿ ಆಯ್ಕೆ ಮಾಡಿಕೊಂಡಿರುವ ನಿಮಗೆ ನನ್ನ ಅಭಿನಂದನೆಗಳು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ದೇಶದಲ್ಲೇ ಅತಿ ದೊಡ್ಡ ಆರೋಗ್ಯ ವಿವಿಯಾಗಿದ್ದು, ಅತಿ ಹೆಚ್ಚು ವೈದ್ಯರನ್ನು ದೇಶಕ್ಕೆ ನೀಡಿದೆ. ಈ ವಿವಿಯನ್ನು ಆರಂಭಿಸಿದ ಮಾಜಿ ಸಿಎಂ ವೀರಪ್ಪ ಮೊಯ್ಲಿ ಅವರಿಗೆ ಧನ್ಯವಾದಗಳು. ನಮ್ಮ ರಾಜ್ಯದಲ್ಲಿ ಬರೋಬ್ಬರಿ 70 ಮೆಡಿಕಲ್ ಕಾಲೇಜುಗಳಿದ್ದು, ದೇಶದ ಬೇರೆ ಯಾವುದೇ ರಾಜ್ಯದಲ್ಲೂ ಇಷ್ಟು ಕಾಲೇಜುಗಳಿಲ್ಲ. ವೈದ್ಯಕೀಯ ಶಿಕ್ಷಣ ಎಲ್ಲರಿಗೂ ಸಿಗುವಂತಾಗಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಬೆಳವಣಿಗೆಯ ಕುರಿತು ಪ್ರಮುಖ ಮಾಹಿತಿ ನೀಡಿದ ಮುಖ್ಯಮಂತ್ರಿಗಳು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಶೀಘ್ರದಲ್ಲೇ ಬೆಂಗಳೂರು ದಕ್ಷಿಣ ಜಿಲ್ಲೆಯ ನೂತನ ಹೈಟೆಕ್ ಕ್ಯಾಂಪಸ್‌ಗೆ ಸ್ಥಳಾಂತರಗೊಳ್ಳಲಿದೆ ಎಂದು ಪ್ರಕಟಿಸಿದರು.

ವೇದಿಕೆಯಲ್ಲಿ ಉಪರಾಷ್ಟ್ರಪತಿಗಳಾದ ಸಿ.ಪಿ.ರಾಧಾಕೃಷ್ಣನ್, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಮತ್ತು ಆಂಧ್ರಪ್ರದೇಶದ ರಾಜ್ಯಪಾಲರಾದ ಎಸ್. ಅಬ್ದುಲ್ ನಜೀರ್ ಅವರ ಘನ ಉಪಸ್ಥಿತಿಯಲ್ಲಿ, ಆರೋಗ್ಯಕರ, ಸುರಕ್ಷಿತ ಮತ್ತು ವ್ಯಸನ ಮುಕ್ತ ಸಮಾಜವನ್ನು ನಿರ್ಮಿಸಲು ಈ ಸಂದರ್ಭದಲ್ಲಿ ದೃಢ ಸಂಕಲ್ಪ ಮಾಡಲಾಯಿತು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಅಂಗಿಕಾರನ್(ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಬಲರಾಮನ ಆ ದಿನಗಳು (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ವೆಲ್‌ಕಮ್ ಟು ದಿ ಜಂಗಲ್ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಬಲರಾಮ(ಕ)	4 ಪ್ರದರ್ಶನಗಳು
ಗಾಯಿತ್ರಿ	
ಪೆದ್ದಿ (ಕ)	4 ಪ್ರದರ್ಶನಗಳು
ರಾಜಕಮಲ್	
ಕಾನ್ ಸಿಟಿ (ತ)	4 ಪ್ರದರ್ಶನಗಳು
ಸಂಗಂ	
ವೆಲ್‌ಕಮ್ ಟು ದಿ ಜಂಗಲ್ (ಹಿ)	4 ಪ್ರದರ್ಶನಗಳು
ಲಿಡೋ	
ಕೆಡಿ(ಕ) + ಒಕ್ಕಡು (ತೆ)	2+2 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ರೈತರ ಮಕ್ಕಳಿಗೆ ಹೆಣ್ಣು ಕೊಡಿ (ಕ) + ಕಾಲಘಟ್ಟ (ಕ)	2+2 ಪ್ರದರ್ಶನಗಳು

14ನೇ ಕರ್ನಾಟಕ ರಾಜ್ಯ ಶೂಟಿಂಗ್ ಚಾಂಪಿಯನ್‌ಶಿಪ್

ಮೈಸೂರಿನ ಶೂಟರ್‌ಗೆ ಎರಡು ಚಿನ್ನದ ಪದಕ



ಜಮ್ಮಡ ಪ್ರೀತ್ ಅಪ್ಪಯ್ಯ

ಮೈಸೂರು, ಜೂ.28(ಎಂಕೆ)– ಬೆಂಗಳೂರು ವಿಶ್ವವಿದ್ಯಾಲಯದ ಶೂಟಿಂಗ್ ರೇಂಜ್‌ನಲ್ಲಿ ಭಾರತೀಯ ಕ್ರೀಡಾ ಪ್ರಾಧಿಕಾರದ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ರೈಫಲ್ ಅಸೋಸಿಯೇಷನ್ (ಕೆಎಸ್‌ಆರ್‌ಎ) ವತಿಯಿಂದ ಆಯೋಜಿಸಿದ್ದ 14ನೇ ಕರ್ನಾಟಕ ರಾಜ್ಯ ಶೂಟಿಂಗ್ ಸ್ಪರ್ಧೆ ಮತ್ತು ಚಾಂಪಿಯನ್‌ಶಿಪ್–2026ರಲ್ಲಿ ಮೈಸೂರು ಬನ್ನಿಮಂಟಪದ ನಿವಾಸಿ ಹಾಗೂ ಮೈಸೂರು ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿ (ಎಂಎಸ್‌ಎಸ್‌ಎ)ಯ ಜಮ್ಮಡ ಪ್ರೀತ್ ಅಪ್ಪಯ್ಯ ಎರಡು ಚಿನ್ನದ ಪದಕಗಳನ್ನು ಜಯಿಸಿದ್ದಾರೆ.

177 ಓಪನ್ ಸೈಟ್ 10 ಮೀಟರ್ ಏರ್ ರೈಫಲ್ ಸೀನಿಯರ್ ಮಾಸ್ಟರ್ ವುಮೆನ್ (ನ್ಯಾಷನಲ್ ರೆಕಾರ್ಡ್ಸ್) ಹಾಗೂ 177 ಓಪನ್ ಸೈಟ್ 10 ಮೀಟರ್ ಏರ್ ರೈಫಲ್ ಮಾಸ್ಟರ್ ವುಮೆನ್ (ನ್ಯಾಷನಲ್ ರೆಕಾರ್ಡ್ಸ್) ವಿಭಾಗದಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ಕ್ರೀಡಾ ಸ್ಫೂರ್ತಿ ಮೆರೆದಿದ್ದಾರೆ.

ಪರ್ವತಾರೋಹಿಯೂ ಆಗಿರುವ ಜಮ್ಮಡ ಪ್ರೀತ್ ಅಪ್ಪಯ್ಯ, ಹೆಚ್.ಎಸ್. ವಿವೇಕ್ ಅವರಿಂದ ತರಬೇತಿ ಪಡೆಯುತ್ತಿದ್ದಾರೆ. ಬೆಂಗಳೂರಿನ ಕೆಎಸ್‌ಆರ್‌ಎ ರೇಂಜ್‌ನಲ್ಲಿ ನಡೆದ ನಾಗರಾಜ್ ರಾವ್ ಜಗದಾಳೆ ಶೂಟಿಂಗ್ ಸ್ಪರ್ಧೆ ಮತ್ತು ಚಾಂಪಿಯನ್‌ಶಿಪ್‌ನಲ್ಲಿ ಎರಡು ಚಿನ್ನದ ಪದಕ ಜಯಿಸಿರುವ ಅವರು, ದಕ್ಷಿಣ ವಲಯ ಸ್ಪರ್ಧೆಗಳಿಗೆ ಅರ್ಹತೆ ಪಡೆಯಲು ತಯಾರಿ ನಡೆಸುತ್ತಿದ್ದಾರೆ. ಈ ಮೂಲಕ ಓಪನ್ ಸೈಟ್ ಏರ್ ರೈಫಲ್ ವಿಭಾಗದಲ್ಲಿ ಸ್ಪರ್ಧಿಸುತ್ತಿರುವ ಏಕೈಕ ಕೊಡವತಿ ಆಟಗಾರ್ತಿ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ.

ವಕೀಲ ಜಮ್ಮಡ ಎಂ.ಅಯ್ಯಣ್ಣ ಅವರನ್ನು ವಿವಾಹವಾಗಿರುವ ಪ್ರೀತ್ ಅಪ್ಪಯ್ಯ, ಶೂಟಿಂಗ್ ಜೊತೆಗೆ ಪರ್ವತಾರೋಹಿಯಾಗಿಯೂ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ. 2023 ರಲ್ಲಿ ಮೌಂಟ್ ಕಿಲಿಮಂಜಾರೊ ಮತ್ತು 2024 ರಲ್ಲಿ ರಷ್ಯಾದ ಕಾಕಸಸ್ ಪರ್ವತ ಶ್ರೇಣಿಯಲ್ಲಿರುವ ಮೌಂಟ್ ಎಲ್ಬ್ರಸ್ ಪರ್ವತವನ್ನೇರಿ ಗಮನ ಸೆಳೆದಿದ್ದಾರೆ.

ಬದುಕನ್ನು ಸಂತೈಸುವ ಸಂತರ ಅಗತ್ಯವಿದೆ

ಪ್ರಗತಿಪರ ಚಿಂತಕಿ ಪ್ರೊ.ಚ.ಸರ್ವಮಂಗಳ ಅಭಿಮತ

ಮೈಸೂರು, ಜೂ.28(ಎಂಕೆ)– ತಳದಿಂದಲೇ ನಿಯಂತ್ರಣ ತಪ್ಪುತ್ತಿರುವ ಮನುಷ್ಯನ ಬದುಕು ಬಿಯರ್ ಅಥವಾ ಸೋಡಾ ಬಾಟಲ್ ಓಪನ್ ಮಾಡಿದಾಗ ಚಿಮ್ಮುವ ಸ್ಪಿರಿಟ್‌ನಂತೆ. ಸ್ಪಿರಿಟ್‌ನಂತೆ ಬದುಕು ಕೂಡ ಕೆಲ ಸೆಕೆಂಡ್‌ನಲ್ಲೆ ಮುಗಿಯುತ್ತಿದ್ದು, ಬದುಕನ್ನು ಸಂತೈಸುವ ಸಂತರ ಅಗತ್ಯತೆ ಅನಿವಾರ್ಯವಾಗಿದೆ ಎಂದು ಪ್ರಗತಿಪರ ಚಿಂತಕಿ ಪ್ರೊ.ಚ. ಸರ್ವಮಂಗಳ ಅಭಿಪ್ರಾಯ ಪಟ್ಟರು.



ಲೇಖಕ ಕೃಷ್ಣ ಜನಮನ ರಚಿತ 'ಹಿಂದೂ ಸಮಾಜ ಮತ್ತು ಮೌಢ್ಯ' ಹಾಗೂ 'ಗಾಂಧಿ ಮತ್ತು ಅಂಬೇಡ್ಕರ್ ಮುಖಾಮುಖಿ' ಪುಸ್ತಕಗಳನ್ನು ಪ್ರಗತಿಪರ ಚಿಂತಕಿ ಪ್ರೊ.ಚ.ಸರ್ವಮಂಗಳ ಬಿಡುಗಡೆ ಮಾಡಿದರು.

ಮೈಸೂರು ರಂಗಾಯಣದ ಶ್ರೀರಂಗ ವೇದಿಕೆಯಲ್ಲಿ ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ವಿಚಾರವಾದಿ, ಪ್ರಗತಿಪರ ಚಿಂತಕ ಪ್ರೊ.ಕೆ. ರಾಮದಾಸ್ ಸ್ಮರಣಾರ್ಥ ಹಮ್ಮಿಕೊಂಡಿದ್ದ ಸಂವಾದ, ಪುಸ್ತಕ ಬಿಡುಗಡೆ, ಲೇಖನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಲೇಖಕ ಕೃಷ್ಣ ಜನಮನ ರಚಿತ 'ಹಿಂದೂ ಸಮಾಜ ಮತ್ತು ಮೌಢ್ಯ' ಹಾಗೂ 'ಗಾಂಧಿ ಮತ್ತು ಅಂಬೇಡ್ಕರ್ ಮುಖಾಮುಖಿ' ಪುಸ್ತಕಗಳನ್ನು ಬಿಡುಗಡೆ ಮಾಡಿ, ಅವರು ಮಾತನಾಡಿದರು.

ಮಹಾತ್ಮಗಾಂಧಿ ಅವರು ಶಾಂತ ಸಂತರಾದರೆ, ಡಾ.ಅಂಬೇಡ್ಕರ್ ಅವರು ಅಶಾಂತ ಸಂತರಾಗಿದ್ದಾರೆ. ಒಬ್ಬರು ಅರೆಬೆತ್ತಲೆಯಾಗಿ ಬಂದ ಪುರುಷರಾದರೆ, ಇನ್ನೊಬ್ಬರು ಕೋಟು, ಸೂಟು ಹಾಕಿ ದಿಕ್ಕನ್ನೆ ಬದಲಿಸಿದವರು. ಇಬ್ಬರ ಗುರಿ ಒಂದೇ ಆಗಿತ್ತು. ಆದರೆ ಆಯ್ಕೆ ಮಾಡಿಕೊಂಡ ದಾರಿ ಬೇರೆ. ಸ್ವಸ್ಥ ಭಾರತದ ಕನಸು ಕಂಡ ಈ ಇಬ್ಬರೂ ಸಂತರಲ್ಲಿ ಡಾ.ಅಂಬೇಡ್ಕರ್ ಪುಸ್ತಕದ ಮೇಲೆ ಪುಸ್ತಕ ಬರೆದು, ಬರವಣಿಗೆ ಮೂಲಕ ಸಾಗಿದರೆ, ಗಾಂಧೀಜಿ ಚರಕದ ಮೂಲಕ ಸಾಗಿದರು. ವೃತ್ತಿಯಲ್ಲಿ ಏಕಾಗ್ರತೆ ಮತ್ತು ದೃಷ್ಟಿ ಇರಬೇಕು ಎಂಬುದು ಚರಕ ಪರಿಕಲ್ಪನೆಯಾಗಿದ್ದು, ಸ್ವಂ ಉದ್ಯೋಗಕ್ಕೆ ಪ್ರೇರಣೆಯಾಗಿದೆ ಎಂದರು.

ಕನ್ನಡದ ಮೇಷ್ಟ್ರು: ಚಿಂತಕ ರಾಜಪ್ಪ ದಳವಾಯಿ ಮಾತನಾಡಿ, ಬದುಕನ್ನು ಸುಂದರಗೊಳಿಸುವುದಕ್ಕೆ, ಅಲಕ್ಷಿತ ಸಮುದಾಯಗಳನ್ನು ಕಾಪಾಡುವುದಕ್ಕೆ ಮತ್ತು ದಿಕ್ಕು–ದೆಸೆಯಿಲ್ಲದವರಲ್ಲಿ ಭರವಸೆ ಮೂಡಿಸುತ್ತಿದ್ದ ಕನ್ನಡ ಮೇಷ್ಟ್ರು ಪ್ರೊ.ಕೆ.ರಾಮದಾಸ್. ಕನ್ನಡ ಮೇಷ್ಟ್ರುಗೆ ಎಷ್ಟು ಶಕ್ತಿ ಇರಬಹುದು ಎಂಬುದಕ್ಕೆ ಅವರೇ ಸಾಕ್ಷಿ ಹಾಗೂ ಮಾದರಿಯಾಗಿದ್ದರು ಎಂದು ಸ್ಮರಿಸಿದರು.

ತಪ್ಪು ತಿಳುವಳಿಕೆ: ಮೀಸಲಾತಿಯ ಬಗ್ಗೆ ತಪ್ಪು ತಿಳುವಳಿಕೆ ಹೊಂದಿರುವವರು ಜಾಸ್ತಿಯಾಗುತ್ತಿದ್ದು, ಮೀಸಲಾತಿ ವಿಷಯವನ್ನು ಗ್ರಹಿಸುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಮೀಸಲಾತಿ ತಂದಿರುವುದು ಶಕ್ತಿಯಿಲ್ಲದವರಿಗೆ ಶಕ್ತಿ ನೀಡಲು. ಆದರೆ ತಪ್ಪಾಗಿ ತಿಳಿದುಕೊಳ್ಳಲಾಗುತ್ತಿದೆ ಎಂದು ವಿಷಾಧಿಸಿದರು. ಚಿಂತಕ ಪ್ರೊ.ಕಾಳೇಗೌಡ ನಾಗವಾರ, ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ ಅಧ್ಯಕ್ಷ ಕೃಷ್ಣ ಜನಮನ ಮತ್ತಿತರರಿದ್ದರು.

ಎಸ್‌ಎಂಟಿ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ



ಎಸ್‌ಎಂಟಿ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಶಾಸಕ ಶ್ರೀವತ್ಸ ಚಾಲನೆ ನೀಡಿದರು.

ಮೈಸೂರು, ಜೂ.28(ಎಂಕೆ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಸೇಠ್ ಮೋಹನ್‌ದಾಸ್ ತುಳಸಿದಾಸ್ ತಾಯಿ ಮತ್ತು ಮಕ್ಕಳ(ಎಸ್‌ಎಂಟಿ) ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಭಾನುವಾರ ಚಾಲನೆ ನೀಡಿದರು.

ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಮೊದಲ ಸುತ್ತಿನ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಗತಾನೆ ಹುಟ್ಟಿದ ಮಗುವಿನಿಂದ ಹಿಡಿದು 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪೋಲಿಯೋ ಲಸಿಕೆಯನ್ನು ತಪ್ಪದೇ ಹಾಕಿಸಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಕಾರ್ಯಕರ್ತರು, ಪೋಷಕರು ಯಾವ ಮಗುವೂ ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು. ಆ ಮೂಲಕ ಪೋಲಿಯೋ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರು ಶ್ರಮಿಸಬೇಕು ಎಂದು ಹೇಳಿದರು.

ಎಸ್‌ಎಂಟಿ ಆಸ್ಪತ್ರೆ ವೈದ್ಯರಾದ ಡಾ. ಅನುರಾಧ, ಡಾ.ಪಲ್ಲವಿ, ಡಾ.ತೇಜಸ್ವಿನಿ, ಡಾ.ಅರವಿಂದ್, ಡಾ.ಅಶೋಕ್, ರೂಪ, ಮುಖಂಡರಾದ ಪ್ರದೀಪ್ ಕುಮಾರ್, ಅಪೂರ್ವ ಸುರೇಶ್ ಮತ್ತಿತರರು ಉಪಸ್ಥಿತರಿದ್ದರು.

ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ



ಮೈಸೂರು ಹೆಬ್ಬಾಳಿನ ಬಸವನಗುಡಿ ವೃತ್ತದಲ್ಲಿ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಆಚರಿಸಲಾಯಿತು. ನಗರಪಾಲಿಕೆ ಮಾಜಿ ಸದಸ್ಯ ಪೈಲ್ವಾನ್ ಶ್ರೀನಿವಾಸ್, ಮುಖಂಡರಾದ ಪುಟ್ಟಸ್ವಾಮಣ್ಣ, ಕೃಷ್ಣಪ್ಪ, ದಿನೇಶ್, ಬೋರೇಗೌಡ, ಸ್ವಾಮಿಗೌಡ, ನಾಗೇಂದ್ರ, ಜಯರಾಮೇಗೌಡ, ಪ್ರಕಾಶ್, ದಂಡಪಾಣಿ, ಶಿವ, ಮಾದೇಗೌಡ, ಕೃಷ್ಣ, ಮಲ್ಲೇಗೌಡ, ನಿಂಗರಾಜೇಗೌಡ ಉಪಸ್ಥಿತರಿದ್ದರು.

ಒಡೆಯರ್ ಗಾಲ್ಫ್ ಕ್ಲಬ್‌ನಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ

ಮೈಸೂರು, ಜೂ.28(ಎಂಕೆ)– ಮೈಸೂರಿನ ಜಯಚಾಮರಾಜೇಂದ್ರ ಒಡೆಯರ್ ಗಾಲ್ಫ್ ಕ್ಲಬ್‌ನಲ್ಲಿ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಆಚರಿಸಿ, ಕೆಂಪೇಗೌಡರ ವಂಶಸ್ಥರಾದ ಸೋಮಶೇಖರ್ ಅವರನ್ನು ಅಭಿನಂದಿಸಲಾಯಿತು.

ಈ ವೇಳೆ ನಾಡಪ್ರಭು ಕೆಂಪೇಗೌಡರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದ ಗಾಲ್ಫ್ ಕ್ಲಬ್ ಅಧ್ಯಕ್ಷ ಅರುಣ್‌ಕುಮಾರ್ ಮಾತನಾಡಿ, ನಾಡಪ್ರಭು ಕೆಂಪೇಗೌಡರ ಆದರ್ಶಗಳು, ಆಡಳಿತ ವೈಖರಿ ಮತ್ತು ಐತಿಹಾಸಿಕ ಕೊಡುಗೆಗಳು ಯುವ ಸಮೂಹಕ್ಕೆ ಮಾದರಿಯಾಗಿದೆ ಎಂದು ಸ್ಮರಿಸಿದರು.



ಜಯಚಾಮರಾಜೇಂದ್ರ ಒಡೆಯರ್ ಗಾಲ್ಫ್ ಕ್ಲಬ್‌ನಲ್ಲಿ ನಾಡಪ್ರಭು ಕೆಂಪೇಗೌಡರ 517ನೇ ಜಯಂತಿ ಆಚರಿಸಲಾಯಿತು.

ಜಯಚಾಮರಾಜೇಂದ್ರ ಒಡೆಯರ್ ಗಾಲ್ಫ್ ಕ್ಲಬ್‌ನ ಎಂ.ಆರ್.ಸೂರ್ಯ ಕುಮಾರ್, ಡಾ.ಚಂದನ್, ಸಮರ್ಥ್ ಪಟೇಲ್, ನಂದನ್, ನವೀನ್ ಹಾಗೂ ಯಶಸ್ವಿ ಶಂಕರ್ ಮತ್ತಿತರರಿದ್ದರು.

ಶುಭಾಶಯ



ಮಾಜಿ ಸಚಿವ ಕೋಟೆ ಎಂ.ಶಿವಣ್ಣ ಅವರ ಪುತ್ರ ಹರ್ಷವರ್ಧನ್ ಶಿವಣ್ಣ ಅವರಿಗೆ ಮೈಸೂರಿನ ಮೇಟಗಳ್ಳಿಯ ವಾರ್ಡ್ ನಂ.7ರ ಡಾ. ಬಾಬುಜಗಜೀವನ್ ರಾಂ ಕಾಲೋನಿಯ ಯುವಕ ಮಿತ್ರರಿಂದ ಬೃಹತ್ ಹೂವಿನ ಹಾರಹಾಕಿ, ಹುಟ್ಟುಹಬ್ಬಕ್ಕೆ ಶುಭಾಶಯ ಕೋರಲಾಯಿತು. ಈ ವೇಳೆ ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಕಿಸಾನ್, ಎಂ.ಪಿ.ಪ್ರಕಾಶ್, ಕೃಷ್ಣ, ದಾಸು, ಚಲುವರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕೆಂಪಯ್ಯನಹುಂಡಿಯಲ್ಲಿ ತಂದೆ-ತಾಯಿ-ಮಗಳು ಆತ್ಮಹತ್ಯೆ ಪ್ರಕರಣ

ಕುಟುಂಬದ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಿದ ಸಿದ್ದರಾಮಯ್ಯ

15 ದಿನದಲ್ಲಿ ಭೂ ದಾಖಲೆ ಮಾಡಿಕೊಡುವಂತೆ ಎಸಿಗೆ ಸೂಚನೆ

ಮೈಸೂರು, ಜೂ.28(ಎಂಟಿವೈ)– ಯುವಕನೊಬ್ಬನ ಬ್ಲಾಕ್‌ಮೇಲ್ ಹಾಗೂ ಕಿರುಕುಳದಿಂದ ಮನ ನೊಂದು ತಿ.ನರಸೀಪುರ ತಾಲೂಕಿನ ಹಳೆ ಕೆಂಪಯ್ಯನಹುಂಡಿ ಗ್ರಾಮದಲ್ಲಿ ಒಂದೇ ಕುಟುಂಬದ ಮೂವರು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡ ಕುಟುಂಬದ ಸದಸ್ಯರನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ಮಾಡಿ ಸಾಂತ್ವನ ಹೇಳಿದರಲ್ಲದೆ, ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿ ಪಡೆದರು.

ಮೈಸೂರಿನ ಜೆ.ಕೆ.ಮೈದಾನದಲ್ಲಿ ಭಾನುವಾರ ಎಸ್‌ಐಆರ್ ವಿರೋಧಿಸಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಮಾವೇಶ ಮುಗಿದ ನಂತರ ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಸೇರಿದ ತಿ.ನರಸೀಪುರ ತಾಲೂಕಿನ ಹಳೆ ಕೆಂಪಯ್ಯನಹುಂಡಿ ಗ್ರಾಮಕ್ಕೆ ಸಂಜೆ ಆಗಮಿಸಿದ ಮಾಜಿ ಸಿಎಂ ಸಿದ್ದರಾಮಯ್ಯ ಗ್ರಾಮದ ಮುಖಂಡರೊಂದಿಗೆ ಕಳೆದ ವಾರ ಆತ್ಮಹತ್ಯೆ ಮಾಡಿಕೊಂಡಿದ್ದ ಗ್ರಾಮದ ಶಿವಣ್ಣ, ನಾಗರತ್ನ ಹಾಗೂ ರಕ್ಷಿತಾ ಅವರ ಮನೆಗೆ ತೆರಳಿ ಶಿವಣ್ಣ ಅವರ ತಾಯಿ ಮಲ್ಲಮ್ಮ, ದೊಡ್ಡ ಮಗಳು ಬಿಂದು(ಬೃಂದಾ) ಹಾಗೂ ಅಳಿಯ ಶಿವಕುಮಾರ್ ಅವರನ್ನು ಭೇಟಿಯಾಗಿ ಸಾಂತ್ವನ ಹೇಳಿದರು.

ಈ ವೇಳೆ ಗ್ರಾಮದ ಮುಖಂಡರು ಹಾಗೂ ಮೃತ ಶಿವಣ್ಣ ಅವರ ಸಂಬಂಧಿಕರು ಆತ್ಮಹತ್ಯೆ ಮಾಡಿಕೊಂಡ ಮೂವರ ಫೋಟೋ, ವಿಡಿಯೋ ಹಾಗೂ ಡೆತ್ ನೋಟ್ ಫೋಟೊ ತೋರಿಸಿ ಘಟನೆಯನ್ನು ವಿವರಿಸಿದರು. ಈ ವೇಳೆ ಸಿದ್ದರಾಮಯ್ಯ ಅವರು ಮೃತ ಶಿವಣ್ಣ ಹಾಗೂ ಆರೋಪಿ ಉಲ್ಲಾಸ್‌ಗೌಡ ಕುಟುಂಬಕ್ಕೂ ಹೇಗೆ ಪರಿಚಯ ಎಂದು ಪ್ರಶ್ನಿಸಿದರು. ಈ ವೇಳೆ ಉಲ್ಲಾಸ್‌ಗೌಡ ಹಾಗೂ ಶಿವಣ್ಣ ಅವರ ಬಳಿ ಟ್ರಾಕ್ಟರ್ ಇತ್ತು. ಇಬ್ಬರೂ ಒಟ್ಟಿಗೆ ಟ್ರಾಕ್ಟರ್ ಬಾಡಿಗೆಗೆ ಹೋಗುತ್ತಿದ್ದರು. ಆ ಸಲುಗೆ ಮೇರೆಗೆ ಆರೋಪಿ ಉಲ್ಲಾಸ್‌ಗೌಡ ಶಿವಣ್ಣ ಅವರ ಮನೆಗೆ ಬರುತ್ತಿದ್ದ ಎಂದು ವಿವರಿಸಿದರು.



ತಿ.ನರಸೀಪುರ ತಾಲೂಕಿನ ಹಳೆ ಕೆಂಪಯ್ಯನಹುಂಡಿ ಗ್ರಾಮದಲ್ಲಿ ಯುವಕನೊಬ್ಬನ ಕಿರುಕುಳಕ್ಕೆ ಬೇಸತ್ತು ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡ ಕುಟುಂಬದ ಸದಸ್ಯರನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ಮಾಡಿ ಸಾಂತ್ವನ ಹೇಳಿದರು.

ಐದೂವರೆ ಗುಂಟೆ ಭೂ ದಾಖಲೆ ಮಾಡಿಸಿಕೊಡಿ: ಶಿವಣ್ಣ ಅವರ ತಾಯಿ ಮಲ್ಲಮ್ಮ ಹಾಗೂ ಕೆಲ ಮುಖಂಡರು ಶಿವಣ್ಣ ಅವರು ಹೊಸದಾಗಿ ಕಟ್ಟಿರುವ ಮನೆಯಿರುವ ಸ್ಥಳ ಸೇರಿದಂತೆ ಐದೂವರೆ ಗುಂಟೆ ಭೂಮಿ ಶಿವಣ್ಣ ಅವರಿಗೆ ಸೇರಬೇಕಾಗಿದೆ. ಆದರೆ, ದಾಖಲೆ ಇನ್ನು ಆಗಿಲ್ಲ. ಭೂಮಿ ಉಲ್ಲಾಸ್‌ಗೌಡ ಅವರ ತಾತನ ಹೆಸರಲ್ಲಿದೆ. ತೀರ್ಮಾನವಾಗಿರುವಂತೆ ಖರಾಬು ಭೂಮಿ ಹೊರತುಪಡಿಸಿ ಐದೂವರೆ ಗುಂಟೆ ಭೂಮಿಯನ್ನು ಮಲ್ಲಮ್ಮ ಅವರ ಹೆಸರಿಗೆ ದಾಖಲೆ ಮಾಡಿಸಿಕೊಡುವಂತೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು ಸ್ಥಳದಲ್ಲಿಯೇ ಇದ್ದ ಉಪ ವಿಭಾಗಾಧಿಕಾರಿ ಆಶಪ್ಪ ಅವರಿಗೆ ಸೂಚನೆ ನೀಡಿ 15 ದಿನದೊಳಗೆ ದಾಖಲೆ ಮಾಡಿಕೊಡುವಂತೆ ತಿಳಿಸಿದರು.

ಗ್ರಾಮದಲ್ಲಿ ಶಾಂತಿ ಕಾಪಾಡಲು ಕ್ರಮ: ಘಟನೆ ನಡೆದಿರುವುದಕ್ಕೆ ವಿಷಾದವಿದೆ. ಆದರೆ, ಅದನ್ನೇ ಮುಂದಿಟ್ಟುಕೊಂಡು ಗ್ರಾಮದಲ್ಲಿ ಅಶಾಂತಿ ವಾತಾವರಣ ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು. ಪ್ರತಿದಿನ ಗ್ರಾಮಕ್ಕೆ ಭೇಟಿ ನೀಡುವಂತೆ ಪೊಲೀಸರಿಗೆ ಸೂಚನೆ ನೀಡಿದರು. ಅಲ್ಲದೆ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಅವರಿಗೆ ಗ್ರಾಮದ ಪರಿಸ್ಥಿತಿ ಬಗ್ಗೆ ಅವಲೋಕಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಗ್ಯಾರಂಟಿ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಹೆಚ್.ಎಂ. ರೇವಣ್ಣ, ಶಾಸಕ ಸಿ.ಪುಟ್ಟರಂಗ ಶೆಟ್ಟಿ, ಪಿ ಕಾರ್ಡ್ ಬ್ಯಾಂಕ್ ಅಧ್ಯಕ್ಷ ಕೆಂಪಯ್ಯನಹುಂಡಿ ಮಹದೇವ, ಜಿ.ಪಂ. ಮಾಜಿ ಸದಸ್ಯ ಕೆ.ಮಹದೇವ, ತಾ.ಪಂ. ಮಾಜಿ ಸದಸ್ಯ ಬಿ.ಮರಯ್ಯ, ಭಗೀರಥ ಉಪ್ಪಾರ ಜನ ಕಲ್ಯಾಣ ಟ್ರಸ್ಟ್ ಅಧ್ಯಕ್ಷ ಕಾವೇರಿಪುರ ಮಹದೇವ ಶೆಟ್ಟಿ, ಮಲೆ ಮಾದೇಶ್ವರ ಬೆಟ್ಟದ ಪ್ರಾಧಿಕಾರದ ನಿರ್ದೇಶಕರಾದ ಕುಪ್ಯ ಭಾಗ್ಯಮ್ಮ, ಕುಪ್ಯಾ ಗ್ರಾ.ಪಂ. ಮಾಜಿ ಅಧ್ಯಕ್ಷ ರಘು, ಮಾಜಿ ಉಪಾಧ್ಯಕ್ಷ ಶೇಖರ್, ಗ್ರಾಪಂ ಮಾಜಿ ಅಧ್ಯಕ್ಷ ಶೋಭ ರಾಜೇಂದ್ರ, ರಾಜಣ್ಣ, ತಾಲೂಕು ಉಪ್ಪಾರ ಸಂಘದ ಅಧ್ಯಕ್ಷ ಸಿದ್ದಪ್ಪ ಗುತ್ತಿಗೆದಾರ ಮಾದು, ಕೆಂಪಯ್ಯನ ಹುಂಡಿ ಮಹೇಶ್ ಹಾಗೂ ಇನ್ನಿತರು ಉಪಸ್ಥಿತರಿದ್ದರು.

ಮುಳ್ಳೂರು ನಾಗರಾಜು ದಲಿತರು, ಅಸಹಾಯಕರ ಬದುಕಿಗೆ ಅವಿಶ್ರಾಂತ ದುಡಿದರು

ಸಾಹಿತಿ ಪ್ರೊ.ಎಸ್.ಜಿ.ಸಿದ್ದರಾಮಯ್ಯ ಬಣ್ಣನೆ



ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕವಿ ಎಸ್.ಮಂಜುನಾಥ್ ಅವರಿಗೆ ಮುಳ್ಳೂರು ನಾಗರಾಜು ರಾಜ್ಯ ಮಟ್ಟದ 15ನೇ ವರ್ಷದ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಮೈಸೂರು,ಜೂ.28(ಎಂಟಿವೈ)– ಭಾರತದ ಶೋಷಿತರ ಬಿಡುಗಡೆಗಾಗಿ ಬಿ.ಆರ್. ಅಂಬೇಡ್ಕರ್ ಕೊಟ್ಟ ಶಿಕ್ಷಣ, ಸಂಘಟನೆ, ಹೋರಾಟ ಸೂತ್ರವನ್ನು ಕವಿ ಮುಳ್ಳೂರು ನಾಗರಾಜು ಧ್ಯೇಯವಾಕ್ಯ ಮತ್ತು ಪ್ರಾಣವಾಕ್ಯವಾಗಿಸಿಕೊಂಡು ಬದುಕಿದರು ಎಂದು ಸಾಹಿತಿ ಪ್ರೊ.ಎಸ್.ಜಿ.ಸಿದ್ದರಾಮಯ್ಯ ಹೇಳಿದರು.

ಮೈಸೂರಿನ ಕಲಾಮಂದಿರದ ಕಿರುರಂಗ ಮಂದಿರದಲ್ಲಿ ರಂಗವಾಹಿನಿ ಚಾಮರಾಜನಗರದ, ನೆಲೆ ಹಿನ್ನೆಲೆ, ಡಾ.ರಾಮಮನೋಹರ ಲೋಹಿಯಾ ಟ್ರಸ್ಟ್ ಸಹಯೋಗದಲ್ಲಿ ಆಯೋಜಿಸಿದ್ದ ಮುಳ್ಳೂರು ನಾಗರಾಜು ರಾಜ್ಯಮಟ್ಟದ 15ನೇ ವರ್ಷದ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ರಾಜಶೇಖರ ಕೋಟಿ ನೆನಪಿನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಳ್ಳೂರು ನಾಗರಾಜು ಶಿಕ್ಷಣ ಪಡೆದರು. ಸಂಘಟನೆಗೆ ತೊಡಗಿದರು. ಯಾವ ಕೆಲಸಕ್ಕೂ ಹೋಗಲಿಲ್ಲ. ವೈಯಕ್ತಿಕ ಬದುಕಿಗಿಂತ ದಲಿತರು, ಅಸಹಾಯಕರ ಬದುಕಿಗಾಗಿ ಅವಿಶ್ರಾಂತ ದುಡಿದರು. ಅಂಬೇಡ್ಕರ್ ತೋರಿದ ದಾರಿಯೊಳಗೆ ತಮ್ಮ ಬದುಕನ್ನು ಅರ್ಪಿಸಿಕೊಂಡರು ಎಂದರು.

ಪಂಪ, ಬಸವಣ್ಣನ ಹಾದಿಯಲ್ಲಿ ಮುಳ್ಳೂರು ನಾಗರಾಜು ಸಾಗಿ ಬಂದರು. ಪಂಪ ವೈದಿಕ ಜಗತ್ತಿನ ಎಲ್ಲ ಮೀಮಾಂಸೆ ಒಡೆದು ಕಾವ್ಯ ಕಟ್ಟಿದರು. 12ನೇ ಶತಮಾನದಿಂದಲೂ ಪ್ರತಿಭಟನೆಯ ನಿರಂತರ ದನಿ ಬೆಳೆದು ಬಂದಿದೆ. ಮುಳ್ಳೂರು ನಾಗರಾಜು ಸಾಹಿತ್ಯ, ವಚನ ಸಾಹಿತ್ಯದ ಉಪ ಉತ್ಪನ್ನವಾಗಿದೆ. ಕನ್ನಡದ ವಿಮರ್ಶ ಲೋಕ ರೋಗಗ್ರಸ್ತವಾಗಿದೆ. ನಿಜವಾದ ಕವಿಗಳನ್ನು ಗುರುತಿಸಲಾಗಿಲ್ಲ ಎಂದರು.

ಇವತ್ತು ಸಾಂಸ್ಕೃತಿಕ ಗುಲಾಮಗಿರಿ ಜೀತ ಅನುಭವಿಸುತ್ತಿದ್ದೇವೆ. ಚಾತುರ್ವರ್ಣ ಕರ್ಮ ಸಿದ್ಧಾಂತದೊಳಗೆ ಪೌರಕಾರ್ಮಿಕರು ಯಾರು? ಪೌರೋಹಿತ್ಯ ಮಾಡುವವರು ಯಾರು? ಆಲೋಚನೆ ಮಾಡಬೇಕು. ಚಾತುರ್ವರ್ಣ ಚಿಂತನೆಯ ಶ್ರೇಷ್ಠತೆಯ ಗುಲಾಮರಾಗಿದ್ದೇವೆ. ಮಂಗಳ ಕಾರ್ಯಕ್ಕೆ ಅಕ್ಷತೆ ಬೀಳಬೇಕು. ಈ ಮೌಢ್ಯದೊಳಗೆ ದೇಶ ನರಳುತ್ತಿದೆ. ಸಾಂಸ್ಕೃತಿಕ ದಬ್ಬಾಳಿಕೆ ವಿರುದ್ಧ ಅಂಬೇಡ್ಕರ್ ದನಿ ಎತ್ತಿದರು. ಆ ಕೂಗು ಕೇಳಿಸಿದ್ದರೆ ಬೆವರಿನ ಬದುಕು ಕಟ್ಟಿಕೊಂಡ ಜನ ಗುಲಾಮಗಿರಿ ರಾಜಕಾರಣದ ದಾಳವಾಗುತ್ತಿರಲಿಲ್ಲ ಎಂದರು.

ಇದೇ ವೇಳೆ ಕವಿ, ಎಸ್.ಮಂಜುನಾಥ್ ಅವರಿಗೆ 15ನೇ ವರ್ಷದ ಕಾವ್ಯ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕವಿ ಸುಬ್ಬು ಹೊಲೆಯಾರ್ ವಹಿಸಿದ್ದರು. ಲೇಖಕ ಮಲ್ಕುಂಡಿ ಮಹದೇವಸ್ವಾಮಿ, ಮುಳ್ಳೂರು ನಾಗರಾಜು, ರಾಜಶೇಖರ ಕೋಟಿ ಅವರ ಬಗ್ಗೆ ಮಾತನಾಡಿದರು. ಪ್ರಶಸ್ತಿ ಪುರಸ್ಕೃತರ ಕುರಿತು ಡಾ.ತ್ರಿವೇಣಿ ಮಾತನಾಡಿದರು. ಮುಳ್ಳೂರು ನಾಗರಾಜ್ ಅವರ ಪತ್ನಿ ಪುಟ್ಟಲಕ್ಷ್ಮೀ ಮತ್ತು ಪುತ್ರ ಕಿರಣ್, ನೆಲೆ ಹಿನ್ನೆಲೆ ಕೆ.ಆರ್. ಗೋಪಾಲಕೃಷ್ಣ, ಮುಳ್ಳೂರು ರಾಜು, ಸೋಮಯ್ಯ ಮಲೆಯೂರು ಇದ್ದರು. ರಂಗವಾಹಿನಿ ಅಧ್ಯಕ್ಷ ಸಿ.ಎಂ.ನರಸಿಂಹ ಮೂರ್ತಿ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. ದೇವಾನಂದ ವರಪ್ರಸಾದ್ ಮತ್ತು ತಂಡದವರು ಪ್ರಾರ್ಥಿಸಿದರು. ಸಂಶೋಧನ ವಿದ್ಯಾರ್ಥಿ ಪ್ರೇಮಕುಮಾರಿ ನಿರೂಪಿಸಿದರು.

ಮೇಲ್ವರ್ಗದವರು ಕೇಳದಿದ್ದರೂ ಶೇ.10ರಷ್ಟು ಮೀಸಲಾತಿ ಕೊಡುಗೆ

ಪರಿಶಿಷ್ಟ ಜಾತಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನೀಡಲು ಹಿಂದೇಟು

- ಮಾಜಿ ಸಚಿವ ಸತೀಶ್ ಜಾರಕಿಹೊಳಿ ವಿಷಾದ
- ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



ರಾಜ್ಯ ನಾಯಕರ ಯುವ ಸೇನೆ, ಸತೀಶ್ ಜಾರಕಿಹೊಳಿ ಫೌಂಡೇಷನ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಾಯಕ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸಚಿವ ಸತೀಶ್ ಜಾರಕಿಹೊಳಿ ಸನ್ಮಾನಿಸಿದರು.

ಮೈಸೂರು,ಜೂ.28(ಎಂಟಿವೈ)–ಪರಿಶಿಷ್ಟ ಜಾತಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಳ ಮಾಡುವುದಕ್ಕೆ ಮೀನಾ ಮೇಷ ಎಣಿಸಲಾಗುತ್ತಿದೆ. ಆದರೆ, ಆರ್ಥಿಕವಾಗಿ ಹಿಂದುಳಿದಿದ್ದಾರೆ ಎಂದು ಮೇಲ್ವರ್ಗಕ್ಕೆ ಒಂದೇ ದಿನದಲ್ಲಿ ಶೇ.10ರಷ್ಟು ಮೀಸಲಾತಿ ನೀಡಿರುವುದನ್ನು ಯಾರು ಪ್ರಶ್ನಿಸುತ್ತಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅಸಮಾದಾನ ವ್ಯಕ್ತಪಡಿಸಿದ್ದಾರೆ.

ಮೈಸೂರಿನ ಕಲಾಮಂದಿರದಲ್ಲಿ ಕರ್ನಾಟಕ ರಾಜ್ಯ ನಾಯಕರ ಯುವ ಸೇನೆ, ಸತೀಶ್ ಜಾರಕಿಹೋಳಿ ಫೌಂಡೇಷನ್ ವತಿಯಿಂದ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ನಾಯಕ ಸಮುದಾಯದ 520 ಮಂದಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಪರಿಶಿಷ್ಟ ಪಂಗಡ ಮೀಸಲಾತಿ ಸಮಸ್ಯೆಗೆ ಕೇಂದ್ರ ಸರ್ಕಾರ ಅಥವಾ ನ್ಯಾಯಾಲಯದಿಂದ ಮಾತ್ರ ಪರಿಹಾರ ಸಾಧ್ಯ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡುವಂತೆ ನಾಯಕ ಸಮುದಾಯ ಕಳೆದ 40 ವರ್ಷಗಳಿಂದ ಹೋರಾಟ ಮಾಡುತ್ತಲೇ ಬಂದಿದೆ. ಈ ಹೋರಾಟದ ಫಲವಾಗಿ ಎಸ್ಟಿ ಮೀಸಲಾತಿ ಪ್ರಮಾಣವನ್ನು ಶೇ.3ರಿಂದ 7ಕ್ಕೆ ಹೆಚ್ಚಿಸಲಾಯಿತು. ಇದಕ್ಕೆ ಕೋರ್ಟ್‌ನಿಂದ ತಡೆಯಾಜ್ಞೆ ತಂದಿದ್ದಾರೆ. ಇದರಿಂದಾಗಿ ಸಮಸ್ಯೆ ಸೃಷ್ಟಿಯಾಗಿದೆ ಎಂದು ಹೇಳಿದರು.

> “ಪ್ರತಿಭಾವಂತ ವಿದ್ಯಾರ್ಥಿಗಳು ಸಮಾಜಕ್ಕೆ ಗೌರವ ಮತ್ತು ಹೆಮ್ಮೆಯ ಸಂಕೇತ. ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ಕೊಡಬೇಕು. ಓದಿಗೆ ಮೊದಲ ಆದ್ಯತೆ ನೀಡಿ. ಅನಗತ್ಯ ವಿಷಯಗಳ ಕಡೆ ಗಮನ ನೀಡಬೇಡಿ. ಪ್ರಸ್ತುತ ಓದಿದೆಲ್ಲರಿಗೂ ನೌಕರಿ ಸಿಗಲ್ಲ. ಇದರ ಮೇಲೆ ಅವಲಂಬನೆ ಬೇಡ. ಸ್ವಯಂ ಉದ್ಯೋಗದ ಮೂಲಕ ಸ್ವಂತ ಕಾಲಮೇಲೆ ನಿಲ್ಲಲು ಪ್ರಯತ್ನಿಸಬೇಕು. ಶಾಲಾ, ಹಾಸ್ಟೆಲ್ ನಿರ್ಮಾಣಕ್ಕಾಗಿ ಚಾಮುಂಡಿಬೆಟ್ಟದ ತಪ್ಪಲಿನಲ್ಲಿ ವಾಲ್ಮೀಕಿ ಶಿಕ್ಷಣ ಟ್ರಸ್ಟ್ ಹೆಸರಿಗೆ 5 ಎಕರೆ ಜಾಗ ಮತ್ತು ಟಿಎಸ್‌ಪಿ ಯೋಜನೆಯಡಿ 25 ಕೋಟಿ ಅನುದಾನವನ್ನು ಸರ್ಕಾರದಿಂದ ನೀಡಲಾಗಿದ್ದು, ಶೈಕ್ಷಣಿಕ ಅನುಕೂಲವಾಗಲಿದೆ. ಇದೇ ರೀತಿ ಇತರೆ ಜಿಲ್ಲೆಗಳಲ್ಲೂ ಆಗಬೇಕಿದೆ. **–ಸತೀಶ್ ಜಾರಕಿಹೊಳಿ**

ಕೇಂದ್ರ ಸರ್ಕಾರವು ಸಂವಿಧಾನದ ಶೆಡ್ಯೂಲ್ 9ಕ್ಕೆ ಈ ಮೀಸಲಾತಿ ಹೆಚ್ಚಳ ಪ್ರಮಾಣವನ್ನು ಸೇರ್ಪಡೆ ಮಾಡಿ ಕಾನೂನಿನ ಮಾನ್ಯತೆ ಕಲ್ಪಿಸಿಕೊಡಬೇಕು. ಇಲ್ಲವೇ, ಈ ಕುರಿತು ಸುಪ್ರೀಂಕೋರ್ಟ್ ಆದೇಶ ನೀಡಬೇಕಿದೆ. ಆಗಲೇ ಈ ಸಮಸ್ಯೆ ಬಗೆಹರಿಯಲಿದೆ. ಇಲ್ಲದಿದ್ದರೆ ಕಷ್ಟವಾಗುತ್ತದೆ ಎಂದು ವಿಷಾದಿಸಿದರು.

ಎಕಾನಾಮಿಕಲಿ ವೀಕರ್ ಸೆಕ್ಷನ್ ಎಂದು ಮೇಲ್ವರ್ಗಕ್ಕೆ ಶೇ.10ರಷ್ಟು ಮೀಸಲಾತಿಯನ್ನು ಒಂದೇ ದಿನದಲ್ಲೇ ನೀಡಲಾಯಿತು. ಅವರು ಮೀಸಲಾತಿ ಕೇಳಿರಲಿಲ್ಲ. ಇದರಿಂದ ಪ್ರಸಕ್ತ ಯುಪಿಎಸ್‌ಸಿ ಪರೀಕ್ಷೆಯಲ್ಲಿ 60 ಜನರು ಈ ಮೀಸಲಾತಿ ಲಾಭ ಪಡೆದು ಉನ್ನತ ಸ್ಥಾನ ಪಡೆದುಕೊಂಡಿದ್ದಾರೆ. ಮೀಸಲಾತಿಯನ್ನು ಅವರ ಮನೆ ಬಾಗಿಲಿಗೆ ಹೋಗಿ ಕೊಡಲಾಗಿದೆ. ಇದನ್ನು ಯಾರೂ ಕೇಳುತ್ತಿಲ್ಲ. ಅದರ ಬದಲು ಎಸ್‌ಟಿ ಮೀಸಲಾತಿ ಹೆಚ್ಚಳ ಕುರಿತು ಕಾಂಗ್ರೆಸ್–ಬಿಜೆಪಿ–ಜೆಡಿಎಸ್ ಪರಸ್ಪರ ಆರೋಪ–ಪ್ರತ್ಯಾರೋಪ ಮಾಡುತ್ತಾ ಕಾಲಹರಣ ಮಾಡಲಾಗುತ್ತಿದೆ. ಆದರೆ, ಮೇಲ್ವರ್ಗದವರಿಗೆ ಏಕಾಏಕಿ ಕೊಟ್ಟಿರುವ ಶೇ.10ರಷ್ಟು ಮೀಸಲಾತಿ ಕುರಿತು ಏಕೆ ಮಾತನಾಡುತ್ತಿಲ್ಲ ಎಂದರು.

ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ಶಿಕ್ಷಣದಿಂದ ಮಾತ್ರ ವ್ಯಕ್ತಿ, ಮನೆ, ಸಮಾಜ ಮತ್ತು ದೇಶ ಪ್ರಗತಿಯಾಗಲು ಸಾಧ್ಯ. ವಿದ್ಯಾವಂತರಾದರೆ ಸೌಲಭ್ಯ–ಹಕ್ಕು ಪಡೆದುಕೊಳ್ಳಲು ಸಾಧ್ಯ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ ಉತ್ತಮವಾಗಿ ಓದಬೇಕು ಎಂದರು.

ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ಮೈಸೂರು ನಗರದಲ್ಲಿ ಇದುವರೆಗೂ ಒಂದೇ ಎಸ್‌ಟಿ ಹಾಸ್ಟೆಲ್ ಇದೆ. ಇದು ಸಾಲುತ್ತಿಲ್ಲ. ಇನ್ನೂ 2 ಹಾಸ್ಟೆಲ್‌ಗಳು ಬೇಕಾಗಿವೆ. ಜಾಗ ಗುರುತಿಸಿ, ಹಾಸ್ಟೆಲ್ ನಿರ್ಮಾಣಕ್ಕೆ ಸಚಿವ ಸತೀಶ ಜಾರಕಿಹೊಳಿ ಅವರು ಅನುಮೋದನೆ ಕೊಡಿಸಬೇಕು. ಇದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ನೆರವಾಗಲಿದೆ ಎಂದರು

ಕೆ.ಆರ್.ನಗರ ಶಾಸಕ ಡಿ.ರವಿಶಂಕರ್ ಮಾತನಾಡಿ, ಡಾ.ಅಂಬೇಡ್ಕರ್ ಅವರು ಶಿಕ್ಷಣದಿಂದ ಮಾತ್ರ ಸಾಧನೆ ಸಾಧ್ಯ ಎಂಬ ಸಂದೇಶ ನೀಡಿದ್ದರು. ಅಲ್ಲದೆ, ಸಂವಿಧಾನದ ಮೂಲಕ ಶೋಷಿತ ಸಮುದಾಯಕ್ಕೆ ಶಿಕ್ಷಣ ಹಾಗೂ ಇನ್ನಿತರ ಹಕ್ಕುಗಳನ್ನು ನೀಡಿದರು. ಈ ಹಿನ್ನೆಲೆಯಲ್ಲಿ ಶಿಕ್ಷಣ ಕ್ರಾಂತಿಯಿಂದ ಮಾತ್ರ ಬದಲಾವಣೆ ಸಾಧ್ಯ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ಇಂದು ಶಿಕ್ಷಣ ಪಡೆದಿರುವವರೇ ಪೋಷಕರನ್ನು ವಯೋವೃದ್ಧ ವ್ಯವಸ್ಥೆಯಲ್ಲಿ ಆಶ್ರಮಕ್ಕೆ ಸೇರಿಸುತ್ತಿದ್ದಾರೆ. ಆದರೆ, ಇಂದು ಪ್ರತಿಭಾ ಪುರಸ್ಕಾರ ಪಡೆದಿರುವ ವಿದ್ಯಾರ್ಥಿಗಳು ಇಷ್ಟರ ಮಟ್ಟಿಗೆ ಸಾಧನೆ ಮಾಡಲು ನಿಮ್ಮ ಪೋಷಕರೇ ತ್ಯಾಗವೇ ಕಾರಣ. ಇದನ್ನು ಅರಿತು ಪೋಷಕರನ್ನು ಚೆನ್ನಾಗಿ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕಳಲೇ ಕೇಶವಮೂರ್ತಿ, ಕರ್ನಾಟಕ ರಾಜ್ಯ ನಾಯಕರ ಯುವ ಸೇನೆ ರಾಜ್ಯಾಧ್ಯಕ್ಷ ದೇವರಾಜು ಟಿ.ಕಾಟೂರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜ್, ಮಾಜಿ ಪಾಲಿಕೆ ಸದಸ್ಯ ಲೋಕೇಶ್ ಪಿಯಾ, ಮುಖಂಡರಾದ ದೊಡ್ಡಯ್ಯ ನಾಯಕ, ಹೊನ್ನನಾಯಕ, ಉದ್ಬೂರು ಕೃಷ್ಣನಾಯಕ ಇನ್ನಿತರರಿದ್ದರು.

ಮೈಸೂರಾದ್ಯಂತ ಕಟ್ಟಡ ತ್ಯಾಜ್ಯ ಸುರಿಯುವುದ ತಡೆಯಲು

ಪಾಲಿಕೆಯಿಂದ ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣ



ಮೈಸೂರು ಪಾಲಿಕೆ ಕೈಗೊಂಡಿರುವ ಪ್ರತ್ಯೇಕ 'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ' ನಿರ್ಮಾಣ ಕಾಮಗಾರಿ.

ಶೇ.70ರಷ್ಟು ಕಾಮಗಾರಿ ಮುಕ್ತಾಯ

ಮೈಸೂರು, ಜೂ.28(ಎಂಕೆ)– ಮೈಸೂರು ನಗರ ಹಾಗೂ ಸುತ್ತಲಿನ ರಿಂಗ್‌ರಸ್ತೆ ಬದಿಯಲ್ಲಿ ಲೋಡ್‌ಗಟ್ಟಲೆ ಸುರಿಯುತ್ತಿರುವ ಕಟ್ಟಡ ತ್ಯಾಜ್ಯದ ವಿಲೇವಾರಿ, ಸಂಗ್ರಹ ಮತ್ತು ನಿರ್ವಹಣೆಗಾಗಿ ಮೈಸೂರು ನಗರಪಾಲಿಕೆ ಕೈಗೊಂಡಿರುವ ಪ್ರತ್ಯೇಕ 'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ' ನಿರ್ಮಾಣ ಕಾಮಗಾರಿಯು ಶೇ.70ರಷ್ಟು ಮುಕ್ತಾಯಗೊಂಡಿದ್ದು, ಆಗಸ್ಟ್ ತಿಂಗಳಾಂತ್ಯಕ್ಕೆ ಉದ್ಘಾಟನೆಗೊಳ್ಳಲಿದೆ.

ಮೈಸೂರು ಅಭಿವೃದ್ಧಿ ಪ್ರಾಧಿಕಾರ(ಎಂಡಿಎ)ದ ವ್ಯಾಪ್ತಿಗೆ ಒಳಪಡುವ ಹಂಚ್ಯಾ–ಸಾತಗಳ್ಳಿ 'ಎ'ವಲಯದಲ್ಲಿನ 9.38 ಎಕರೆ ಪ್ರದೇಶದಲ್ಲಿ ಘಟಕ ನಿರ್ಮಾಣವಾಗಿದ್ದು, 3 ಕೋಟಿ ರೂ. ವೆಚ್ಚದಲ್ಲಿ ಸಿವಿಲ್ ವರ್ಕ್ಸ್ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ಹಾಗೆಯೇ 3.85 ಕೋಟಿ ರೂ.ವೆಚ್ಚದ ಯಂತ್ರೋಪಕರಣಗಳು ಸೇರಿದಂತೆ ಅಂದಾಜು 7–8 ಕೋಟಿ ರೂ.ವೆಚ್ಚದ ಯೋಜನೆ ಇದಾಗಿದ್ದು, ನಗರಾಭಿವೃದ್ಧಿ ಸಚಿವರಿಂದಲೇ ಉದ್ಘಾಟನೆಯಾಗುವ ಸಾಧ್ಯತೆ ಇದೆ.

ರಿಂಗ್‌ರೋಡ್‌ನ ಸರ್ವಿಸ್‌ರಸ್ತೆ ಹಾಗೂ ನಗರದ ವಿವಿಧೆಡೆ ಲೋಡ್‌ಗಟ್ಟಲೆ ಸುರಿಯುತ್ತಿದ್ದ ಕಟ್ಟಡ ತ್ಯಾಜ್ಯವನ್ನು ವಿಲೇವಾರಿ ಮಾಡಿ, ತ್ಯಾಜ್ಯದಲ್ಲಿರುವ ಇಟ್ಟಿಗೆ, ಕಲ್ಲು, ಕಬ್ಬಿಣವನ್ನು ಸೇರಿದಂತೆ 6 ವಿಧಗಳನ್ನಾಗಿ ಬೇರ್ಪಡಿಸಿ ಮರುಬಳಕೆ ಮಾಡುವ ಉದ್ದೇಶದೊಂದಿಗೆ ಘಟಕ ನಿರ್ಮಾಣ ಮಾಡಲಾಗಿದ್ದು, ಸಾರ್ವಜನಿಕ ಖಾಸಗಿ ಸಹಭಾಗಿತ್ವ(ಪಿಪಿಪಿ) ಮಾದರಿಯಡಿ 'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ' ನಿರ್ವಹಣೆಯಾಗಲಿದೆ.

ಪ್ರತಿನಿತ್ಯ ನೂರು ಟನ್: ಘಟಕದಲ್ಲಿ ಪ್ರತಿನಿತ್ಯ 100 ಟನ್ ಕಟ್ಟಡ ತ್ಯಾಜ್ಯದ ಸಂಗ್ರಹಣೆ ಗುರಿ ಹೊಂದಿದ್ದು, ಸಂಗ್ರಹಣೆ ವೇಳೆ ಸಿಗುವ ಸಿಮೆಂಟ್ ಇಟ್ಟಿಗೆಗಳನ್ನು ಪುಡಿ ಮಾಡಿ ಗ್ರಾನೈಟ್ ಸಂಸ್ಥೆಯವರಿಗೆ ನೀಡುವುದು, ಕಲ್ಲುಗಳನ್ನು ಸಣ್ಣ ಜಲ್ಲಿಕಲ್ಲನ್ನಾಗಿಸಿ ಮಾರಾಟ ಮಾಡುವುದು ಹಾಗೂ ಮಣ್ಣನ್ನು ಅಗತ್ಯವಿದ್ದ ಕಡೆಗೆ ಸಾಗಿಸುವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ. ಮೈಸೂರು ನಗರಪಾಲಿಕೆ ಪರಿಸರ ವಿಭಾಗದ ನೋಡಲ್ ಅಧಿಕಾರಿ ಮೃತ್ಯುಂಜಯ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

> “'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ' ನಿರ್ಮಾಣದಿಂದ ನಗರ ಹಾಗೂ ನಗರದ ಹೊರಭಾಗದಲ್ಲಿರುವ ಸುರಿಯುವ ಕಟ್ಟಡ ತ್ಯಾಜ್ಯವನ್ನು ಸಂಗ್ರಹಿಸಿ, ಮರುಬಳಕೆ ಮಾಡುವುದರ ಜೊತೆಗೆ ನೈಸರ್ಗಿಕ ಸಂಪತ್ತನ್ನು ಉಳಿಸಲು ಅನುಕೂಲವಾಗಲಿದೆ. ಅಲ್ಲದೆ ನಗರದ ಸೌಂದರ್ಯ ಮತ್ತು ಸ್ವಚ್ಛತೆಯನ್ನೂ ಕಾಪಾಡಬಹುದಾಗಿದೆ.
> **–ಮೃತ್ಯುಂಜಯ, ನೋಡಲ್ ಅಧಿಕಾರಿ, ಪರಿಸರ ವಿಭಾಗ, ನಗರಪಾಲಿಕೆ**

ಮರುಬಳಕೆ: ನಗರದಲ್ಲಿ ಎಲ್ಲಾ ಕಟ್ಟಡ ತ್ಯಾಜ್ಯವನ್ನು ಇಲ್ಲಿಗೆ ತಂದು ಡಂಪ್ ಮಾಡಲಾಗುವುದು. ಬೇರ್ಪಡಿಸಿದ ನಂತರ ರಸ್ತೆ ಕಾಮಗಾರಿ, ರಚನಾತ್ಮಕವಲ್ಲದ ಕಟ್ಟಡ ನಿರ್ಮಾಣಕ್ಕೆ ಬಳಕೆ ಮಾಡಲಾಗುವುದು. ಈಗಾಗಲೇ ಘಟಕದ ಕಾಂಪೌಂಡ್ ನಿರ್ಮಾಣವಾಗಿದ್ದು, ಮೇಲ್ಛಾವಣಿ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ. ಅಲ್ಲದೆ ಕಟ್ಟಡ ತ್ಯಾಜ್ಯವನ್ನು ರಸ್ತೆ ಕಾಮಗಾರಿ ಮತ್ತು ಇನ್ನಿತರೆ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಬಳಸಬಹುದೆಂದು ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್(ಬಿಐಎಸ್) ಹಾಗೂ ಇಂಡಿಯನ್ ರೋಡ್ ಕಾಂಗ್ರೆಸ್ ಕೂಡ ಹೇಳಿದೆ ಎಂದರು.


30 ವರ್ಷಗಳ ಅಗ್ರಿಮೆಂಟ್: 'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ' ನಿರ್ಮಾಣ ಉದ್ದೇಶದಿಂದ 2021ರಲ್ಲಿಯೇ 30 ವರ್ಷಗಳ ಅವಧಿಗೆ ಮೈಸೂರು ಅಭಿವೃದ್ಧಿ ಪ್ರಾಧಿಕಾರದಿಂದ ಪಾಲಿಕೆಗೆ ಗುತ್ತಿಗೆ ಆಧಾರದ ಮೇಲೆ ಅಗ್ರಿಮೆಂಟ್ ಮಾಡಿ ಕೊಡಲಾಗಿದೆ. ನಿರ್ವಹಣಾ ಕಚೇರಿಯನ್ನೂ ಒಳಗೊಂಡಂತೆ ಘಟಕ ನಿರ್ಮಾಣವಾಗುತ್ತಿದೆ ಎಂದು ಮಾಹಿತಿ ನೀಡಿದರು.

ಆಗಸ್ಟ್ 15ಕ್ಕೆ ಟಾರ್ಗೆಟ್: ಮೈಸೂರಿನ ಸ್ವಚ್ಛತೆ ದೃಷ್ಟಿಯಿಂದ ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ ಅವಶ್ಯವಾಗಿದೆ. ಇದರಿಂದ ದೊಡ್ಡ ಸಮಸ್ಯೆ ಬಗೆಹರಿಯಲಿದೆ. ರಿಂಗ್ ರಸ್ತೆಯಲ್ಲಿ ಬಿದ್ದಿರುವ ಕಟ್ಟಡ ತ್ಯಾಜ್ಯದಿಂದ ಮೈಸೂರಿನ ಅಂದವೇ ಹಾಳಾಗುತ್ತಿದೆ. ಧೂಳಿನ ಪ್ರಮಾಣ ಹೆಚ್ಚಾಗುತ್ತಿದೆ. ಅಲ್ಲದೆ ಕಟ್ಟಡ ತ್ಯಾಜ್ಯವನ್ನು ಸುರಿಯುವವರ ಸಂಖ್ಯೆಯೂ ಹೆಚ್ಚಾಗುತ್ತಿದ್ದು, ಇದಕೆಲ್ಲಾ ಕಡಿವಾಣ ಹಾಕಬೇಕಾದರೆ ಘಟಕ ನಿರ್ಮಾಣವೇ ಸೂಕ್ತ ಮಾರ್ಗವಾಗಿದೆ. ಆಗಸ್ಟ್ 15 ರೊಳಗೆ 'ಕಟ್ಟಡ ತ್ಯಾಜ್ಯ ನಿರ್ವಹಣಾ ಘಟಕ'ವನ್ನು ಪೂರ್ಣಗೊಳಿಸಿ, ಉದ್ಘಾಟನೆ ಮಾಡಿಸಬೇಕು ಎಂದು ಟಾರ್ಗೆಟ್ ಇಟ್ಟುಕೊಂಡಿದ್ದೇವೆ ಎಂದರು.











ಮೈಸೂರು ಮಿತ್ರ 47

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

